23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 251 | ನವದೆಹಲಿ | ಬೆಲೆ ₹10 | ಮಾರ್ಚ್ 17 2026, ಮಂಗಳವಾರ

## ಒಳಪುಟಗಳಲ್ಲಿ

ಚುನಾವಣೆ: ಮತದಾನದಿಂದ ಹೊರಗುಳಿದ ನಾಲ್ವರು ಶಾಸಕರು - ಪು.4

ಜಾಹೀರಾತು ಫಲಕ ಶುಲ್ಕದ ಮೇಲೆ ತೆರಿಗೆ: ತಿದ್ದುಪಡಿ ಮಸೂದೆ ಅಂಗೀಕಾರ - ಪು.5

# ಸಂಸತ್ ಕಲಾಪಕ್ಕೆ ಪ್ರತಿಪಕ್ಷಗಳ ನಿರಂತರ ಅಡ್ಡಿ: ದೇವೇಗೌಡ ತರಾಟೆ

**ನವದೆಹಲಿ, ಮಾ.16: ಸಂಸತ್ ಅಧಿವೇಶನದಲ್ಲಿ ಪ್ರತಿಪಕ್ಷಗಳಿಂದ, ಅದರಲ್ಲಿಯೂ ಕಾಂಗ್ರೆಸ್ ಸದಸ್ಯರಿಂದ ಕಲಾಪಕ್ಕೆ ತೀವ್ರ ಅಡ್ಡಿ ಉಂಟಾಗುತ್ತಿರುವ ಬಗ್ಗೆ ತೀವ್ರ ಕಳವಳ ವ್ಯಕ್ತಪಡಿಸಿರುವ ರಾಜ್ಯಸಭೆ ಸದಸ್ಯರೂ ಆಗಿರುವ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರು; ಈ ಬಗ್ಗೆ ಕಾಂಗ್ರೆಸ್ ಶಾಸಕಾಂಗ ಪಕ್ಷದ ಅಧ್ಯಕ್ಷೆ ಸೋನಿಯಾ ಗಾಂಧಿ ಅವರಿಗೆ ಪತ್ರ ಬರೆದಿದ್ದಾರೆ.**

ಸಂಸತ್ತಿನ ಬಜೆಟ್ ಅಧಿವೇಶನದ ಸಂದರ್ಭದಲ್ಲಿ ವಿರೋಧ ಪಕ್ಷಗಳು ಅದರಲ್ಲೂ ವಿಶೇಷವಾಗಿ ಕಾಂಗ್ರೆಸ್ ಸದಸ್ಯರು ತೋರಿಸುತ್ತಿರುವ ಅತಿರೇಕದ ವರ್ತನೆ, ಅಶಿಸ್ತಿನ ನಡವಳಿಕೆ ಬಗ್ಗೆ ದೇವೇಗೌಡರು ತೀವ್ರ ಆತಂಕ, ಕಳವಳ ವ್ಯಕ್ತಪಡಿಸಿದ್ದಾರೆ.

ಬಜೆಟ್ ಅಧಿವೇಶನದ ವೇಳೆ ಪ್ರತಿಪಕ್ಷಗಳ ಸದಸ್ಯರು ನಿರಂತರವಾಗಿ ಕಲಾಪಕ್ಕೆ ಅಡ್ಡಿಪಡಿಸುತ್ತಿದ್ದು, ಅದರಲ್ಲಿಯೂ ಕಾಂಗ್ರೆಸ್ ಸಂಸದರು ಸಂಸತ್ತಿನ ಒಳಗೆ ಹಾಗೂ ಸಂಸತ್ತಿನ ಆವರಣದಲ್ಲಿ ಘೋಷಣೆ ಕೂಗುವುದು, ಫಲಕ ಪ್ರದರ್ಶನ ಮಾಡುವುದು, ನಿರ್ದಿಷ್ಟವಾಗಿ ಹೆಸರು ಕೂಗುವುದು, ಧರಣಿ ಮತ್ತು ಕಲಾಪ ಸ್ಥಗಿತ ಆಗುವಂತೆ ಮಾಡುವುದು ಮಾಡುತ್ತಿದ್ದಾರೆ. ಇದು ಸಂಸತ್ತಿನ ಘನತೆಯನ್ನು ಕುಗ್ಗಿಸುತ್ತಿದೆ ಮತ್ತು ಸಂಸದೀಯ ಪ್ರಜಾಪ್ರಭುತ್ವದ ಮೂಲ ತತ್ವಗಳಿಗೆ



■ ಸೋನಿಯಾ ಗಾಂಧಿಗೆ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರ ಪತ್ರ

■ ಸಂಸದೀಯ ವ್ಯವಸ್ಥೆಗೆ ಮಾರಕವಾಗುವ ನಡವಳಿಕೆ ಬೇಡ; ಕಾಂಗ್ರೆಸ್ ಸದಸ್ಯರಿಗೆ ತಿಳಿವಳಿಕೆ ಹೇಳುವಂತೆ ಒತ್ತಾಯ

ಧಕ್ಕೆ ಉಂಟುಮಾಡುತ್ತದೆ ಎಂದು ಅವರು ಆತಂಕ ವ್ಯಕ್ತಪಡಿಸಿದ್ದಾರೆ.

ನನ್ನ ರಾಜಕೀಯ ಜೀವನದ ತೊಂಬತ್ತರಷ್ಟು ಕಾಲವನ್ನು ಪ್ರತಿಪಕ್ಷದಲ್ಲಿಯೇ ಕಳೆದಿದ್ದೇನೆ. ನೀವು ಕೂಡ ಹೆಚ್ಚು ಕಾಲ

### ಸಂಸತ್ತಿನ ಮೆಟ್ಟಿಲುಗಳ ಮೇಲೆ ಚಹಾ, ಪಕೋಡಾ ಸೇವನೆ ಸರಿಯಲ್ಲ

ಸಂಸತ್ತಿನ ಮೆಟ್ಟಿಲುಗಳ ಮೇಲೆ ಚಹಾ ಸೇವನೆ ಮಾಡುವುದು ಸರಿಯಾದ ನಡವಳಿಕೆ ಅಲ್ಲ. ಈ ಹಿಂದೆ ವಿರೋಧ ಪಕ್ಷಗಳು ರಾಷ್ಟ್ರೀಯ ಹಿತಾಸಕ್ತಿಯನ್ನು ಗೌರವಿಸಿ, ಸಂಯಮದಿಂದ ವರ್ತಿಸಿದ್ದವು. ಸಂಸತ್ತಿನ ಮೆಟ್ಟಿಲುಗಳ ಮೇಲೆ ಕುಳಿತು ಚಹಾ, ಬಿಸ್ಕತ್ತು, ಪಕೋಡಾ ತಿನ್ನುವುದು ಅತಿರೇಖದ ಕ್ರಮಗಳು. ಇವು ಅನುಚಿತ ಎಂದು ಗೌಡರು ಟೀಕಿಸಿದ್ದಾರೆ.

ವಿರೋಧ ಪಕ್ಷದಲ್ಲಿಯೇ ಇದ್ದೀರಿ. ಪ್ರತಿಪಕ್ಷದ ಹೊಣೆಗಾರಿಕೆ ಹಾಗೂ ಜವಾಬ್ದಾರಿಗಳ ಬಗ್ಗೆ ತಮಗೆ ಅರಿವಿದೆ. ವಿರೋಧ ಪಕ್ಷಗಳು ತಮ್ಮ ವಿರೋಧವನ್ನು ತೋರಿಸಬಹುದು, ಆದರೆ ಅದು ನಿಯಮಗಳು, ಸಂಪ್ರದಾಯಗಳು ಮತ್ತು ಘನತೆಗೆ ಧಕ್ಕೆ ತರುವಂತಿರಬಾರದು. ಆದರೆ, ಪ್ರಸಕ್ತ ಸಂದರ್ಭದಲ್ಲಿ ಪ್ರತಿಪಕ್ಷ ಸದಸ್ಯರ ವರ್ತನೆ ನನಗೆ ಬಹಳ ನೋವುಂಟು ಮಾಡಿದೆ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಪ್ರತಿಪಕ್ಷ ಸದಸ್ಯರು, ಅದರಲ್ಲಿಯೂ ತಮ್ಮ ಪಕ್ಷದ ಸದಸ್ಯರು ತಮ್ಮ ವರ್ತನೆಯನ್ನು ಸರಿಪಡಿಸಿಕೊಂಡು ಸಂಸದೀಯ ವ್ಯವಸ್ಥೆಯ ಪಾವಿತ್ರ್ಯತೆಯನ್ನು ಎತ್ತಿಹಿಡಿಯುತ್ತಾರೆ ಎಂದು ನಿರೀಕ್ಷಿಸಿದ್ದೇ. ಅದು ಹುಸಿಯಾಗಿದೆ. ಹೀಗಾಗಿ ಪತ್ರ ಬರೆಯುವ ಸನ್ನಿವೇಶ ಸೃಷ್ಟಿಯಾಯಿತು ಎಂದು ದೇವೇಗೌಡರು ತಿಳಿಸಿದ್ದಾರೆ.

ಭಾರತೀಯ ಸಂಸದೀಯ ಪ್ರಜಾಪ್ರಭುತ್ವದ ಪರಂಪರೆಯ ಬಗ್ಗೆ ಪತ್ರದಲ್ಲಿ ದೇವೇಗೌಡರು ಒತ್ತಿ ಹೇಳಿದ್ದು; ಪಂಡಿತ್ ಜವಾಹರಲಾಲ್ ನೆಹರು, ಸರ್ದಾರ್ ವಲ್ಲಭಭಾಯಿ ಪಟೇಲ್, ಬಿ.ಆರ್.ಅಂಬೇಡ್ಕರ್ ಮತ್ತು ಮೌಲಾನಾ ಅಬ್ದುಲ್ ಕಲಾಂ ಆಜಾದ್ ಮುಂತಾದವರು ಹಾಕಿಕೊಟ್ಟ ಬುನಾದಿ ಹಾಗೂ ಅವರ ಮಾರ್ಗದರ್ಶನದ ಮೇಲೆ ಪರಂಪರೆಯೂ ನಿರ್ಮಿತವಾಗಿದೆ.

ನನ್ನ ಸುದೀರ್ಘ ಸಂಸದೀಯ ಅನುಭವದಲ್ಲಿ ಇತ್ತೀಚೆಗೆ ಕಂಡಂತಹ ಅವ್ಯವಸ್ಥೆ ಮತ್ತು ಅಡಚಣೆಯನ್ನು ನಾನು ಎಂದಿಗೂ ನೋಡಿಲ್ಲ. ನನ್ನ ಇಡೀ ರಾಜಕೀಯ ಜೀವನದಲ್ಲಿ ಸಂಸತ್ತಿನ ಪ್ರಚೋದನಾತ್ಮಕವಾಗಿ ವರ್ತಿಸುವುದು, ಪ್ರತಿಭಟಿಸುವುದು, ಸದನದ ಬಾವಿಗೆ ಇಳಿದು ಕೂಗುವುದನ್ನು ಮಾಡಿಲ್ಲ. ಉತ್ತಮ ಸಂಸದೀಯ ಸಂಸ್ಕೃತಿಯನ್ನು ನಮ್ಮ ಪ್ರಜಾಪ್ರಭುತ್ವದ ಹಿರಿಯರು ನಮಗೆ ಕಲಿಸಿದ್ದಾರೆ ಎಂದು ದೇವೇಗೌಡರು ಪತ್ರದಲ್ಲಿ ಪ್ರತಿಪಾದಿಸಿದ್ದಾರೆ.

## ಸಾಹಿತಿ ಅಮರೇಶ ನುಗಡೋಣಿಗೆ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ



ನವದೆಹಲಿ, ಮಾ.16: ಕನ್ನಡದ ಖ್ಯಾತ ಸಾಹಿತಿ ಅಮರೇಶ ನುಗಡೋಣಿ ಅವರಿಗೆ 2025ನೇ ಸಾಲಿನ ಪ್ರತಿಷ್ಠಿತ 'ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ' ಲಭಿಸಿದೆ. ಅವರ ಅಮೂಲ್ಯ ಕೃತಿಯಾದ 'ದಡ ಸೇರಿಸು ತಂದೆ' ಕಥಾ ಸಂಕಲನಕ್ಕೆ ಈ ಗೌರವ ಸಂದಿದೆ. ಈ ಪ್ರತಿಷ್ಠಿತ ಪ್ರಶಸ್ತಿಯು 1,00,000 (ಒಂದು ಲಕ್ಷ ರೂಪಾಯಿ) ನಗದು ಬಹುಮಾನ.,ಪ್ರಶಸ್ತಿ ಪತ್ರ.,ಸ್ಮರಣಿಕೆ.,ಮುಂದಿನ ದಿನಗಳಲ್ಲಿ ನವದೆಹಲಿಯಲ್ಲಿ ನಡೆಯಲಿರುವ ವಿಶೇಷ ಸಮಾರಂಭದಲ್ಲಿ ಅಮರೇಶ ನುಗಡೋಣಿ ಅವರಿಗೆ ಈ ಪ್ರಶಸ್ತಿಯನ್ನು ಪ್ರದಾನ ಮಾಡಲಾಗುವುದು.ಕನ್ನಡದ ಗ್ರಾಮೀಣ ಬದುಕಿನ ಸೊಗಡು ಮತ್ತು ಸಂಕೀರ್ಣಗಳನ್ನು ತಮ್ಮ ಕಥೆಗಳ ಮೂಲಕ ಕಟ್ಟಿಕೊಡುವ ನುಗಡೋಣಿ ಅವರಿಗೆ ಈ ಪ್ರಶಸ್ತಿ ಲಭಿಸಿರುವುದು ಕನ್ನಡ ಸಾಹಿತ್ಯ ಲೋಕಕ್ಕೆ ಸಂದ ಗೌರವವಾಗಿದೆ. ಈ ಹಿನ್ನೆಲೆಯಲ್ಲಿ ನಾಡಿನ ಅನೇಕ ಸಾಹಿತಿಗಳು ಮತ್ತು ಗಣ್ಯರು ಅವರಿಗೆ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

# ಕಾಂಡ್ಲಾ ಬಂದರು ತಲುಪಿದ ಶಿವಾಲಿಕ್ ಹಡಗು ಎಲ್‌ಪಿಜಿ ಸಮಸ್ಯೆಗೆ ತಾತ್ಕಾಲಿಕ ಪರಿಹಾರ

**ನವದೆಹಲಿ, ಮಾ.16:** ಭಾರತದಲ್ಲಿ ಉದ್ಭವಾಗಿರುವ ಎಲ್ಪಿಜಿಗೆ ಸಮಸ್ಯೆಗೆ ಮುಕ್ತಿ ಸಿಗುವ ಲಕ್ಷಣಗಳು ಕಂಡು ಬರುತ್ತಿದೆ. ಭಾರತೀಯ ನೌಕಾ ಪಡೆಯ ಬೆಂಗಾವಲಿನೊಂದಿಗೆ 40,000 ಮೆಟ್ರಿಕ್ ಟನ್‌ಗಳಿಗೂ ಹೆಚ್ಚು ದ್ರವೀಕೃತ ಪೆಟ್ರೋಲಿಯಂ ಅನಿಲವನ್ನು ಹೊತ್ತ ಭಾರತೀಯ ಶಿವಾಲಿಕ್ ಹಡಗು ಗುಜರಾತ್‌ನ ಕಾಂಡ್ಲಾ ಬಂದರು ತಲುಪಿದೆ.

ಹಾರ್ಮೂಜ್ ಜಲಸಂಧಿಯಲ್ಲಿ ಸೃಷ್ಟಿಯಾಗಿರುವ ಸಂಘರ್ಷದ ಬಳಿಕ ಇರಾನದ ಜೊತೆಗೆ ಭಾರತ ರಾಜತಾಂತ್ರಿಕ ಮಾತುಕತೆ ನಡೆಸಿತು. ಈ ಮಾತುಕತೆ ಬಳಿಕ ಒಂದೊಂದೇ ಹಡಗುಗಳು ಭಾರತಕ್ಕೆ ಬರಲು ಆರಂಭಿಸಿವೆ. ಶಿವಾಲಿಕ್ ಹಡಗು ಸೋಮವಾರ ತಲುಪಿದ್ದು, ಈಗಾಗಲೇ ಹಾರ್ಮೂಜ್ ಜಲಸಂಧಿ ದಾಟಿರುವ ನಂದಾದೇವಿ ಎಲ್ಪಿಜಿ ಟ್ಯಾಂಕರ್ ನಾಳೆ ಭಾರತ ತಲುಪಲಿದೆ. ಇದು ಸುಮಾರು 46,000 ಮೆಟ್ರಿಕ್ ಟನ್ ದ್ರವೀಕೃತ ಪೆಟ್ರೋಲಿಯಂ ಅನಿಲದೊಂದಿಗೆ ಬರುತ್ತಿದೆ. ಈ ಎರಡು ಹಡಗುಗಳಿಂದ ಒಟ್ಟು 86,000 ಮೆಟ್ರಿನ್ ಟನ್ ದ್ರವೀಕೃತ ಪೆಟ್ರೋಲಿಯಂ ಅನಿಲ ಭಾರತ




ತಲುಪಿದಂತಾಗಲಿದೆ.

ಈ ಎರಡು ಹಡಗುಗಳ ನಡುವೆ ನಾಡಿದ್ದು ಇನ್ನೊಂದು ಹಡಗು ಭಾರತಕ್ಕೆ ಬರುತ್ತಿದೆ. ಜಗ್ ಲಾಡ್ಕಿ ಎಂಬ ಕಚ್ಚಾತೈಲ ಇರುವ ಭಾರತೀಯ ಹಡಗು ಯುಎಇಯಿಂದ ಭಾರತಕ್ಕೆ ಪ್ರಯಾಣಿಸುತ್ತಿದೆ. ಈ ಹಡಗು 80,800 ಟನ್ ಕಚ್ಚಾತೈಲ ಹೊತ್ತು ಬರುತ್ತಿದೆ.. ಈ ನಡುವೆ ಹಾರ್ಮುಜ್ ಜಲಸಂಧಿಯಲ್ಲಿ 21 ಭಾರತದ ಹಡಗುಗಳಿದ್ದು ಅವು ಕೂಡಾ ಶೀಘ್ರದಲ್ಲಿ ಭಾರತದತ್ತ ಮುಖ ಮಾಡುತ್ತಿವೆ. ಇಂದಿರಂದ ಭಾರತದಲ್ಲಿ ಸೃಷ್ಟಿಯಾಗಿರುವ ಇಂಧನ. ಮತ್ತು ಗ್ಯಾಸ್ ಕೊರತೆ ನೀಗುವ ನಿರೀಕ್ಷೆಗಳಿದೆ.


## ರಾಯಚೂರಿನಲ್ಲಿ ಏಮ್ಸ್ ಸ್ಥಾಪನೆಗೆ ಸುಧಾಮೂರ್ತಿ ಒತ್ತಾಯ

**ನವದೆಹಲಿ, ಮಾ.16:** ರಾಯಚೂರಿನಲ್ಲಿ ಏಮ್ಸ್ ಸ್ಥಾಪನೆ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಸಂಸದೆ ಸುಧಾಮೂರ್ತಿ ಒತ್ತಾಯಿಸಿದ್ದಾರೆ. ಶೂನ್ಯ ವೇಳೆಯಲ್ಲಿ ವಿಷಯ ಪ್ರಸ್ತಾಪಿಸಿದ ಅವರು ಕಲ್ಯಾಣ ಕರ್ನಾಟಕದ ಅತಂತ್ಯ ಹಿಂದುಳಿದ ಜಿಲ್ಲೆಯಾದ ರಾಯಚೂರಿನಲ್ಲಿ ಏಮ್ಸ್ ನಿರ್ಮಾಣದ ಅಗತ್ಯವನ್ನು ವಿವರಿಸಿದರು. ಸಂವಿಧಾನದ 371–ಜೆ ವಿಧಿಯಡಿ ವಿಶೇಷ ಸ್ಥಾನಮಾನ ಪಡೆದಿರುವ ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಏಮ್ಸ್ ಅತ್ಯಂತ ಅವಶ್ಯಕವಾಗಿದೆ. ರಾಯಚೂರು ಜಿಲ್ಲೆ ಆರೋಗ್ಯ, ಶಿಕ್ಷಣ ಮತ್ತು ಆದಾಯ ಮಟ್ಟಗಳಲ್ಲಿ ಇನ್ನೂ ಹಿಂದುಳಿದಿದೆ. ಬೇರೆ ಜಿಲ್ಲೆಗಳಿಗೆ ಹೋಲಿಸಿದರೆ ಇಲ್ಲಿನ ಜನರ ಜೀವನಮಟ್ಟ ಸುಧಾರಿಸಬೇಕಿದೆ ಎಂದು ತಿಳಿಸಿದರು. ಕೇಂದ್ರ ಆರೋಗ್ಯ ಮಂತ್ರಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಅಲ್ಲಿನ ಜನರ ಆರೋಗ್ಯ ಮತ್ತು ಶಿಕ್ಷಣಕ್ಕೆ ಈ ಏಮ್ಸ್ ಸಂಸ್ಥೆಯು ಅತ್ಯುತ್ತಮ ಅನುಕೂಲವನ್ನು ಒದಗಿಸುತ್ತದೆ. ಈ ಬೇಡಿಕೆಯನ್ನು ತಕ್ಷಣ ಪರಿಗಣಿಸಿ ರಾಯಚೂರಿನಲ್ಲಿ ಏಮ್ಸ್ ಸ್ಥಾಪಿಸುವುದಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಕೋರಿಕೊಂಡರು.





## ನಿತ್ಯ ಪಂಚಾಂಗ 17.3.2026 ಮಂಗಳವಾರ



ಶ್ರೀ ವಿಶ್ವಾವಸು ನಾಮ ಸಂವತ್ಸರ, ದಕ್ಷಿಣಾಯಣ ಶಿಶಿರ ಹೇಮಂತ ಋತು, ಚಾಂದ್ರಮಾನ, ಪಾಲ್ಗುಣ ಬಹುಳ

ತ್ರಯೋದಶಿ, ಶತಭಿಷ ನಕ್ಷತ್ರ, ಮಾಸ ಶಿವರಾತ್ರಿ ನೆಟ್ಲ/ಇಳಕಲ್ಲ ಚಿಕ್ಕನಾಳ ಮಾರುತೇಶ್ವರ ರಥ, ಶರವೂರು ಪೊಳಲಿ ಉತ್ಸವ, ಷಬ್-ಎ-ಕ್ವಾಡರ್

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ದಾವಣಗೆರೆ ದಕ್ಷಿಣ, ಬಾಗಲಕೋಟೆಯಲ್ಲಿ ಕಾಂಗ್ರೆಸ್ ಜಯ

### ಮೋದಿ ವಿರೋಧಿ ಅಲೆಯಿಂದ ಪಕ್ಷಕ್ಕೆ ಅನುಕೂಲ: ಸಚಿವ ರಾಮಲಿಂಗಾರೆಡ್ಡಿ ವಿಶ್ವಾಸ

**ಬೆಂಗಳೂರು, ಮಾ.16:** ಏಪ್ರಿಲ್ 9ರಂದು ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ಕ್ಷೇತ್ರದ ಉಪಚುನಾವಣೆಗೆ ದಿನಾಂಕ ಘೋಷಣೆಯಾಗುತ್ತಿದ್ದಂತೆ, ಎರಡೂ ಕ್ಷೇತ್ರಗಳಲ್ಲೂ ಕಾಂಗ್ರೆಸ್ ಅಭ್ಯರ್ಥಿಗಳು ಗೆಲ್ಲುತ್ತಾರೆ ಎಂದು ಸಚಿವ ರಾಮಲಿಂಗಾರೆಡ್ಡಿ ವಿಶ್ವಾಸ ವ್ಯಕ್ತಪಡಿಸಿದರು. ವಿಧಾನಸೌಧದ ಬಳಿ ಮಾತನಾಡಿದ ಅವರು, ಈ ಉಪಚುನಾವಣೆಯಲ್ಲಿ ಮೋದಿ ವಿರೋಧಿ ಅಲೆ ಪಕ್ಷಕ್ಕೆ ಅನುಕೂಲ ವಾಗುತ್ತದೆ. ಪ್ರಧಾನಿ ಮೋದಿ ಜನಪ್ರಿಯತೆ ಕಡಿಮೆ ಆಗಿದೆ ಹಾಗಾಗಿ ಈ ಬಾರಿ ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ಕ್ಷೇತ್ರದ ಉಪಚುನಾವಣೆಗಳಲ್ಲಿ ನಾವೇ ಗೆಲ್ಲುತ್ತೇವೆ ಎಂದು ಸಚಿವ ರಾಮಲಿಂಗಾರೆಡ್ಡಿ ತಿಳಿಸಿದರು.

# ಲಿಖಿತ ಉತ್ತರ ಒದಗಿಸದ ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮ



**ಬೆಂಗಳೂರು, ಮಾ.16:** ವಿಧಾನಸಭೆಯಲ್ಲಿ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳಿಗೆ ಉತ್ತರಗಳನ್ನು ಕಡಿಮೆ ಸಂಖ್ಯೆಯಲ್ಲಿ ಉತ್ತರಿಸ ಲಾಗುತ್ತಿದೆ. ಹಲವು ಇಲಾಖೆಗಳಿಂದ ಉತ್ತರಗಳು ನಿಗದಿತ ಸಂಖ್ಯೆಯಲ್ಲಿ ಒದಗಿಸದಿರುವುದು ಗಮನಕ್ಕೆ ಬಂದಿದ್ದು, ಈ ಬಗ್ಗೆ ಸಭೆ ನಡೆಸಿ ಅಂತಹ ಅಧಿಕಾರಿಗಳ ವಿರುದ್ಧ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಇಂದು ವಿಧಾನಸಭೆಯಲ್ಲಿ ತಿಳಿಸಿದರು.

ವಿಧಾನಸಭೆಯಲ್ಲಿ ವಿರೋಧಪಕ್ಷದ ನಾಯಕ ಆರ್.ಅಶೋಕ್ ಹಾಗೂ ಶಾಸಕ ಎಸ್. ಸುರೇಶ್ ಕುಮಾರ್ ರವರು ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳಿಗೆ ನಿಗದಿತ ಸಂಖ್ಯೆಯಲ್ಲಿ ಉತ್ತರಗಳನ್ನು ಒದಗಿಸದೇ ಇರುವುದು ಗಮನಕ್ಕೆ ಬಂದಿದೆ. ಈ ಬಗ್ಗೆ ಸಭಾಧ್ಯಕ್ಷರು ಗಮನಹರಿಸಬೇಕೆಂದು ಕಳೆದ 4–5 ವಿಧಾನಸಭೆಯ ಅಧಿವೇಶನದಲ್ಲಿ ಕೋರಿದ್ದಾಗ್ಯೂ ನಿಗದಿತ ಸಂಖ್ಯೆಯಲ್ಲಿ ಉತ್ತರಗಳು ಬರುತ್ತಿಲ್ಲ. ಈ ಬಗ್ಗೆ ಸಭಾಧ್ಯಕ್ಷರು ನಿರ್ದೇಶನ ನೀಡಬೇಕೆಂದು ಸದನವನ್ನು ಕೋರಿದ್ದರು.

ಇಂದಿನ ಸದನದ ಕಲಾಪದಲ್ಲಿ ಮತ್ತೆ ನಿರೀಕ್ಷಿತ ಸಂಖ್ಯೆಯಲ್ಲಿ ಉತ್ತರಗಳು ಬಾರದ ಹಿನ್ನೆಲೆಯಲ್ಲಿ ಸದನಕ್ಕೆ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳಿಗೆ ಉತ್ತರಿಸುವ ಮಂತ್ರಿಗಳ ಹಾಗೂ ಇಲಾಖೆಯ ಅಧಿಕಾರಿಗಳ ಆದ್ಯ ಕರ್ತವ್ಯವಾಗಿದೆ. ಇದು ಗಂಭೀರವಾದ ವಿಷಯವಾಗಿದ್ದು ಈ ಬಗ್ಗೆ ಚರ್ಚೆ ಅಗತ್ಯವೆಂದು ಸದನವನ್ನು ಸಭಾಧ್ಯಕ್ಷರು ಮೊಟಕು ಗೊಳಿಸಿರುವುದು ಇತಿಹಾಸ ಎಂದು ಡಾ: ಜಿ.ಪರಮೇಶ್ವರ್ ತಿಳಿಸಿದರು.

ಸರ್ಕಾರ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಕೂಡಲೇ ಈ ಕುರಿತು ಸಭಾಧ್ಯಕ್ಷರು ಸಭೆ ನಡೆಸಿ, ಮುಖ್ಯಮಂತ್ರಿಗಳು, ಸರ್ಕಾರದ ಕಾರ್ಯದರ್ಶಿಗಳು, ವಿರೋಧ ಪಕ್ಷದ ನಾಯಕರೊಂದಿಗೆ ಸಭೆ ನಡೆಸಲಾಯಿತು. ಲಿಖಿತ ರೂಪದ ಪ್ರಶ್ನೆಗಳಿಗೆ ಸಭೆಯಲ್ಲಿ ನಿಗದಿತ ಸಮಯದಲ್ಲಿ ಉತ್ತರವನ್ನು ಒದಗಿಸದ ಅಧಿಕಾರಿಗಳ ವಿರುದ್ಧ ಕೂಡಲೇ ಶಿಸ್ತಿನ ಕ್ರಮ ಕೈಗೊಳ್ಳಬೇಕೆಂದು ತೀರ್ಮಾನಿಸಲಾಗಿದೆ ಎಂದರು.

ಸರ್ಕಾರದ ಎಲ್ಲಾ ಕಾರ್ಯದರ್ಶಿ ಗಳಿಗೆ ಈ ಕುರಿತು ಪರಿಶೀಲನೆ ಮಾಡಿ ಯಾವ ಯಾವ ಇಲಾಖೆಯಲ್ಲಿ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು ಬಾಕಿ ಉಳಿದಿವೆ ಎಂಬುದರ ಬಗ್ಗೆ ಪರಿಶೀಲಿಸಿ ವರದಿ ನೀಡುವಂತೆ ನಿರ್ದೇಶನ ನೀಡಲಾಗುವುದು ಹಾಗೂ ಮುಂ1ದಿನ ದಿನಗಳಲ್ಲಿ ಈ ರೀತಿ ಆಗದಂತೆ ಕ್ರಮ ವಹಿಸಲಾಗುವುದು ಎಂದು ಡಾ: ಜಿ.ಪರಮೇಶ್ವರ್ ಸದನದಲ್ಲಿ ಉತ್ತರಿಸಿದರು.

ಸಭಾಧ್ಯಕ್ಷರ ಈ ನಡೆಗೆ ವಿರೋಧಪಕ್ಷದ ನಾಯಕರು ಹಾಗೂ ಶಾಸಕರಿಂದ ಸಭಾಧ್ಯಕ್ಷರಿಗೆ ಸದನದಲ್ಲಿ ಅಭಿನಂದನೆಯನ್ನು ಸಲ್ಲಿಸಲಾಯಿತು.

# ಉಪಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವಿಗೆ ಮಹಿಳಾ ಸದಸ್ಯರ ಪಾತ್ರ ಮಹತ್ವದ್ದು

### ತಂಡ ರಚಿಸಿ ಪ್ರಚಾರ ಕಾರ್ಯದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಸಿಎಂ ಸಿದ್ದರಾಮಯ್ಯ ಸೂಚನೆ



**ಬೆಂಗಳೂರು, ಮಾ.16:** ಬಾಗಲಕೋಟೆ ಹಾಗೂ ದಾವಣಗೆರೆ ಉಪಚುನಾವಣೆಯ ಗೆಲುವಿನಲ್ಲಿ ಕಾಂಗ್ರೆಸ್ ಮಹಿಳಾ ಸದಸ್ಯರ ಪಾತ್ರ ಮಹತ್ವವಾದುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಎಂದು ತಿಳಿಸಿದರು.

ಕರ್ನಾಟಕ ಪ್ರದೇಶ ಮಹಿಳಾ ಕಾಂಗ್ರೆಸ್ ವತಿಯಿಂದ ಆಯೋಜಿಸಲಾಗಿದ್ದ ಕಾರ್ಯಕಾರಿ ಸಭೆ ಮತ್ತು ತರಬೇತಿ ಶಿಬಿರ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, 2013ರಿಂದ 2018 ಮತ್ತು 2023ರಿಂದ ಕಾಂಗ್ರೆಸ್ ಸರ್ಕಾರ ಮಹಿಳಾ ಸಬಲೀಕರಣಕ್ಕೆ ಒತ್ತು ನೀಡಿದೆ. ಪ್ರಮುಖ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಶಕ್ತಿ ಯೋಜನೆಯಿಂದ ಇದುವರೆಗೆ ಮಹಿಳೆಯರು 700 ಕೋಟಿ ಪ್ರಯಾಣಗಳನ್ನು ಕೈಗೊಂಡಿದ್ದಾರೆ. ಮಹಿಳಾ ಕೇಂದ್ರಿತ ಯೋಜನೆಗಳಿಂದ ಅವರ ಹಕ್ಕುಗಳನ್ನು ರಕ್ಷಿಸಲಾಗಿದೆ. ಸರ್ಕಾರದ ಗ್ಯಾರಂಟಿಗಳಿಂದ ಮಹಿಳೆಯರ ಕೊಂಡುಕೊಳ್ಳುವ ಶಕ್ತಿ ಹೆಚ್ಚಾಗಿದೆ. ಗೃಹಲಕ್ಷ್ಮಿ ಯೋಜನೆಯಡಿ 1.26 ಕೋಟಿ ಮಹಿಳೆಯರಿಗೆ ಮಾಸಿಕ 2000 ರೂ.ಗಳನ್ನು ನೀಡಲಾಗುತ್ತಿದ್ದು, ಇದರಿಂದ ಮಹಿಳೆಯರ ಆರ್ಥಿಕ ಹಾಗೂ ಸಾಮಾಜಿಕ ಸ್ಥಿತಿ ಸುಧಾರಿಸಿದೆ. ಆರ್ಥಿಕ ಸ್ವಾತಂತ್ರ್ಯದಿಂದ ಮಹಿಳೆಯರ ಆತ್ಮವಿಶ್ವಾಸ ಹೆಚ್ಚಿದೆ. ಡಾ.ಬಿ.ಆರ್. ಅಂಬೇಡ್ಕರ್ ಅವರು ಸಮಾಜದಲ್ಲಿ ಲಿಂಗತಾರತಮ್ಯ ಮತ್ತು ಅಸಮಾನತೆ ನಿವಾರಣೆಯಾಗದೇ ಸ್ವಾತಂತ್ರ್ಯ ಸಾರ್ಥಕತೆ ಹೊಂದುತ್ತದೆ ಎಂದರು.

ಮಹಿಳೆಯರಲ್ಲಿ ನಾಯಕತ್ವದ ಗುಣ ಬಹಳ ಪ್ರಮುಖವಾಗಿದೆ. ಎಲ್ಲರಿಗೂ ಸಮಾನ ಅವಕಾಶ ದೊರೆತರೆ ಸಮಾನತೆ ಸಾಧಿಸುವುದು ಸುಲಭ. ಕರ್ನಾಟಕ ಪ್ರದೇಶ ಮಹಿಳಾ ಕಾಂಗ್ರೆಸ್‌ನಲ್ಲಿ 1 ಲಕ್ಷಕ್ಕೂ ಹೆಚ್ಚು ಮಹಿಳಾ ಸದಸ್ಯರು ಇದ್ದು, ಭವಿಷ್ಯದಲ್ಲಿ ಈ ಸಂಖ್ಯೆ 2 ಲಕ್ಷಗಳಿಗೆ ವೃದ್ಧಿಸಬೇಕು. ಉಪಚುನಾವಣೆ ಸಮೀಸುತ್ತಿರುವುದರಿಂದ ಸರ್ಕಾರದ ಜನಪರ ಯೋಜನೆಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವಲ್ಲಿ ಮಹಿಳಾ ಸದಸ್ಯರ ಪಾತ್ರ ಮಹತ್ವದ್ದಾಗಿದೆ ಎಂದು ಹೇಳಿದರು.

ಬಾಗಲಕೋಟೆ ಹಾಗೂ ದಾವಣಗೆರೆ ಉಪಚುನಾವಣೆಯಲ್ಲಿ ಮಹಿಳಾ ಸದಸ್ಯರ ಎರಡು ತಂಡಗಳನ್ನು ರಚಿಸಿ, ಪ್ರಚಾರ ಕಾರ್ಯದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಕಳೆದ ಬಾರಿ ಚನ್ನಪಟ್ಟಣ, ಶಿಗ್ಗಾಂವ, ಸಂಡೂರು ಉಪಚುನಾವಣೆಗಳಲ್ಲಿ ಕಾಂಗ್ರೆಸ್ ಪಕ್ಷ ಜಯಭೇರಿ ಬಾರಿಸಿತ್ತು. ಈ ಬಾರಿಯೂ ಎರಡೂ ಸ್ಥಾನಗಳಲ್ಲಿ ಕಾಂಗ್ರೆಸ್ ಪಕ್ಷ ಗೆಲ್ಲಲೇಬೇಕಿದ್ದು, ಇದಕ್ಕಾಗಿ ಅಗತ್ಯ ಸಿದ್ಧತೆಯನ್ನು ಕಾಂಗ್ರೆಸ್ ಪಕ್ಷ ಮಾಡಿಕೊಂಡಿದೆ ಎಂದು ಸಿದ್ದರಾಮಯ್ಯ ತಿಳಿಸಿದರು.

# ಹೋಟೆಲ್‌ಗಳಿಗೆ ಸಿಲಿಂಡರ್ ಪೂರೈಕೆ ಸಾಧ್ಯವಿಲ್ಲ: ವಿದ್ಯುತ್ ಸ್ಟೌ ಬಳಸಿ




### ತೈಲ ಪೂರೈಕೆ ಕಂಪನಿಗಳ ಜತೆ ಸಭೆ ನಂತರ ಸಚಿವ ಕೆ. ಎಚ್. ಮುನಿಯಪ್ಪ ಮನವಿ

**ಬೆಂಗಳೂರು, ಮಾ.16:** ಹೋಟೆಲ್‌ಗಳಿಗೆ ಸದ್ಯ ಎಲ್‌ಪಿಜಿ ಸಿಲಿಂಡರ್ ಪೂರೈಕೆ ಸಾಧ್ಯವಿಲ್ಲ. ವಿದ್ಯುತ್ ಸ್ಟೌ ಬಳಸಿ ಎಂದು ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಕೆ.ಎಚ್. ಮುನಿಯಪ್ಪ ಹೇಳಿದ್ದಾರೆ.

ತೈಲ ಪೂರೈಕೆ ಕಂಪನಿಗಳ ಜತೆ ಸೋಮವಾರ ಮಹತ್ವದ ಸಭೆ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಪರಿಸ್ಥಿತಿ ಸದ್ಯ ಗಂಭೀರವಾಗಿದೆ. ಆದ್ದರಿಂದ ಸದ್ಯಕ್ಕೆ ವಾಣಿಜ್ಯ ಬಳಕೆ ಎಲ್‌ಪಿಜಿ ಸಿಲಿಂಡರ್‌ಗಳ ವಿತರಣೆಯಲ್ಲಿ ಅಡಚಣೆಯಾಗಲಿದೆ. ಇದನ್ನು ಸರಿದೂಗಿಸಲು ಎಲೆಕ್ಟ್ರಿಕ್ ಸ್ಟೌ ಗಳನ್ನು ಬಳಬೇಕೆಂದು ಸಚಿವರು ಮನವಿ ಮಾಡಿದ್ದಾರೆ.

ಕೇಂದ್ರ ಸರ್ಕಾರ ಕೂಡಲೇ ಇದರ ಬಗ್ಗೆ ಗಮನ ಹರಿಸಿ ಈಗಾಗಲೇ ತೈಲಕಂಪನಿಗಳ ಅಧಿಕಾರಿಗಳ ಜೊತೆ ಸಭೆ ನಡೆಸಿದ್ದು, ಅಗತ್ಯ ಮಾಹಿತಿಗಳನ್ನು ಪಡೆದ ನಂತರ ಈ ನಿರ್ಧಾರ ಕೈಗೊಳ್ಳಲಾಗಿದೆ. ಗೃಹಬಳಕೆ ಎಲ್‌ಪಿಜಿಗಳನ್ನು ಪೂರೈಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ವಿನಾಕಾರಣ ಗ್ರಾಹಕರು ಆತಂಕ ಪಡಬಾರದು. ಮಿತವಾಗಿ ಬಳಸಬೇಕು ಮತ್ತು ಡಬಲ್ ಬುಕಿಂಗ್ ಮಾಡಬೇಡಿ ಎಂದು ಮನವಿ ಮಾಡಿದರು.

ಈಗಾಗಲೇ ಅನಿಲ ಪೂರೈಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಕ್ರಮ ಕೈಗೊಳ್ಳುತ್ತಿದೆ. ಮಧ್ಯಪ್ರಾಚ್ಯದಿಂದ ಬಂದಿರುವ ಮೂರ್ನಾಲ್ಕು ಹಡಗುಗಳು ಸಾಕಷ್ಟು ಅನಿಲವನ್ನು ತಂದಿವೆ. ಸಂಪೂರ್ಣವಾಗಿ ರೀಫಿಲ್ಲಿಂಗ್ ಆಗಿ ಗ್ರಾಹಕರ ಕೈಸೇರಲು ಇನ್ನು ಕೆಲವು ದಿನಗಳು ಇಂತಹ ಸಮಸ್ಯೆಗಳು ಎದುರಾಗಬಹುದು ಎಂದು ಸುಳಿವು ನೀಡಿದ್ದಾರೆ.

> ರಾಜ್ಯದಲ್ಲಿ 14 ಸಾವಿರಕ್ಕೂ ಹೆಚ್ಚು ಹೋಟೆಲ್‌ಗಳಿವೆ. ಅದರಲ್ಲಿ ನಾಲ್ಕುವರೆ ಸಾವಿರ ಮಾತ್ರ ನೋಂದಣಿ ಮಾಡಿಕೊಂಡಿದ್ದಾರೆ. ನಿತ್ಯ 44 ಸಾವಿರ ಸಿಲಿಂಡರ್ ಬೇಕು, ಆದರೆ ವ್ಯತ್ಯಯ ಉಂಟಾಗಿದೆ. ಈಗಾಗಲೇ ಸಿಎಂ ಕೇಂದ್ರಕ್ಕೆ ಪತ್ರ ಬರೆದು ಪರಿಸ್ಥಿತಿ ಬಗ್ಗೆ ವಿವರಿಸಿದ್ದಾರೆ. ಈಗ ಕೇವಲ ಅಗತ್ಯ ವಲಯಕ್ಕೆ ಒಂದು ಸಾವಿರ ವಾಣಿಜ್ಯ ಸಿಲಿಂಡರ್‌ಗಳನ್ನು ಮಾತ್ರ ನೀಡಲಾಗುತ್ತಿದೆ.
>
> –ಕೆ.ಎಚ್. ಮುನಿಯಪ್ಪ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಸಚಿವ

ಮೊದಲ ಆದ್ಯತೆಯಾಗಿ ಆಸ್ಪತ್ರೆ, ಶೈಕ್ಷಣಿಕ ಸಂಸ್ಥೆಗಳು, ಏರ್‌ಲೈನ್, ರೈಲ್ವೆ ಕ್ಯಾಂಟೀನ್‌ಗಳಿಗೆ ಶೇ.100ರಷ್ಟು ಸಿಲಿಂಡರ್ ನೀಡಲು ಒಪ್ಪಿಗೆ ನೀಡಲಾಗಿದೆ. ಆರೂವರೆ ಸಾವಿರ ಸಿಲಿಂಡರ್‌ಗಳ ಪ್ರತಿದಿನ ಖರ್ಚಿಗೆ ಕೇಂದ್ರ ಒಪ್ಪಿಗೆ ನೀಡಿದೆ.

ಇದರಲ್ಲಿ ಅಗತ್ಯ ವಲಯಕ್ಕೆ 4,200 ಸಿಲಿಂಡರ್ ಪೂರೈಕೆ ಮಾಡಲು ನಿರ್ಧಾರ ಕೈಗೊಳ್ಳಲಾಗಿದೆ. ಆಟೋಗ್ಯಾಸ್ ಪೂರೈಕೆ ಮಾಡಲಾಗುತ್ತಿದೆ. ಆದರೆ ಹೋಟೆಲ್‌ಗಳಿಗೆ ಸದ್ಯಕ್ಕೆ ಪೂರೈಕೆ ಆಗುವುದಿಲ್ಲ. ಕಾಳಸಂತೆಯಲ್ಲಿ ಸಿಲಿಂಡರ್‌ಗಳನ್ನು ದಾಸ್ತಾನು ಮಾಡಿರುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಇದಕ್ಕಾಗಿ ವಿಶೇಷ ತಂಡ ರಚಿಸಿರುವುದಾಗಿ ಸಚಿವರು ತಿಳಿಸಿದರು.

# ಜಿಬಿಎ ಪ್ರತಿಷ್ಠೆ: ಕಾಂಗ್ರೆಸ್ ಆಕಾಂಕ್ಷಿಗಳಿಗೆ ಡಿಸಿಎಂ ಡಿಕೆಶಿಯಿಂದ ಚುನಾವಣಾ ತಂತ್ರದ ಪಾಠ



**ಬೆಂಗಳೂರು, ಮಾ.16:** ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರಿಗೆ ಗ್ರೇಟರ್ ಬೆಂಗಳೂರು ವ್ಯಾಪ್ತಿಯ 5 ತಾಲ್ಲೂಕುಗಳ ಚುನಾವಣೆ ಪ್ರತಿಷ್ಠೆಯ ಪ್ರಶ್ನೆಯಾಗಿದ್ದು, ಗೆಲ್ಲಲೇಬೇಕಾದ ಅನಿವಾರ್ಯತೆ ಸೃಷ್ಟಿಯಾಗಿದೆ. ಮುಖ್ಯಮಂತ್ರಿ ಹುದ್ದೆಯ ಮೇಲೆ ಕಣ್ಣಿಟ್ಟಿರುವ ಡಿ.ಕೆ.ಶಿವಕುಮಾರ್, ಬೆಂಗಳೂರು ವಿಭಜನೆಯ ಬಳಿಕ ನಡೆಯಲಿರುವ ಮೊದಲ ಚುನಾವಣೆಯಲ್ಲಿ ಕಾಂಗ್ರೆಸ್ ಆಡಳಿತ ಪ್ರತಿಷ್ಠಾಪಿಸುವುದನ್ನು ಸವಾಲಾಗಿ ಸ್ವೀಕರಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಬೆಂಗಳೂರಿನ ಪಾಲಿಕೆಗಳ ಚುನಾವಣೆಯಲ್ಲಿ ಕಾಂಗ್ರೆಸ್‌ನಿಂದ ಸ್ಪರ್ಧಿಸಲು ಬಯಸುವ ಅಭ್ಯರ್ಥಿಗಳಿಗೆ ಡಿ.ಕೆ. ಶಿವಕುಮಾರ್ ಭಾನುವಾರ ಶಿಸ್ತು ಮತ್ತು ಚುನಾವಣಾ ತಂತ್ರಗಳ ಪಾಠ ಮಾಡಿದ್ದಾರೆ. ಬಹುತೇಕ ಡಿಸೆಂಬರ್ ವೇಳೆಗೆ ನಗರ ಹಾಗೂ ಗ್ರಾಮೀಣ ಭಾಗದ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಯಲಿದ್ದು, ಸರಿಸುಮಾರು 9 ತಿಂಗಳ ಕಾಲಾವಕಾಶ ಇದೆ. ಆ ವೇಳೆಗೆ ಆಕಾಂಕ್ಷಿಗಳು ಕ್ಷೇತ್ರವನ್ನು ಹದ ಮಾಡಿಕೊಳ್ಳಬೇಕೆಂದು ಡಿ. ಕೆ.ಶಿವಕುಮಾರ್ ಸೂಚಿಸಿದ್ದಾರೆ.

ಅಭ್ಯರ್ಥಿಗಳ ಆಯ್ಕೆಯಲ್ಲಿ ಸ್ಥಳೀಯ ಜನಪ್ರಿಯತೆ, ಪಕ್ಷ ನಿಷ್ಠೆ ಈ ಹಿಂದೆ ಚುನಾವಣೆಗಳಲ್ಲಿ ತೊಡಗಿಸಿಕೊಂಡಿರುವ ಮಾದರಿಗಳನ್ನು ಆಧರಿಸಿ ಅವಕಾಶ ನೀಡುವುದಾಗಿ ಹೇಳಲಾಗಿದೆ. ಜೊತೆಗೆ ಅಭ್ಯರ್ಥಿಗಳಾಗುವವರ ಆರ್ಥಿಕ ಸಾಮರ್ಥ್ಯವೂ ಪರಿಗಣನೆಗೆ ಒಳಗಾಗಲಿದೆ. ಹಣ ಇದೆ, ಪ್ರಭಾವಿ ನಾಯಕರು ತಮ್ಮ ಬೆಂಬಲಕ್ಕಿದ್ದಾರೆ ಎಂಬ ಕಾರಣಕ್ಕೆ ಯಾರೂ ನಿರ್ಲಕ್ಷ್ಯದಿಂದ ಇರಬಾರದು, ತಾವು ಯಾರ ಪ್ರಭಾವಕ್ಕೂ ಮಣಿಯುವುದಿಲ್ಲ. ಚುನಾವಣೆಯಲ್ಲಿ ಗೆಲ್ಲುವುದಷ್ಟೇ ಮಾನದಂಡ. ಸ್ಥಳೀಯವಾಗಿ ಜನರ ನಡುವೆ ಗುರುತಿಸಿಕೊಳ್ಳದೇ ಇದ್ದರೆ ಚುನಾವಣೆಯಲ್ಲಿ ಸ್ಪರ್ಧಿಸಲು ಅವಕಾಶ ನೀಡುವುದಿಲ್ಲ ಎಂದು ಡಿ.ಕೆ.ಶಿವಕುಮಾರ್ ಎಚ್ಚರಿಕೆ ನೀಡಿದ್ದಾರೆ.

### ನಾಯಕರ ಬೆನ್ನು ಹತ್ತಿದ ಟಿಕೆಟ್ ಆಕಾಂಕ್ಷಿಗಳು

ಪ್ರಸ್ತುತ ಡಿ.ಕೆ.ಶಿವಕುಮಾರ್ ಅವರು, ವಿಧಿಸಿರುವ ಕಟ್ಟಲೆಗಳು ಟಿಕೆಟ್ ಆಕಾಂಕ್ಷಿಗಳಿಗೆ ನುಂಗಲಾರದ ಬಿಸಿ ತುಪ್ಪವಾಗಿದೆ. ಪ್ರಭಾವಿಗಳ ಹಿಂಬಾಲಕರಾಗಿ ಟಿಕೆಟ್ ಗಿಟ್ಟಿಸುವ ಧೈರ್ಯದಲ್ಲಿದ್ದವರಿಗೆ ಅಯೋಮಯ ಪರಿಸ್ಥಿತಿ ನಿರ್ಮಾಣವಾಗಿದೆ.ಒಂದು ವೇಳೆ ಚುನಾವಣೆಯಲ್ಲಿ ಸ್ಪರ್ಧಿಸಲು ಅವಕಾಶ ಸಿಗದೇ ಇದ್ದರೆ ಎಂಬ ಗೊಂದಲ ಕಾಡಲಾರಂಭಿಸಿದೆ. ಈ ಹಿನ್ನೆಲೆಯಲ್ಲಿ ಹೀಗಾಗಲೇ ಹಿರಿಯ ನಾಯಕರ ಬೆನ್ನು ಹತ್ತಿರುವ ಅಭ್ಯರ್ಥಿಗಳು ಡಿ.ಕೆ.ಶಿವಕುಮಾರ್ ವಿರುದ್ಧ ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ.

# ಭದ್ರಾ ಮೇಲ್ದಂಡೆ ಯೋಜನೆ: ಗೃಹ ಸಚಿವ ಅಮಿತ್ ಶಾ ಜೊತೆ ಸಂಸದ ಗೋವಿಂದ ಕಾರಜೋಳ ಮಹತ್ವದ ಮಾತುಕತೆ



**ನವದೆಹಲಿ, ಮಾ.16:** ನವದೆಹಲಿಯಲ್ಲಿ ಕೇಂದ್ರ ಗೃಹ ಹಾಗೂ ಸಹಕಾರ ಸಚಿವ ಅಮಿತ್ ಶಾ ಅವರನ್ನು ಭೇಟಿ ಮಾಡಿದ ಚಿತ್ರದುರ್ಗ ಲೋಕಸಭಾ ಸದಸ್ಯ ಗೋವಿಂದ ಕಾರಜೋಳ, ತಮ್ಮ ಕ್ಷೇತ್ರವಾದ ಚಿತ್ರದುರ್ಗ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಸಂಬಂಧಿಸಿದ ಹಲವು ಪ್ರಮುಖ ವಿಷಯಗಳನ್ನು, ಮುಖ್ಯವಾಗಿ ಭದ್ರಾ ಮೇಲ್ದಂಡೆ ಯೋಜನೆ ಕುರಿತು ಚರ್ಚಿಸಿದರು. ಈ ಮಹತ್ವದ ನೀರಾವರಿ ಯೋಜನೆಗೆ ಕೇಂದ್ರ ಸರ್ಕಾರದಿಂದ ಅಗತ್ಯ ಅನುದಾನವನ್ನು ಬಿಡುಗಡೆ ಮಾಡುವಂತೆ ಮನವಿ ಸಲ್ಲಿಸಿದರು.

ಈ ಯೋಜನೆ ಜಾರಿಯಾದಲ್ಲಿ ಚಿತ್ರದುರ್ಗ ಸೇರಿದಂತೆ ಮಧ್ಯ ಕರ್ನಾಟಕದ ಹಲವು ಜಿಲ್ಲೆಗಳ ರೈತರಿಗೆ ಮಹತ್ತರ ಪ್ರಯೋಜನವಾಗಲಿದೆ. ಇದೇ ವೇಳೆ ಚಿತ್ರದುರ್ಗ ಜಿಲ್ಲೆಯಲ್ಲಿ ಬುಡಕಟ್ಟು ಸಮುದಾಯದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣವನ್ನು ಒದಗಿಸುವ ಉದ್ದೇಶದಿಂದ ಹೆಚ್ಚುವರಿ ಏಕಲವ್ಯ ಮಾದರಿ ವಸತಿ ಶಾಲೆ (Eklavya Model Residential School - EMRS) ಸ್ಥಾಪಿಸಲು ಮಾನ್ಯ ಬುಡಕಟ್ಟು ವ್ಯವಹಾರಗಳ ಸಚಿವಾಲಯಕ್ಕೆ ಶಿಫಾರಸು ಮಾಡುವಂತೆ ವಿನಂತಿಸಿದರು ಹಾಗೂ ಚಿತ್ರದುರ್ಗದ ಇತಿಹಾಸ ಪ್ರಸಿದ್ಧ ವೀರನಾದ ಮದಕರಿ ನಾಯಕ ಅವರ ಸ್ಮರಣಾರ್ಥ ಚಿತ್ರದುರ್ಗದಲ್ಲಿ 'ಮದಕರಿ ನಾಯಕ ಥೀಮ್ ಪಾರ್ಕ್' ಸ್ಥಾಪನೆ ಮಾಡುವ ಕುರಿತು ಕೂಡ ಮನವಿ ಮಾಡಿದರು. ಈ ಯೋಜನೆ ಜಾರಿಯಾದಲ್ಲಿ ಜಿಲ್ಲೆಯ ಪ್ರವಾಸೋದ್ಯಮ ಅಭಿವೃದ್ಧಿಗೆ ಉತ್ತೇಜನ ದೊರೆಯಲಿದೆ ಎಂದರು. ಇದರ ಜೊತೆಗೆ ತಮ್ಮ ಲೋಕಸಭಾ ಕ್ಷೇತ್ರಕ್ಕೆ ಸಂಬಂಧಿಸಿದ ವಿವಿಧ ಅಭಿವೃದ್ಧಿ ಕಾರ್ಯಗಳು ಹಾಗೂ ಮೂಲಸೌಕರ್ಯ ಅಭಿವೃದ್ಧಿ ಯೋಜನೆಗಳ ಕುರಿತು ವಿವರವಾಗಿ ಚರ್ಚೆ ನಡೆಸಿದ್ದೇನೆ ಎಂದು ಸಂಸದ ಕಾರಜೋಳ ತಿಳಿಸಿದರು.

ನನ್ನ ಮನವಿಯನ್ನು ಕೇಂದ್ರ ಸಚಿವ ಅಮಿತ್ ಶಾ ಅವರು ಸಕಾರಾತ್ಮಕವಾಗಿ ಪರಿಗಣಿಸಿ ಅಗತ್ಯ ಕ್ರಮ ಕೈಗೊಳ್ಳುವ ಭರವಸೆ ಇದೆ ಎಂದು ತಿಳಿಸಿದರು.

# ಕಲಬುರಗಿ-ಬೀದರ್: ವಿಮಾನ ಸೇವೆ ಆರಂಭಕ್ಕೆ ಸಂಸ್ಥೆಗಳಿಗೆ ಸಚಿವರ ಒತ್ತಾಯ




**ಬೆಂಗಳೂರು, ಮಾ. 16:** ತೊಗರಿ ಕಣಜ ಕಲಬುರಗಿ ಮತ್ತು ಬೀದರ್‌ಗೆ ವಿಮಾನ ಸೇವೆ ಆರಂಭಿಸಬೇಕು ಎಂದು ಕಲ್ಯಾಣ ಕರ್ನಾಟಕ ಭಾಗದ ಸಚಿವರು, ಶಾಸಕರು ಆಗ್ರಹಿಸಿದ್ದಾರೆ. ವಿಧಾನಸೌಧದಲ್ಲಿ ನಡೆದ ಪ್ರಮುಖ ಸಭೆಯಲ್ಲಿ ಸಚಿವರಾದ ಎಂ.ಬಿ. ಪಾಟೀಲ್, ಪ್ರಿಯಾಂಕ್ ಖರ್ಗೆ, ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಜೀವನೋಪಾಯ ಮತ್ತು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ್ ರಹೀಮ್ ಖಾನ್ ಮತ್ತು ಕೆಕೆಆರ್‌ಡಿಬಿ ಅಧ್ಯಕ್ಷ ಡಾ. ಅಜಯ್ ಸಿಂಗ್ ಅವರು ವಿಮಾನಯಾನ ಸಂಸ್ಥೆಗಳ ಅಧಿಕಾರಿಗಳೊಂದಿಗೆ ಮಾತನಾಡಿ ವಿಮಾನ ಸೇವೆಗಳನ್ನು ಪ್ರಾರಂಭಿಸುವಂತೆ ಒತ್ತಾಯಿಸಿದರು.

ಇಂಡಿಗೋ, ಏರ್ ಇಂಡಿಯಾ, ಅಲಯನ್ಸ್ ಏರ್, ಸ್ಟಾರ್ ಏರ್ ಮತ್ತು ಆಕಾಶ ಏರ್‌ನ ಅಧಿಕಾರಿಗಳು, ರಾಜ್ಯ ಸರ್ಕಾರಿ ಹಿರಿಯ ಅಧಿಕಾರಿಗಳಾದ ಆರ್. ವಿಶಾಲ್ ಮತ್ತು ಖುಷ್ಬು ಚೌಧರಿ ಅವರು ಉಪಸ್ಥಿತರಿದ್ದರು.

2019 ರಿಂದ ಅಭಿವೃದ್ಧಿಪಡಿಸಿದ ಕಲಬುರಗಿಯಲ್ಲಿ 742 ಎಕರೆ ಭೂಮಿ ಸೇರಿದಂತೆ ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರ (ಎಎಐ) ನಿರ್ವಹಿಸುವ ಸೌಲಭ್ಯಗಳನ್ನು ಬಳಸಿಕೊಂಡು ಕಾರ್ಯಾಚರಣೆ ನಡೆಸುವ ಕುರಿತು ಚರ್ಚೆಗಳು ನಡೆದವು. ಎಲ್ಲಾ ವಿಮಾನಗಳ ಕಾರ್ಯಾಚರಣೆಗೆ ನಾವು ಬದ್ಧರಾಗಿದ್ದೇವೆ ಎಂದು ವಿಮಾನಯಾನ ನಿರ್ವಾಹಕರೊಬ್ಬರು ಹೇಳಿದರು.

ಇದನ್ನು ಇತರ ರಾಜ್ಯಗಳು ಮತ್ತು ಬೆಂಗಳೂರಿಗೆ ದೈನಂದಿನ ಸೇವೆಗಳಿಗಾಗಿ ಅಭಿವೃದ್ಧಿಪಡಿಸಬಹುದು ಎಂದು ಮತ್ತೊಬ್ಬ ವಿಮಾನ ಸಂಸ್ಥೆಯವರು ಅಭಿಪ್ರಾಯಪಟ್ಟರು.

ಇನ್ನೊಂದು ವಿಮಾನಯಾನ ಸಂಸ್ಥೆಯ ಅಧಿಕಾರಿಗಳು ಮಾತನಾಡಿ, ಬೀದರ್‌ಗೆ ಬೆಳಗಿನ ಸೇವೆ ಮತ್ತು ಬೆಂಗಳೂರಿನಿಂದ ಕಲಬುರಗಿಗೆ ಸಂಜೆ ಸೇವೆ ನೀಡಲು ಯೋಜಿಸುತ್ತಿದೆ ಎಂದು ಹೇಳಿದರು.

ಪ್ರಮುಖ ವಿಮಾನಯಾನ ಸಂಸ್ಥೆಯು ಪ್ರಸ್ತುತ ಎರಡೂ ಸ್ಥಳಗಳಿಗೆ ಪರಿಶೀಲ ನಡೆಸುತ್ತಿದೆ. ಕಲಬುರಗಿಯಿಂದ ಹೈದರಾಬಾದ್‌ಗೆ ವಿಮಾನ ಸಂಚಾರದ ಬಗ್ಗೆ ಗಮನಹರಿಸಲಾಗುತ್ತದೆ ಎಂದರು.

ಬೆಂಗಳೂರು–ಕಲಬುರಗಿ ಮತ್ತು ಬೆಂಗಳೂರು–ಬೀದರ್ ವಿಮಾನಗಳಿಗೆ ಮಾರ್ಚ್ 23 ರೊಳಗೆ ದೃಢವಾದ ಉಲ್ಲೇಖಗಳು ಮತ್ತು ವಿಮಾನ ಸಂಚಾರ ಸಮಯಗಳನ್ನು ಸಲ್ಲಿಸಲು ವಿಮಾನಯಾನ ಸಂಸ್ಥೆಗಳಿಗೆ ನಿರ್ದೇಶನ ನೀಡಿದರು, ನಂತರ ಮುಂದಿನ ಸಭೆಯಲ್ಲಿ ಅಂತಿಮ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದರು.

# ವಿಧಾನಸಭೆಯಲ್ಲಿ ವಿಧೇಯಕಗಳ ಅಂಗೀಕಾರ

**ಬೆಂಗಳೂರು, ಮಾ.16:** 2026ನೇ ಸಾಲಿನ ಕರ್ನಾಟಕ ಪೊಲೀಸ್ (ತಿದ್ದುಪಡಿ) ವಿಧೇಯಕವನ್ನು ವಿಧಾನಸಭೆಯಲ್ಲಿ ಸೋಮವಾರ ಅಂಗೀಕಾರ ವಾಯಿತು. ಗೃಹ ಸಚಿವ ಡಾ: ಜಿ.ಪರಮೇಶ್ವರ್ ಅವರು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಕೋರಿದರು. ಪೊಲೀಸ್ ಇಲಾಖೆಗೆ ಸಂಬಂಧಿಸಿದಂತೆ ಅತ್ಯಂತ ಪ್ರಮುಖವಾದ 'ಕರ್ನಾಟಕ ಪೊಲೀಸ್ (ತಿದ್ದುಪಡಿ) ವಿಧೇಯಕ ಇದಾಗಿದೆ ಎಂದರು. ಚರ್ಚೆಯ ನಂತರ ವಿಧೇಯಕವು ಒಮ್ಮತದಿಂದ ಅಂಗೀಕಾರವಾಯಿತು.

**ಪ್ರಮುಖ ಅಂಶಗಳು :**

–ವರ್ಗಾವಣೆ ಅಧಿಕಾರದಲ್ಲಿ ಬದಲಾವಣೆ

– ಉನ್ನತ ಅಧಿಕಾರಿಗಳಿಗೆ ಕೆಳಗಿನ ಅಧಿಕಾರಿಗಳ ಮೇಲೆ ಹೆಚ್ಚಿನ ಶಿಸ್ತಿನ ನಿಯಂತ್ರಣವನ್ನು ನೀಡುವುದು.

– ಕರ್ತವ್ಯ ಲೋಪ, ದುರ್ನಡತೆ ಅಥವಾ ಅಶಿಸ್ತು ತೋರುವ ಡಿವೈಎಸ್ಪಿ ಶ್ರೇಣಿಯವರೆಗಿನ ಅಧಿಕಾರಿಗಳನ್ನು ಸರ್ಕಾರದ ಪೂರ್ವಾನುಮತಿಗಾಗಿ ಕಾಯದೆ ನೇರವಾಗಿ ವರ್ಗಾವಣೆ ಮಾಡುವ ಅಧಿಕಾರವನ್ನು ಪೊಲೀಸ್ ಎಸ್ಟಾಬ್ಲಿಷ್ಮೆಂಟ್ ಬೋರ್ಡ್‌ಗೆ ನೀಡಲು ಉದ್ದೇಶಿಸಲಾಗಿದೆ.

– ಈ ಮೊದಲು ಯಾವುದೇ ಅಧಿಕಾರಿಯನ್ನು ವರ್ಗಾಯಿಸಲು ಕನಿಷ್ಠ ಎರಡು ವರ್ಷಗಳ ಕಾಲಾವಕಾಶ ಇರಬೇಕಿತ್ತು. ಆದರೆ ಹೊಸ ತಿದ್ದುಪಡಿಯ ಪ್ರಕಾರ, ಗಂಭೀರ ಲೋಪಗಳು ಕಂಡುಬಂದಲ್ಲಿ ಈ ಕನಿಷ್ಠ ಅವಧಿಯ ನಿಯಮ ಅನ್ವಯಿಸುವುದಿಲ್ಲ.

–ಇಲಾಖೆಯಲ್ಲಿ ಪಾರದರ್ಶಕತೆ ತರುವುದು ಮತ್ತು ಭ್ರಷ್ಟಾಚಾರ ಅಥವಾ ಕರ್ತವ್ಯದ ನಿರ್ಲಕ್ಷ್ಯವನ್ನು ತಡೆಯುವುದು.

**–ರಾಜಕೀಯ ಹಸ್ತಕ್ಷೇಪಕ್ಕೆ ಬ್ರೇಕ್**

–ಪೊಲೀಸ್ ಅಧಿಕಾರಿಗಳು ಸಾರ್ವಜನಿಕ ರೊಂದಿಗೆ ಉತ್ತಮ ಸಂಬಂಧ ಹೊಂದಲು ಮತ್ತು ಅಪರಾಧ ತಡೆಗಟ್ಟುವಿಕೆಯಲ್ಲಿ ಹೆಚ್ಚಿನ ಜವಾಬ್ದಾರಿ ವಹಿಸಲು ಈ ಕ್ರಮ ಪೂರಕ

ಕರ್ನಾಟಕ ಮುನ್ಸಿಪಾಲಿಟಿಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ ಅಂಗೀಕಾರ

2026ನೇ ಸಾಲಿನ ಕರ್ನಾಟಕ ಮುನ್ಸಿಪಾಲಿಟಿಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬಿ.ಎಸ್.ಸುರೇಶ್ ಅವರು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸದನದಲ್ಲಿ ಕೋರಿದರು. ಈ ವಿಧೇಯಕ ಉದ್ದೇಶವು ಜಾಹೀರಾತುಗಳ ಮೇಲೆ ಶುಲ್ಕವನ್ನು ವಿಧಿಸುವುದು ಮತ್ತು ಸಂಗ್ರಹಿಸುವುದು, ಅನಧಿಕೃತ ಜಾಹೀರಾತುಗಳನ್ನು ನಿಯಂತ್ರಿಸುವುದು ಮತ್ತು ಹಾಗೆ ಸಂಗ್ರಹಿಸಲಾದ ಅಂಥ ಶುಲ್ಕ ಮತ್ತು ದಂಡಗಳನ್ನು ಸಿಂಧುಗೊಳಿಸುವುದಾಗಿದೆ ಎಂದು ವಿಧೇಯಕದ ಬಗ್ಗೆ ಸದನದಲ್ಲಿ ವಿವರಿಸಿದರು. ಚರ್ಚೆಯ ಬಳಿಕ ವಿಧೇಯಕವು ಅಂಗೀಕಾರವಾಯಿತು.

# ಕೆಲವು ಕ್ಷೇತ್ರಗಳಲ್ಲಿ 191 ಬಗರ್‌ಹುಕುಂ ಸಕ್ರಮಕ್ಕೆ ಸಮಿತಿ ರಚನೆ ಬಾಕಿ: ಸಚಿವ ಕೃಷ್ಣಬೈರೇಗೌಡ

**ಬೆಂಗಳೂರು, ಮಾ.16:** ರಾಜ್ಯದಲ್ಲಿ ಇದುವರೆಗೂ 191 ಬಗರ್‌ಹುಕುಂ ಸಾಗುವಳಿ ಸಕ್ರಮೀಕರಣ ಸಮಿತಿಗಳನ್ನು ರಚಿಸಲಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ವಿಧಾನಸಭೆಯಲ್ಲಿಂದು ಹೇಳಿದರು. ಪ್ರಶ್ನೋತ್ತರ ಅವಧಿಯಲ್ಲಿ ಬಿಜೆಪಿಯ ಡಾ. ಅವಿನಾಶ್ ಜಾದವ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಈ ಹಿಂದೆ ತಾಲ್ಲೂಕುವಾರು ಬಗರ್‌ಹುಕುಂ ಸಾಗುವಳಿ ಸಕ್ರಮೀಕರಣ ಸಮಿತಿಗಳನ್ನು ರಚಿಸಲಾಗುತ್ತಿತ್ತು. ಈಗ ವಿಧಾನಸಭಾವಾರು ಸಮಿತಿಗಳನ್ನು ರಚಿಸಲಾಗಿದೆ. ಜತೆಗೆ ಅಧಿಕ ಸಮಿತಿ ರಚನೆಗೂ ಅವಕಾಶ ಮಾಡಿಕೊಟ್ಟಿದ್ದೇವೆ ಎಂದರು. ಇನ್ನೂ ನಾಲ್ಕೈದು ವಿಧಾನಸಭಾ ಕ್ಷೇತ್ರಗಳಲ್ಲಷ್ಟೇ ಸಮಿತಿ ರಚನೆ ಆಗಬೇಕಿದೆ. ಉಳಿದೆಡೆ ಎಲ್ಲ ಸಮಿತಿ ರಚನೆ ಆಗಿದೆ ಎಂದು ಹೇಳಿದರು. ಕಲಬುರಗಿ ಜಿಲ್ಲೆಯ ಚಿಂಚೋಳಿ ವಿಧಾನಸಭಾ ಕ್ಷೇತ್ರದಲ್ಲಿ ಬಗರ್‌ಹುಕುಂ ಸಾಗುವಳಿ ಸಕ್ರಮೀಕರಣ ಸಮಿತಿ ರಚನೆ ಸಂಬಂಧ ಕಳೆದ ಮಾರ್ಚ್ 7ರಂದು ಜಿಲ್ಲಾಧಿಕಾರಿಯವರು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿದ್ದಾರೆ. ರಾಜ್ಯದಲ್ಲಿ ಇನ್ನೂ 15 ವಿಧಾನಸಭಾ ಕ್ಷೇತ್ರಗಳಲ್ಲಿ ಬಗರ್ ಹುಕ್ಕುಂ ಸಾಗುವಳಿ ಸಕ್ರಮೀಕರಣ ಸಮಿತಿ ರಚನೆ ಆಗಿಲ್ಲ ಎಂದು ಅವರು ತಿಳಿಸಿದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಪೀಠಕ್ಕೆ ಅಗೌರವ: ಕಲಾಪ ಮುಂದೂಡಿ ಹೊರನಡೆದ ಸ್ಪೀಕರ್

## ಪ್ರಶ್ನೆಗಳಿಗೆ ಉತ್ತರ ನೀಡದ ಸಚಿವರು, ಅಧಿಕಾರಿಗಳ ವಿರುದ್ಧ ವಿಧಾನ ಸಭಾಧ್ಯಕ್ಷ ಯು.ಟಿ. ಖಾದರ್ ಅಸಮಾಧಾನ

**ಬೆಂಗಳೂರು, ಮಾ.16:** ಶಾಸಕರು ಕೇಳಿದ ಪ್ರಶ್ನೆಗಳಿಗೆ ಸಚಿವರು ಆಯಾ ಇಲಾಖೆಗಳಿಂದ ಸರಿಯಾಗಿ ಉತ್ತರ ನೀಡದೇ ಇದ್ದ ಮೇಲೆ ಯಾವ ಕಾರಣಕ್ಕೆ ಸದನ ನಡೆಸಬೇಕು ಎಂದು ಅಸಮಾಧಾನ ವ್ಯಕ್ತಪಡಿಸಿದ ಸಭಾಧ್ಯಕ್ಷ ಯು.ಟಿ.ಖಾದರ್ ಕಲಾಪವನ್ನು ಮುಂದೂಡಿ ಹೊರನಡೆದ ಅಪರೂಪದ ಪ್ರಸಂಗ ವಿಧಾನಸಭೆಯಲ್ಲಿ ಸೋಮವಾರ ಜರುಗಿತು. ವಿಧಾನಸಭಾಧ್ಯಕ್ಷರ ಪೀಠಕ್ಕೆ ಅಗೌರವ ತೋರಿದ ಸರ್ಕಾರದ ಧೋರಣೆಗೆ ಬೇಸತ್ತು ಸದನದಿಂದ ಹೊರನಡೆದಿದ್ದು ಭಾರಿ ಚರ್ಚೆಗೆ ಕಾರಣವಾಗಿದೆ.



ಪ್ರಶ್ನೋತ್ತರದ ಬಳಿಕ ಲಿಖಿತವಾಗಿ ಉತ್ತರ ಮಂಡಿಸುವ 230 ಪ್ರಶ್ನೆಗಳಿಗೆ ಸರ್ಕಾರದ ಪರವಾಗಿ ಗೃಹ ಸಚಿವ ಡಾ. ಜಿ ಪರಮೇಶ್ವರ್ 84 ಪ್ರಶ್ನೆಗಳಿಗೆ ಉತ್ತರ ಮಂಡಿಸಿದರು. ಬಿಜೆಪಿಯ ಸುರೇಶ್ ಕುಮಾರ್ ಮತ್ತು ವಿರೋಧ ಪಕ್ಷದ ನಾಯಕ ಆರ್. ಅಶೋಕ್ 250 ಪ್ರಶ್ನೆಗಳು ಎಂದರೆ ಕನಿಷ್ಠ 125 ಉತ್ತರಗಳಾದರೂ ಬರಬೇಕಿತ್ತು. ಆಗ ಶೇ.50ರಷ್ಟಾಗುತ್ತದೆ. ಆದರೆ ಇಲ್ಲಿ 84 ಯಾವ ಲೆಕ್ಕಕ್ಕೆ ಎಂದು ಆಕ್ಷೇಪಿಸಿದರು. ಸಭಾಧ್ಯಕ್ಷರು ಇಂದು ನೀಡುವ ಎಚ್ಚರಿಕೆ ಸೇರಿದರೆ ಐದು ಬಾರಿ ಸರ್ಕಾರಕ್ಕೆ ಚಾಟಿ ಬೀಸಿದ್ದಾರೆ. ಆದರೆ ಸರ್ಕಾರ ಅದನ್ನು ಗಂಭೀರವಾಗಿ ತೆಗೆದುಕೊಂಡಿಲ್ಲ ಎಂದು ಆರ್.ಅಶೋಕ್ ತೀಕ್ಷ್ಣವಾಗಿ ಆಕ್ಷೇಪಿಸಿದರು.

ಸಭಾಧ್ಯಕ್ಷ ಯು.ಟಿ.ಖಾದರ್ ಮಧ್ಯ ಪ್ರವೇಶ ಮಾಡಿ, ಸರ್ಕಾರದ ಈ ಧೋರಣೆಗೆ ಪರಿಹಾರ ಕಂಡುಕೊಳ್ಳಬೇಕಿದೆ. ಈವರೆಗೂ ನಾಲ್ಕು ಬಾರಿ ಪೀಠದಿಂದ ಸ್ಪಷ್ಟ ಆದೇಶ ನೀಡಿದರೂ ಪರಿಸ್ಥಿತಿ ಸುಧಾರಣೆಯಾಗಿಲ್ಲ ಎಂದಾದರೆ, ಇದನ್ನು ಹಗುರವಾಗಿ ತೆಗೆದುಕೊಳ್ಳಲಾಗುವುದಿಲ್ಲ ಎಂದರು. ಮೂರು ತಿಂಗಳಿಗೊಮ್ಮೆ ಅಧಿವೇಶನ ನಡೆಸುವುದು ಶಾಸಕರು ತಮ್ಮ ಸಮಸ್ಯೆಗಳನ್ನು ಚರ್ಚಿಸಲಿಕ್ಕಾಗಿ. ಇಲ್ಲಿ ಎಲ್ಲರೂ, ಎಲ್ಲಾ ಪಕ್ಷದವರು ಪ್ರಶ್ನೆಗಳನ್ನು ಕೇಳುತ್ತಾರೆ. ಪ್ರತಿದಿನ 15 ಪ್ರಶ್ನೆಗಳನ್ನು ಮಾತ್ರ ಚುಕ್ಕೆ ಗುರುತು ಎಂದು ಪರಿಗಣಿಸಿ ಇಲ್ಲಿ ಚರ್ಚೆ ಮಾಡಲು ಅವಕಾಶ ನೀಡಲಾಗುತ್ತದೆ. ಉಳಿದ ಪ್ರಶ್ನೆಗಳನ್ನು ಚುಕ್ಕೆ ರಹಿತ ಎಂದು ಪರಿಗಣಿಸಿ ಲಿಖಿತ ಉತ್ತರ ನೀಡಲಾಗುವುದು. ಗಮನ ಸೆಳೆಯುವ ಸೂಚನೆಯಡಿಯ 15ಕ್ಕಿಂತ ಹೆಚ್ಚು ಸದಸ್ಯರ ಅರ್ಜಿಗಳನ್ನು ಪರಿಗಣಿಸಬಾರದು ಎಂದು ಸಚಿವರು ಹೇಳುತ್ತಾರೆ. ಬೆಳಗ್ಗೆ ನಿಗದಿತ ಸಮಯಕ್ಕೆ ಕಲಾಪ ಆರಂಭಿಸಲು ಕೊರತೆ ಇರುತ್ತದೆ. ಈ ರೀತಿಯಾದರೆ ಸದನ ನಡೆಸಲಾಗುವುದಿಲ್ಲ. ಈ ಅಧಿವೇಶನಗಳು ನಡೆಯುವುದು ಸಚಿವರಿಗಾಗಿ ಅಲ್ಲ ಶಾಸಕರಿಗಾಗಿ ಎಂದು ಸಭಾಧ್ಯಕ್ಷರು ಒತ್ತಿ ಹೇಳಿದರು. ಅಲ್ಲದೇ ಶಾಸಕರ ಪ್ರಶ್ನೆಗಳಿಗೆ ಉತ್ತರ ನೀಡಲು ಸಚಿವರು, ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಸದನದಲ್ಲಿಲ್ಲ ಎಂದು ಸ್ಪೀಕರ್ ಯುಟಿ ಖಾದರ್ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದರು. ಲಿಖಿತವಾಗಿ ಮಂಡಿಸಬೇಕಾದ ಉತ್ತರಗಳನ್ನು ಕಡೆಗಣಿಸುತ್ತಿರುವುದು ಸರಿಯಲ್ಲ. ಸಚಿವರು ಮತ್ತು ಆಯಾ ಇಲಾಖೆಗಳ ಪ್ರಧಾನ ಕಾರ್ಯದರ್ಶಿಗಳು ತಮ ಬಳಿ ಬಂದು ಸಮಸ್ಯೆಯ ಬಗ್ಗೆ ಸ್ಪಷ್ಟ ವಿವರಣೆ ನೀಡಿದ ಹೊರತು, ತಾವು ಸದನ ನಡೆಸುವುದಿಲ್ಲ ಎಂದು ಹೇಳಿ ಸಭಾಧ್ಯಕ್ಷ ಯು.ಟಿ.ಖಾದರ್ ಕಲಾಪವನ್ನು ಮುಂದೂಡಿ ಹೊರ ನಡೆದರು.

### ಸ್ಪೀಕರ್ ಮನವೊಲಿಸಿದ ಮುಖ್ಯಮಂತ್ರಿ




- ಮೂವರು ಅಧಿಕಾರಿಗಳ ತಲೆದಂಡ
- ಉತ್ತರ ಒದಗಿಸದವರಿಗೆ ನೋಟಿಸ್ ನೀಡುವಂತೆ ಸೂಚನೆ

**ಬೆಂಗಳೂರು, ಮಾ.16:** ಅಧಿವೇಶನದಲ್ಲಿ ಶಾಸಕರ ಪ್ರಶ್ನೆಗಳಿಗೆ ಉತ್ತರ ನೀಡದೇ ನಿರ್ಲಕ್ಷ್ಯ ಧೋರಣೆ ತಾಳಿದ ಮೂವರು ಅಧಿಕಾರಿಗಳ ತಲೆದಂಡವಾಗುವ ಸಾಧ್ಯತೆ ಇದೆ. ಸದನದಲ್ಲಿ ಉತ್ತರಿಸುವವರೇ ಇಲ್ಲ, ಸಚಿವರು, ಅಧಿಕಾರಿಗಳು ಗೈರು ಹಾಜರಾಗಿದ್ದಾರೆ. ಹೀಗಾದರೆ ಸದನ ನಡೆಸುವುದು ಹೇಗೆ ಎಂದು ಸ್ಪೀಕರ್ ಯುಟಿ ಖಾದರ್ ಆಕ್ರೋಶಕ್ಕೆ 3 ಅಧಿಕಾರಿಗಳ ತಲೆದಂಡವಾಗಲಿದೆ. ವಿಧಾನಸಭೆ ಅಧಿವೇಶನಕ್ಕೆ ಸಚಿವರು ಗೈರಾಗಿದ್ದಾರೆ.ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪೀಕರ್ ಖಾದರ್ ಜೊತೆ ಮಾತುಕತೆ ನಡೆಸಿ ಮನವೊಲಿಸಿದರು. ಸ್ಪೀಕರ್ ಜೊತೆ ಮಾತನಾಡಿದ ಬಳಿಕ ಮೂವರು ಅಧಿಕಾರಿಗಳ ಅಮಾನತಿಗೆ ಸೂಚನೆ ನೀಡಿದ್ದಾರೆ. ಸದನದಲ್ಲಿ ಅತಿಹೆಚ್ಚು ಉತ್ತರ ಬಾಕಿ ಉಳಿಸಿಕೊಂಡಿರುವ ಇಲಾಖೆ ಅಧಿಕಾರಿಗಳನ್ನು ಅಮಾನತು ಮಾಡುವಂತೆ ಸಿದ್ದರಾಮಯ್ಯ ಖಡಕ್ ಸೂಚನೆ ಕೊಟ್ಟಿದ್ದಾರೆ. ಖಾದರ್ ಸಿಟ್ಟಿಗೆ ಮೂವರು ಅಧಿಕಾರ ತಲೆದಂಡವಾಗಿದೆ.

### ಮತ್ತೆ ಸದನಕ್ಕೆ ಬಂದ ಸ್ಪೀಕರ್

ಮುಖ್ಯಮಂತ್ರಿ ಸಿದ್ದರಾಮಯ್ಯ ಜೊತೆ ನಡೆದ ಸಂಧಾನದ ಬಳಿಕ ಸದನ ನಡೆಸಲು ಒಪ್ಪಿದ ಸ್ಪೀಕರ್ ಖಾದರ್ ಕಲಾಪಕ್ಕೆ ಬಂದು ಕುರ್ಚಿಯಲ್ಲಿ ಕುಳಿತುಕೊಂಡರು. ಸರ್ಕಾರದ ವಿರುದ್ಧವೇ ಸಿಟ್ಟಾದ ಸ್ಪೀಕರ್ ಖಾದರ್ ಅವರ ಮನವೊಲಿಕೆ ಮಾಡುವಲ್ಲಿ ಸಿಎಂ ಯಶಸ್ವಿಯಾಗಿದ್ದಾರೆ. ಶಾಸಕರ ಪ್ರಶ್ನೆಗಳಿಗೆ ಸಿಗಲಿದೆ ಸೂಕ್ತ ಉತ್ತರ ಲಿಖಿತ ಪ್ರಶ್ನೆಗಳಿಗೆ ಉತ್ತರ ಸಂಬಂಧ ಸಿಎಂ ಹಾಗೂ ಸಚಿವರು ಮತ್ತೆ ಪ್ರತಿಪಕ್ಷ ನಾಯಕರ ಜೊತೆ ಚರ್ಚಿಸಿ ತೀರ್ಮಾನ ಮಾಡಲಾಗಿದೆ. ಸರ್ಕಾರ ಪ್ರಶ್ನೆಗಳಿಗೆ ಉತ್ತರ ಕೊಡಲಿದೆ ಎಂದು ಸ್ಪೀಕರ್ ತಿಳಿಸಿದ್ದಾರೆ.

# ಎನ್‌ಸಿಎಎಚ್‌ಪಿ ಸುತ್ತೋಲೆ: ಪ್ಯಾರಾ ಮೆಡಿಕಲ್ ಕಾಲೇಜು ಬಂದ್ ಆಗುವ ಆತಂಕ



- ವೈದ್ಯಕೀಯ ಶಿಕ್ಷಣ ಸಚಿವ ಶರಣ್ ಪ್ರಕಾಶ್ ಪಾಟೀಲ್ ಕಳವಳ

**ಬೆಂಗಳೂರು, ಮಾ.16:** ರಾಷ್ಟ್ರೀಯ ಅಲೈಡ್ ಹಾಗೂ ಹೆಲ್ತ್‌ಕೇರ್ ಪ್ರೊಫೆಶನ್ಸ್ ಆಯೋಗ (ಎನ್‌ಸಿಎಎಚ್‌ಪಿ) ಹೊರಡಿಸಿರುವ ಸುತ್ತೋಲೆಯಿಂದಾಗಿ ರಾಜ್ಯದಲ್ಲಿ ಪ್ಯಾರಾ ಮೆಡಿಕಲ್ ಕಾಲೇಜು ಮುಚ್ಚುವ ಆತಂಕವಿದೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಶರಣ್ ಪ್ರಕಾಶ್ ಪಾಟೀಲ್ ಕಳವಳ ವ್ಯಕ್ತಪಡಿಸಿದ್ದಾರೆ.

ವಿಧಾನ ಪರಿಷತ್ ಕಲಾಪದ ಶೂನ್ಯ ವೇಳೆಯಲ್ಲಿ ಸದಸ್ಯ ಐವನ್ ಡಿಸೋಜಾ ಅವರು ವಿಷಯ ಪ್ರಸ್ತಾಪಿಸಿ, ಪ್ಯಾರಾ ಮೆಡಿಕಲ್ ಕೋರ್ಸ್ ಸೇರಲು ಬಯಸುವ ವಿದ್ಯಾರ್ಥಿಗಳು ಸಂಕಷ್ಟಕ್ಕೆ ತುತ್ತಾಗಿದ್ದಾರೆ. ಇವರೆಗೂ ಎಸ್‌ಎಸ್‌ಎಲ್‌ಸಿ ನಂತರ ವೈದ್ಯಕೀಯ ಕ್ಷೇತ್ರದ ತರಬೇತಿ ಪಡೆಯಲು ಅವಕಾಶವಿತ್ತು. ಆದರೆ ಇನ್ನುಮುಂದೆ ದ್ವಿತೀಯ ಪಿಯುಸಿಯಲ್ಲಿ ವಿಜ್ಞಾನ ವಿಭಾಗದಲ್ಲಿ ತೇರ್ಗಡೆಯಾದವರಿಗೆ ಮಾತ್ರ ಪ್ರವೇಶ ಎಂದು ನಿಯಮ ರೂಪಿಸಿರುವುದು ಹೊಸ ಶೈಕ್ಷಣಿಕ ಬಿಕ್ಕಟ್ಟಿಗೆ ನಾಂದಿಯಾಗಿದೆ ಎಂದರು.

ಆಯೋಗವು ಜನವರಿ 2ರಂದು ಯುಜಿಸಿಗೆ ಪತ್ರ ಬರೆದು, ದೇಶಾದ್ಯಂತ ಪ್ಯಾರಾ ಮೆಡಿಕಲ್ ಕೋರ್ಸ್‌ಗಳಿಗೆ ಇನ್ನು ಮುಂದೆ ಪ್ರವೇಶ ಪಡೆಯಲು ಪಿಯುಸಿ ವಿಜ್ಞಾನ ಪೂರೈಸಿರುವುದನ್ನು ಕಡ್ಡಾಯ ಮಾಡಲಾಗಿದೆ. ಈ ನೂತನ ನಿಯಮವನ್ನು 202627ನೇ ಸಾಲಿನಿಂದಲೇ ಜಾರಿಗೆ ತರಲು ಸೂಚಿಸಿದೆ. ಇದರಿಂದ ರಾಜ್ಯದಲ್ಲಿ ಪ್ರಸ್ತುತ 32 ಸರ್ಕಾರಿ ಹಾಗೂ 608 ಖಾಸಗಿ ಕಾಲೇಜು ಸೇರಿ 640 ಪ್ಯಾರಾ ಮೆಡಿಕಲ್ ಶಿಕ್ಷಣ ಸಂಸ್ಥೆಗಳಿವೆ. ಹೊಸ ನಿಯಮ ಜಾರಿಯಾದರೆ 450ರಿಂದ 500 ಕಾಲೇಜುಗಳಿಗೆ ಅರ್ಹ ಅಭ್ಯರ್ಥಿಗಳ ಕೊರತೆ ಉಂಟಾಗಲಿದೆ ಎಂದು ಐವನ್ ಡಿಸೋಜಾ ಆತಂಕ ವ್ಯಕ್ತಪಡಿಸಿದರು. ಇದಕ್ಕೆ ಉತ್ತರಿಸಿದ ಸಚಿವ ಶರಣ್ ಪ್ರಕಾಶ್ ಪಾಟೀಲ್, ಎನ್‌ಸಿಎಹೆಚ್‌ಪಿ ಸುತ್ತೋಲೆ ಯಿಂದಾಗಿ ರಾಜ್ಯದಲ್ಲಿರುವ ಪ್ಯಾರಾ ಮೆಡಿಕಲ್ ಕಾಲೇಜುಗಳು ಮುಚ್ಚುವ ಭೀತಿ ಉಂಟಾಗಿದೆ. ಎಸ್‌ಎಸ್‌ಎಲ್‌ಸಿ ನಂತರ ಈ ಕೋರ್ಸ್ ಆಯ್ಕೆ ಮಾಡಿಕೊಂಡು, ಪ್ರತಿ ವರ್ಷ ರಾಜ್ಯದಲ್ಲಿ ಸಾವಿರಾರು ವಿದ್ಯಾರ್ಥಿಗಳು ಪ್ರವೇಶ ಪಡೆಯುತ್ತಿದ್ದರು. ಈಗ ಪಿಯುಸಿಯಲ್ಲಿ ವಿಜ್ಞಾನ ತೆಗೆದುಕೊಳ್ಳಬೇಕಿದೆ. ಡಿಪ್ಲೋಮಾ ಕೋರ್ಸ್‌ಗಳಿಗೂ ಇದೇ ನಿಯಮ ಅಳವಡಿಸಲು ದೇಶದೆಲ್ಲೆಡೆ ಜಾರಿಗೆ ತರಲು ಕೇಂದ್ರವು ಮುಂದಾಗಿದೆ. ನಿಯಮದಲ್ಲಿ ಸರಳೀಕರಣದ ಬಗ್ಗೆ ಆಯೋಗದ ಅಧ್ಯಕ್ಷರೊಂದಿಗೆ ಮಾತನಾಡಿದ್ದೇವೆ. ಈ ಬಗ್ಗೆ ಸಭೆ ಕರೆದು ಚರ್ಚಿಸುವುದಾಗಿ ಭರವಸೆ ನೀಡಿದ್ದಾರೆ ಎಂದು ತಿಳಿಸಿದರು.

# ಕಾಂಗ್ರೆಸ್‌ನಿಂದ ಪ್ರಜಾಪ್ರಭುತ್ವದ ಕಗ್ಗೊಲೆ: ಅಶೋಕ್ ಟೀಕೆ

- ಕಲಾಪ ಮುಂದೂಡಿ ಸದನದಿಂದ ಸ್ಪೀಕರ್ ಯು.ಟಿ. ಖಾದರ್ ಹೊರನಡೆದಿದ್ದು ಕಪ್ಪುಚುಕ್ಕೆ



**ಬೆಂಗಳೂರು, ಮಾ.16:** ಉತ್ತರ ಒದಗಿಸದ ಸಚಿವರ ಧೋರಣೆಯಿಂದ ಬೇಸತ್ತು ಸಭಾಧ್ಯಕ್ಷರು ಪೀಠದಿಂದ ನಿರ್ಗಮಿಸಿದ ಘಟನೆ ಕರ್ನಾಟಕದ ಇತಿಹಾಸದಲ್ಲೇ ಕಪ್ಪು ಚುಕ್ಕೆ. ಈ ಮೂಲಕ ಕಾಂಗ್ರೆಸ್‌ನಿಂದ ಪ್ರಜಾಪ್ರಭುತ್ವದ ಹತ್ಯೆಯಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಟೀಕಿಸಿದ್ದಾರೆ.

ಇತಿಹಾಸದಲ್ಲೇ ಮೊದಲ ಬಾರಿಗೆ, ಸ್ವತಃ ಸಭಾಧ್ಯಕ್ಷ ಯು.ಟಿ. ಖಾದರ್ ಅವರು ಅಸಹಾಯಕರಾಗಿ ಸದನದಿಂದ ಹೊರನಡೆದು ಕಲಾಪವನ್ನು ಮುಂದೂಡಬೇಕಾದ ಅನಿವಾರ್ಯತೆ ಸೃಷ್ಟಿಯಾಯಿತು. ಇದಕ್ಕೆ ಕಾಂಗ್ರೆಸ್ ಸರ್ಕಾರದ ಸಚಿವರ ಅಹಂಕಾರ ಮತ್ತು ಬೇಜವಾಬ್ದಾರಿ ಕಾರಣ. ಶಾಸಕರು ಕೇಳಿದ ಪ್ರಶ್ನೆಗಳಿಗೆ ಕನಿಷ್ಠ ಲಿಖಿತ ಉತ್ತರ ನೀಡಲೂ ಯೋಗ್ಯತೆ ಇಲ್ಲದ ಈ ನಾಲಾಯಕ್ ಕಾಂಗ್ರೆಸ್ ಸರ್ಕಾರಕ್ಕೆ ಅಧಿಕಾರದಲ್ಲಿ ಮುಂದುವರಿಯುವ ಯಾವ ನೈತಿಕತೆ ಉಳಿದಿದೆ ಎಂದು ಪ್ರಶ್ನಿಸಿದ್ದಾರೆ

**ರಾಹುಲ್‌ಗಾಂಧಿಗೆ ತಿರುಗೇಟು:** ಕರ್ನಾಟಕದ ವಿಧಾನಸಭೆಯಲ್ಲಿ ಸೋಮವಾರ ನಡೆದ ಘಟನೆ ಕೇವಲ ನಾಚಿಕೆಗೇಡಿನ ಸಂಗತಿ ಮಾತ್ರವಲ್ಲ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಇದು ಜನಾದೇಶಕ್ಕೆ ಮಾಡಿದ ಘೋರ ಅಪಚಾರ. ದೆಹಲಿಯಲ್ಲಿ ಸಂವಿಧಾನ ಉಳಿಸಿ ಎಂದು ಬೊಬ್ಬೆ ಹೊಡೆಯುವ ರಾಹುಲ್ ಗಾಂಧಿ ಅವರೇ, ಕರ್ನಾಟಕದಲ್ಲಿ ನಿಮ್ಮದೇ ಪಕ್ಷದ ಸಚಿವರು ವಿಧಾನಸಭೆಯ ಘನತೆಯನ್ನು ಕುಗ್ಗಿಸುತ್ತಿರುವುದು ನಿಮಗೆ ಕಾಣಿಸುತ್ತಿಲ್ಲವೇ ಎಂದು ಅಶೋಕ್ ಕುಟುಕಿದ್ದಾರೆ.

**ಕಾಂಗ್ರೆಸ್‌ನ ಅಸಲಿ ಮುಖವಾಡ ಕಳಚಿದೆ:** ಶಾಸಕರ ಪ್ರಶ್ನೆಗಳಿಗೆ ಉತ್ತರಿಸುವ ಸೌಜನ್ಯ, ವ್ಯವಧಾನ ಇಲ್ಲದ ಅಸಮರ್ಥ ಮತ್ತು ಬೇಜವಾಬ್ದಾರಿ ಸಚಿವರು ಸಿದ್ದರಾಮಯ್ಯನವರ ಸಂಪುಟದಲ್ಲಿ ಇದ್ದಾರೆ. ಇದು ಕೇವಲ ಆಡಳಿತಾತ್ಮಕ ವೈಫಲ್ಯವಲ್ಲ. ಇದು ಸಿಎಂ ಸಿದ್ದರಾಮಯ್ಯನವರಿಗೆ ಸಚಿವರ ಮೇಲೆ, ಅಧಿಕಾರಶಾಹಿ ಮೇಲೆ, ರಾಜ್ಯದ ಆಡಳಿತದ ಮೇಲೆ ಹಿಡಿತ ತಪ್ಪಿರುವುದಕ್ಕೆ ಸಾಕ್ಷಿ. ಸಚಿವರು, ಅಧಿಕಾರಿಗಳು ಶಾಸಕಾಂಗವನ್ನೇ ನಿರ್ಲಕ್ಷಿಸುತ್ತಿದ್ದಾರೆ ಎಂದರೆ ರಾಜ್ಯದಲ್ಲಿ ಆಡಳಿತ ಯಂತ್ರ ಸಂಪೂರ್ಣ ಕುಸಿದಿದೆ ಎಂದರ್ಥ ಎಂದಿದ್ದಾರೆ ಚುನಾಯಿತ ಜನಪ್ರತಿನಿಧಿಗಳಾದ ಶಾಸಕರ ಪ್ರಶ್ನೆ ಕೇಳುವ ಧ್ವನಿಯನ್ನು ಅಡಗಿಸುವುದು, ಸದನಕ್ಕೆ ಗೌರವ ನೀಡದಿರುವುದು – ಇದೇನಾ ಕಾಂಗ್ರೆಸ್ ಪಕ್ಷದ ಕರ್ನಾಟಕ ಮಾಡೆಲ್ ಸಂವಿಧಾನದ ಬಗ್ಗೆ ಪಾಠ ಮಾಡುವ ಕಾಂಗ್ರೆಸ್ ಪಕ್ಷದ ಅಸಲಿ ಮುಖವಾಡ ಇವತ್ತು ಕರ್ನಾಟಕದಲ್ಲಿ ಕಳಚಿ ಬಿದ್ದಿದೆ ಎಂದು ಅಶೋಕ್ ಹೇಳಿದ್ದಾರೆ.

### ಸದನದ ಗಂಭೀರತೆಯನ್ನು ಅರ್ಥ ಮಾಡಿಕೊಳ್ಳಲು ಒತ್ತಾಯ

**ಬೆಂಗಳೂರು, ಮಾ.16:** ಮುಖ್ಯಮಂತ್ರಿ ಸಿದ್ದರಾಮಯ್ಯ ಸದನದ ಗಂಭೀರತೆಯನ್ನು ಅರ್ಥ ಮಾಡಿಕೊಳ್ಳಬೇಕು ಎಂದು ಶಾಸಕ ಸುನೀಲ್‌ಕುಮಾರ್ ಒತ್ತಾಯಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಶ್ನೆಗಳಿಗೆ ಉತ್ತರ ನೀಡುವ ವೇಳೆ ಸಚಿವರು ಸದನದಲ್ಲಿ ಹಾಜರಿರುವಂತೆ ಎಚ್ಚರಿಕೆಯನ್ನು ಸರಕಾರ ಕೊಟ್ಟಿದ್ದರೂ ಪ್ರಯೋಜನವಾಗಿಲ್ಲ; ಇವತ್ತು 230 ಲಿಖಿತ ಪ್ರಶ್ನೆಗಳ ಪೈಕಿ 80 ಪ್ರಶ್ನೆಗಳಿಗೆ ಮಾತ್ರ ಸರಕಾರ ಉತ್ತರ ಕೊಟ್ಟಿದೆ. ಇದು ಸಹಜವಾಗಿ ಸ್ಪೀಕರ್ ಅವರಿಗೆ ಬೇಸರ ತರಿಸಿದೆ ಎಂದು ವಿಶ್ಲೇಷಿಸಿದರು. ಸರಕಾರದ ನಿಲುವನ್ನು ಖಂಡಿಸಿ ಇತಿಹಾಸದಲ್ಲೇ ಮೊದಲ ಬಾರಿಗೆ ಸ್ಪೀಕರ್ ಅವರು ಪೀಠವನ್ನು ಬಿಟ್ಟುಹೋಗಿದ್ದಾರೆ. ಇದು ಆಘಾತಕಾರಿ ಸಂಗತಿ ಎಂದು ತಿಳಿಸಿದರು. ಸರಕಾರಕ್ಕೆ ಸದನದ ಬಗ್ಗೆ, ಸಂವಿಧಾನದ ಕುರಿತು ಹಾಗೂ ಸದನದ ನಡವಳಿಕೆ ಬಗ್ಗೆ ಗೌರವ ಇದ್ದರೆ, ಮುಖ್ಯಮಂತ್ರಿಗಳು ಸ್ವತಃ ಈ ವಿಚಾರದಲ್ಲಿ ಪ್ರವೇಶ ಮಾಡಿ ಪ್ರಶ್ನೆಗಳಿಗೆ ಉತ್ತರ ಕೊಡುವುದಷ್ಟೇ ಅಲ್ಲ; ಸದನವನ್ನು ಸಚಿವರು ಯಾವ ರೀತಿ ಗಂಭೀರವಾಗಿ ತೆಗೆದುಕೊಳ್ಳಬೇಕು ಮತ್ತು ಅಧಿಕಾರಿಗಳು ಗಂಭೀರವಾಗಿ ತೆಗೆದುಕೊಳ್ಳಬೇಕೆಂಬುದನ್ನು ಸ್ಪಷ್ಟ ಪಡಿಸಲಿ ಎಂದು ಒತ್ತಾಯಿಸಿದರು.



ಮುಖ್ಯಮಂತ್ರಿಗಳು ಈ ವಿಷಯದಲ್ಲಿ ಅಸಹಾಯಕರಾಗಿದ್ದಾರೆ. ಕಳೆದ ಬಾರಿ ಅಧಿವೇಶನದಲ್ಲಿ ಎಲ್ಲ ಸಚಿವರು ಅಧಿವೇಶನದ ಸಂದರ್ಭದಲ್ಲಿ ಕಡ್ಡಾಯವಾಗಿ ಭಾಗವಹಿಸಬೇಕೆಂದು ಸ್ವತಃ ಮುಖ್ಯಮಂತ್ರಿಗಳು ಸಚಿವರಿಗೆ ಪತ್ರ ಬರೆದಿದ್ದರು. ಮುಖ್ಯಮಂತ್ರಿಗಳ ಪತ್ರಕ್ಕೆ ಬೆಲೆ ಇಲ್ಲ, ಆಡಳಿತ ಹಿಡಿತ ತಪ್ಪಿದೆ ಎಂಬುದು ಗೊತ್ತಾಗಿದೆ ಎಂದರು. ಅಧಿವೇಶನ ವರ್ಷದಲ್ಲಿ 40 ದಿನ ನಡೆಯುವುದೇ ಕಷ್ಟ. ಆ ಅಧಿವೇಶನದಲ್ಲಿ ಸದಸ್ಯರಿಗೆ ಸರಿಯಾದ ಉತ್ತರ ಸಿಗುತ್ತಿಲ್ಲ. ಯಾವುದೋ ಪ್ರಶ್ನೆಗೆ ಯಾವುದೋ ಉತ್ತರ ಕೊಡಲಾಗುತ್ತಿದೆ. ಇದೊಂದು ಪರಿಪಾಠವಾಗಿದೆ. ಈ ಹಿನ್ನೆಲೆಯಲ್ಲಿ ಸ್ಪೀಕರ್ ಅವರು ಬೇಸರಗೊಂಡಿದ್ದಾರೆ. ಸರಕಾರ ಇನ್ನಾದರೂ ಎಚ್ಚೆತ್ತುಕೊಳ್ಳಲಿ ಎಂದು ಒತ್ತಾಯಿಸಿದರು.

# ಯಾವುದೇ ಶಾಲೆ ಮುಚ್ಚಿ ಕೆಪಿಎಸ್ ಆರಂಭಿಸುತ್ತಿಲ್ಲ: ಮಧುಬಂಗಾರಪ್ಪ ಸ್ಪಷ್ಟನೆ



**ಬೆಂಗಳೂರು, ಮಾ.16:** ಸರ್ಕಾರಿ ಶಾಲೆಗಳನ್ನು ವಿಲೀನಗೊಳಿಸಿ ಕರ್ನಾಟಕ ಪಬ್ಲಿಕ್ ಶಾಲೆ (ಕೆಪಿಎಸ್) ಆರಂಭಿಸುವ ಸರ್ಕಾರದ ಕ್ರಮದ ಕುರಿತು ಟೀಕೆಗಳು ವ್ಯಕ್ತವಾಗುತ್ತಿರುವ ನಡುವೆಯೇ, 2022ರಿಂದ 2025ರವರೆಗೆ ರಾಜ್ಯಾದ್ಯಂತ 31 ಹೊಸ ಕೆಪಿಎಸ್ ಶಾಲೆಗಳನ್ನು ಆರಂಭಿಸಲಾಗಿದೆ ಎಂದು ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ.

ವಿಧಾನಮಂಡಲ ಅಧಿವೇಶನದಲ್ಲಿ ಬಿಜೆಪಿ ಎಂಎಲ್‌ಸಿ ಹನುಮಂತ್ ನಿರಾಣಿ ಮತ್ತು ಕಾಂಗ್ರೆಸ್ ಎಂಎಲ್‌ಸಿ ಬಿಲ್ಕಿಸ್ ಬಾನು ಅವರ ಪ್ರಶ್ನೆಗೆ ಉತ್ತರಿಸಿ, ಪ್ರಾಥಮಿಕ, ಪ್ರೌಢಶಾಲೆಗಳು ಹಾಗೂ ಪಿಯು ಕಾಲೇಜುಗಳನ್ನು ವಿಲೀನಗೊಳಿಸಿ ಈವರೆಗೂ 31 ಕೆಪಿಎಸ್ ಶಾಲೆಗಳನ್ನು ಆರಂಭಿಸಲಾಗಿದೆ. 2018ರಿಂದ 2025ರವರೆಗೆ 35 ಉರ್ದು ಮಾಧ್ಯಮ ಕೆಪಿಎಸ್ ಶಾಲೆಗಳು ಆರಂಭಿಸಲಾಗಿದ್ದು, 2025–26ರಲ್ಲಿ ಸುಮಾರು 100 ಉರ್ದು ಮಾಧ್ಯಮ ಹಾಗೂ ಮೌಲಾನಾ ಆಜಾದ್ ಶಾಲೆಗಳನ್ನು ಕೆಪಿಎಸ್ ಶಾಲೆಗಳಾಗಿ ಮೇಲ್ದರ್ಜೆಗೆ ಏರಿಸಲಾಗಿದೆ. ಇದರಿಂದ ಒಟ್ಟು 131 ಶಾಲೆಗಳು ಕೆಪಿಎಸ್ ರೂಪ ಪಡೆದಿವೆ ಎಂದು ತಿಳಿಸಿದರು.

ಇದೇ ವೇಳೆ ಯಾವುದೇ ಶಾಲೆಗಳನ್ನು ಮುಚ್ಚಿ ಕೆಪಿಎಸ್ ಆರಂಭಿಸಲಾಗುತ್ತಿಲ್ಲ ಎಂದು ಸಚಿವರು ಸ್ಪಷ್ಟಪಡಿಸಿದರು. ಯಾವುದೇ ಪೋಷಕರು ಮತ್ತು ಮಕ್ಕಳನ್ನು ಕೆಪಿಎಸ್ ಶಾಲೆಗಳಿಗೆ ಸೇರಿಸಲು ಒತ್ತಾಯಿಸ ಲಾಗುವುದಿಲ್ಲ. ಪೋಷಕರಿಗೂ ಆರ್ಥಿಕವಾಗಿ ಹೊರೆ ಯಾಗುವುದಿಲ್ಲ. ಎಲ್‌ಕೆಜಿಯಿಂದ ದ್ವಿತೀಯ ಪಿಯುಸಿರವರೆಗೆ ದ್ವಿಭಾಷಾ ಮಾಧ್ಯಮದಲ್ಲಿ ಶಿಕ್ಷಣವನ್ನು ನೀಡಲಾಗುತ್ತದೆ. ಕಂಪ್ಯೂಟರ್ ಕೋರ್ಸ್‌ಗಳ ಜೊತೆಗೆ ಕೌಶಲ್ಯ ತರಬೇತಿ ಕೋರ್ಸ್‌ಗಳನ್ನೂ ಸಹ ನೀಡುತ್ತೇವೆ. ಕಳೆದ ಮೂರು ವರ್ಷಗಳಲ್ಲಿ ದಾಖಲಾತಿ ಪ್ರಮಾಣವು ಶೇ.11.20 ರಷ್ಟು ಕಡಿಮೆಯಾಗಿದೆ ಎಂದು ಸರ್ಕಾರಕ್ಕೆ ತಿಳಿದಿದೆ. ಇದು ಕೆಪಿಎಸ್ ಶಾಲೆಗಳನ್ನು ಪ್ರಾರಂಭಿಸಿದ್ದರಿಂದ ಅಥವಾ ಮೇಲ್ದರ್ಜೆಗೇರಿಸುವ ಕಾರಣದಿಂದ ಆಗಿಲ್ಲ. ಪೋಷಕರು ತಮ್ಮ ಮಕ್ಕಳನ್ನು ಇಂಗ್ಲಿಷ್ ಮಾಧ್ಯಮ ಶಾಲೆಗಳು ಮತ್ತು ಸಿಬಿಎಸ್‌ಇ ಶಾಲೆಗಳಿಗೆ ಸೇರಿಸಲು ಆಕರ್ಷಿತರಾಗುತ್ತಿದ್ದಾರೆ. ಅದಕ್ಕಾಗಿಯೇ ದಾಖಲಾತಿ ಶೇಕಡಾವಾರು ಕಡಿಮೆಯಾಗಿದೆ. ಅದಕ್ಕಾಗಿಯೇ ಸರ್ಕಾರವು 9,522 ಪ್ರಾಥಮಿಕ ಶಾಲೆಗಳು ಮತ್ತು 6,456 ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ದ್ವಿಭಾಷಾ ಮಾಧ್ಯಮಗಳನ್ನು ಪ್ರಾರಂಭಿಸಿದೆ ಎಂದು ವಿವರಿಸಿದರು.

### ಮಗುವಿಗೆ 5 ವರ್ಷವಾಗುವವರೆಗೂ ಶಿಕ್ಷಕಿಯರು ಇಚ್ಛಿಸುವ ಸ್ಥಳಕ್ಕೆ ನಿಯೋಜನೆ

ಮಾತೃತ್ವ ರಜೆ ಹಾಗೂ ಶಿಶುಪಾಲನಾ ರಜೆಯ ಮೇಲೆ ತೆರಳುವ ಮಹಿಳಾ ಶಿಕ್ಷಕರ ರಜೆಯ ಅವಧಿಗೆ ಅತಿಥಿ ಶಿಕ್ಷಕರನ್ನು ನಿಯುಕ್ತಿಗೊಳಿಸಲು ಕ್ರಮವಹಿಸಲಾಗುವುದು ಎಂದು ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವ ಮಧು ಬಂಗಾರಪ್ಪ ವಿಧಾನ ಪರಿಷತ್ ನಲ್ಲಿ ತಿಳಿಸಿದ್ದಾರೆ. ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ವೈ.ಎಂ.ಸತೀಶ್ ಪ್ರಶ್ನೆಗೆ ಉತ್ತರಿಸಿದ ಸಚಿವರು, ಮಾತೃತ್ವ ರಜೆಯ ನಂತರ ಮರಳಿ ಕರ್ತವ್ಯಕ್ಕೆ ಹಾಜರಾಗುವ ಮಹಿಳಾ ಶಿಕ್ಷಕರಿಗೆ ಮಗುವಿನ ವಯಸ್ಸು 5 ವರ್ಷ ಪೂರ್ಣಗೊಳ್ಳುವವರೆಗೂ ಮಗುವಿನ ಅನುಕೂಲವಾಗುವ ರೀತಿಯಲ್ಲಿ ಮಹಿಳಾ ನೌಕರರು ಇಚ್ಛಿಸುವ ಸ್ಥಳಕ್ಕೆ ನಿಯುಕ್ತಿಗೊಳಿಸಲಾಗುವುದು. ಮಹಿಳಾ ಶಿಕ್ಷಕರಿಗೆ ಮಾತೃತ್ವ ರಜಾ ಮನವಿ ಸ್ವೀಕೃತಗೊಂಡ 15 ದಿನದ ಒಳಗಾಗಿ ಸಕ್ಷಮ ಪ್ರಾಧಿಕಾರದಿಂದ ಮಾತೃತ್ವ ರಜೆ ಮಂಜೂರು ಮಾಡಲಾಗುವುದು ಎಂದರು. ಮಹಿಳಾ ಶಿಕ್ಷಕರು ಮಾತೃತ್ವ ರಜೆಯೊಂದಿಗೆ ಶಿಶುಪಾಲನಾ ರಜೆಯನ್ನು ಉಪಯೋಗಿಸಿಕೊಳ್ಳಲು ಇಚ್ಛಿಸಿದ್ದಲ್ಲಿ ಸಂಯೋಜಿಸಿ ಅಥವಾ ಶಿಶುಪಾಲನಾ ರಜೆಗೆ ಅರ್ಜಿ ಸಲ್ಲಿಸಿದ್ದಲ್ಲಿ, ಸಕ್ಷಮ ಪ್ರಾಧಿಕಾರದಿಂದ ರಜಾ ಮನವಿ ಸ್ವೀಕೃತವಾದ 15 ದಿನದ ಒಳಗಾಗಿ ರಜೆ ಮಂಜೂರು ಮಾಡಲಾಗುವುದು ಎಂದು ತಿಳಿಸಿದರು.

# 17 ಸಾವಿರ ಎಕರೆ ವಕ್ಫ್ ಆಸ್ತಿ ರಕ್ಷಿಸಲು ಅದಾಲತ್: ಜಮೀರ್ ಅಹ್ಮದ್




**ಬೆಂಗಳೂರು, ಮಾ.16:** ರಾಜ್ಯದಲ್ಲಿ ವಕ್ಫ್ ಆಸ್ತಿಗಳ ಒತ್ತುವರಿ ತೆರವುಗೊಳಿಸಿ ವಾಪಸ್ ಪಡೆಯಲು ಎಲ್ಲ ಕ್ರಮ ಕೈಗೊಳ್ಳಲಾಗಿದೆ ಎಂದು ವಸತಿ, ವಕ್ಫ್ ಹಾಗೂ ಅಲ್ಪಸಂಖ್ಯಾತ ಕಲ್ಯಾಣ ಸಚಿವ ಜಮೀರ್ ಅಹಮದ್ ಖಾನ್ ವಿಧಾನಸಭೆಯಲ್ಲಿ ತಿಳಿಸಿದರು.

ಪ್ರಶ್ನೋತ್ತರ ಅವಧಿಯಲ್ಲಿ ಕಾಂಗ್ರೆಸ್‌ನ ಎಂ.ವೈ.ಪಾಟೀಲ್ ಪ್ರಶ್ನೆಗೆ ಉತ್ತರ ನೀಡಿದ ಅವರು, ರಾಜ್ಯದಲ್ಲಿ 1,12862 ಎಕರೆ ವಕ್ಫ್ ಆಸ್ತಿ ಇದೆ. ಈ ಆಸ್ತಿ ಸರ್ಕಾರದಿಂದ ಬಂದದ್ದಲ್ಲ. ಖಾಸಗಿ ವ್ಯಕ್ತಿಗಳು ಸಮಾಜದ ಅಭಿವೃದ್ಧಿಗೆ ಕೊಟ್ಟಿದ್ದು. ಇದರಲ್ಲಿ ಸುಮಾರು 17 ಸಾವಿರ ಎಕರೆ ಒತ್ತುವರಿಯಾಗಿದೆ. ಈ ಒತ್ತುವರಿಯನ್ನು ಮಾಡಿದವರು ಮುಸ್ಲಿಂ ಸಮುದಾಯದವರೇ ಆಗಿದ್ದಾರೆ ಎಂದು ಹೇಳಿದರು.

**ದೇವಸ್ಥಾನ, ಶಾಲೆಗೆ ಬಳಕೆಯಾಗಿರುವುದನ್ನು ಹಾಗೆಯೇ ಬಿಟ್ಟಿದ್ದೇವೆ:** ವಕ್ಫ್ ಆಸ್ತಿ ಒತ್ತುವರಿ ತೆರವಿಗಾಗಿ ವಕ್ಫ್ ಅದಾಲತ್‌ನ್ನು ನಡೆಸಿದ್ದೇವೆ. ವಕ್ಫ್ ಅದಾಲತ್‌ನ ಬಗ್ಗೆ ಹಿಂದೆ ಪ್ರತಿಪಕ್ಷಗಳು ಟೀಕೆ ಮಾಡಿದ್ದವು. ಆದರೆ ಈ ಅದಾಲತ್ ನಡೆಸಿರುವುದು ವಕ್ಫ್ ಆಸ್ತಿ ಉಳಿಸಲಷ್ಟೇ. ದೇವಸ್ಥಾನ, ಶಾಲೆಗಳಿಗೆ ಬಳಕೆಯಾಗಿರುವ ವಕ್ಫ್ ಆಸ್ತಿಗಳನ್ನು ಹಾಗೆಯೇ ಬಿಟ್ಟಿದ್ದೇವೆ. ಉಳಿದಂತೆ ವಕ್ಫ್ ಆಸ್ತಿಗಳನ್ನು ಒತ್ತುವರಿ ಮಾಡಿಕೊಂಡಿರುವುದನ್ನು ತೆರವು ಮಾಡುತ್ತಿದ್ದೇವೆ ಎಂದು ಹೇಳಿದರು. ಈ ಹಂತದಲ್ಲಿ ಮಧ್ಯೆ ಪ್ರವೇಶಿಸಿ ಮಾತನಾಡಿದ ಪ್ರತಿಪಕ್ಷ ನಾಯಕ ಆರ್. ಅಶೋಕ್, ವಕ್ಫ್ ಆಸ್ತಿ ಒತ್ತುವರಿ ತೆರವು ಮಾಡಿ. ನಮ್ಮದೇನು ಅಭ್ಯಂತರವಿಲ್ಲ. ಬೆಂಗಳೂರಿನ ವಿಂಡ್ಸರ್ ಮಾನರ್ ಹೋಟೆಲ್ ಇರುವ ಜಾಗ ಸಹ ವಕ್ಫ್ ಆಸ್ತಿ. ಆ ಬಗ್ಗೆಯೂ ಸಚಿವರೇ ಮಾತನಾಡಿ. ವಕ್ಫ್ ಆಸ್ತಿ ಕಬಳಿಕೆಯ ಬಗ್ಗೆ ತನಿಖೆ ನಡೆಸಿ. ನಮ್ಮದು ನಮ್ಮದೇ, ನಿಮ್ಮದು ನಮ್ಮದೇ ಎಂದಾಗಬಾರದು ಎಂದು ಹೇಳಿದರು. ಆಗ ಮಾತು ಮುಂದುವರೆಸಿದ ಸಚಿವ ಜಮೀರ್ ಅಹಮದ್ ಖಾನ್, ವಕ್ಫ್ ಆಸ್ತಿಗಳನ್ನು ಯಾರೇ ಒತ್ತುವರಿ ಮಾಡಿಕೊಂಡಿದ್ದರೂ ಅವುಗಳನ್ನು ವಾಪಸ್ ಪಡೆಯುತ್ತೇವೆ. ಅಫ್ಜಲ್‌ಪುರ ತಾಲ್ಲೂಕಿನಲ್ಲೂ 30 ವಕ್ಫ್ ಆಸ್ತಿಗಳನ್ನು ಒತ್ತುವರಿ ಮಾಡಲಾಗಿತ್ತು. ಅವುಗಳಲ್ಲಿ 23 ಪ್ರಕರಣಗಳನ್ನು ಇತ್ಯರ್ಥಪಡಿಸಿ ಸ್ವಾಧೀನಕ್ಕೆ ಪಡೆದಿದ್ದೇವೆ ಎಂದು ತಿಳಿಸಿದರು.

# 3 ಪಟ್ಟು ಹೆಚ್ಚು ಹಣ ನೀಡಿ ಸ್ಮಶಾನಕ್ಕೆ ಭೂಮಿ ಖರೀದಿ

**ವಿಧಾನಸಭೆಯಲ್ಲಿ ಕಂದಾಯ ಸಚಿವ ಕೃಷ್ಣಬೈರೇಗೌಡ ಹೇಳಿಕೆ**



**ಬೆಂಗಳೂರು, ಮಾ.16:** ಸ್ಮಶಾನ ನಿರ್ಮಾಣಕ್ಕೆ ಗ್ರಾಮಗಳಲ್ಲಿ ಸರ್ಕಾರಿ ಜಾಗ ಸಿಗದಿದ್ದರೆ ಮಾರ್ಗಸೂಚಿ ದರಕ್ಕಿಂತ ಮೂರು ಪಟ್ಟು ಹಣ ನೀಡಿ ಖಾಸಗಿ ಜಮೀನು ಖರೀದಿಗೆ ಸರ್ಕಾರ ಸಿದ್ಧ ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ವಿಧಾನಸಭೆಯಲ್ಲಿ ಸೋಮವಾರ ತಿಳಿಸಿದರು. ಪ್ರಶ್ನೋತ್ತರ ಕಲಾಪದಲ್ಲಿ ಔರಾದ್ ಕ್ಷೇತ್ರದ ಶಾಸಕ ಪ್ರಭು ಚವ್ಹಾಣ್ ಅವರ ಪ್ರಶ್ನೆಗೆ ಉತ್ತರ ನೀಡಿದ ಅವರು, ಕಳೆದ 70 ವರ್ಷಗಳಿಂದ ಎಲ್ಲಾ ಸರ್ಕಾರಗಳೂ ಇರುವ ಭೂಮಿಯನ್ನೆಲ್ಲಾ ರೈತರಿಗೆ ಹಾಗೂ ವಿವಿಧ ಜನಪರ ಯೋಜನೆಗಳಿಗೆ ಮಂಜೂರು ಮಾಡಿದ್ದು, ಪ್ರಸ್ತುತ ಸ್ಮಶಾನಕ್ಕೂ ಭೂಮಿ ಇಲ್ಲದಂತಾಗಿದೆ ಎಂದು ಬೇಸರ ಹೊರಹಾಕಿದರು.

ಕಳೆದ ಹತ್ತು ವರ್ಷಗಳಿಂದ ಎಲ್ಲಾ ಸರ್ಕಾರಗಳೂ ವಸತಿ ಪ್ರದೇಶಗಳಿಗೆ ಅವಶ್ಯ ಇರುವಷ್ಟು ಸ್ಮಶಾನ ಭೂಮಿ ನೀಡಬೇಕು ಎಂದು ಪ್ರಯತ್ನಿಸಿದೆ. ಈ ವಿಚಾರದಲ್ಲಿ ಹೈಕೋರ್ಟ್ ಸಹ ಸರ್ಕಾರದ ಬೆನ್ನುಹತ್ತಿದೆ. ಸರ್ಕಾರಿ ಜಮೀನು ಇದ್ದಲ್ಲಿ ಆ ಭೂಮಿಯನ್ನೇ ಸ್ಮಶಾನಕ್ಕೆ ಕಾಯ್ದಿರಿಸಲಾಗಿದೆ. ಸರ್ಕಾರಿ ಜಮೀನು ಇಲ್ಲದಿದ್ದ ಭಾಗಗಳಲ್ಲಿ ಸ್ಮಶಾನಭೂಮಿ ನೀಡುವ ಸಲುವಾಗಿ ಕಳೆದ 3 ವರ್ಷದಲ್ಲಿ 58 ಕೋಟಿ ರೂ. ಕೊಟ್ಟು ಭೂಮಿಯನ್ನು ಖರೀದಿ ಮಾಡುವ ಹಂತಕ್ಕೆ ಬಂದು ನಿಂತಿದ್ದೇವೆ ಎಂದು ವಿಷಾದಿಸಿದರು.

ಔರಾದ್ ತಾಲೂಕಿನ ಪರಿಸ್ಥಿತಿ ಬಗ್ಗೆಯೂ ಸದನಕ್ಕೆ ಮಾಹಿತಿ ನೀಡಿದ ಅವರು, ಔರಾದ್ ತಾಲೂಕಿನ 154 ವಸತಿ ಪ್ರದೇಶಗಳ ಪೈಕಿ 9 ಪ್ರದೇಶಗಳಲ್ಲಿ ಸ್ಮಶಾನ ಇಲ್ಲ ಎಂಬ ವರದಿ ಇದೆ. ಈ 9 ಗ್ರಾಮಗಳ ಪೈಕಿ 2 ಗ್ರಾಮಗಳಿಗೆ ಆ ಗ್ರಾಮದ ಮಿತಿಯಲ್ಲೇ ಸರ್ಕಾರಿ ಭೂಮಿ ಲಭ್ಯ ಇದ್ದು, ಇನ್ನೂ ಒಂದು ವಾರದಲ್ಲಿ ಸ್ಮಶಾನ ಭೂಮಿಗೆ ಕಾಯ್ದಿರಿಸಲು ಜಿಲ್ಲಾಧಿಕಾರಿಗಳಿಗೆ ಆದೇಶ ಮಾಡಲಾಗಿದೆ. ಇನ್ನೂ 7 ವಸತಿ ಪ್ರದೇಶಗಳಿಗೆ ಪಕ್ಕದ ಗ್ರಾಮದಲ್ಲಿ ಭೂಮಿ ಇದ್ದು, ಅದನ್ನು 15 ದಿನಗಳ ಒಳಗೆ ಕಾಯ್ದಿರಿಸಲು ಸೂಚಿಸಲಾಗಿದೆ ಎಂದರು.

ಒಂದು ವೇಳೆ ಆ ಜಾಗ ಸೂಕ್ತ ಅಲ್ಲ ಅಂತ ಗೊತ್ತಾದ್ರೆ ಖಾಸಗಿ ಜಮೀನನ್ನು ಖರೀದಿಸಲು ಸಹ ಪ್ರಸ್ತಾವನೆ ಸಿದ್ಧವಾಗಿದೆ. ಖಾಸಗಿ ಜಮೀನುಗಳಿಗೆ ಮಾರ್ಗಸೂಚಿ ದರಕ್ಕಿಂತ ಮೂರು ಪಟ್ಟು ಅಧಿಕ ಹಣ ನೀಡಲೂ ಸರ್ಕಾರ ಮುಂದಾಗಿದೆ. ಇನ್ನೂ ಕಾಂಪೌಂಡ್ ನೀರಿನ ವ್ಯವಸ್ಥೆ ಸೇರಿದಂತೆ ಎಲ್ಲಾ ಮೂಲಭೂತ ಸೌಲಭ್ಯಗಳನ್ನೂ ನರೇಗಾ ಅಡಿಯಲ್ಲಿ ಗ್ರಾಮ ಪಂಚಾಯತ್ ಮಾಡಿಕೊಡುತ್ತಾರೆ. ಈ ಸಂಬಂಧ ಗ್ರಾಮ ಪಂಚಾಯತ್ ಸಿಇಓ ಹಾಗೂ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗುವುದು ಎಂದು ತಿಳಿಸಿದರು.

### ವಸತಿ ನಿರ್ಮಾಣಕ್ಕೆ ರಕ್ಷಣಾ ಇಲಾಖೆ ಜತೆ ಮಾತುಕತೆ

ಮೈಸೂರಿನ ಚಾಮರಾಜ ಕ್ಷೇತ್ರದಲ್ಲಿ ವಸತಿ ನಿರ್ಮಾಣಕ್ಕೆ ಅಗತ್ಯವಾದ ಭೂಮಿ ಕಲ್ಪಿಸಲು ರಕ್ಷಣಾ ಇಲಾಖೆಯೊಂದಿಗೆ ಮಾತುಕತೆ ನಡೆಸುವುದಾಗಿ ಕಂದಾಯ ಸಚಿವ ಕೃಷ್ಣ ಬೈರೇಗೌಡ ವಿಧಾನಸಭೆಗೆ ತಿಳಿಸಿದ್ದಾರೆ. ಪ್ರಶ್ನೋತ್ತರ ವೇಳೆ ಶಾಸಕ ತನ್ವೀರ್ ಸೇಠ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಚಾಮರಾಜ, ನರಸರಾಜ ಮತ್ತು ಚಾಮುಂಡಿ ಕ್ಷೇತ್ರದಲ್ಲಿ ವಸತಿ ನಿರ್ಮಾಣಕ್ಕೆ ಭೂಮಿ ಕಲ್ಪಿಸುವ ಸಂಬಂಧ ಗೊಂದಲ ಉಂಟಾಗಿದೆ. ಇದನ್ನು ಬಗೆಹರಿಸುವ ನಿಟ್ಟಿನಲ್ಲಿ ರಕ್ಷಣಾ ಇಲಾಖೆಯೊಂದಿಗೆ ಮುಂದಿನ ವಾರ ಚರ್ಚಿಸಲಾಗುವುದು. ಬಳಿಕ ಸಾಧಕ–ಬಾಧಕಗಳ ಕುರಿತ ಮಾಹಿತಿಯನ್ನು ವಸತಿ ಇಲಾಖೆಗೆ ತಿಳಿಸಲಾಗುವುದು ಎಂದು ತಿಳಿಸಿದರು. ಇದೇ ವೇಳೆ ಭೂಮಿಯ ಅಭಾವವನ್ನು ತಪ್ಪಿಸಬೇಕಾದರೆ ಬಹುಮಹಡಿ ಕಟ್ಟಡ ನಿರ್ಮಿಸುವತ್ತ ಯೋಜನೆ ರೂಪಿಸಬೇಕು ಎಂದು ಸಲಹೆ ನೀಡಿದರು.

## ಅವಧಿಪೂರ್ಣಗೊಂಡಿರುವ ಗ್ರಾಪಂ, ತಾಪಂ, ಜಿಪಂ ಚುನಾವಣೆ

# ಪೂರ್ವಸಿದ್ಧತೆ ಮಾಡಿಕೊಳ್ಳುವಂತೆ ಸೂಚನೆ



**ಬೆಂಗಳೂರು, ಮಾ.16:** ಅವಧಿ ಮುಕ್ತಾಯಗೊಂಡಿರುವ ಮತ್ತು ಮುಕ್ತಾಯದ ಹಂತದಲ್ಲಿರುವ ಗ್ರಾಮ, ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯಿತಿಗಳಿಗೆ ಚುನಾವಣೆ ನಡೆಸಲು ಸರ್ಕಾರ ಮಹತ್ವದ ಹೆಜ್ಜೆ ಇಟ್ಟಿದೆ. ಈ ಕುರಿತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವ ಪ್ರಿಯಾಂಕ್ ಖರ್ಗೆ ವಿಧಾನ ಪರಿಷತ್ತಿಗೆ ಅಧಿಕೃತ ಮಾಹಿತಿ ನೀಡಿದ್ದಾರೆ. ರಾಜ್ಯದ ಒಟ್ಟು 5,685 ಗ್ರಾಮ ಪಂಚಾಯಿತಿಗಳ ಅವಧಿಯು ಜನವರಿ, ಫೆಬ್ರವರಿ ಮತ್ತು ಮಾರ್ಚ್ 2026ರ ಒಳಗೆ ಪೂರ್ಣಗೊಳ್ಳಲಿದೆ. ಈ ಹಿನ್ನೆಲೆಯಲ್ಲಿ 2026–31ರ ಸಾಲಿನ ಸಾರ್ವತ್ರಿಕ ಚುನಾವಣೆ ನಡೆಸಲು ಅಗತ್ಯವಿರುವ ಎಲ್ಲಾ ಪೂರ್ವ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಈಗಾಗಲೇ ಸೂಚನೆ ನೀಡಲಾಗಿದೆ. ಆಡಳಿತಾತ್ಮಕ ಶೂನ್ಯತೆ ಉಂಟಾಗದಂತೆ ತಡೆಯಲು, ಅವಧಿ ಮುಗಿದ ಪಂಚಾಯಿತಿಗಳಿಗೆ ನಿಯಮಾನುಸಾರ ಆಡಳಿತಾಧಿಕಾರಿಗಳನ್ನು ನೇಮಿಸಲು ನಿರ್ದೇಶನ ನೀಡಲಾಗಿದೆ. ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿಗಳ ಅವಧಿ ಜೂನ್ 2021ಕ್ಕೇ ಮುಕ್ತಾಯಗೊಂಡಿದ್ದರೂ, ಚುನಾವಣೆ ವಿಳಂಬವಾಗಲು ಪ್ರಮುಖ ಕಾರಣಗಳನ್ನು ಸರ್ಕಾರ ಸ್ಪಷ್ಟಪಡಿಸಿದೆ. ಕೋವಿಡ್ ಸಾಂಕ್ರಾಮಿಕ: 2021ರಲ್ಲಿ ಕೋವಿಡ್ ಹಿನ್ನೆಲೆಯಲ್ಲಿ ಚುನಾವಣೆ ನಡೆಸಲು ಸಾಧ್ಯವಾಗಿರಲಿಲ್ಲ.

ಸೀಮಾ ನಿರ್ಣಯ: ಕರ್ನಾಟಕ ಪಂಚಾಯತ್ ರಾಜ್ ಗಡಿ ನಿರ್ಣಯ ಆಯೋಗದ ಶಿಫಾರಸ್ಸಿನಂತೆ ಕ್ಷೇತ್ರಗಳ ಮರು ವಿಂಗಡಣೆ ಮಾಡಲಾಗಿದೆ.

**ನಗರ ಸ್ಥಳೀಯ ಸಂಸ್ಥೆಗಳಾಗಿ ಪರಿವರ್ತನೆ:** ಕೆಲವು ಗ್ರಾಮ ಪಂಚಾಯಿತಿಗಳು ಪಟ್ಟಣ ಪಂಚಾಯಿತಿ ಅಥವಾ ಪುರಸಭೆಗಳಾಗಿ ಮೇಲ್ದರ್ಜೆಗೇರಿರುವುದರಿಂದ ಕ್ಷೇತ್ರಗಳ ಮರು ಹೊಂದಾಣಿಕೆ ಪ್ರಕ್ರಿಯೆ ನಡೆದಿದೆ. ಮೀಸಲಾತಿ ಪ್ರಕ್ರಿಯೆ: ಪ್ರಸ್ತುತ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿ ಕ್ಷೇತ್ರಗಳ ಮೀಸಲಾತಿ ನಿಗದಿಪಡಿಸುವ ಪ್ರಕ್ರಿಯೆ ಜಾರಿಯಲ್ಲಿದ್ದು, ಇದು ಪೂರ್ಣಗೊಂಡ ತಕ್ಷಣ ಚುನಾವಣೆ ನಡೆಸಲಾಗುವುದು ಎಂದು ಸರ್ಕಾರ ತಿಳಿಸಿದೆ.ಚುನಾವಣೆ ನಡೆಯದ ಕಾರಣ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕೆಲಸಗಳಿಗೆ ತೊಂದರೆಯಾಗುತ್ತಿದೆ ಎಂಬ ಪ್ರಶ್ನೆಗೆ ಉತ್ತರಿಸಿರುವ ಸರ್ಕಾರ, ಸದ್ಯ ನೇಮಕಗೊಂಡಿರುವ ಆಡಳಿತಾಧಿಕಾರಿಗಳು ಪಂಚಾಯಿತಿಗಳ ಎಲ್ಲಾ ಅಧಿಕಾರ ಮತ್ತು ಕರ್ತವ್ಯಗಳನ್ನು ನಿರ್ವಹಿಸುತ್ತಿದ್ದಾರೆ. ಆದ್ದರಿಂದ ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಕ್ರಮ ವಹಿಸಲಾಗಿದೆ ಎಂದು ಸ್ಪಷ್ಟಪಡಿಸಿದೆ.

# ಎಲ್‌ಪಿಜಿ ಕೊರತೆ: ರಾಜ್ಯಸಭೆಯಲ್ಲಿ ಕೇಂದ್ರಕ್ಕೆ ಖರ್ಗೆ ತರಾಟೆ



**ನವದೆಹಲಿ, ಮಾ. 16:** ರಾಜ್ಯಸಭೆಯಲ್ಲಿ ಸೋಮವಾರ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಎಲ್‌ಪಿಜಿ ಕೊರತೆಯ ವಿಷಯವನ್ನು ಪ್ರಸ್ತಾಪಿಸಿದರು ಮತ್ತು ಅಡುಗೆ ಅನಿಲದ ಬಿಕ್ಕಟ್ಟು ಮತ್ತು ಕಾಳಸಂತೆಕೋರತನವನ್ನು ತಡೆಯಲು ಸರ್ಕಾರ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಂಡಿಲ್ಲ ಎಂದು ಆರೋಪಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಕೇಂದ್ರ ಸಚಿವ ಮತ್ತು ಸದನದ ನಾಯಕ ಜೆ.ಪಿ ನಡ್ಡಾ ವಿರೋಧ ಪಕ್ಷವು ಬಿಕ್ಕಟ್ಟಿನ ಪರಿಸ್ಥಿತಿಯಲ್ಲಿ ಸರ್ಕಾರದೊಂದಿಗೆ ನಿಲ್ಲುವ ಬದಲು ದೇಶದಲ್ಲಿ ಅರಾಜಕತೆ ಸೃಷ್ಟಿಸಲು ಪ್ರಯತ್ನಿಸುತ್ತಿದೆ ಎಂದು ತಿರುಗೇಟು ನೀಡಿದರು.

ರಾಜ್ಯಸಭೆಯಲ್ಲಿ ಶೂನ್ಯ ವೇಳೆಯಲ್ಲಿ ಈ ವಿಷಯವನ್ನು ಪ್ರಸ್ತಾಪಿಸಿದ ಮಲ್ಲಿಕಾರ್ಜುನ ಖರ್ಗೆ, ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಸಂಘರ್ಷದ ಹಿನ್ನೆಲೆಯಲ್ಲಿ ದೇಶಾದ್ಯಂತ ಎಲ್‌ಪಿಜಿ ಬಿಕ್ಕಟ್ಟಿನಿಂದ ಜನ ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಇದು ಬಡವರು ಮತ್ತು ದುರ್ಬಲರು, ಮಧ್ಯಮ ವರ್ಗ, ಸಾಮಾನ್ಯ ಮನೆಗಳು, ರೆಸ್ಟೋರೆಂಟ್‌ಗಳು, ಹಾಸ್ಟೆಲ್‌ಗಳು ಮತ್ತು ವಾಣಿಜ್ಯ ಬಳಕೆದಾರರ ಮೇಲೆ ತೀವ್ರ ಪರಿಣಾಮ ಬೀರುತ್ತಿದೆ ಎಂದರು.

ಪಶ್ಚಿಮ ಏಷ್ಯಾದಲ್ಲಿ ಸಂಘರ್ಷ ಉಲ್ಬಣಗೊಂಡಾಗ, ಸರ್ಕಾರವು ಭಾರತೀಯ ನಾಗರಿಕರಿಗೆ ಸಲಹೆ ನೀಡಿತ್ತು ಮತ್ತು ಅಂದಿನಿಂದ, ಇಂಧನ ಪೂರೈಕೆಯ ಮೇಲೆ ಪರಿಣಾಮ ಬೀರುತ್ತದೆ ಎಂದು ಸರ್ಕಾರಕ್ಕೆ ತಿಳಿದಿತ್ತು. ಆದರೆ ಇದರ ಹೊರತಾಗಿಯೂ, ಯಾವುದೇ ಸಿದ್ಧತೆಗಳನ್ನು ಸರ್ಕಾರ ಮಾಡಿಕೊಂಡಿಲ್ಲ. ಪರಿಣಾಮವಾಗಿ, ದೇಶದ ಅನೇಕ ವಲಯಗಳು ಸಮಸ್ಯೆಗಳನ್ನು ಎದುರಿಸುತ್ತಿವೆ ಎಂದು ಆರೋಪಿಸಿದರು.

ಈ ಬಿಕ್ಕಟ್ಟು ಸರ್ಕಾರದ ಕರುಣಾಜನಕ ನಿರ್ವಹಣೆ ಮತ್ತು ದೋಷಪೂರಿತ ವಿದೇಶಾಂಗ ನೀತಿಯನ್ನು ಬಹಿರಂಗಪಡಿಸಿದೆ ಎಂದ ಅವರು, ಕಾಳಸಂತೆಯಲ್ಲಿ ಪ್ರತಿ ಸಿಲಿಂಡರ್‌ಗೆ 5,000 ರೂ.ಗಳವರೆಗೆ ಮಾರಾಟ ಮಾಡಲಾಗುತ್ತಿದೆ ಎಂದು ಖರ್ಗೆ ಆರೋಪಿಸಿದರು.

ಸರ್ಕಾರವು ಈ ವಿಷಯದ ಬಗ್ಗೆ ತಕ್ಷಣವೇ ಕಠಿಣ ಕ್ರಮಗಳನ್ನು ತೆಗೆದುಕೊಳ್ಳಬೇಕು ಮತ್ತು ಸಾರ್ವಜನಿಕರಿಗೆ ಮತ್ತು ಎಲ್ಲಾ ಸಣ್ಣ ವ್ಯಾಪಾರಿಗಳಿಗೆ ಕೈಗೆಟುಕುವ ಬೆಲೆಯಲ್ಲಿ ಸಿಲಿಂಡರ್‌ಗಳು ಲಭ್ಯವಾಗುವಂತೆ ನೋಡಿಕೊಳ್ಳಬೇಕು ಎಂದು ಅವರು ಒತ್ತಾಯಿಸಿದರು.

ದೇಶದಲ್ಲಿ ಎಲ್‌ಪಿಜಿ ಕೊರತೆಯಿಲ್ಲ ಎಂಬ ಕೇಂದ್ರ ಪೆಟ್ರೋಲಿಯಂ ಸಚಿವ ಹರ್ದೀಪ್ ಸಿಂಗ್ ಪುರಿ ಅವರ ಹೇಳಿಕೆಯನ್ನು ಅವರು ಅಲ್ಲಗಳೆದರು ಮತ್ತು ಜನರು ವದಂತಿಗಳಿಂದ ದೂರವಿರಲು ಸಲಹೆ ನೀಡಿದರು, ಹಾಗೂ ವಾಸ್ತವವು ವಿಭಿನ್ನವಾಗಿದೆ ಎಂದು ಹೇಳಿದರು.

# ಕಾನ್ಶೀರಾಂಗೆ ಭಾರತರತ್ನ ನೀಡಿ: ರಾಹುಲ್



**ನವದೆಹಲಿ, ಮಾ. 16:** ಬಹುಜನ ಸಮಾಜ ಪಕ್ಷ (ಬಿಎಸ್‌ಪಿ) ಸ್ಥಾಪಿಸಿದ ದಲಿತ ಐಕಾನ್ ಕಾನ್ಶಿ ರಾಮ್ ಅವರಿಗೆ ಭಾರತದ ಅತ್ಯುನ್ನತ ನಾಗರಿಕ ಗೌರವವಾದ ಭಾರತ ರತ್ನವನ್ನು ನೀಡುವಂತೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಭಾನುವಾರ ಪ್ರಧಾನಿ ನರೇಂದ್ರ ಮೋದಿಗೆ ಪತ್ರ ಬರೆದಿದ್ದಾರೆ.

ಪತ್ರವನ್ನು ಪೋಸ್ಟ್ ಮಾಡಿರುವ ರಾಹುಲ್ ಗಾಂಧಿ, ಭಾರತ ಸರ್ಕಾರವು ಸಾಮಾಜಿಕ ನ್ಯಾಯದ ಮಹಾನ್ ಯೋಧ ಮತ್ತು ಬಹುಜನ ಪ್ರಜ್ಞೆಯ ಮಾರ್ಗದರ್ಶಕ ಬೆಳಕು, ಕಾನ್ಶಿರಾಮ್ ಅವರನ್ನು ಭಾರತರತ್ನದೊಂದಿಗೆ ಗೌರವಿಸಬೇಕೆಂದು ನಾನು ಒತ್ತಾಯಿಸುತ್ತೇನೆ.

ಈ ಅತ್ಯುನ್ನತ ರಾಷ್ಟ್ರೀಯ ಗೌರವವು ಕಾನ್ಶಿ ರಾಮ್ ಮತ್ತು ಲಕ್ಷಾಂತರ ಬಹುಜನರಿಗೆ ಹಕ್ಕುಗಳು, ಭಾಗವಹಿಸುವಿಕೆ ಮತ್ತು ಸ್ವಾಭಿಮಾನದ ಹಾದಿಯನ್ನು ತೋರಿಸಿದ ಇಡೀ ಚಳವಳಿಗೆ ಗೌರವವಾಗಿದೆ ಎಂದು ಬರೆದಿದ್ದಾರೆ.

ದಿವಂಗತ ಕಾನ್ಶಿ ರಾಮ್ ಅವರ ರಾಜಕೀಯದ ಕೇಂದ್ರವಾದ ಉತ್ತರ ಪ್ರದೇಶದಲ್ಲಿ ಚುನಾವಣೆಗೆ ಕೇವಲ ಒಂದು ವರ್ಷ ಬಾಕಿ ಇರುವಾಗ ರಾಹುಲ್ ಗಾಂಧಿ ಅವರ ಈ ಬೇಡಿಕೆ ಬಂದಿದೆ. ಯುಪಿಯಲ್ಲಿ ಸುಮಾರು ಶೇ.20 ಮತದಾರರು ದಲಿತರಿರುವುದರಿಂದ, ಬಹುತೇಕ ಎಲ್ಲಾ ಪ್ರಮುಖ ಪಕ್ಷಗಳು ಕಾನ್ಶಿರಾಮ್ ಅವರ ರಾಜಕೀಯ ಪರಂಪರೆಯೊಂದಿಗೆ ತಮ್ಮನ್ನು ತಾವು ಸಂಯೋಜಿಸಿಕೊಳ್ಳಲು ಪೈಪೋಟಿ ನಡೆಸುತ್ತಿವೆ.

ರಾಜ್ಯ ಬಹುತೇಕ ಜಿಲ್ಲೆಗಳಲ್ಲಿ, ಕಾನ್ಶಿರಾಮ್ ಅವರ ಚಿತ್ರವನ್ನು ಹೊಂದಿರುವ ಪೋಸ್ಟರ್‌ಗಳು ಪ್ರತಿಸ್ಪರ್ಧಿ ಪಕ್ಷಗಳ ಧ್ವಜಗಳ ಪಕ್ಕದಲ್ಲಿ ಕಾಣಿಸಿಕೊಂಡಿವೆ. ಪ್ರತಿಸ್ಪರ್ಧಿ ಪಕ್ಷಗಳ ಧ್ವಜಗಳು ತಾವೇ ಅವರ ದೃಷ್ಟಿಕೋನ ಮತ್ತು ಬಹುಜನ ಸಬಲೀಕರಣದ ಕನಸಿನ ನಿಜವಾದ ಉತ್ತರಾಧಿಕಾರಿ ಎಂದು ಹೇಳಿಕೊಳ್ಳುತ್ತವೆ, ಮಾರ್ಚ್ 15 ರಂದು ಅವರ ಜನ್ಮದಿನಕ್ಕೆ ಮುಂಚಿತವಾಗಿ ಈ ಬೆಳವಣಿಗೆಗಳು ನಡೆದಿವೆ.

# ಚುನಾವಣೆ: ಮತದಾನದಿಂದ ಹೊರಗುಳಿದ ನಾಲ್ವರು ಶಾಸಕರು

**ಪಟನಾ, ಮಾ. 16:** ರಾಜ್ಯಸಭಾ ಚುನಾವಣೆಯಲ್ಲಿ ನಾಲ್ವರು ಶಾಸಕರು ಮತದಾನದಿಂದ ಹೊರಗುಳಿಯುವ ಮೂಲಕ ಬಿಹಾರದ ಮಹಾಘಟಬಂಧನ್‌ಗೆ ಭಾರಿ ಹಿನ್ನಡೆಯಾಗಿದೆ. ಐದನೇ ಸ್ಥಾನಕ್ಕಾಗಿ ನಡೆಯುವ ಸ್ಪರ್ಧೆಯಲ್ಲಿ ವಿರೋಧ ಮೈತ್ರಿಕೂಟದ ನಿರೀಕ್ಷೆಗೆ ಭಾರಿ ಆಘಾತ ನೀಡಿದೆ.

ಮತ ಚಲಾಯಿಸದವರಲ್ಲಿ ರಾಷ್ಟ್ರೀಯ ಜನತಾದಳ (ಆರ್‌ಜೆಡಿ) ಶಾಸಕ ಫೈಸಲ್ ರೆಹಮಾನ್ ಮತ್ತು ಮೂವರು ಕಾಂಗ್ರೆಸ್ ಶಾಸಕರಾದ ಮನೋಹರ್ ಪ್ರಸಾದ್, ಸುರೇಂದ್ರ ಕುಶ್ವಾಹ ಮತ್ತು ಮನೋಜ್ ಬಿಸ್ವಾಸ್ ಸೇರಿದ್ದಾರೆ. ಮತದಾನ ಮುಂದುವರೆದಂತೆ ಮೂವರು ಕಾಂಗ್ರೆಸ್ ಶಾಸಕರು ದಿನವಿಡೀ ಪಕ್ಷದೊಂದಿಗೆ ಸಂಪರ್ಕದಿಂದ ಹೊರಗಿದ್ದರು ಎಂದು ಮೂಲಗಳನ್ನು ಉಲ್ಲೇಖಿಸಿ ರಾಷ್ಟ್ರೀಯ ಮಾಧ್ಯಮಗಳು ವರದಿ ಮಾಡಿವೆ. ಶಾಸಕರ ಫೋನ್‌ಗಳು ಸ್ವಿಚ್ ಆಫ್ ಆಗಿದ್ದವು. ಅವರ ಈ ನಡೆಯು ವಿರೋಧ ಪಕ್ಷದ ಬಣದೊಳಗೆ ಕಳವಳವನ್ನುಂಟುಮಾಡಿತು.

ನಾಲ್ವರು ಶಾಸಕರ ಅನುಪಸ್ಥಿತಿಯು ನಿರ್ಣಾಯಕ ಕ್ಷಣದಲ್ಲಿ ಬಂದಿತು. ಐದನೇ ರಾಜ್ಯಸಭಾ ಸ್ಥಾನಕ್ಕೆ ಬಿಜೆಪಿ ನೇತೃತ್ವದ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ (ಎನ್‌ಡಿಎ) ಜೊತೆ ಇಂಡಿಯಾ ಬಣ ನೇರ ಸ್ಪರ್ಧೆಯಲ್ಲಿ ಸಿಲುಕಿದೆ. ಜೆಡಿ(ಯು) ನಾಯಕರಾದ ನಿತೀಶ್ ಕುಮಾರ್ ಮತ್ತು ರಾಮನಾಥ್ ಠಾಕೂರ್, ಬಿಜೆಪಿಯ ನಿತಿನ್ ನಬೀನ್ ಮತ್ತು ಶಿವಂ ಕುಮಾರ್ ಅವರ ಗೆಲುವು ಖಚಿತವೆಂದು ಪರಿಗಣಿಸಲಾಗಿದ್ದರೂ, ಅಂತಿಮ ಸ್ಥಾನಕ್ಕೆ ನಡೆಯುವ ಹೋರಾಟವು ಎನ್‌ಡಿಎ ಅಭ್ಯರ್ಥಿ ಉಪೇಂದ್ರ ಕುಶ್ವಾಹ ಮತ್ತು ಮಹಾಘಟಬಂಧನ್ ಅಭ್ಯರ್ಥಿ ಎ.ಡಿ. ಸಿಂಗ್ ನಡುವೆ ತೀವ್ರ ಪೈಪೋಟಿಯಾಗಿ ಮಾರ್ಪಟ್ಟಿದೆ.

ಎನ್‌ಡಿಎಗೆ ಸೇರಿದ ಎಲ್ಲಾ 202 ಶಾಸಕರು ಈಗಾಗಲೇ ತಮ್ಮ ಮತಗಳನ್ನು ಚಲಾಯಿಸಿದ್ದಾರೆ. ಇದಕ್ಕೆ ವ್ಯತಿರಿಕ್ತವಾಗಿ, ನಾಲ್ವರು ಶಾಸಕರು ಮತದಾನಕ್ಕೆ ಹಾಜರಾಗದ ಕಾರಣ ಮಹಾಘಟಬಂಧನ್‌ನ ಮತ ಎಣಿಕೆ 37ರಲ್ಲೇ ಉಳಿದಿದೆ. 243 ಸದಸ್ಯರ ವಿಧಾನಸಭೆಯಲ್ಲಿ 35 ಶಾಸಕರನ್ನು ಹೊಂದಿರುವ ಆರ್‌ಜೆಡಿ–ಕಾಂಗ್ರೆಸ್ ನೇತೃತ್ವದ ಮಹಾಘಟಬಂಧನಕ್ಕೆ ಗೆಲುವು ಖಚಿತಪಡಿಸಿಕೊಳ್ಳಲು ಕನಿಷ್ಠ 41 ಶಾಸಕರ ಬೆಂಬಲ ಅಗತ್ಯವಿತ್ತು. ಮೈತ್ರಿಕೂಟವು ಐದು ಎಐಎಂಐಎಂ ಶಾಸಕರ ಬೆಂಬಲವನ್ನು ಪಡೆದುಕೊಂಡಿತ್ತು. ಬಿಎಸ್ಪಿ ಶಾಸಕರ ಬೆಂಬಲವನ್ನು ಸಹ ನಿರೀಕ್ಷಿಸುತ್ತಿತ್ತು. ಕುಶ್ವಾಹ ಗೆಲ್ಲಲು, ಎನ್‌ಡಿಎಗೆ ಮಹಾಘಟಬಂಧನ್ನ ಕನಿಷ್ಠ ಮೂವರು ಶಾಸಕರ ಮತಗಳು ಬೇಕಾಗಿದ್ದವು. ಈ ಸಂದರ್ಭದಲ್ಲಿ, ವಾಲ್ಮೀಕಿನಗರದ ಸುರೇಂದ್ರ ಕುಶ್ವಾಹ, ಫೋರ್ಬ್ಸ್‌ಗಂಜ್‌ನ ಮನೋಜ್ ಬಿಸ್ವಾಸ್ ಮತ್ತು ಮಣಿಹರಿಯ ಮನೋಹರ್ ಪ್ರಸಾದ್ ಎಂಬ ಮೂವರು ಕಾಂಗ್ರೆಸ್ ಶಾಸಕರ ವಿವರಣೆಯಿಲ್ಲದ ಅನುಪಸ್ಥಿತಿಯು ಮಹತ್ವ ಪಡೆದುಕೊಂಡಿತು.

ಚುನಾವಣೆಗೆ ಮುನ್ನ, ಅಕ್ರಮ ಕುದುರೆ ವ್ಯಾಪಾರ ಪ್ರಯತ್ನಗಳನ್ನು ತಡೆಗಟ್ಟಲು ಮಹಾ ಮೈತ್ರಿಕೂಟವು ತನ್ನ ಶಾಸಕರನ್ನು ಪಟನಾದ ಹೋಟೆಲ್‌ನಲ್ಲಿ ಇರಿಸಿತ್ತು. ಈ ಮಧ್ಯೆ, ಎನ್‌ಡಿಎ ಭಾನುವಾರ ರಾಜ್ಯ ರಾಜಧಾನಿಯಲ್ಲಿ ಸಚಿವರು ಮತ್ತು ಹಿರಿಯ ನಾಯಕರ ನಿವಾಸಗಳಲ್ಲಿ ತನ್ನ ಶಾಸಕರೊಂದಿಗೆ ಸಭೆಗಳನ್ನು ನಡೆಸಿತು.

243 ಸದಸ್ಯರ ಬಿಹಾರ ವಿಧಾನಸಭೆಯಲ್ಲಿ, ಎನ್ಡಿಎ 202 ಶಾಸಕರೊಂದಿಗೆ ಆರಾಮದಾಯಕ ಬಹುಮತವನ್ನು ಹೊಂದಿದೆ. ಆದರೂ ಐದು ರಾಜ್ಯಸಭಾ ಸ್ಥಾನಗಳನ್ನು ಪಡೆಯಲು ಅಗತ್ಯವಿರುವ 205 ಸ್ಥಾನಗಳಲ್ಲಿ ಈ ಸಂಖ್ಯೆಗೆ ಮತಗಳು ಮೂರು ಕಡಿಮೆಯಾಗಿದೆ. ಬಿಹಾರದಿಂದ ರಾಜ್ಯಸಭಾ ಸ್ಥಾನವನ್ನು ಗೆಲ್ಲಲು ಒಬ್ಬ ಅಭ್ಯರ್ಥಿಗೆ ಕನಿಷ್ಠ 41 ಶಾಸಕರ ಬೆಂಬಲ ಬೇಕಾಗುತ್ತದೆ.

# ರಾಜ್ಯಸಭೆ ಚುನಾವಣೆ: 26 ಅಭ್ಯರ್ಥಿಗಳು ಅವಿರೋಧ ಆಯ್ಕೆ



**ನವದೆಹಲಿ, ಮಾ.16:** ಹತ್ತು ರಾಜ್ಯಗಳ 37 ಸ್ಥಾನಗಳನ್ನು ಒಳಗೊಂಡ ರಾಜ್ಯಸಭೆಯ ದ್ವೈವಾರ್ಷಿಕ ಚುನಾವಣೆಗೆ ಸೋಮವಾರ ಮತದಾನ ನಡೆಯಿತು. ಬಿಹಾರ, ಒಡಿಶಾ ಮತ್ತು ಹರಿಯಾಣದಲ್ಲಿ ತೀವ್ರ ಪೈಪೋಟಿ ಏರ್ಪಟ್ಟಿತು. 26 ಅಭ್ಯರ್ಥಿಗಳು ಈಗಾಗಲೇ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಮಹಾರಾಷ್ಟ್ರದ 7, ತಮಿಳುನಾಡಿನ 6, ಪಶ್ಚಿಮ ಬಂಗಾಳ ಮತ್ತು ಬಿಹಾರದಲ್ಲಿ ತಲಾ 5, ಒಡಿಶಾದ 4, ಅಸ್ಸಾಂನ 3, ಛತ್ತೀಸ್‌ಗಢ, ಹರಿಯಾಣ ಮತ್ತು ತೆಲಂಗಾಣದ ತಲಾ 2 ಮತ್ತು ಹಿಮಾಚಲ ಪ್ರದೇಶದ 1 ಸ್ಥಾನಕ್ಕೆ ಇಂದು ಚುನಾವಣೆ ನಡೆಯುತ್ತಿದೆ. ಕೆಲ ರಾಜ್ಯಗಳಲ್ಲಿ ಮತದಾನ ಅಗತ್ಯವಿದ್ದರೂ, ಏಳು ರಾಜ್ಯಗಳ 26 ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಬಿಹಾರ, ಒಡಿಶಾ ಮತ್ತು ಹರಿಯಾಣದಲ್ಲಿ ಮತದಾನ ಅಗತ್ಯವಾಗಿದ್ದು, ಅಲ್ಲಿ ರಾಜಕೀಯ ಪಕ್ಷಗಳು ತಮ್ಮ ಶಾಸಕರನ್ನು ಸಕ್ರಿಯವಾಗಿ ಸಜ್ಜುಗೊಳಿಸಿವೆ. ಈ ರಾಜ್ಯಗಳು ಒಟ್ಟಾಗಿ 11 ಸ್ಥಾನಗಳನ್ನು ಹೊಂದಿವೆ. ಈ ಚುನಾವಣೆ ರಾಜಕೀಯ ಚಟುವಟಿಕೆಗಳು ಗರಿಗೆದರಿದ್ದು, ಪಕ್ಷಗಳು ವಿಪ್ ಜಾರಿ ಮಾಡುವ ಮೂಲಕ ಅಡ್ಡ ಮತದಾನವನ್ನು ತಡೆಯಲು ಶಾಸಕರನ್ನು ಸೂಕ್ಷ್ಮವಾಗಿ ಗಮನಿಸುತ್ತಿವೆ.

ಬಿಹಾರದಲ್ಲಿ ಎನ್‌ಡಿಎ ಎಲ್ಲಾ ಐದು ಸ್ಥಾನಗಳನ್ನು ಗೆಲ್ಲುವ ವಿಶ್ವಾಸ ಹೊಂದಿದೆ. ಸಿಎಂ ನಿತೀಶ್ ಕುಮಾರ್, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್, ಉಪೇಂದ್ರ ಕುಶ್ವಾಹ ರಾಮ್ ನಾಥ್ ಠಾಕೂರ್ ಶಿವೇಶ್ ಕುಮಾರ್ ಕಣದಲ್ಲಿದ್ದಾರೆ. ವಿರೋಧ ಪಕ್ಷವಾದ ಆರ್ಜೆಡಿ ತೇಜಸ್ವಿ ಯಾದವ್ ಅವರ ಬೆಂಬಲವನ್ನು ನಂಬಿದ್ದು, ಅವರು ಎಐಎಂಐಎಂ ಮತ್ತು ಇತರ ಪಕ್ಷಗಳಿಂದ ಬೆಂಬಲ ಕೋರಿದ್ದಾರೆ.

ಒಡಿಶಾದಲ್ಲಿ ರಾಜ್ಯಸಭಾ ಚುನಾವಣೆ ತೀವ್ರ ರಾಜಕೀಯ ಸ್ಪರ್ಧೆಯಾಗಿ ಮಾರ್ಪಟ್ಟಿದೆ. ಬೆಂಗಳೂರಿನಲ್ಲಿ ಕಾಂಗ್ರೆಸ್ ಶಾಸಕರಿಗೆ ಲಂಚ ನೀಡಲು ಯತ್ನಿಸಿದ ಆರೋಪದ ಮೇಲೆ ಇಬ್ಬರು ವ್ಯಕ್ತಿಗಳನ್ನು ಬಂಧಿಸಲಾಗಿದೆ. ಅವರು ಖಾಲಿ ಚೆಕ್‌ನೊಂದಿಗೆ ಕಾಂಗ್ರೆಸ್ ಶಾಸಕರನ್ನು ಸಂಪರ್ಕಿಸಿದ್ದಾರೆ ಎನ್ನಲಾಗಿದೆ. ಇದೇ ಸಮಯದಲ್ಲಿ, ಬಿಜೆಪಿ ತನ್ನ ಶಾಸಕರನ್ನು ರಾಜ್ಯಸಭಾ ಮತದಾನ ಕಾರ್ಯವಿಧಾನದ ತರಬೇತಿ ನೆಪವೊಡ್ಡಿ ಪಾರಾದೀಪ್‌ಗೆ ಸ್ಥಳಾಂತರಿಸಿದೆ.

ಈ ನಡುವೆ, ಮಾಜಿ ಸಿಎಂ ನವೀನ್ ಪಟ್ನಾಯಕ್ ಪಕ್ಷದ ಶಾಸಕರನ್ನು ಭೇಟಿ ಮಾಡಿ ಅಡ್ಡ ಮತದಾನ ಮಾಡದಂತೆ ಮನವಿ ಮಾಡಿದ್ದಾರೆ. ಹರಿಯಾಣದಲ್ಲಿ ಕಾಂಗ್ರೆಸ್ ತನ್ನ ಶಾಸಕರನ್ನು ಶಿಮ್ಲಾ ಬಳಿಯ ರೆಸಾರ್ಟ್‌ಗಳಿಂದ ಕಸೌಲಿಗೆ ಬಿಗಿ ಭದ್ರತೆಯ ನಡುವೆ ಸ್ಥಳಾಂತರಿಸಿದೆ. ಸಂಜಯ್ ಭಾಟಿಯಾ, ಕರಮ್ವೀರ್ ಸಿಂಗ್ ಬೌಧ್ ಮತ್ತು ಸತೀಶ್ ನಂದಲ್ ಕಣದಲ್ಲಿರುವ ಪ್ರಮುಖ ಅಭ್ಯರ್ಥಿಗಳಾಗಿದ್ದಾರೆ

ಮೇಲ್ಮನೆಯಲ್ಲಿ ಸ್ಥಾನ ಪಡೆಯಲು ಪ್ರತಿ ಅಭ್ಯರ್ಥಿಗೆ ಶಾಸಕರ 31 ಮತಗಳು ಬೇಕಾಗುತ್ತವೆ. ಮಹಾರಾಷ್ಟ್ರದ 7, ತಮಿಳುನಾಡಿನ 6, ತೆಲಂಗಾಣದ 2, ಛತ್ತೀಸ್‌ಗಢದ 2, ಅಸ್ಸಾಂನ 3 ಮತ್ತು ಹಿಮಾಚಲ ಪ್ರದೇಶದ ಒಬ್ಬರು ಅಭ್ಯರ್ಥಿ ಈಗಾಗಲೇ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಅಧಿಕೃತವಾಗಿ ಮಾತ್ರ ಫಲಿತಾಂಶ ಪ್ರಕಟಗೊಳ್ಳಬೇಕಿದೆ. ತೆಲಂಗಾಣದ ಅಭಿಷೇಕ್ ಮನು ಸಿಂಘ್ವಿ ಮತ್ತು ತಮಿಳುನಾಡಿನ ಅನ್ಬುಮಣಿ ರಾಮದಾಸ್ ಅವರು ಅವಿರೋಧವಾಗಿ ಆಯ್ಕೆಯಾದ ಪ್ರಮುಖ ಅಭ್ಯರ್ಥಿಗಳು.

# ಎಲ್‌ಪಿಜಿ ಗ್ರಾಹಕರಿಗೆ ಆಧಾರ್ ಮೂಲಕ ಇ-ಕೆವೈಸಿ



**ನವದೆಹಲಿ, ಮಾ. 16:** ದ್ರವೀಕೃತ ಪೆಟ್ರೋಲಿಯಂ ಅನಿಲ (ಎಲ್‌ಪಿಜಿ) ಬಳಸುವ 330 ದಶಲಕ್ಷಕ್ಕಿಂತಲೂ ಹೆಚ್ಚು ಗ್ರಾಹಕರು ಎಲೆಕ್ಟ್ರಾನಿಕ್ ನೋ ಯುವರ್ ಕಸ್ಟಮರ್ (ಇ-ಕೆವೈಸಿ) ಅನ್ನು ಬಯೋಮೆಟ್ರಿಕ್ ಆಧಾರ್ ದೃಢೀಕರಣ ವ್ಯವಸ್ಥೆಯ ಮೂಲಕ ಮಾಡಿಸಿಕೊಳ್ಳಬೇಕು ಎಂದು ಸರ್ಕಾರ ಕೇಳಿದೆ.

ಎಲ್ಲಾ ದೇಶೀಯ ಎಲ್‌ಪಿಜಿ ಗ್ರಾಹಕರು ಬಯೋಮೆಟ್ರಿಕ್ ಆಧಾರ್ ದೃಢೀಕರಣ (ಇ-ಕೆವೈಸಿ) ಅನ್ನು ಪೂರ್ಣಗೊಳಿಸಬೇಕಾಗುತ್ತದೆ. ಈಗ ನಿಮ್ಮ ತೈಲ ಮಾರ್ಕೆಟಿಂಗ್ ಕಂಪನಿಯ (ಒಎಂಸಿ) ಮೊಬೈಲ್ ಅಪ್ಲಿಕೇಶನ್ ಮತ್ತು ಆಧಾರ್ ಫೇಸ್‌ಆರ್‌ಡಿ ಅಪ್ಲಿಕೇಶನ್ ಬಳಸಿ ನಿಮ್ಮ ಮನೆಯಿಂದಲೇ ಪರಿಶೀಲಿಸಿ ಎಂದು ಎಂದು ಪೆಟ್ರೋಲಿಯಂ ಸಚಿವಾಲಯ ಎಕ್ಸ್‌ನಲ್ಲಿ ಹೇಳಿದೆ.

ಅಡುಗೆ ಅನಿಲದ ಮೇಲಿನ ಸಬ್ಸಿಡಿ ಪಡೆಯಲು 105.1 ದಶಲಕ್ಷಕ್ಕಿಂತಲೂ ಹೆಚ್ಚು ಪ್ರಧಾನ ಮಂತ್ರಿ ಉಜ್ವಲ ಯೋಜನೆ (ಪಿಎಂಯುವೈ) ಫಲಾನುಭವಿಗಳಿಗೆ ವಾರ್ಷಿಕ ಬಯೋಮೆಟ್ರಿಕ್ ಆಧಾರ್ ದೃಢೀಕರಣ ಕಡ್ಡಾಯವಾಗಿದೆ. ಪಿಎಂಯುವೈ ಅಡಿಯಲ್ಲಿ, ಇ-ಕೆವೈಸಿ ಇಲ್ಲದೆಯೂ ಒಬ್ಬ ಫಲಾನುಭವಿಯು ಒಂದು ಹಣಕಾಸು ವರ್ಷದಲ್ಲಿ ಏಳು ಎಲ್‌ಪಿಜಿ ಮರುಪೂರಣಗಳನ್ನು ಪಡೆಯುತ್ತಾನೆ. ಹೀಗಾಗಿ, ಇ-ಕೆವೈಸಿ ಕೊರತೆಯಿಂದಾಗಿ ಮರುಪೂರಣ ಪೂರೈಕೆಯಲ್ಲಿ ಅಡಚಣೆ ಉಂಟಾಗುವುದಿಲ್ಲ.

ಒಂದು ನಿರ್ದಿಷ್ಟ ಹಣಕಾಸು ವರ್ಷದಲ್ಲಿ ಏಳು ಮರುಪೂರಣಗಳನ್ನು ಪಡೆಯಲು ಫಲಾನುಭವಿಯು ಬಯೋಮೆಟ್ರಿಕ್ ಆಧಾರ್ ದೃಢೀಕರಣವನ್ನು ಪಡೆಯಬೇಕಾಗುತ್ತದೆ. ಪಿಎಂಯುವೈ ಫಲಾನುಭವಿಯು ಹಣಕಾಸು ವರ್ಷದಲ್ಲಿ ಒಮ್ಮೆ ಇ-ಕೆವೈಸಿ ಮಾಡಿಸಿಕೊಳ್ಳಬೇಕಾಗುತ್ತದೆ.

ಬಡಮನೆಗಳ ವಯಸ್ಕ ಮಹಿಳೆಯರಿಗೆ ಠೇವಣಿ ರಹಿತ ಎಲ್‌ಪಿಜಿ ಸಂಪರ್ಕವನ್ನು ಒದಗಿಸಲು ಪಿಎಂಯುವೈ ಅನ್ನು ಮೇ 2016 ರಲ್ಲಿ ಪ್ರಾರಂಭಿಸಲಾಯಿತು. 2022 ರಲ್ಲಿ, ಸರ್ಕಾರವು ಪಿಎಂಯುವೈ ಗ್ರಾಹಕರಿಗೆ 14.2 ಕೆಜಿ ಸಿಲಿಂಡರ್‌ಗೆ 200 (ಮತ್ತು 5 ಕೆಜಿ ಸಂಪರ್ಕಗಳಿಗೆ ಅನುಪಾತದಲ್ಲಿ ಅನುಪಾತದಲ್ಲಿ) ಗುರಿ ಸಬ್ಸಿಡಿಯನ್ನು ಪ್ರಾರಂಭಿಸಿತು, ನಂತರ ಅದನ್ನು 14.2 ಕೆಜಿ ಸಿಲಿಂಡರ್‌ಗೆ 300ಕ್ಕೆ ಹೆಚ್ಚಿಸಲಾಯಿತು. (5 ಕೆಜಿ ಸಂಪರ್ಕಗಳಿಗೆ ಅನುಪಾತದಲ್ಲಿ ಅನುಪಾತದಲ್ಲಿ ಅನುಪಾತದಲ್ಲಿ ಅನುಪಾತದಲ್ಲಿ). ಪಿಎಂಯುವೈ ಗ್ರಾಹಕರಿಗೆ ಎಲ್‌ಪಿಜಿಯನ್ನು ಸುಲಭವಾಗಿ ಕೈಗೆಟುಕುವಂತೆ ಮಾಡಲು ಮತ್ತು ನಿರಂತರ ಬಳಕೆಯನ್ನು ಖಚಿತಪಡಿಸಿಕೊಳ್ಳಲು ಈ ಯೋಜನೆ ಜಾರಿಗೊಳಿಸಲಾಯಿತು.

ಪಶ್ಚಿಮ ಏಷ್ಯಾದಲ್ಲಿನ ಯುದ್ಧದಿಂದಾಗಿ ಇಂಧನ ಪೂರೈಕೆಯಲ್ಲಿ ಅಡಚಣೆಗಳು ಎಲ್‌ಪಿಜಿ ಪೂರೈಕೆಗಳ ಮೇಲೆ ಪರಿಣಾಮ ಬೀರಿವೆ. ಮಾರ್ಚ್ 7 ರಂದು ಒಎಂಸಿಗಳು ಅಡುಗೆ ಅನಿಲದ ಬೆಲೆಯನ್ನು 14.2 ಕೆಜಿ ಸಿಲಿಂಡರ್‌ಗೆ 60 ರೂಪಾಯಿ ರಷ್ಟು ಹೆಚ್ಚಿಸಿವೆ. ಇದು ದೆಹಲಿಯಲ್ಲಿ ದೇಶೀಯ ಎಲ್‌ಪಿಜಿ ಸಿಲಿಂಡರ್‌ಗಳ ಬೆಲೆಯನ್ನು 913 ರೂಪಾಯಿಗೆ ತಂದಿದೆ. ಪಿಎಂಯುವೈ ಫಲಾನುಭವಿಗಳಿಗೆ, ದೆಹಲಿಯಲ್ಲಿ ಬೆಲೆ 613 ರೂಪಾಯಿ ಆಗಿದೆ.

ಯುದ್ಧದ ನಂತರ ಹಾರ್ಮುಜ್ ಜಲಸಂಧಿಯ ಮೂಲಕ ಹಡಗಿನ ಚಲನೆಗೆ ಅಡ್ಡಿಯಾದ ನಂತರ ಪಶ್ಚಿಮ ಏಷ್ಯಾದಲ್ಲಿ ಇಂಧನ ಪೂರೈಕೆ ಬಿಕ್ಕಟ್ಟಿನಿಂದ ಉಂಟಾದ ಪರಿಣಾಮದ ಭಾಗಶಃ ವರ್ಗಾವಣೆಯನ್ನು ದರ ಹೆಚ್ಚಳವು ಪ್ರತಿಬಿಂಬಿಸುತ್ತದೆ ಎಂದು ಗ್ಯಾಸ್ ಉದ್ಯಮದ ಕಾರ್ಯನಿರ್ವಾಹಕರು ಹೇಳುತ್ತಾರೆ.

# ವೈರಮುತ್ತುಗೆ ಜ್ಞಾನಪೀಠ ಪ್ರಶಸ್ತಿ: ಹಲವರಿಂದ ಟೀಕೆ



**ನವದೆಹಲಿ, ಮಾ.16:** ಲಿಂಗತಾರತಮ್ಯ ಮತ್ತು ಲೈಂಗಿಕ ಕಿರುಕುಳದಂತಹ ಗಂಭೀರ ಆರೋಪಗಳನ್ನು ಎದುರಿಸುತ್ತಿರುವ ತಮಿಳು ಸಾಹಿತಿ ವೈರಮುತ್ತು ಅವರಿಗೆ 2025ನೇ ಸಾಲಿನ ಪ್ರತಿಷ್ಠಿತ ಜ್ಞಾನಪೀಠ ಪ್ರಶಸ್ತಿ ಘೋಷಿಸಿರುವುದು ವ್ಯಾಪಕ ಟೀಕೆಗೆ ಗುರಿಯಾಗಿದೆ. ಸಾಹಿತ್ಯ ಕ್ಷೇತ್ರದಲ್ಲಿನ ಅವರ ಕೊಡುಗೆಯನ್ನು ಪರಿಗಣಿಸಿ ಈ ಗೌರವ ನೀಡಲಾಗಿದೆ ಎಂದರೂ, ಅವರ ವಿರುದ್ಧದ ಲೈಂಗಿಕ ದೌರ್ಜನ್ಯದ ದೂರುಗಳಿಂದಾಗಿ ಅನೇಕರು ಈ ನಿರ್ಧಾರವನ್ನು ಸಾಮಾಜಿಕ ಜಾಲತಾಣಗಳಲ್ಲಿ ಮತ್ತು ಸಾರ್ವಜನಿಕ ವೇದಿಕೆಗಳಲ್ಲಿ ತೀವ್ರವಾಗಿ ಖಂಡಿಸುತ್ತಿದ್ದಾರೆ.

ಗಾಯಕಿ ಚಿನ್ಮಯಿ ಶ್ರೀಪಾದ ಸೇರಿದಂತೆ ಹಲವು ಕಲಾವಿದರು ಈ ಪ್ರಶಸ್ತಿ ಆಯ್ಕೆಯ ವಿರುದ್ಧ ತಮ್ಮ ಆಕ್ರೋಶ ಮತ್ತು ಅಸಮಾಧಾನವನ್ನು ಹೊರಹಾಕಿದ್ದಾರೆ. ಈ ನಿರ್ಧಾರವು ವೈರಮುತ್ತು ವಿರುದ್ಧ ಧ್ವನಿ ಎತ್ತಿದ ಮಹಿಳೆಯರ ನೋವುಗಳನ್ನು ಕಡೆಗಣಿಸಿದಂತಾಗುತ್ತದೆ ಮತ್ತು ಅವರಂತಹ ವ್ಯಕ್ತಿಗೆ ಮತ್ತಷ್ಟು ಸಾಮಾಜಿಕ ಮಾನ್ಯತೆ ನೀಡಿದಂತಾಗುತ್ತದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಭಾರತೀಯ ಜ್ಞಾನಪೀಠ ಎಂಬ ಸಾಹಿತ್ಯಿಕ ಸಂಸ್ಥೆಯು 2026ರ ಮಾರ್ಚ್ 14ರಂದು 2025ನೇ ಸಾಲಿನ (60ನೇ ವರ್ಷದ) ಜ್ಞಾನಪೀಠ ಪ್ರಶಸ್ತಿಯನ್ನು ವೈರಮುತ್ತು ಅವರಿಗೆ ಘೋಷಿಸಿದೆ. ಈ ಪ್ರತಿಷ್ಠಿತ ಸಂಸ್ಥೆಯನ್ನು 1944ರಲ್ಲಿ ಉದ್ಯಮಿ ಸಾಹು ಶಾಂತಿ ಪ್ರಸಾದ್ ಜೈನ್ ಅವರು ಸ್ಥಾಪಿಸಿದರು.

1964ರಿಂದ ಪ್ರತಿವರ್ಷದ ಜ್ಞಾನಪೀಠ ಪ್ರಶಸ್ತಿಯನ್ನು ಭಾರತೀಯ ಭಾಷೆಗಳಿಗೆ ನೀಡಿದ ಕೊಡುಗೆಗಾಗಿ ಸಾಹಿತಿಗಳಿಗೆ ನೀಡಲಾಗುತ್ತಿದೆ. ಇದನ್ನು ಭಾರತೀಯ ಸಾಹಿತ್ಯದ ಅತ್ಯಂತ ಪ್ರತಿಷ್ಠಿತ ಗೌರವವೆಂದು ಪರಿಗಣಿಸಲಾಗಿದೆ. ಈ ಪ್ರಶಸ್ತಿ 11 ಲಕ್ಷ ರೂ. ನಗದು ಬಹುಮಾನ, ವಾಗ್ದೇವಿ (ಸರಸ್ವತಿ ದೇವಿಯ) ಕಂಚಿನ ವಿಗ್ರಹ ಮತ್ತು ಪ್ರಶಸ್ತಿ ಪತ್ರವನ್ನು ಒಳಗೊಂಡಿದೆ. ಈ ಗೌರವವನ್ನು ರಾಷ್ಟ್ರಪತಿ ಪ್ರಧಾನ ಮಾಡುತ್ತಾರೆ.


ಅಮೃತಾ ಪ್ರೀತಮ್, ಸಿ. ನಾರಾಯಣ ರೆಡ್ಡಿ, ಯು.ಆರ್. ಅನಂತಮೂರ್ತಿ, ಎಂ.ಟಿ ವಾಸುದೇವನ್ ನಾಯರ್, ಮಹಾಶ್ವೇತಾ ದೇವಿ, ಗಿರೀಶ್ ಕಾರ್ನಾಡ್, ಕೃಷ್ಣಾ ಸೋಬ್ತಿ, ಅಮಿತಾವ್ ಘೋಷ್ ಮತ್ತು ಗುಲ್ಜಾರ್ ಅವರಂತಹ ದಿಗ್ಗಜರು ಈ ಹಿಂದೆ ಈ ಪ್ರಶಸ್ತಿಯನ್ನು ಪಡೆದಿದ್ದಾರೆ.

2025ರ ಭಾರತೀಯ ಜ್ಞಾನಪೀಠ ಆಯ್ಕೆ ಸಮಿತಿಯು ಪ್ರತಿಭಾ ರೇ, ಮಾಧವ್ ಕೌಶಿಕ್, ದಾಮೋದರ್ ಮೌಜೊ, ಸುರಂಜನ್ ದಾಸ್, ಎ. ಕೃಷ್ಣ ರಾವ್, ಪ್ರಫುಲ್ಲ ಶಿಲೇದಾರ್, ಕೇಸುಭಾಯಿ ದೇಸಾಯಿ, ಜಾನಕಿ ಪ್ರಸಾದ್ ಶರ್ಮಾ, ಕೆ. ಶ್ರೀನಿವಾಸ್ ರಾವ್ ಮತ್ತು ಮಹೇಶ್ವರ್ ಸೇರಿದಂತೆ ಹಲವಾರು ಸಾಹಿತಿಗಳು ಮತ್ತು ವಿದ್ವಾಂಸರನ್ನು ಒಳಗೊಂಡಿತ್ತು.

ವೈರಮುತ್ತು ಅವರಿಗೆ ಪ್ರಶಸ್ತಿ ನೀಡುವ ನಿರ್ಧಾರವನ್ನು ಟೀಕಿಸಿದ ಚಿನ್ಮಯಿ ಶ್ರೀಪಾದ, 2018ರಲ್ಲಿ, ವಿವಿಧ ವಯೋಮಾನದ ಅನೇಕ ಮಹಿಳೆಯರು ಒಬ್ಬ ಕವಿ ಮತ್ತು ಗೀತರಚನೆಕಾರನನ್ನು ತಮಗೆ ಲೈಂಗಿಕ ಕಿರುಕುಳ ನೀಡಿದ ವ್ಯಕ್ತಿ ಎಂದು ಹೆಸರಿಸಿದ್ದರು. ಇಂದು ಅದೇ ವ್ಯಕ್ತಿಗೆ ಜ್ಞಾನಪೀಠ ಪ್ರಶಸ್ತಿಯನ್ನು ನೀಡಲಾಗುತ್ತಿದೆ ಅವರ ವಿರುದ್ಧ ದನಿ ಎತ್ತಿದ ಮಹಿಳೆಯರ ಒಟ್ಟಾರೆ ಧ್ವನಿಯನ್ನು ಅಡಗಿಸಲಾಗಿದೆ. ಇದಕ್ಕಾಗಿ ನಾನು ದೊಡ್ಡ ಬೆಲೆ ತೆರಬೇಕಾಯಿತು ತಮ್ಮ ಕನಸುಗಳನ್ನು ಅರ್ಧಕ್ಕೇ ಬಿಟ್ಟು ಹೋದ ಉಳಿದ ಮಹಿಳೆಯರು ನನ್ನಷ್ಟು ಅದೃಷ್ಟವಂತರಾಗಿರಲಿಲ್ಲ ಎಂದು ಬರೆದುಕೊಂಡಿದ್ದಾರೆ.

# ಬಿಜೆಪಿ ಸೇರಿದ ಉಚ್ಚಾಟಿತ ಸಿಪಿಐ ನಾಯಕ ಮುಕುಂದನ್

**ತಿರುವನಂತಪುರ, ಮಾ.16:** ಕೇರಳದ ನಟ್ಟಿಕಾದ ಮಾಜಿ ಸಿಪಿಐ ನಾಯಕ ಮತ್ತು ಹಾಲಿ ಶಾಸಕ ಸಿ.ಸಿ. ಮುಕುಂದನ್ ಅವರು ಸೋಮವಾರ ಬಿಜೆಪಿ ಸೇರಿದ್ದಾರೆ. ತ್ರಿಶೂರ್‌ನಲ್ಲಿರುವ ಬಿಜೆಪಿ ಜಿಲ್ಲಾ ಸಮಿತಿ ಕಚೇರಿಗೆ ಭೇಟಿ ನೀಡಿ ಪಕ್ಷಕ್ಕೆ ಸೇರಿದ್ದಾರೆ. ಏ.9ರಂದು ಕೇರಳ ವಿಧಾನಸಭೆ ಚುನಾವಣೆ ನಡೆಯಲಿದ್ದು ನಟ್ಟಿಕಾ ಕ್ಷೇತ್ರದಲ್ಲಿ ಗೀತಾ ಗೋಪಿ ಅವರನ್ನು ಕಣಕ್ಕಿಳಿಸಲು ಸಿಪಿಐ ನಿರ್ಧರಿಸಿದೆ. ಇದಾದ ಬಳಿಕ ಮುಕುಂದನ್‌ಗೆ ಸಿಪಿಐ ಜತೆ ಭಿನ್ನಾಭಿಪ್ರಾಯ ಉಂಟಾಗಿದೆ.



ಟಿಕೆಟ್ ನಿರಾಕರಿಸಿದ ನಂತರ, ಮುಕುಂದನ್ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸುವ ನಿರ್ಧಾರವನ್ನು ಘೋಷಿಸಿದರು. ನಟ್ಟಿಕಾ ಕ್ಷೇತ್ರದ ಟಿಕೆಟ್ ಅನ್ನು ಹಣಕ್ಕಾಗಿ ಸಿಪಿಐ ಮಾರಾಟ ಮಾಡಿದೆ ಎಂದು ಆರೋಪಿಸಿದರು. ಇದಾದ ಬಳಿಕ ಸಿಪಿಐ ಮುಕುಂದನ್ ಅವರನ್ನು ಉಚ್ಚಾಟಿಸಿದೆ. ಇದಾದ ಬಳಿಕ ಮುಕುಂದನ್ ಮೊದಲು ಕಾಂಗ್ರೆಸ್‌ನ ಬೆಂಬಲ ಪಡೆಯಲು ಯತ್ನಿಸಿದರು. ಆದರೆ ಕಾಂಗ್ರೆಸ್ ಸುನಿಲ್ ಲಾಲೂರ್ ಅವರನ್ನು ತನ್ನ ಅಭ್ಯರ್ಥಿಯಾಗಿ ಘೋಷಿಸಿತು. ಹಾಗೆಯೇ ಬಿಜೆಪಿ ಸೇರುವ ಊಹಾಪೋಹಗಳನ್ನು ಮುಕುಂದನ್ ಈ ಹಿಂದೆ ತಳ್ಳಿಹಾಕಿದ್ದರು. ಆದರೆ ಎಲ್‌ಡಿಎಫ್, ಯುಡಿಎಫ್ ಎರಡೂ ಕಡೆಯು ಜಾಗವಿಲ್ಲ ಎಂದಾದ ಬಳಿಕ ಇದೀಗ ಎನ್‌ಡಿಎ ಸೇರಿದ್ದಾರೆ. ಆಮ್ ಆದ್ಮಿ ಪಕ್ಷವೂ ಮುಕುಂದನ್ ಅವರನ್ನು ಸಂಪರ್ಕಿಸಿದೆ. ಆದರೆ ಮುಕುಂದನ್ ಬಿಜೆಪಿ ಸೇರುವ ನಿರ್ಧಾರ ಮಾಡಿದ್ದಾರೆ. ನಟ್ಟಿಕಾದಲ್ಲಿ ಸ್ಪರ್ಧಿಸುವ ಸಾಧ್ಯತೆಯೂ ಇದೆ. ಇನ್ನು ಬಿಜೆಪಿ ಸೇರಿದ ಬಳಿಕ ಮಾತನಾಡಿದ ಮುಕುಂದನ್, ನಿಧಿ ಸಂಗ್ರಹಿಸದ ಕಾರಣ ಸಿಪಿಐ ಅವರಿಗೆ ಪಕ್ಷದ ಟಿಕೆಟ್ ನಿರಾಕರಿಸಿದೆ ಎಂದು ಆರೋಪಿಸಿದ್ದಾರೆ. ಚುನಾವಣಾ ಪ್ರಚಾರದ ಸಮಯದಲ್ಲಿ ಹೆಚ್ಚಿನ ವಿವರಗಳನ್ನು ಬಹಿರಂಗಪಡಿಸುವುದಾಗಿಯೂ ಹೇಳಿದ್ದಾರೆ. ಇನ್ನು ಮುಕುಂದನ್ ಬಿಜೆಪಿ ಸೇರುವ ಮೊದಲು, ಬಿಜೆಪಿ ರಾಜ್ಯ ಅಧ್ಯಕ್ಷರಾಜೀವ್ ಚಂದ್ರಶೇಖರ್ ತಿರುವನಂತಪುರದಲ್ಲಿ ಎನ್‌ಡಿಎ ಮುಂದಿನ 2 ದಿನಗಳಲ್ಲಿ ಚುನಾವಣೆಗೆ ತನ್ನ ಅಭ್ಯರ್ಥಿಗಳನ್ನು ಘೋಷಿಸಲಿದೆ ಎಂದು ತಿಳಿಸಿದ್ದಾರೆ.

# ಅಬಕಾರಿ ಪ್ರಕರಣ: ಸುಪ್ರೀಂ ಮೆಟ್ಟಿಲೇರಿದ ಮಾಜಿ ಸಿಎಂ ಅರವಿಂದ್ ಕೇಜ್ರಿವಾಲ್



**ನವದೆಹಲಿ,ಮಾ.16:** ಆಮ್ ಆದ್ಮಿ ಪಕ್ಷದ ಮುಖ್ಯಸ್ಥ ಮತ್ತು ದೆಹಲಿಯ ಮಾಜಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರು ಅಬಕಾರಿ ನೀತಿ ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದಾರೆ.

ಅಬಕಾರಿ ನೀತಿ ಪ್ರಕರಣದಲ್ಲಿ ತಮ್ಮನ್ನು ಖುಲಾಸೆಗೊಳಿಸಿದ ವಿಚಾರಣಾ ನ್ಯಾಯಾಲಯದ ಆದೇಶವನ್ನು ಪ್ರಶ್ನಿಸಿ ಸಿಬಿಐ ದೆಹಲಿ ಹೈಕೋರ್ಟ್‌ನಲ್ಲಿ ಸಲ್ಲಿಸಿದ ಮೇಲ್ಮನವಿಯನ್ನು, ಹೈಕೋರ್ಟ್‌ನ ನಿರ್ದಿಷ್ಟ ಪೀಠದಿಂದ ಬೇರೆ ಪೀಠಕ್ಕೆ ವರ್ಗಾಯಿಸುವಂತೆ ಕೋರಿ ಅರವಿಂದ್ ಕೇಜ್ರಿವಾಲ್ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದಾರೆ

ಫೆಬ್ರವರಿ 27ರಂದು ದೆಹಲಿ ರೌಸ್ ಅವೆನ್ಯೂ ಕೋರ್ಟ್, ಅಬಕಾರಿ ನೀತಿ ಪ್ರಕರಣದಲ್ಲಿ ಕೇಜ್ರಿವಾಲ್ ಮತ್ತು ಇತರರನ್ನು ಖುಲಾಸೆಗೊಳಿಸಿತ್ತು. ಈ ಆದೇಶದ ವಿರುದ್ಧ ಸಿಬಿಐ ಹೈಕೋರ್ಟ್‌ನಲ್ಲಿಮೇಲ್ಮನವಿ ಸಲ್ಲಿಸಿದ್ದು, ನ್ಯಾಯಮೂರ್ತಿ ಶರ್ಮಾ ಅವರ ಪೀಠವು ಈ ಪ್ರಕರಣವನ್ನು ವಿಚಾರಣೆ ನಡೆಸುತ್ತಿದೆ.

ಆದರೆ ನ್ಯಾಯಮೂರ್ತಿ ಶರ್ಮಾ ಅವರ ಪೀಠವು ನಿಷ್ಪಕ್ಷಪಾತವಾಗಿ ವಿಚಾರಣೆ ನಡೆಸುವುದಿಲ್ಲ ಎಂಬ ಆತಂಕ ವ್ಯಕ್ತಪಡಿಸಿ, ಕೇಜ್ರಿವಾಲ್ ಮತ್ತು ಮನೀಶ್ ಸಿಸೋಡಿಯಾ ಅವರು ಪ್ರಕರಣ ವರ್ಗಾವಣೆಗೆ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಗಳಿಗೆ ಮನವಿ ಮಾಡಿದ್ದರು. ಆದರೆ ಈ ಮನವಿಯನ್ನು ತಿರಸ್ಕರಿಸಲಾಗಿದೆ.

ಹೈಕೋರ್ಟ್ ತಮ್ಮ ಮನವಿಯನ್ನು ತಿರಸ್ಕರಿಸಿದ ಕಾರಣ ಅರವಿಂದ್ ಕೇಜ್ರಿವಾಲ್ ಮತ್ತು ಮನೀಶ್ ಸಿಸೋಡಿಯಾ ಅವರು ಪ್ರಕರಣ ವರ್ಗಾವಣೆ ಮತ್ತು ಸಿಬಿಐ ಸಲ್ಲಿಸಿರುವ ಮೇಲ್ಮನವಿಯನ್ನು ವಿರೋಧಿಸಿ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದಾರೆ.

ದೆಹಲಿ ಸರ್ಕಾರವು ಮದ್ಯ ಮಾರಾಟವನ್ನು ಸಂಪೂರ್ಣವಾಗಿ ಖಾಸಗೀಕರಣಗೊಳಿಸಲು ಅಬಕಾರಿ ನೀತಿಯನ್ನು ಜಾರಿಗೆ ತಂದಿತ್ತು. ಈ ನೀತಿ ಅಡಿಯಲ್ಲಿ ಸರ್ಕಾರಿ ಮದ್ಯದ ಮಳಿಗೆಗಳನ್ನು ಮುಚ್ಚಿ, ಖಾಸಗಿ ಸಂಸ್ಥೆಗಳಿಗೆ ಪರವಾನಗಿ ನೀಡಲು ಮುಂದಾಗಿತ್ತು. ಆದರೆ ಈ ನೀತಿಯನ್ನು ರೂಪಿಸುವಾಗ ಮತ್ತು ಜಾರಿಗೆ ತರುವಾಗ ಕೆಲವು ಮದ್ಯದ ಉದ್ಯಮಿಗಳಿಗೆ ಅನುಕೂಲ ಮಾಡಿಕೊಡಲು ಅಕ್ರಮ ಎಸಗಲಾಗಿದೆ ಮತ್ತು ಪ್ರತಿಯಾಗಿ ಲಂಚ ಪಡೆಯಲಾಗಿದೆ ಎಂಬುದು ಸಿಬಿಐ, ಇಡಿ ಆರೋಪವಾಗಿದೆ.

ಈ ಪ್ರಕರಣದಲ್ಲಿ ಆಮ್ ಆದ್ಮಿ ಪಕ್ಷದ ನಾಯಕರಾದ ಅರವಿಂದ್ ಕೇಜ್ರಿವಾಲ್, ಮನೀಶ್ ಸಿಸೋಡಿಯಾ ಮತ್ತು ಸಂಜಯ್ ಸಿಂಗ್ ಸೇರಿದಂತೆ ಹಲವರು ಬಂಧನಕ್ಕೊಳಗಾಗಿದ್ದರು. ಫೆಬ್ರವರಿಯಲ್ಲಿ ಕೋರ್ಟ್ ಈ ಪ್ರಕರಣದಲ್ಲಿ ಕೇಜ್ರಿವಾಲ್ ಮತ್ತು ಇತರ 22 ಮಂದಿಯನ್ನು ಖುಲಾಸೆಗೊಳಿಸಿದೆ. ಆದರೆ ಈ ತೀರ್ಪನ್ನು ಪ್ರಶ್ನಿಸಿ ಸಿಬಿಐ ಈಗ ಹೈಕೋರ್ಟ್ ಮೊರೆ ಹೋಗಿದೆ

# ಕೇರಳ: ಬಿಜೆಪಿ ಅಭ್ಯರ್ಥಿಗಳ ಮೊದಲ ಪಟ್ಟಿ ಬಿಡುಗಡೆ

**ತಿರುವನಂತಪುರ, ಮಾ.16:** ಮುಂಬರುವ ಕೇರಳ ವಿಧಾನಸಭಾ ಚುನಾವಣೆಗೆ ಬಿಜೆಪಿ ಸೋಮವಾರ 47 ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಹಲವಾರು ಕ್ಷೇತ್ರಗಳಿಂದ ರಾಜ್ಯ ನಾಯಕರು ಮತ್ತು ಪ್ರಮುಖ ನಾಯಕರನ್ನು ಕಣಕ್ಕಿಳಿಸಿದೆ. ಮಂಜೇಶ್ವರದಿಂದ ಪಕ್ಷದ ಅಭ್ಯರ್ಥಿಯಾಗಿ ರಾಜ್ಯ ನಾಯಕ ಕೆ. ಸುರೇಂದ್ರನ್ ಅವರು ಸ್ಪರ್ಧೆಯಲ್ಲಿದ್ದರೆ, ಕೋಝಿಕ್ಕೋಡ್ ಉತ್ತರದಲ್ಲಿ ನವ್ಯಾ ಹರಿದಾಸ್ ಕಣದಲ್ಲಿದ್ದಾರೆ. ಕಜಕೂಟ್ಟಂನಲ್ಲಿ ವಿ. ಮುರಳೀಧರನ್, ಕಾಂಜಿರಪಳ್ಳಿಯಲ್ಲಿ ವಕೀಲ ಜಾರ್ಜ್ ಕುರಿಯನ್ ಸ್ಪರ್ಧಿಸುತ್ತಿದ್ದಾರೆ. ರಾಜ್ಯದಲ್ಲಿ ಬಿಜೆಪಿಯ ಪ್ರಮುಖ ಸ್ಥಾನಗಳಲ್ಲಿ ಒಂದೆಂದು ಪರಿಗಣಿಸಲಾದ ನೇಮೊಮ್ ಕ್ಷೇತ್ರದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ರಾಜೀವ್ ಚಂದ್ರಶೇಖರ್ ಅವರು ಕಣದಲ್ಲಿದ್ದಾರೆ. ಕೇರಳದಲ್ಲಿ ಒಟ್ಟು 140 ವಿಧಾನಸಭೆ ಕ್ಷೇತ್ರಗಳಿದ್ದು, ಏಪ್ರಿಲ್ 9ರಂದು ಚುನಾವಣೆ ನಡೆಯಲಿದೆ. ಮತದಾನ ನಡೆದ 25 ದಿನಗಳ ನಂತರ ಅಂದರೆ ಮೇ 4ರಂದು ಫಲಿತಾಂಶ ಹೊರಬೀಳಲಿದೆ.

# ಪಾಕ್ ಸಂಪರ್ಕದ ಆರೋಪ; 6 ಜನರ ಬಂಧನ

**ಗಾಜಿಯಬಾದ್,ಮಾ.16:** ಪಾಕಿಸ್ತಾನದ ದೇಶದ ಕೋಡ್‌ನಲ್ಲಿ ನೋಂದಾಯಿಸಲಾದ ವಿದೇಶಿ ಸಂಖ್ಯೆಯೊಂದಿಗೆ ಭದ್ರತಾ ಕಚೇರಿಗಳು, ತನಿಖಾ ಸಂಸ್ಥೆಗಳು ಮತ್ತು ರೈಲ್ವೆ ನಿಲ್ದಾಣಗಳಂತಹ ಸಾರ್ವಜನಿಕ ಸ್ಥಳಗಳ ಬಗ್ಗೆ ಸೂಕ್ಷ್ಮ ಮಾಹಿತಿಯನ್ನು ಚಿತ್ರೀಕರಿಸಿ ಹಂಚಿಕೊಂಡ ಆರೋಪದ ಮೇಲೆ ಗಾಜಿಯಾಬಾದ್‌ನಲ್ಲಿ ಮಹಿಳೆ ಸೇರಿದಂತೆ ಆರು ಜನರನ್ನು ಬಂಧಿಸಲಾಗಿದೆ.

ಶಂಕಿತರು ಬೇಹುಗಾರಿಕೆ ಚಟುವಟಿಕೆಯ ಭಾಗವಾಗಿ ದೆಹಲಿಯಲ್ಲಿ ಸೌರಶಕ್ತಿ ಚಾಲಿತ ಸಿಸಿಟಿವಿ ಕ್ಯಾಮೆರಾವನ್ನು ಸಹ ಅಳವಡಿಸಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಪೊಲೀಸರ ಪ್ರಕಾರ, ಆರೋಪಿಗಳನ್ನು ಬಿಜ್ನೋರ್ ನಿವಾಸಿ ಸುಹೇಲ್ ಮಲಿಕ್ (23), ಪ್ರವೀಣ್ (19), ಗಾಜಿಯಾಬಾದ್‌ನ ಕೌಶಂಬಿ ನಿವಾಸಿ ಸಾನೆ ಇರಾಂ ಅಲಿಯಾಸ್ ಮೆಹೆಕ್ (25), ಔರೈಯಾ ನಿವಾಸಿ ರಾಜ್ ವಾಲ್ಮೀಕಿ (19), ಬದೌನ್ ನಿವಾಸಿ ಶಿವ ವಾಲ್ಮೀಕಿ; ಶಹಜಹಾನ್ಪುರ ನಿವಾಸಿ ರಿತಿಕ್ ಗಂಗ್ವಾರ್ (23) ಎಂದು ಗುರುತಿಸಲಾಗಿದೆ.

ಶನಿವಾರ, ಗಾಜಿಯಾಬಾದ್‌ನಲ್ಲಿ ಮೊಬೈಲ್ ಫೋನ್ ಬಳಸಿಕೊಂಡು ಸಾರ್ವಜನಿಕ ಸ್ಥಳಗಳು ಮತ್ತು ಭದ್ರತಾ ಸಂಸ್ಥೆಗಳನ್ನು ಚಿತ್ರೀಕರಿಸುತ್ತಿರುವ ಶಂಕಿತ ಗ್ಯಾಂಗ್ ಬಗ್ಗೆ ನಮಗೆ ಸುಳಿವು ಸಿಕ್ಕಿತು. ಗಾಜಿಯಾಬಾದ್‌ನ ಭೋಪಾಪುರದಲ್ಲಿ ಶಂಕಿತರನ್ನು ಪತ್ತೆಹಚ್ಚಿ ಬಂಧಿಸಲಾಗಿದೆ ಎಂದು ಗಾಜಿಯಾಬಾದ್‌ನ ಹೆಚ್ಚುವರಿ ಪೊಲೀಸ್ ಆಯುಕ್ತ ರಾಜ್ ಕರಣ್ ನಯ್ಯರ್ ಹೇಳಿದರು.

ಆರೋಪಿಗಳನ್ನು ವಿಚಾರಣೆಗೆ ಒಳಪಡಿಸಿ ಅವರ ಎಲೆಕ್ಟ್ರಾನಿಕ್ ಸಾಧನಗಳನ್ನು ಸ್ಕ್ಯಾನ್ ಮಾಡಿದಾಗ, ಅವರು ವಿದೇಶಿ ಸಂಖ್ಯೆಗೆ ಹಲವಾರು ಛಾಯಾಚಿತ್ರಗಳನ್ನು ಕಳುಹಿಸಿದ್ದಾರೆ ಎಂದು ಕಂಡುಬಂದಿದೆ. ಸುಹೇಲ್ ಮಲಿಕ್ ಈ ಕಾರ್ಯವನ್ನು ನಿರ್ವಹಿಸಲು ಇತರರನ್ನು ನೇಮಿಸಿಕೊಂಡಿದ್ದರು ಎಂದು ಅವರು ಹೇಳಿದರು.

# ಯುಪಿಎಸ್‌ಸಿ ಪರೀಕ್ಷೆಯಲ್ಲಿ ಆಯ್ಕೆ: ಕರ್ನಾಟಕದ 19 ಸಾಧಕರಿಗೆ ಸರ್ಕಾರದ ಅಭಿನಂದನೆ

## ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಗ್ರಾಮೀಣ ವಿದ್ಯಾರ್ಥಿಗಳಿಗೆ ಮತ್ತಷ್ಟು ಪ್ರೋತ್ಸಾಹ ಅಗತ್ಯ: ಕೃಷಿ ಸಚಿವ ಎನ್.ಚಲುವರಾಯ ಸ್ವಾಮಿ

**ಬೆಂಗಳೂರು,ಮಾ.16:** ಇತ್ತೀಚಿನ ದಿನಗಳಲ್ಲಿ ಗ್ರಾಮೀಣ ಭಾಗದ ಅಭ್ಯರ್ಥಿಗಳು ಯುಪಿಎಸ್‌ಸಿ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಉತ್ತಮ ಸಾಧನೆ ಮಾಡುತ್ತಿದ್ದು, ಇದು ಉತ್ತಮ ಬೆಳವಣಿಗೆಯಾಗಿದೆ. ಗ್ರಾಮೀಣ ಪ್ರದೇಶದವರಿಗೆ ಮತ್ತಷ್ಟು ಪ್ರೋತ್ಸಾಹ ನೀಡುವ ಅಗತ್ಯವಿದೆ ಎಂದು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಹೇಳಿದ್ದಾರೆ.




ನಗರದ ಪುಟ್ಟಣ್ಣ ಚೆಟ್ಟಿ ಪುರಭವನದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ 2025–26 ರ ಯುಪಿಎಸ್‌ಸಿ ಪರೀಕ್ಷೆಯಲ್ಲಿ ಇಂಡಿಯಾ ಫಾರ್ ಐಎಎಸ್ ಅಕಾಡೆಮಿಯಲ್ಲಿ ಆಯ್ಕೆಯಾದ ರಾಜ್ಯದ 19 ಸಾಧಕರನ್ನು ಅಭಿನಂದಿಸಿ ಮಾತನಾಡಿದ ಅವರು, ನಾಗರಿಕ ಸೇವೆ ಅತ್ಯಂತ ಶ್ರೇಷ್ಠ ಮತ್ತು ಪರಮೋಚ್ಚ ಅವಕಾಶವಾಗಿದೆ. ಪ್ರಧಾನಿ ನೇತೃತ್ವದಲ್ಲಿ ಕೈಗೊಂಡ ತೀರ್ಮಾನವನ್ನು ಆದೇಶದ ಮೂಲಕ ಜಾರಿ ಮಾಡುವವರು ಅಧಿಕಾರಿಗಳು. ಅಧಿಕಾರಿಗಳಿಗೆ ಸಂವಿಧಾನ ಅಷ್ಟೊಂದು ಪರಮಾಧಿಕಾರ ನೀಡಿದೆ. ನಾಗರಿಕ ಸೇವೆಯಿಂದ ಬಹಳಷ್ಟು ಜನ ಉತ್ತಮ ಕೆಲಸ ಮಾಡಿದ್ದಾರೆ ಎಂದರು.

ಅಧಿಕಾರಿಗಳು ಸಾಮಾನ್ಯ ಪ್ರಜ್ಞೆ ಇಟ್ಟುಕೊಂಡು ಕೆಲಸ ಮಾಡಬೇಕು. ಜನಸಾಮಾನ್ಯರಿಗೆ ಸೇವೆ ಸಲ್ಲಿಸಲು ನಿಮಗೆ ಆಕಾಶವೇ ಮಿತಿಯಾಗಿದೆ. ತಾಳ್ಮೆಯಿಂದ, ವಿವೇಚನೆಯಿಂದ ಕೆಲಸ ಮಾಡಬೇಕು. ಉತ್ತಮ ವಿಧಾನಗಳನ್ನು ಅಳವಡಿಸಿಕೊಂಡರೆ ಉತ್ತಮ ಕೆಲಸ ಮಾಡಲು ನೆರವಾಗಲಿದೆ ಎಂದು ಎನ್. ಚಲುವರಾಯಸ್ವಾಮಿ ಕಿವಿಮಾತು ಹೇಳಿದರು.

ಬೆಂಗಳೂರಿನ ಚಂದ್ರಾ ಲೇಔಟ್ ನಲ್ಲಿ ಸ್ಥಾಪನೆಯಾದ ಇಂಡಿಯಾ ಫಾರ್ ಐಎಎಸ್ ಅಕಾಡೆಮಿ ಕಡಿಮೆ ಶುಲ್ಕದಲ್ಲಿ ಉನ್ನತ ಗುಣಮಟ್ಟದ ಮಾರ್ಗದರ್ಶನ ಮತ್ತು ತರಬೇತಿ ನೀಡುತ್ತಿದೆ. 2025–26ರ ಕೇಂದ್ರ ಲೋಕಸೇವಾ ಆಯೋಗದ ನಾಗರಿಕ ಸೇವಾ ಪರೀಕ್ಷೆಯಲ್ಲಿ ಒಟ್ಟು ಕರ್ನಾಟಕದಿಂದ 25 ಅಭ್ಯರ್ಥಿಗಳು ಯಶಸ್ವಿಯಾಗಿದ್ದು, ಇಂಡಿಯಾ ಫಾರ್ ಐಎಎಸ್ ಅಕಾಡೆಮಿಯಿಂದ ಬೇರೆ ಬೇರೆ ಹಂತಗಳಲ್ಲಿ ತರಬೇತಿ ಪಡೆದ 19 ಅಭ್ಯರ್ಥಿಗಳು ಯಶಸ್ವಿಯಾಗಿದ್ದಾರೆ.

ಹಿರಿಯ ನಿವೃತ್ತ ಐಎಎಸ್ ಅಧಿಕಾರಿ ಡಾ.ಸಿ.ಎಸ್ ಕೇದಾರ್ ಇಂಡಿಯಾ ಫಾರ್ ಅಕಾಡೆಮಿಯ ಆಡಳಿತ ಮಂಡಳಿ ಅಧ್ಯಕ್ಷರಾಗಿದ್ದು, ನಿವೃತ್ತ ಐಎಫ್‌ಎಸ್ ಅಧಿಕಾರಿ ಡಾ. ಜಿ ಎನ್ ಶ್ರೀಕಂಠಯ್ಯ ಉಪಾಧ್ಯಕ್ಷರಾಗಿದ್ದಾರೆ. ಶ್ರೀನಿವಾಸ್ ಪಿ ಸಿ ಸಹ ಸಂಸ್ಥಾಪಕ ಮತ್ತು ಮುಖ್ಯ ಕಾರ್ಯ ನಿರ್ವಹಣಾ ಅಧಿಕಾರಿಯಾಗಿ ಸಂಸ್ಥೆಯನ್ನು ಮುನ್ನಡೆಸುತ್ತಿದ್ದಾರೆ.

ನಿರ್ದೇಶಕರಾಗಿ ನವೀನ್ ಕೆ ಎಂ. ನಯನ್‌ಗೌಡ, ಪ್ರಶಾಂತ್ ಶ್ರೀನಿವಾಸ್, ಸಂದೀಪ್ ಹಾಗೂ ಆಡಳಿತ ಅಧಿಕಾರಿಗಳು ಈ ಸಂಸ್ಥೆಯಲ್ಲಿ ಮಹತ್ವದ ಪಾತ್ರ ನಿಭಾಯಿಸುತ್ತಿದ್ದಾರೆ.

# ದುಬೈ ವಿಮಾನ ನಿಲ್ದಾಣದ ಬಳಿ ಡ್ರೋನ್ ದಾಳಿ

## ಬೆಂಗಳೂರು, ಮಂಗಳೂರಿನಿಂದ ವಿಮಾನ ಆಗಮನ-ನಿರ್ಗಮನದಲ್ಲಿ ವ್ಯತ್ಯಯ

**ಬೆಂಗಳೂರು, ಮಾ.16:** ದುಬೈ ವಿಮಾನ ನಿಲ್ದಾಣದ ಬಳಿ ಡ್ರೋನ್ ದಾಳಿಯಿಂದಾಗಿ ಭಾರತದಿಂದ ದುಬೈಗೆ ಸಂಚರಿಸಬೇಕಿದ್ದ ವಿಮಾನಗಳು ರದ್ದಾಗಿವೆ. ಏರ್ ಇಂಡಿಯಾ, ಏರ್ ಇಂಡಿಯಾ ಎಕ್ಸ್‌ಪ್ರೆಸ್ ಸೇವೆಗಳು ಸ್ಥಗಿತಗೊಂಡಿದ್ದು, ಬೆಂಗಳೂರಿನ ಕೆಂಪೇಗೌಡ ವಿಮಾನ ನಿಲ್ದಾಣದಿಂದ 24 ಹಾಗೂ ಮಂಗಳೂರಿನಿಂದ ಕೆಲ ವಿಮಾನಗಳ ಹಾರಾಟದಲ್ಲಿ ವ್ಯತ್ಯಯವಾಗಿದೆ.




ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿ ಬಳಿಯ ಕೆಂಪೇಗೌಡ ಏರ್‌ಪೋರ್ಟ್‌ನಿಂದ ನಿರ್ಗಮನ ಮತ್ತು ಆಗಮಿಸಬೇಕಿದ್ದ ಒಟ್ಟು 24 ವಿಮಾನಗಳ ಹಾರಾಟ ಕ್ಯಾನ್ಸಲ್ ಆಗಿವೆ. ಕೆಂಪೇಗೌಡ ಏರ್‌ಪೋರ್ಟ್‌ನಿಂದ ನಿರ್ಗಮಿಸಬೇಕಿದ್ದ 11 ಮತ್ತು ಅರಬ್ ದೇಶಗಳಿಂದ ಕೆಐಎಬಿಗೆ ಆಗಮಿಸಬೇಕಿದ್ದ 13 ವಿಮಾನಗಳು ರದ್ದಾಗಿವೆ.

ಅಬುಧಾಬಿ, ರಿಯಾದ್, ಜಿಡ್ಡಾ, ದಮಾನ್, ದುಬೈ ಹಾಗೂ ದೋಹಾದಿಂದ ಕೆಐಎಬಿಗೆ ಆಗಮಿಸಿದ್ದ ವಿಮಾನಗಳು ರದ್ದಾಗಿವೆ ಎನ್ನಲಾಗಿದೆ.

ಏರ್ ಇಂಡಿಯಾ, ಏರ್ ಇಂಡಿಯಾ ಎಕ್ಸಪ್ರೆಸ್ ವಿಮಾನಗಳ ಹಾರಾಟ ಸ್ಥಗಿತಗೊಂಡಿದ್ದು, ಪ್ರಯಾಣಿಕರು ಯಾವುದೇ ಹೆಚ್ಚುವರಿ ಶುಲ್ಕವಿಲ್ಲದೆ ಭವಿಷ್ಯದ ಬೇರೆ ದಿನಾಂಕಕ್ಕೆ ತಮ್ಮ ಪ್ರಯಾಣವನ್ನು ಮರುನಿಗದಿ ಮಾಡಿಕೊಳ್ಳಲು ಅವಕಾಶ ನೀಡಲಾಗಿದೆ. ಪ್ರಯಾಣ ಬೇಡವೆನ್ನುವವರು ಟಿಕೆಟ್ ರದ್ದುಗೊಳಿಸಿ ಪೂರ್ಣ ಹಣವನ್ನು ಮರಳಿ ಪಡೆಯಬಹುದು

# ಜಾಹೀರಾತು ಫಲಕ ಶುಲ್ಕದ ಮೇಲೆ ತೆರಿಗೆ: ತಿದ್ದುಪಡಿ ಮಸೂದೆ ಅಂಗೀಕಾರ

**ಬೆಂಗಳೂರು, ಮಾ.16:** ಹೊರಾಂಗಣ ಜಾಹೀರಾತುಗಳನ್ನು ನಿಯಂತ್ರಿಸುವ ಮತ್ತು ಪುರಸಭೆಗಳು ರಾಜ್ಯಾದ್ಯಂತ ಹೋರ್ಡಿಂಗ್, ಜಾಹೀರಾತು ಫಲಕಗಳ ಶುಲ್ಕದ ಮೇಲೆ ತೆರಿಗೆ ವಿಧಿಸಲು ಅನುವು ಮಾಡಿಕೊಡುವ ತಿದ್ದುಪಡಿ ಮಸೂದೆಯನ್ನು ಸೋಮವಾರ ವಿಧಾನಸಭೆಯಲ್ಲಿ ಅಂಗೀಕರಿಸಲಾಯಿತು.



ಕಳೆದ ಶುಕ್ರವಾರ ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಅವರು ವಿಧಾನಸಭೆಯಲ್ಲಿ ಮುನ್ಸಿಪಾಲಿಟಿಗಳು ಮತ್ತು ಕೆಲವು ಇತರ ಕಾನೂನು(ತಿದ್ದುಪಡಿ) ವಿಧೇಯಕ–2026 ಅನ್ನು ಮಂಡಿಸಿದ್ದರು. ಚರ್ಚೆಯ ಸಮಯದಲ್ಲಿ ಸದಸ್ಯರಿಗೆ ಉತ್ತರಿಸಿದ ಸಚಿವ ಬೈರತಿ ಸುರೇಶ್ ಅವರು, ಅನಧಿಕೃತ ಹೋರ್ಡಿಂಗ್‌ಗಳನ್ನು ನಿಯಂತ್ರಿಸುವುದು ಮತ್ತು ಸ್ಥಳೀಯ ಸಂಸ್ಥೆಗಳಿಗೆ ಆದಾಯದ ಹರಿವನ್ನು ಖಚಿತಪಡಿಸುವುದು ಮಸೂದೆಯ ಉದ್ದೇಶವಾಗಿದೆ ಎಂದು ಹೇಳಿದರು." ಅನಧಿಕೃತವಾಗಿ ಬೋರ್ಡ್‌ಗಳನ್ನು ಹಾಕಿರುವವರು ಒಂದು ರೂಪಾಯಿ ತೆರಿಗೆ ಪಾವತಿಸುತ್ತಿಲ್ಲ. ನಾವು ಅಂತಹ ಬೋರ್ಡ್‌ಗಳನ್ನು ತೆಗೆದುಹಾಕಿ ಅವರ ವಿರುದ್ಧ ಕ್ರಮ ಕೈಗೊಳ್ಳುತ್ತೇವೆ. ಸರ್ಕಾರಕ್ಕೆ ಆದಾಯ ಸಿಗುವಂತೆ ನಾವು ಅವುಗಳನ್ನು ಟೆಂಡರ್ ಪ್ರಕ್ರಿಯೆಯ ಅಡಿಯಲ್ಲಿ ತರುತ್ತೇವೆ" ಎಂದು ಸಚಿವರು ತಿಳಿಸಿದರು.

ಇದರ ಹೊರತಾಗಿ, ಇತರ ವರ್ಗಗಳಿವೆ. ಕೆಲವು ಬೋರ್ಡ್‌ಗಳು ಸರ್ಕಾರಿ ಭೂಮಿಯಲ್ಲಿವೆ, ಕೆಲವು ಖಾಸಗಿ ಭೂಮಿಯಲ್ಲಿವೆ ಮತ್ತು ಕೆಲವು ಜನರ ಸ್ವಂತ ಆಸ್ತಿಯಲ್ಲಿವೆ. ಇವೆಲ್ಲಕ್ಕೂ ತೆರಿಗೆ ಇದೆ" ಎಂದು ಅವರು ಹೇಳಿದರು. ಚರ್ಚೆಯ ನಂತರ ವಿಧೇಯಕವನ್ನು ಅಂಗೀಕರಿಸಲಾಯಿತು.ಈ ಮಸೂದೆ ಪ್ರಕಾರ ಯಾವುದೇ ಭೂಮಿಯ ಕಟ್ಟಡದ, ಗೋಡೆಯ ಮೇಲೆ ಅಥವಾ ಮೇಲ್ಭಾಗದಲ್ಲಿ ಯಾವುದೇ ಜಾಹೀರಾತನ್ನು ಪ್ರದರ್ಶಿಸುವ, ಅಳವಡಿಸುವ ಅಥವಾ ಉಳಿಸಿಕೊಂಡಿರುವ ಅಥವಾ ಯಾವುದೇ ರೀತಿಯಲ್ಲಾಗಲಿ ಯಾವುದೇ ಸಾರ್ವಜನಿಕ ಇಲ್ಲವೇ ಖಾಸಗಿ ಸ್ಥಳದಲ್ಲಾಗಲಿ ಸಾರ್ವಜನಿಕರ ದೃಷ್ಟಿಗೆ ಬೀಳುವಂತೆ ಯಾವುದೇ ಜಾಹೀರಾತನ್ನು ಪ್ರದರ್ಶಿಸುವ ಪ್ರತಿಯೊಬ್ಬ ವ್ಯಕ್ತಿಯು, ಹಾಗೆ ಪ್ರದರ್ಶಿಸಿರುವ ಪ್ರತಿಯೊಂದು ಜಾಹಿರಾತಿನ ಮೇಲೆ, ಪಾಲಿಕೆ ಮಂಡಳಿ (municipal council) ನಿರ್ಣಯದ ಮೂಲಕ ನಿರ್ಧರಿಸಿದ ದರಗಳಲ್ಲಿ ಮತ್ತು ಅಂಥ ವಿಧಾನದಲ್ಲಿ ಹಾಗೂ ಅಂಥ ವಿನಾಯಿತಿಗಳಿಗೊಳಪಟ್ಟು ತೆರಿಗೆಯನ್ನು ಪಾವತಿ ಮಾಡಬೇಕು. ಜಾಹೀರಾತು ಶುಲ್ಕ ವಿಧಿಸುವುದನ್ನು ಪಾಲಿಕೆ ಮಂಡಳಿ ನಿರ್ಧರಿಸಿದ ತರುವಾಯ ಪಾಲಿಕೆ ಮಂಡಳಿ ಲಿಖಿತ ಅನುಮತಿ ಇಲ್ಲದೆ ಪೌರ ಪ್ರದೇಶದೊಳಗಿನ ಯಾವುದೇ ಭೂಮಿಯ ಕಟ್ಟಡದ, ಗೋಡೆಯ, ಜಾಹೀರಾತು ಫಲಕಗಳ ಅಥವಾ ರಚನೆಯ ಮೇಲೆ ಅಥವಾ ಅದರ ಮೇಲ್ಭಾಗದಲ್ಲಿ ಯಾವುದೇ ಜಾಹೀರಾತನ್ನು ಪ್ರದರ್ಶಿಸುವಂತಿಲ್ಲ, ಅಳವಡಿಸುವಂತಿಲ್ಲ ಅಥವಾ ಉಳಿಸಿಕೊಳ್ಳುವಂತಿಲ್ಲ. ಯಾವುದೇ ಸ್ಥಳದಲ್ಲಿ ಯಾವುದೇ ರೀತಿಯಲ್ಲೇ ಆಗಲಿ ಪ್ರದರ್ಶಿಸುವಂತಿಲ್ಲ.ಪೌರ ಪಾಲಿಕೆಯು ರಚಿಸಿದ ಯಾವುದೇ ಉಪವಿಧಿಯನ್ನು ಜಾಹೀರಾತು ಉಲ್ಲಂಘಿಸಿದರೆ ಅಥವಾ ಜಾಹೀರಾತಿಗೆ ಸಂಬಂಧಿಸಿದಂತೆ ಶುಲ್ಕ ಯಾವುದಾದರೂ ಬಾಕಿ ಇದ್ದು, ಅದನ್ನು ಪಾವತಿ ಮಾಡಿಲ್ಲದಿದ್ದರೆ ಜಾಹೀರಾತು ಅನುಮತಿಯನ್ನು ನೀಡುವಂತಿಲ್ಲ ಎಂದು ಮಸೂದೆಯಲ್ಲಿ ನಿಯಮ ರೂಪಿಸಲಾಗಿದೆ.

ಅಧಿಕೃತ ಅಥವಾ ಅನಧಿಕೃತ ಜಾಹೀರಾತು ಶುಲ್ಕ ಮತ್ತು ದಂಡವನ್ನು ಪಾವತಿಸಲು ವಿಳಂಬವಾದರೆ, ದಂಡವು ಬಾಕಿಯಾದ ದಿನಾಂಕದಿಂದ ಅದನ್ನು ಪಾವತಿಸುವ ದಿನಾಂಕದವರೆಗೆ ವಾರ್ಷಿಕವಾಗಿ ಶೇ.18 ಬಡ್ಡಿ ದರದಲ್ಲಿ ಪಾವತಿಸಲು ಹೊಣೆಗಾರನಾಗಿರುತ್ತಾನೆ. ಯಾವುದೇ ಅನಧಿಕೃತ ಜಾಹೀರಾತು, ದಂಡ ಮತ್ತು ಜುಲ್ಮಾನೆಯನ್ನು ಸಹ ಪಾವತಿಸಲು

# ಆರೋಗ್ಯ ಸಂಜೀವಿನಿ: ಮಹಾನಗರ ಪಾಲಿಕೆ ಸಿಬ್ಬಂದಿಗೂ ವಿಸ್ತರಿಸಿ ಹೈಕೋರ್ಟ್ ಆದೇಶ

**ಬೆಂಗಳೂರು, ಮಾ.16:** ರಾಜ್ಯ ಸರ್ಕಾರದ ನೌಕರರಿಗೆ ನೀಡಲಾಗುತ್ತಿರುವ ಆರೋಗ್ಯ ಸಂಜೀವಿನಿ ವೈದ್ಯಕೀಯ ಸೌಲಭ್ಯವನ್ನು ಕರ್ನಾಟಕದ ಮಹಾನಗರ ಪಾಲಿಕೆಗಳ ಅಧಿಕಾರಿ ಹಾಗೂ ನೌಕರರಿಗೂ ವಿಸ್ತರಿಸುವಂತೆ ಹೈಕೋರ್ಟ್ ಮಹತ್ವದ ಆದೇಶ ನೀಡಿದೆ. ಕರ್ನಾಟಕ ರಾಜ್ಯ ಮಹಾನಗರ ಪಾಲಿಕೆಗಳ ನೌಕರರ ಸಂಘದ ರಾಜ್ಯಾಧ್ಯಕ್ಷ ಅಮೃತ್‌ರಾಜ್ ಸಲ್ಲಿಸಿದ್ದ ಮೇಲ್ಮನವಿಯನ್ನು ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಸ್.ಆರ್. ಕೃಷ್ಣಕುಮಾರ್ ಅವರ ಪೀಠ ಈ ತೀರ್ಪು ನೀಡಿದೆ.





ರಾಜ್ಯದ ಮಹಾನಗರ ಪಾಲಿಕೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ ಸರ್ಕಾರದ ನೌಕರರಂತೆ ಆರೋಗ್ಯ ಚಿಕಿತ್ಸಾ ಸೌಲಭ್ಯ ದೊರೆಯುತ್ತಿಲ್ಲ ಎಂಬ ಆಕ್ಷೇಪದ ಹಿನ್ನೆಲೆ ಈ ಅರ್ಜಿ ಸಲ್ಲಿಸಲಾಗಿತ್ತು. ಸಂಘದ ವಾದವನ್ನು ಆಲಿಸಿದ ನ್ಯಾಯಾಲಯ, ಎರಡು ತಿಂಗಳೊಳಗೆ ಮಹಾನಗರ ಪಾಲಿಕೆಗಳ ಅಧಿಕಾರಿ, ನೌಕರರು ಮತ್ತು ಅವರ ಕುಟುಂಬ ಸದಸ್ಯರಿಗೆ ಆರೋಗ್ಯ ಚಿಕಿತ್ಸಾ ಸೌಲಭ್ಯವನ್ನು ಜಾರಿಗೊಳಿಸುವಂತೆ ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಿದೆ. ಕರ್ನಾಟಕದ ದಾವಣಗೆರೆ, ಮೈಸೂರು, ಬೆಳಗಾವಿ, ವಿಜಯಪುರ, ಮಂಗಳೂರು, ಬಳ್ಳಾರಿ, ಹುಬ್ಬಳ್ಳಿ–ಧಾರವಾಡ, ಶಿವಮೊಗ್ಗ, ಕಲಬುರಗಿ ಹಾಗೂ ತುಮಕೂರು ಮಹಾನಗರ ಪಾಲಿಕೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಾವಿರಾರು ಅಧಿಕಾರಿ ಮತ್ತು ನೌಕರರಿಗೆ ಈ ತೀರ್ಪಿನಿಂದ ಪ್ರಯೋಜನವಾಗಲಿದೆ. ಎಂದು ಸಂಘದ ಅಧ್ಯಕ್ಷ ಅಮೃತ್‌ರಾಜ್ ತಿಳಿಸಿದ್ದಾರೆ. ಹೈಕೋರ್ಟ್ ನೀಡಿರುವ ಈ ತೀರ್ಪು ಮಹಾನಗರ ಪಾಲಿಕೆ ನೌಕರರಿಗೆ ದೊರೆತ ಐತಿಹಾಸಿಕ ವಿಜಯ ಎಂದು ಅವರು ಸಂತೋಷ ವ್ಯಕ್ತಪಡಿಸಿದ್ದಾರೆ.

# ನೈಸ್ ಯೋಜನೆ: ಉಪಸಮಿತಿ ವರದಿ ಆಧರಿಸಿ ಕ್ರಮ– ಸತೀಶ್ ಜಾರಕಿಹೊಳಿ

**ಬೆಂಗಳೂರು, ಮಾ.16:** ನೈಸ್ ಕಾರಿಡಾರ್ ರಸ್ತೆ ಯೋಜನೆಗೆ ಸಂಬಂಧಿಸಿದಂತೆ ಸಚಿವ ಸಂಪುಟದ ಉಪಸಮಿತಿ ರಚನೆಯಾಗಿದ್ದು, ಉಪಸಮಿತಿಯ ವರದಿ ಆಧಾರದ ಮೇಲೆ ನೈಸ್ ಯೋಜನೆಯ ಬಗ್ಗೆ ಮುಂದಿನ ತೀರ್ಮಾನಗಳನ್ನು ಕೈಗೊಳ್ಳಲಾಗುವುದು ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ವಿಧಾನಸಭೆಯಲ್ಲಿಂದು ತಿಳಿಸಿದರು.

ಪ್ರಶ್ನೋತ್ತರ ಅವಧಿಯಲ್ಲಿ ಸದಸ್ಯ ಸೋಮಶೇಖರ್ ಅವರಿಗೆ ಉತ್ತರಿಸಿದ ಅವರು, ನೈಸ್ ಯೋಜನೆಗೆ ಸಂಬಂಧಿಸಿದಂತೆ ಗೃಹ ಸಚಿವ ಡಾ.ಜಿ. ಪರಮೇಶ್ವರ್ ನೇತೃತ್ವದಲ್ಲಿ ಉಪಸಮಿತಿ ರಚನೆ ಮಾಡಿದ್ದೇವೆ. ಈ ಉಪಸಮಿತಿ ನೀಡುವ ವರದಿ ಆಧರಿಸಿ ನೈಸ್ ಯೋಜನೆಯನ್ನು ಮುಂದುವರೆಸಬೇಕೇ, ಬೇಡವೇ ಎಂಬ ಬಗ್ಗೆ ತೀರ್ಮಾನ ಮಾಡುತ್ತೇವೆ ಎಂದರು. ನೈಸ್ ರಸ್ತೆ ಹಾದು ಹೋಗುವ ವಿಧಾನಸಭಾ ಸದಸ್ಯರುಗಳನ್ನು ಉಪಸಮಿತಿ ಸಭೆಗೆ ಕರೆಸಿ ಅವರ ಅಹವಾಲನ್ನು ಆಲಿಸುತ್ತೇವೆ. ನಂತರ ನೈಸ್ ಯೋಜನೆಯ ಬಗ್ಗೆ ಒಂದು ತೀರ್ಮಾನ ಮಾಡುತ್ತೇವೆ ಎಂದು ಹೇಳಿದರು. ಈಗ ನಿರ್ಮಾಣವಾಗಿರುವ ನೈಸ್ ರಸ್ತೆಯ ಸೇತುವೆಗಳನ್ನು ದುರಸ್ತಿಗೊಳಿಸುವಂತೆ 2 ಬಾರಿ ಪತ್ರ ಬರೆದಿದ್ದೇವೆ. ನಮಗೆ ಇನ್ನು ಉತ್ತರ ಬಂದಿಲ್ಲ. ಈಗ ಮತ್ತೊಮ್ಮೆ ನೈಸ್ ಸಂಸ್ಥೆಗೆ ಪತ್ರ ಬರೆಯಲಾಗಿದೆ ಎಂದು ಅವರು ಹೇಳಿದರು. ಇದಕ್ಕೂ ಮೊದಲು ಪ್ರಶ್ನೆ ಕೇಳಿದ್ದ ಎಸ್.ಟಿ. ಸೋಮಶೇಖರ್ ರವರು ನೈಸ್ ಸಂಸ್ಥೆಯವರು ಸರ್ಕಾರದ ಮಾತುಗಳನ್ನು ಕೇಳುತ್ತಿಲ್ಲ, ಸೇತುವೆಗಳನ್ನು ದುರಸ್ತಿ ಮಾಡುತ್ತಿಲ್ಲ, ಲೇಔಟ್ ನಿರ್ಮಾಣಕ್ಕೆ 1700 ಎಕರೆ ಜಮೀನನ್ನು ಪಡೆದಿದ್ದಾರೆ. 30 ವರ್ಷಗಳಾದರೂ ಲೇಔಟ್ ನಿರ್ಮಾಣ ಮಾಡಿ ಜಮೀನು ಕಳೆದುಕೊಂಡ ರೈತರಿಗೆ ನಿವೇಶನ ನೀಡಿಲ್ಲ. ಇವರ ಗುತ್ತಿಗೆ ಅವಧಿ ಮುಗಿದಿದೆ. ಮತ್ತೆ ನವೀಕರಣ ಮಾಡಬೇಡಿ, ಎಲ್ಲವನ್ನು ಸರ್ಕಾರದ ವಶಕ್ಕೆ ಪಡೆದುಕೊಳ್ಳಿ ಎಂದು ಒತ್ತಾಯಿಸಿದ್ದರು.



# ಮಡಿವಾಳರನ್ನು ಪರಿಶಿಷ್ಟ ಜಾತಿಗೆ ಸೇರಿಸುವಂತೆ ಆಗ್ರಹಿಸಿ ಧರಣಿ

■ ಇಸ್ತ್ರಿಪೆಟ್ಟಿಗೆ, ಬಟ್ಟೆ ಶುಚಿಗೊಳಿಸುವ ಪರಿಕರಗಳನ್ನು ಪ್ರದರ್ಶಿಸಿ ಬೃಹತ್ ಹೋರಾಟ

**ಬೆಂಗಳೂರು, ಮಾ.16:** ಮಡಿವಾಳ ಸಮಾಜವನ್ನು ಪರಿಶಿಷ್ಟ ಜಾತಿಗೆ ಸೇರಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ಮಡಿವಾಳರ ಕ್ಷೇಮಾಭಿವೃದ್ಧಿ ಸಂಘ, ಉತ್ತರ ಕರ್ನಾಟಕ ಮಡಿವಾಳರ ಸಂಘದಿಂದ ನಗರದ ಫ್ರೀಡಂಪಾರ್ಕ್‌ನಲ್ಲಿ ಅಹೋರಾತ್ರಿ ಧರಣಿ ಆರಂಭಿಸಲಾಗಿದೆ. ಐದು ಸಾವಿರಕ್ಕೂ ಅಧಿಕ ಮಂದಿ ಸಮುದಾಯದ ಕುಲಕಸುಬು ಇಸ್ತ್ರಿ ಪೆಟ್ಟಿಗೆ, ಬಟ್ಟೆ ಶುಚಿಗೊಳಿಸುವ ಪರಿಕರಗಳೊಂದಿಗೆ ಬೃಹತ್ ಹೋರಾಟ ನಡೆಸಿದರು.

ಮಾಚಿದೇವ ಯೋಗಾನಂದಪುರಿ ಮಹಾ ಸ್ವಾಮೀಜಿ ಆಶೀರ್ವಾದದೊಂದಿಗೆ ಜಗದ್ಗುರು ಡಾ. ಬಸವ ಮಾಚಿದೇವ ಮಹಾಸ್ವಾಮೀಜಿ, ಮುಕ್ತಾನಂದ ಸ್ವಾಮೀಜಿ, ನೇತೃತ್ವದಲ್ಲಿ ಅಹೋರಾತ್ರಿ ಪ್ರತಿಭಟನೆ ನಡೆಸುತ್ತಿವೆ.

ಸಂಘದ ಅಧ್ಯಕ್ಷ ಎಂ.ಕೆ.ಹನುಮಂತಪ್ಪ, ಮಡಿವಾಳ ಸಮಾಜದ ಮುಖಂಡರಾದ ದೀಪಕ್ ವಿ, ದುರ್ಗೇಶ್ ಜಿ.ಮಡಿವಾಳ್, ಎಂ.ಚಂದ್ರಕಾಂತ್, ಕೆ.ಮಲ್ಲಯ್ಯ, ರಾಜು ತಲ್ಲೂರು, ಡಾ.ರವಿಕುಮಾರ್, ಹೆಚ್.ಎಸ್. ವೆಂಕಟೇಶ್, ಪಿ.ರಂಗಸಾಮಯ್ಯ, ಸಂಗಮೇಶ್ ಸೇರಿ ಸಹಸ್ರಾರು ಮಡಿವಾಳ ಸಮಾಜದವರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಎಂ.ಕೆ.ಹನುಮಂತಪ್ಪ ಮಾತನಾಡಿ, ಪರಿಶಿಷ್ಟ ಜಾತಿಗೆ ಸೇರಿಸಬೇಕೆಂಬ ಕೂಗು ಹಲವಾರು ದಶಕಗಳಿಂದ ಇದೆ. ನಮಗೆ ಸಿಗಬೇಕಾದ ಸ್ಥಾನಮಾನ, ಬೇಡಿಕೆ ಈಡೇರಿಕೆಗೆ ಪ್ರಾಮಾಣಿಕ ಪ್ರಯತ್ನವನ್ನು ಇಲ್ಲಿಯವರೆಗೆ ಯಾವುದೇ ಸರ್ಕಾರಗಳು ಮಾಡಿಲ್ಲ. ಪರಿಶಿಷ್ಟರ ಹಕ್ಕಿನಿಂದ ನಾವು ವಂಚಿತರಾಗಿದ್ದು, ಬಲಿಷ್ಠ ಜಾತಿಗಳು ನಮ್ಮ ಸ್ಥಾನವನ್ನು ಆಕ್ರಮಿಸಿಕೊಂಡು ನಮ್ಮ ಸಮಾಜವನ್ನು ಸಂಪೂರ್ಣವಾಗಿ ನಿರ್ಲಕ್ಷಿಸಿದೆ. ನಮ್ಮ ಸಮುದಾಯದಿಂದ ಶಾಸಕರು, ಸಂಸದರಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಮಡಿವಾಳ ಸಮುದಾಯವನ್ನು ಪರಿಶಿಷ್ಟ ಜಾತಿಗೆ ಸೇರಿಸಲು ಮೀನಮೇಷ ಮಾಡುತ್ತಿರುವುದರ ಹಿಂದೆ ರಾಜಕೀಯ ಷಡ್ಯಂತ್ರ ಇದೆ ಎಂದು ಆರೋಪಿಸಿದರು.

**18 ರಾಜ್ಯ, 3 ಕೇಂದ್ರಾಡಳಿತ ಪ್ರದೇಶಗಳಲ್ಲಿ ಜಾರಿ:** ಈಗಾಗಲೇ ದೇಶದ 18 ರಾಜ್ಯಗಳು, 3 ಕೇಂದ್ರಾಡಳಿತ ಪ್ರದೇಶಗಳಲ್ಲಿ ಮಡಿವಾಳ ಜನಾಂಗವನ್ನು ಪರಿಶಿಷ್ಟ ಜಾತಿಯ ಪಟ್ಟಿಗೆ ಸೇರಿಸಲಾಗಿದೆ. ಈ ರಾಜ್ಯಗಳಲ್ಲಿ ರಾಜಕೀಯ, ಶೈಕ್ಷಣಿಕ ಮತ್ತು ಸಾಮಾಜಿಕವಾಗಿ ಜನಾಂಗ ಮುಂದುವರಿದಿದೆ. ಆದರೆ ಕರ್ನಾಟಕದಲ್ಲಿ ಇದು ಸಾಧ್ಯವಾಗಿಲ್ಲ. ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಕುಲಶಾಸ್ತ್ರ ಅಧ್ಯಯನ ಮತ್ತು ಸಂಶೋಧನೆ ಮಾಡಿ ವರದಿ ನೀಡಲು ಮೈಸೂರು ವಿ.ವಿ ಪ್ರೊ. ಡಾ. ಅನ್ನಪೂರ್ಣ ಅವರನ್ನು ನೇಮಿಸಿದ್ದರು. ಆದರೆ ಈ ವರದಿಯನ್ನು ಇಲ್ಲಿಯವರೆಗೆ ಬಂದಿರುವ ಸರ್ಕಾರಗಳು ಪರಿಗಣಿಸಿಲ್ಲ. 2022ರಲ್ಲಿ ಸಚಿವರಾಗಿದ್ದ ಕೋಟಾ ಶ್ರೀನಿವಾಸ ಪೂಜಾರಿ ಅವರು ಈ ವರದಿಯನ್ನು ವಿಧಾನ ಸಭೆಯಲ್ಲಿ ಮಂಡಿಸಬೇಕು ಎನ್ನುವಷ್ಟರಲ್ಲಿ ಚುನಾವಣೆ ಘೋಷಣೆಯಾಯಿತು. ಕುಲಶಾಸ್ತ್ರ ಅಧ್ಯಯನ ವರದಿ ಕಡತವು ಸಮಾಜ ಕಲ್ಯಾಣ ಇಲಾಖೆಯಲ್ಲಿಯೇ ಇಂದಿಗೂ ಕೊಳೆಯುತ್ತಿದೆ ಎಂದರು.

ಸಿದ್ದಗಂಗಾ ಮಠದಲ್ಲಿ ಏ.5ರಂದು ಆಯೋಜನೆ: ಮಾ.31ರವರೆಗೆ ಅರ್ಜಿ ಸಲ್ಲಿಸಲು ಅವಕಾಶ

# ಡಾ.ಶಿವಕುಮಾರ ಸ್ವಾಮೀಜಿ ಜನ್ಮದಿನದ ಅಂಗವಾಗಿ 119 ಮಕ್ಕಳಿಗೆ ನಾಮಕರಣ

**ಬೆಂಗಳೂರು, ಮಾ.16:** ಡಾ. ಶಿವಕುಮಾರ ಮಹಾಸ್ವಾಮೀಜಿ ಟ್ರಸ್ಟ್‌ನಿಂದ ತ್ರಿವಿಧ ದಾಸೋಹಿ, ಶಿವಯೋಗಿಗಳ 119ನೇ ಜನ್ಮದಿನದ ಅಂಗವಾಗಿ ಸಿದ್ದಗಂಗಾ ಮಠದಲ್ಲಿ ಏಪ್ರಿಲ್ 5ರಂದು ಒಂದು ವರ್ಷದೊಳಗಿನ 119 ಮಕ್ಕಳಿಗೆ ನಾಮಕರಣ ಮಹೋತ್ಸವ ಆಯೋಜಿಸಲಾಗಿದೆ. ಸಿದ್ಧಗಂಗಾ ಮಠದ ಸಿದ್ಧಲಿಂಗ ಮಹಾಸ್ವಾಮೀಜಿ ಅವರು ಕಾರ್ಯಕ್ರಮ ಉದ್ಘಾಟಿಸಿ, ಶಿಶುಗಳಿಗೆ ನಾಮಕರಣ ನೆರವೇರಿಸಲಿದ್ದಾರೆ.



ನಾಮಕರಣಗೊಳ್ಳುವ ಮಗುವಿನ ಜನನ ಪ್ರಮಾಣ ಪತ್ರ, ತಂದೆ ಅಥವಾ ತಾಯಿಯ ಆಧಾರ ಕಾರ್ಡ್ ಸಲ್ಲಿಸಬೇಕು. ನಾಮಕರಣಗೊಳ್ಳ ಬಯಸುವ ಮಕ್ಕಳ ವಯಸ್ಸು : ನವಜಾತ ಶಿಶುವಿನಿಂದ 1 ವರ್ಷದೊಳಗಿನ ಮಕ್ಕಳು ಮಾತ್ರ. ಅರ್ಜಿಯೊಂದಿಗೆ ದಾಖಲೆಗಳನ್ನು ಲಗತ್ತು ಮಾಡಬೇಕು.

ತುಮಕೂರಿನ ಸಿದ್ಧಗಂಗಾ ಮಠದಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ಆಸಕ್ತರಿಗೆ ಮಾ.31 ರ ವರೆಗೆ ಅರ್ಜಿ ಸಲ್ಲಿಸಲು ಅವಕಾಶವಿದೆ. ಹೆಚ್ಚಿನ ಮಾಹಿತಿಗೆ 73488 53276 ಮತ್ತು 96630 33418 ಸಂಪರ್ಕಿಸುವಂತೆ

# ಕೆಐಎಯಲ್ಲಿ 39.37 ಲಕ್ಷ ರೂ. ಮೌಲ್ಯದ ಗಾಂಜಾ ಜಪ್ತಿ

**ಬೆಂಗಳೂರು, ಮಾ.16:** ಕೆಂಪೇಗೌಡ ವಿಮಾನ ನಿಲ್ದಾಣದಲ್ಲಿ ಕಸ್ಟಮ್ಸ್ ಅಧಿಕಾರಿಗಳು ಭರ್ಜರಿ ಕಾರ್ಯಾಚರಣೆ ನಡೆಸಿದ್ದು, 39.37 ಲಕ್ಷ ಮೌಲ್ಯದ ಗಾಂಜಾ ಜಪ್ತಿ ಮಾಡಿಕೊಂಡಿದ್ದಾರೆ.



ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ಬಳಿ ಇರುವ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕಸ್ಟಮ್ಸ್ ಅಧಿಕಾರಿಗಳು ಕಾರ್ಯಾಚರಣೆ ನಡೆಸಿದ್ದಾರೆ.39.37 ಲಕ್ಷ ಮೌಲ್ಯದ 1 ಕೆಜಿ 125 ಗ್ರಾಂ ಹೈಡ್ರೋಫೋನಿಕ್ ಗಾಂಜಾ ಜಪ್ತಿ ಮಾಡಿದ್ದಾರೆ.

ಆರೋಪಿಯು ಫೋಟೋ ಫ್ರೇಮ್‌ನಲ್ಲಿ ಗಾಂಜಾ ಅಡಗಿಸಿ ಅಕ್ರಮವಾಗಿ ಸಾಗಿಸುತ್ತಿದ್ದ. ಬ್ಯಾಂಕಾಕ್ ನಿಂದ ಬೆಂಗಳೂರಿಗೆ ಬಂದಿದ್ದ ವ್ಯಕ್ತಿಯ ಬಳಿ ಗಾಂಜಾ ಪತ್ತೆಯಾಗಿದೆ. ಆರೋಪಿಯನ್ನು ಗಾಂಜಾ ಸಮೇತ ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ. ಎನ್‌ಡಿಪಿಎಸ್ ಕಾಯ್ದೆಯ ಅಡಿ ಅಧಿಕಾರಿಗಳಿಂದ ಪ್ರಕರಣ ದಾಖಲಾಗಿದೆ.

# ಮಂತ್ರಿ ಡೆವಲಪರ್ಸ್ ಸಂಸ್ಥೆ ಮೇಲೆ ಇ.ಡಿ. ದಾಳಿ

**ಬೆಂಗಳೂರು, ಮಾ.16:** ರಿಯಲ್ ಎಸ್ಟೇಟ್ ಸಂಸ್ಥೆ ಮಂತ್ರಿ ಡೆವಲಪರ್ಸ್ ಮೇಲೆ ಜಾರಿ ನಿರ್ದೇಶನಾಲಯ ಅಧಿಕಾರಿಗಳು ದಾಳಿ ನಡೆಸಿ ದಾಖಲೆಗಳ ಪರಿಶೀಲನೆ ನಡೆಸುತ್ತಿದ್ದಾರೆ. ಅಕ್ರಮ ಹಣ ವರ್ಗಾವಣೆ ಆರೋಪದ ಹಿನ್ನೆಲೆ ಇಡಿ ಅಧಿಕಾರಿಗಳು ಸಂಸ್ಥೆಯ ಕಚೇರಿ ಹಾಗೂ ಸಂಸ್ಥಾಪಕ ಸುನಿಲ್ ಮಂತ್ರಿ ನಿವಾಸಗಳಲ್ಲಿ ಶೋಧ ನಡೆಸಿದ್ದಾರೆ.




1999ರಲ್ಲಿ ಸ್ಥಾಪನೆಯಾದ ಮಂತ್ರಿ ಡೆವಲಪರ್ಸ್ ಸಂಸ್ಥೆ ಬೆಂಗಳೂರು ಕೇಂದ್ರ ಕಚೇರಿಯೊಂದಿಗೆ ಚೆನ್ನೈ, ಹೈದರಾಬಾದ್ ಮತ್ತು ಪುಣೆ ನಗರಗಳಲ್ಲಿ ಕಾರ್ಯನಿರ್ವಹಿಸುತ್ತಿದೆ. ವಸತಿ, ವಾಣಿಜ್ಯ, ರಿಟೇಲ್ ಹಾಗೂ ಇತರೆ ಕ್ಷೇತ್ರಗಳಲ್ಲಿ ಹಲವು ಯೋಜನೆಗಳನ್ನು ಸಂಸ್ಥೆ ಕೈಗೊಂಡಿದೆ. ಇದೀಗ ಬೆಂಗಳೂರಿನ ವಿಠಲ ಮಲ್ಯ ರಸ್ತೆಯಲ್ಲಿರುವ ಕಚೇರಿ ಹಾಗೂ ಸ್ಥಾಪಕರ ಮನೆ ಮೇಲೂ ದಾಳಿ ನಡೆಸಿದೆ. ಬೆಳಗ್ಗೆ ದೆಹಲಿ ಕಚೇರಿಯಿಂದ ಬಂದ 10ಕ್ಕೂ ಹೆಚ್ಚು ಅಧಿಕಾರಿಗಳು ಆರು ವಾಹನಗಳಲ್ಲಿ ಆಗಮಿಸಿ ಕಚೇರಿ ಹಾಗೂ ಸಂಬಂಧಿತ ಸ್ಥಳಗಳಲ್ಲಿ ದಾಖಲೆಗಳನ್ನು ಪರಿಶೀಲಿಸುತ್ತಿದ್ದಾರೆ. ಹಣ ಅಕ್ರಮ ವರ್ಗಾವಣೆ ತಡೆ ಕಾಯ್ದೆ ಅಡಿ ಪ್ರಕರಣ ದಾಖಲಿಸಿಕೊಂಡಿರುವ ಇಡಿ ತಂಡ, ಹಣಕಾಸು ವ್ಯವಹಾರಗಳಿಗೆ ಸಂಬಂಧಿಸಿದ ದಾಖಲೆಗಳನ್ನು ವಶಕ್ಕೆ ಪಡೆದು ಪರಿಶೀಲನೆ ನಡೆಸುತ್ತಿದೆ.ಇದೇ ರೀತಿ ಹಣಕಾಸಿನ ಪ್ರಕರಣದಲ್ಲಿ ಇಡಿಯು ಈಗಾಗಲೇ 2022ರಲ್ಲಿ ದಾಳಿ ನಡೆಸಿದ್ದು, 2023ರಲ್ಲಿ 300 ಕೋಟಿ ರೂಪಾಯಿ ಮೌಲ್ಯದ ಆಸ್ತಿಯನ್ನು ಜಪ್ತಿ ಮಾಡಿತ್ತು. ಅಲ್ಲದೇ ಗ್ರಾಹಕರಿಂದ ಅಪಾರ್ಟ್‌ಮೆಂಟ್‌ಗಾಗಿ ಹಣ ಪಡೆದು ಅದನ್ನು ವಿದೇಶಗಳಲ್ಲಿ ಹೂಡಿಕೆ ಮಾಡಿರುವ ಆರೋಪವೂ ಕೇಳಿಬಂದಿತ್ತು.

ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ ಇದೀಗ ಮತ್ತೆ ದಾಳಿ ನಡೆಸಿ ಅಧಿಕಾರಿಗಳು ದಾಖಲೆಗಳನ್ನು ಪರಿಶೀಲಿಸುತ್ತಿದ್ದಾರೆ.



ಸೋಮವಾರ ನಡೆದ ವಿಧಾನಸಭಾ ಅಧಿವೇಶನವನ್ನು ವಿದ್ಯಾರ್ಥಿಗಳು ಕುತೂಹಲದಿಂದ ವೀಕ್ಷಿಸಿದರು.



ಬೆಂಗಳೂರಿನ ಕೆಪಿಸಿಸಿ ಕಚೇರಿಯಲ್ಲಿ ಸೋಮವಾರ ಮಹಿಳಾ ಕಾಂಗ್ರೆಸ್ ರಾಜ್ಯ ಕಾರ್ಯಕಾರಿ ಸಮಿತಿ ಸಭೆ ಮತ್ತು ತರಬೇತಿ ಕಾರ್ಯಾಗಾರದಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್ ಪಾಲ್ಗೊಂಡರು.

# ಬಾಗಲಕೋಟೆ ಉಪಚುನಾವಣೆ ನಾಮಪತ್ರ ಸಲ್ಲಿಕೆಗೆ ಮಾ.23 ಕಡೇದಿನ

### ಉಮೇದುವಾರಿಕೆ ಹಿಂಪಡೆಯಲು ಮಾ.26 ಅಂತಿಮ ದಿನ: ಜಿಲ್ಲಾ ಚುನಾವಣಾಧಿಕಾರಿ ಸಂಗಪ್ಪ ಮಾಹಿತಿ

**ಬಾಗಲಕೋಟೆ, ಮಾ.16:** ಎಚ್. ವೈ. ಮೇಟಿ ಅವರ ನಿಧನದಿಂದ ತೆರವಾಗಿದ್ದ ಬಾಗಲಕೋಟೆ ಮತಕ್ಷೇತ್ರದಲ್ಲಿನ ಉಪ ಚುನಾವಣೆ ದಿನಾಂಕ ಘೋಷಣೆ ಆಗಿದ್ದು, ಏಪ್ರಿಲ್ 9 ರಂದು ಮತದಾನ ನಡೆಯಲಿದೆ. ಅದಕ್ಕೆ ಸಂಬಂದಪಟ್ಟ ಎಲ್ಲಾ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾ ಅಧಿಕಾರಿ ಸಂಗಪ್ಪ ತಿಳಿಸಿದರು. ಜಿಲ್ಲಾಡಳಿತ ಭವನದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಚುನಾವಣಾ ನೀತಿಸಂಹಿತೆ ಜಾರಿ ಆಗಿದೆ. ಮಾರ್ಚ್ 23 ನಾಮಪತ್ರ ಸಲ್ಲಿಕೆಗೆ ಕೊನೆಯ ದಿನವಾಗಿದೆ. ಮಾರ್ಚ್ 24 ರಂದು ನಾಮಪತ್ರ ಪರಿಶೀಲನೆ ನಡೆಯಲಿದೆ. 26 ರಂದು ನಾಮಪತ್ರ ಹಿಂದಕ್ಕೆ ಪಡೆಯಲು ಕೊನೆಯ ದಿನವಾಗಿದೆ. ಮೇ 4ರಂದು ಮತ ಎಣಿಕೆ ಇದೆ. ಮೇ 6ರ ವರೆಗೆ ನೀತಿಸಂಹಿತೆ ಜಾರಿಯಲ್ಲಿ ಇರಲಿದೆ. ಇದು ಇಡೀ ಜಿಲ್ಲೆಯಾದ್ಯಂತ ಅನ್ವಯವಾಗಲಿದೆ ಎಂದು ಹೇಳಿದರು.

ಒಟ್ಟು 319 ಮತ ಕೇಂದ್ರಗಳನ್ನು ಮಾಡಲಾಗಿದೆ. 2,59,260 ಒಟ್ಟು ಮತದಾರರಲ್ಲಿ 1,26,761 ಪುರುಷರು, 1,32,476 ಮಹಿಳಾ ಮತದಾರರು ಇದ್ದಾರೆ. ಚುನಾವಣೆಗೆ ಸ್ಪರ್ಧೆ ಮಾಡುವ ಅಭ್ಯರ್ಥಿಗಳು ಒಟ್ಟು 40 ಲಕ್ಷ ರೂ.ಗಳವರೆಗೆ ವೆಚ್ಚ ಮಾಡಬಹುದು ಎಂದು ಜಿಲ್ಲಾಧಿಕಾರಿ ಸಂಗಪ್ಪ ತಿಳಿಸಿದರು.ಇದೇ ಸಮಯದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶಶಿಧರ ಕುರೇರ ಅವರು ಮಾತನಾಡಿ, 50 ಸಾವಿರ ರೂಪಾಯಿಗಳಿಗಿಂತ ಹೆಚ್ಚಿನ ಹಣ ತೆಗೆದುಕೊಂಡು ಹೋಗಬೇಕಾದರೆ ದಾಖಲೆ ಬೇಕಾಗುತ್ತದೆ. ಇಲ್ಲವಾದಲ್ಲಿ ವಶಕ್ಕೆ ತೆಗೆದುಕೊಳ್ಳಲಾಗುವುದು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ಧಾರ್ಥ ಗೋಯಲ್ ಮಾತನಾಡಿ, ಚುನಾವಣೆಗೆ ಸಂಬಂದಪಟ್ಟ ಎಲ್ಲಾ ತಾಲೂಕಿನ ಗಡಿಭಾಗದಲ್ಲಿ ಚೆಕ್ ಪೋಸ್ಟ್ ಹಾಕಲಾಗಿದೆ. ಯಾವುದೇ ತೊಂದರೆ ಆಗದಂತೆ ಸೂಕ್ತ ಬಿಗಿ ಭದ್ರತೆ ಏರ್ಪಡಿಸಲಾಗಿದೆ' ಎಂದು ಹೇಳಿದರು.

ಕಾಂಗ್ರೆಸ್ ಪಕ್ಷದಿಂದ ಮೇಟಿ ಕುಟುಂಬದವರಿಗೆ ಟಿಕೆಟ್ ನೀಡುವುದು ಖಚಿತವಾಗಿದೆ. ದಿ. ಎಚ್.ವೈ. ಮೇಟಿ ಅವರ ಹಿರಿಯ ಪುತ್ರ ಮಲ್ಲಿಕಾರ್ಜುನ ಮೇಟಿ ಅವರಿಗೆ ಟಿಕೆಟ್ ಕೊಡಬೇಕೆಂಬ ನಿರ್ಧಾರವಾಗಿದೆ ಎಂದು ಹೇಳಲಾಗುತ್ತಿದ್ದರೂ ಅಧಿಕೃತವಾಗಿ ಪಕ್ಷದಿಂದ ಮಾಹಿತಿ ಸಿಗಬೇಕಿದೆ. ಈ ಮಧ್ಯೆ ಮೇಟಿ ಅವರ ಕೊನೆಯ ಪುತ್ರಿ ಮಹಾದೇವಿ ಮೇಟಿ ಸಹ ತನಗೇ ಟಿಕೆಟ್ ನೀಡಬೇಕು, ಇಲ್ಲವೇ ಬಂಡಾಯದ ಬಾವುಟ ಹಾರಿಸುವುದಾಗಿ ಎಚ್ಚರಿಕೆ ನೀಡಿದ್ದರು. ದಿವಂಗತ ಎಚ್. ವೈ. ಮೇಟಿ ಅವರಿಗೆ ಮಲ್ಲಿಕಾರ್ಜುನ, ಉಮೇಶ ಎಂಬ ಇಬ್ಬರು ಪುತ್ರರು ಮತ್ತು ಬಾಯಕ್ಕ ಹಾಗೂ ಮಹಾದೇವಿ ಎಂಬ ಇಬ್ಬರು ಪುತ್ರಿಯರಿದ್ದಾರೆ. ಇದರಲ್ಲಿ ಉಮೇಶ ಹಾಗೂ ಬಾಯಕ್ಕ ಹೈಕಮಾಂಡ್? ನಿರ್ಧಾರಕ್ಕೆ ಬದ್ಧ ಎಂದಿದ್ದಾರೆ. ಆದರೆ, ಕೊನೆಯ ಪುತ್ರಿ ಮಹಾದೇವಿ ಮಾತ್ರ ಟಿಕೆಟ್ ತನಗೆ ಕೊಡಬೇಕೆಂದು ಪಟ್ಟುಹಿಡಿದಿದ್ದಾರೆ. ಕೊನೆಯ ಗಳಿಗೆಯಲ್ಲಿ ಏನಾಗಲಿದೆ ಎಂಬುದನ್ನು ಕಾದು ನೋಡಬೇಕಾಗಿದೆ.

# ಕಾಳಸಂತೆಯಲ್ಲಿ ಎಲ್‌ಪಿಜಿ ಮಾರಾಟ ಆಗದಿರಲಿ: ಸಚಿವ ಖಂಡ್ರೆ ಎಚ್ಚರಿಕೆ



ಬೀದರ ನಗರದ ಜಿಲ್ಲಾ ಪಂಚಾಯತಿಯಲ್ಲಿ ನಡೆದ ಅಧಿಕಾರಿಗಳ ಸಭೆಯಲ್ಲಿ ಅಡುಗೆ ಅನಿಲ ಕುರಿತಂತೆ ನಡೆದ ಪರಿಶೀಲನಾ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಮಾತನಾಡಿದರು. ಸಚಿವ ರಹೀಂ ಖಾನ್, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಪಂ ಸಿಇಒ. ಡಾ.ಗಿರೀಶ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠ ಪ್ರದೀಪ್ ಗುಂಟಿ ಮತ್ತು ಆಹಾರ ಮತ್ತು ನಾಗರಿಕ ಸರಬರಾಜು ಅಧಿಕಾರಿಗಳೂ ಸೇರಿದಂತೆ ಮತ್ತಿತರ ಅಧಿಕಾರಿಗಳಿದ್ದರು.

**ಬೀದರ್, ಮಾ.16:** ಗೃಹ ಬಳಕೆಯ ಸಿಲಿಂಡರ್‌ಗಳನ್ನು ಅಗತ್ಯವಿರುವವರಿಗೆ ಬುಕ್ಕಿಂಗ್ ನಿಯಮದಂತೆ ವಿತರಿಸಲಾಗುತ್ತಿದೆ.

ಇದುವರೆಗೂ ಯಾವುದೇ ಗ್ರಾಹಕನಿಗೆ ನಿರಾಕರಿಸಲಾಗಿಲ್ಲ. ಅಂದರೆ ಯಾವುದೇ ಕೊರತೆ ಇಲ್ಲ ಎಂಬುವುದು ಸ್ಪಷ್ಟ. ಕೊರತೆಯ ಸುದ್ದಿ ಹಬ್ಬಿಸಿ ಕಾಳಸಂತೆಯಲ್ಲಿ ಎಲ್‌ಪಿಜಿ ಸಿಲಿಂಡರ್ ಮಾರಾಟ ಆಗದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯಿತಿಯಲ್ಲಿ ನಡೆದ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ವಾಣಿಜ್ಯ ಬಳಕೆ ಸಿಲಿಂಡರ್‌ಗಳು ಒಂದು ವಾರದಿಂದ ಹತ್ತು ದಿನಗಳವರೆಗೆ ವಿತರಣೆಗೆ ಸಮಸ್ಯೆ ಇದೆ ಎಂದು ಕೇಂದ್ರ ಸರ್ಕಾರ ಹೇಳಿದೆ. ಸಾರ್ವಜನಿಕರು ಯಾವುದೇ ವದಂತಿಗಳಿಗೆ ಕಿವಿಗೊಡಬಾರದು ಎಂದರು.

ಜಿಲ್ಲೆಯಲ್ಲಿ 29 ಗ್ಯಾಸ್ ಏಜೆನ್ಸಿಗಳಿವೆ. ಎಲ್ಲ ಏಜೆನ್ಸಿಗಳ ಮೇಲೆ ಜಿಲ್ಲಾಡಳಿತ ನಿಗಾ ಇಟ್ಟು ಕಾಳಸಂತೆಯಲ್ಲಿ ಮಾರಾಟ ಆಗದಂತೆ ನೋಡಿಕೊಳ್ಳಬೇಕು. ಕಾಳಸಂತೆಯಲ್ಲಿ ಸಿಲಿಂಡರ್ ಮಾರಾಟ ಮಾಡುವುದು ಕಂಡುಬಂದರೆ ಅಂಥವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ಯಾವುದೇ ರೀತಿಯಲ್ಲಿ ಸಾರ್ವಜನಿಕರಿಗೆ ತೊಂದರೆ ಆಗಬಾರದೆಂದು ತಿಳಿಸಿದರು.

ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ್ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ, ಮಹಾನಗರ ಪಾಲಿಕೆ ಆಯುಕ್ತ ಮುಕುಲ್ ಜೈನ್, ಜಿಲ್ಲಾ ಉಪ ಅರಣ್ಯ ಸಂರಕ್ಷಣಾಧಿಕಾರಿ ಆಶಿಷ್ ರೆಡ್ಡಿ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಪಾಲ್ಗೊಂಡಿದ್ದರು.

ಕುಡಿವ ನೀರಿನ ಸಮಸ್ಯೆ ಆಗದಿರಲಿ: ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗದಂತೆ ಅಗತ್ಯ ಕ್ರಮ ವಹಿಸಬೇಕು. ಔರಾದ್ ಮತ್ತು ಭಾಲ್ಕಿ ಬೇರೆ ಬೇರೆ ತಾಲ್ಲೂಕುಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗುವುದು ಎಂದು ಆಯಾ ಇಲಾಖೆ ಅಧಿಕಾರಿಗಳು ವರದಿ ನೀಡಿದ್ದಾರೆ. ಮುನ್ನೆಚ್ಚರಿಕೆ ಕ್ರಮವಾಗಿ ಎಲ್ಲ ಸಿದ್ಧತೆ ಮಾಡಿಕೊಳ್ಳಬೇಕು. ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಕಂಡು ಬಂದಲ್ಲಿ 24 ತಾಸುಗಳ ಒಳಗಡೆ ಸಮಸ್ಯೆ ಬಗೆಹರಿಸಬೇಕೆಂದು ಸೂಚಿಸಿದರು.

ಬೋರವೆಲ್ ಬತ್ತಿ ಹೋದರೆ ಅಥವಾ ಬಾವಿಯಲ್ಲಿ ನೀರು ಇರದೇ ಇದ್ದರೆ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಬೇಕು. ಇಲ್ಲವಾದಲ್ಲಿ ಖಾಸಗಿ ಬೋರವೆಲ್ ಬಾಡಿಗೆಗೆ ಪಡೆಯಬೇಕು. ಜಿಲ್ಲೆಯ ತಾಂಡ ಹಟ್ಟಿ ಸೇರಿದಂತೆ ಎಲ್ಲಿಯೂ ಕುಡಿಯುವ ನೀರಿಗೆ ತೊಂದರೆ ಆಗದಂತೆ ನೋಡಿಕೊಳ್ಳಬೇಕು. ನಗರದ ಕೆಲ ಬಡಾವಣೆಗಳಲ್ಲಿ ಸ್ವಲ್ಪ ನೀರಿನ ಸಮಸ್ಯೆ ಕಂಡುಬಂದಿದ್ದು ಅದನ್ನು ಬಗೆಹರಿಸಬೇಕು. ಈಗಾಗಲೇ ಸರ್ಕಾರದ ಮಟ್ಟದಲ್ಲಿ ಟಾಸ್ಕ್ ಫೋರ್ಸ್ ಸಮಿತಿಗೆ ಅನುದಾನ ಬಿಡುಗಡೆ ಮಾಡುವಂತೆ ಸರ್ಕಾರ ಪರಿಗಣಿಸಿದೆ. ಕುಡಿಯುವ ನೀರಿನ ಸಮಸ್ಯೆ ಆಗದಂತೆ ನೋಡಿಕೊಳ್ಳಲಾಗುವುದು ಎಂದರು.

ಜಿಲ್ಲಾ ಸಂಕೀರ್ಣ ಕಾಮಗಾರಿ ಪರಿಶೀಲನೆ: ಬೀದರ ನಗರದ ಹಳೆ ಜಿಲ್ಲಾಧಿಕಾರಿ ಕಚೇರಿ ಜಾಗದಲ್ಲಿ ನಿರ್ಮಾಣಗೊಳ್ಳುತ್ತಿರುವ ನೂತನ ಜಿಲ್ಲಾ ಸಂಕೀರ್ಣ ಕಟ್ಟಡ ಕಾಮಗಾರಿ ಸ್ಥಳಕ್ಕೆ ಶನಿವಾರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ.ಖಂಡ್ರೆ ಭೇಟಿ ನೀಡಿ ಪರಿಶೀಲಿಸಿದರು.

ನಂತರ ಮಾತನಾಡಿ ಜಿಲ್ಲಾ ಸಂಕೀರ್ಣ ಕಟ್ಟಡವು ?48 ಕೋಟಿ ವೆಚ್ಚದಲ್ಲಿ ನಿರ್ಮಾಣವಾಗುತ್ತಿದೆ. ನಗರದ ಅಭಿವೃದ್ಧಿಗೆ ಮತ್ತೊಂದು ಮಹತ್ವದ ಹೆಜ್ಜೆಯಾಗಿದೆ. ಜಿಲ್ಲೆಯ ವಿವಿಧ ಸರ್ಕಾರಿ ಇಲಾಖೆಗಳು ಒಂದೇ ಸಂಕೀರ್ಣದಲ್ಲಿ ಕಾರ್ಯನಿರ್ವಹಿಸುವ ಮೂಲಕ ಸಾರ್ವಜನಿಕರಿಗೆ ಸುಲಭವಾಗಿ ಹಾಗೂ ವೇಗವಾಗಿ ಸೇವೆಗಳು ದೊರೆಯುವಂತೆ ಈ ಜಿಲ್ಲಾ ಸಂಕೀರ್ಣ ನಿರ್ಮಾಣವಾಗುತ್ತಿದೆ. ಇದು ಬೀದರ್ ಜಿಲ್ಲೆಯ ಆಡಳಿತ ವ್ಯವಸ್ಥೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ರೂಪಿಸಲು ಸಹಾಯಕಾರಿಯಾಗಲಿದೆ ಎಂದರು.

# ಅಡ್ಡದಾರಿಯಿಂದ ಅಧಿಕಾರ ಹಿಡಿಯುವುದು ಬಿಜೆಪಿಯವರ ರಾಜಕೀಯ ತಂತ್ರ: ಸಚಿವ ದಿನೇಶ್ ಗುಂಡೂರಾವ್




**ಗದಗ, ಮಾ.16:** ರಾಜ್ಯ ಮತ್ತು ದೇಶಕ್ಕೆ ಏನೆಲ್ಲ ಕೆಟ್ಟದ್ದನ್ನು ತೋರಿಸಬೇಕೋ ಅವನ್ನೆಲ್ಲ ಬಿಜೆಪಿಯವರು ಈಗಾಗಲೇ ತೋರಿಸಿದ್ದಾರೆ. ಈಗ ಆಪರೇಷನ್ ಕಮಲ ಎನ್ನುವ ಹೊಸ ರಾಜಕೀಯ ಪ್ರಯೋಗ ಮಾಡಿದ್ದಾರೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ಒಡಿಶಾದಲ್ಲಿ ರಾಜಕೀಯ ಬಿಕ್ಕಟ್ಟು ವಿಚಾರವಾಗಿ ಗದಗನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಡ್ಡ ದಾರಿಯಿಂದ ಸರ್ಕಾರ ಬೀಳಿಸೋದು, ಅಡ್ಡ ಮತದಾನ ಮಾಡಿಸುವುದು, ಆಮಿಷವೊಡ್ಡುವುದು ಯಾವುದೇ ಮಾರ್ಗದಿಂದಾರೂ ಅಧಿಕಾರ ಹಿಡಿಯೋದು ಬಿಜೆಪಿಯವರ ರಾಜಕೀಯ ತಂತ್ರವಾಗಿದೆ. ರಾಜ್ಯಸಭಾದಲ್ಲಿಯೂ ಅದೇ ಮಾರ್ಗ ಹಿಡಿದ್ದಾರೆ.ನಿನ್ನೆ ಬಿಡದಿಯಲ್ಲೂ ಅದೇ ನಡೆದಿದ್ದು, ನಮ್ಮ ಶಾಸಕರಿಗೆ ದುಡ್ಡು ಕೊಡುವ ಆಮಿಷವೊಡ್ಡಿದ್ದಾರೆ. ಈಗಾಗಲೇ ಪೊಲೀಸರು ಅವರನ್ನು ಅರೆಸ್ಟ್ ಮಾಡಿದ್ದಾರೆ.

ಬಿಜೆಪಿಯ ಅನೈತಿಕವಾದ ಪದ್ಧತಿಗೆ ಇದು ಮತ್ತೊಂದು ಉದಾಹರಣೆಯಾಗಿದೆ ಎಂದು ಕಿಡಿಕಾರಿದ್ದಾರೆ. ರಾಜ್ಯ ಕಾಂಗ್ರೆಸ್ ಸರ್ಕಾರದಲ್ಲಿ ಗೊಂದಲ ವಿಚಾರವಾಗಿ ಮಾತನಾಡಿ, ಯಾವ ಗೊಂದಲ ಇಲ್ಲ. ಎಲ್ಲಿದೆ ಗೊಂದಲ ಇದೆ ಎಂದು ಪ್ರಶ್ನೆ ಮಾಡಿದ ಅವರು, ಸದ್ಯ ಸುಸೂತ್ರವಾಗಿ ಅಧಿವೇಶನ ನಡೆಯುತ್ತಿದೆ. ಯಾವ ಬದಲಾವಣೆಯೂ ಇಲ್ಲ ಎಂದಿದ್ದಾರೆ.

# ಚಿತ್ರದುರ್ಗದಲ್ಲಿ ಬೃಹತ್ ಸಮಾರಂಭ ಆಯೋಜಿಸಲು ಭಾಜಪ ಸಿದ್ಧತೆ

### ಬಿಎಸ್‌ವೈ ರಾಜಕೀಯ ಪ್ರವೇಶಕ್ಕೆ 50 ವರ್ಷ, ಚುನಾವಣಾ ತಂತ್ರ



**ಚಿತ್ರದುರ್ಗ, ಮಾ.16:** ಮುಂದಿನ ವಿಧಾನಸಭೆ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಭಾರತೀಯ ಜನತಾ ಪಕ್ಷ ಚುನಾವಣಾ ತಂತ್ರಗಳನ್ನು ರೂಪಿಸುತ್ತಿದೆ. ಇದರ ಭಾಗವಾಗಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ರಾಜಕೀಯ ಪ್ರವೇಶಕ್ಕೆ 50 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಚಿತ್ರದುರ್ಗದಲ್ಲಿ ಬೃಹತ್ ಸನ್ಮಾನ ಸಮಾರಂಭವನ್ನು ಆಯೋಜಿಸುತ್ತಿದ್ದು, ಇದಕ್ಕಾಗಿ ಸಿದ್ಧತೆ ನಡೆಸುತ್ತಿದೆ. ಚಿತ್ರದುರ್ಗದಲ್ಲಿ ಏಪ್ರಿಲ್ ಮಧ್ಯಭಾಗದಲ್ಲಿ ಅಥವಾ ಮೇ ಮೊದಲ ವಾರದಲ್ಲಿ ಈ ಕಾರ್ಯಕ್ರಮ ನಡೆಯುವ ಸಾಧ್ಯತೆ ಇದೆ. ರಾಜ್ಯದ ವಿವಿಧ ಭಾಗಗಳಿಂದ ಲಕ್ಷಾಂತರ ಕಾರ್ಯಕರ್ತರು ಹಾಗೂ ಬೆಂಬಲಿಗರನ್ನು ಸೇರಿಸಿ ಮಹಾಸಮಾವೇಶ ನಡೆಸುವ ಯೋಜನೆಯನ್ನು ಪಕ್ಷ ರೂಪಿಸಿದೆ.

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಸಂಸದ ಹಾಗೂ ಮಾಜಿ ಉಪ ಮುಖ್ಯಮಂತ್ರಿ ಗೋವಿಂದ ಎಂ. ಕಾರಜೋಳ ಮಾತನಾಡಿ, ಯಡಿಯೂರಪ್ಪ ಅವರ ರಾಜಕೀಯ ಜೀವನದ ಸುವರ್ಣ ಮಹೋತ್ಸವದ ಅಂಗವಾಗಿ ಈ ಸನ್ಮಾನ ಸಮಾರಂಭವನ್ನು ಆಯೋಜಿಸ ಲಾಗುತ್ತಿದೆ ಎಂದು ತಿಳಿಸಿದ್ದಾರೆ.ಈ ಸಮಾವೇಶದ ಮೂಲಕ ಪಕ್ಷದ ಕಾರ್ಯಕರ್ತರಲ್ಲಿ ಉತ್ಸಾಹ ಹೆಚ್ಚಿಸಿ ಮುಂದಿನ ವಿಧಾನಸಭೆ ಚುನಾವಣೆಗೆ ಸಂಘಟನೆಯನ್ನು ಬಲಪಡಿಸುವ ಉದ್ದೇಶ ಹೊಂದಲಾಗಿದೆ. ರಾಜ್ಯದಲ್ಲಿ ಮತ್ತೆ ಅಧಿಕಾರಕ್ಕೇರಲು ಪಕ್ಷ ರಣತಂತ್ರ ರೂಪಿಸುತ್ತಿದ್ದು, ಈ ಕಾರ್ಯಕ್ರಮ ಚುನಾವಣಾ ಅಭಿಯಾನಕ್ಕೆ ಪ್ರಮುಖ ವೇದಿಕೆಯಾಗಲಿದೆ ಎಂದು ಪಕ್ಷದ ನಾಯಕರು ತಿಳಿಸಿದ್ದಾರೆ.

ಯಡಿಯೂರಪ್ಪ ಅವರು 1972ರಲ್ಲಿ ಜನಸಂಘದ ಅಧ್ಯಕ್ಷರಾಗಿ ರಾಜಕೀಯ ಜೀವನ ಆರಂಭಿಸಿದ್ದರು. ನಂತರ 1983ರಲ್ಲಿ ವಿಧಾನಸಭೆಗೆ ಆಯ್ಕೆಯಾಗಿದ್ದು, ಹಲವು ಬಾರಿ ಶಾಸಕ, 2006ರಲ್ಲಿ ಉಪಮುಖ್ಯಮಂತ್ರಿ ಹಾಗೂ 2007, 2008, 2018 ಮತ್ತು 2019 ರಲ್ಲಿ ಸತತ ನಾಲ್ಕು ಬಾರಿ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದ್ದಾರೆ. ಅವರ ರಾಜಕೀಯ ಜೀವನದ 50 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಈ ಸನ್ಮಾನ ಸಮಾರಂಭವನ್ನು ಅದ್ದೂರಿಯಾಗಿ ಆಚರಿಸಲು ಪಕ್ಷ ಯೋಜಿಸಿದೆ.

# ನಮ್ಮೂರ ಶಾಲೆ ಉಳಿಸಿ ಮೊಳಗಿದ ಕಹಳೆ



ಕಲಬುರಗಿಯ ಡಾ.ಎಸ್.ಎಂ.ಪಂಡಿತ ಜಿಲ್ಲಾ ರಂಗಮಂದಿರದಲ್ಲಿ ಎಐಡಿಎಸ್‌ಓ ವಿದ್ಯಾರ್ಥಿ ಸಂಘಟನೆ ಆಯೋಜಿಸಿದ ಕಲ್ಯಾಣ ಕರ್ನಾಟಕ ವಲಯ ಮಟ್ಟದ 'ನಮ್ಮೂರ ಶಾಲೆ ಉಳಿಸಿ' ಪ್ರತಿರೋಧ ಸಮಾವೇಶದಲ್ಲಿ ಅಲ್ಲಮಪ್ರಭು ಬೆಟ್ಟದೂರ, ರಾಘವೇಂದ್ರ ಕುಷ್ಟಗಿ, ಚಾಮರಸ ಮಾಲಿಪಾಟೀಲ್, ಅಶ್ವಿನಿ ಕೆ.ಎಸ್. ಮುಂತಾದವರಿದ್ದರು.

**ಕಲಬುರಗಿ, ಮಾ. 16:** ಕೆಪಿಎಸ್ ಮಾಗ್ನೆಟ್ ಶಾಲೆಗಳಿಗೆ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ (ಕೆಕೆಆರ್‌ಡಿಬಿ) ಹಣ ಬಳಸುವುದನ್ನು ವಿರೋಧಿಸಿ, ಎಐಡಿಎಸ್‌ಓ ವಿದ್ಯಾರ್ಥಿ ಸಂಘಟನೆಯಿಂದ ನಗರದಲ್ಲಿ ನಡೆದ ಕಲ್ಯಾಣ ಕರ್ನಾಟಕದ ವಲಯ ಮಟ್ಟದ 'ನಮ್ಮೂರ ಶಾಲೆ ಉಳಿಸಿ' ಪ್ರತಿರೋಧ ಸಮಾವೇಶದಲ್ಲಿ ಸರ್ಕಾರಿ ಶಾಲೆ ಉಳಿಸಬೇಕು ಎಂಬ ಕೂಗು ಪ್ರತಿಧ್ವನಿಸಿತು.

ಮಾಗ್ನೆಟ್ ಶಾಲೆಗಳ ಹೆಸರಲ್ಲಿ ಸರ್ಕಾರಿ ಶಾಲೆಗಳನ್ನು ಮುಚ್ಚಲಾಗುತ್ತಿದೆ. ಈ ಮೂಲಕ ಬಡಜನರ ಮಕ್ಕಳನ್ನು ಶಿಕ್ಷಣದಿಂದ ವಂಚಿತರನ್ನಾಗಿ ಮಾಡಲಾಗುತ್ತಿದೆ ಎಂದು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಲಾಯಿತು.

ಕೆಪಿಎಸ್ ಮಾಗ್ನೆಟ್ ಶಾಲೆಗಳಿಗೆ ಕೆಕೆಆರ್‌ಡಿಬಿ ನಿಧಿ ಬಳಕೆ ಮಾಡುವುದನ್ನು ಖಂಡಿಸಿದ ಅಖಿಲ ಭಾರತ ಶಿಕ್ಷಣ ಉಳಿಸಿ ಸಮಿತಿ ರಾಜ್ಯ ಘಟಕದ ಅಧ್ಯಕ್ಷ ಅಲ್ಲಮಪ್ರಭು ಬೆಟ್ಟದೂರು, 'ಮ್ಯಾಗ್ನೆಟ್ ಶಾಲೆ ಅನ್ನುವುದು ಸರ್ಕಾರಿ ಶಾಲೆಗಳನ್ನು ಮುಚ್ಚುವಂತಹ ವ್ಯವಸ್ಥಿತ ಯೋಜನೆಯಾಗಿದೆ. ಈ ಯೋಜನೆಯಿಂದ ಖಾಸಗಿ ಶಾಲೆಗಳಿಗೆ ಅನುಕೂಲವಾಗುತ್ತದೆ. ಜಾಗತೀಕರಣದಲ್ಲಿ ಶಿಕ್ಷಣಕ್ಕೆ ಆದ್ಯತೆ ಇಲ್ಲ, ಶಿಕ್ಷಣವೂ ಖಾಸಗೀಕರಣಗೊಳ್ಳಬೇಕು ಅನ್ನುವ ಒಂದು ಎಳೆ ಅದರಲ್ಲಿದೆ ಎಂದು ಆರೋಪಿಸಿದರು.

ಶಿಕ್ಷಣದ ಕೇಂದ್ರೀಕರಣ ಅಪಾಯಕಾರಿ ಎಂದು ಪ್ರತಿಪಾದಿಸಿದ ಬೆಟ್ಟದೂರು, ರಾಜ್ಯ ಸರ್ಕಾರ ತಂದಿರುವ 2 ಸಾವಿರ ಕೋಟಿ ಸಾಲವನ್ನು ಶಾಲೆಗಳಿಗೆ ಶಿಕ್ಷಕರು ಮತ್ತು ಮೂಲಸೌಕರ್ಯ ಒದಗಿಸಲು ಬಳಸಬೇಕು. ಶಿಕ್ಷಣ ತಜ್ಞರ ಸಭೆ ಕರೆದು ವಿಷಯವನ್ನು ಚರ್ಚಿಸಿ, ಸರ್ಕಾರ ತನ್ನ ಬುದ್ಧಿಗೇಡಿತನವನ್ನು ನಿವಾರಿಸಿಕೊಳ್ಳಬೇಕು ಎಂದು ಒತ್ತಾಯಿಸಿದರು.

ರಾಜ್ಯ ರೈತ ಸಂಘದ ಗೌರವಾಧ್ಯಕ್ಷ ಚಾಮರಸ ಮಾಲಿಪಾಟೀಲ, ಖಾಸಗಿ ಶಾಲೆಗಳ ಹಾವಳಿಯಿಂದ ಬಡವರು ಈಗಾಗಲೇ ತತ್ತರಿಸಿದ್ದಾರೆ. ಸರ್ಕಾರ ಮ್ಯಾಗ್ನೆಟ್ ಶಾಲೆ ಯೋಜನೆ ಕೈಬಿಟ್ಟು ದೆಹಲಿಯಲ್ಲಿ ಕೇಜ್ರಿವಾಲ್ ಅವರಂತೆ ಸರ್ಕಾರಿ ಶಾಲೆಗಳನ್ನು ಉನ್ನತೀಕರಿಸಬೇಕು ಎಂದು ಆಗ್ರಹಿಸಿದರು. ಸಮಾವೇಶದಲ್ಲಿ ಕಲ್ಯಾಣ ಕರ್ನಾಟಕದ ಏಳೂ ಜಿಲ್ಲೆಗಳ ವಿದ್ಯಾರ್ಥಿಗಳು, ಪಾಲಕ–ಪೋಷಕರು ಪಾಲ್ಗೊಂಡಿದ್ದರು. ಅಶ್ವಿನಿ ಕೆ.ಎಸ್. ರಾಜ್ಯಾಧ್ಯಕ್ಷೆ ಎಐಡಿಎಸ್‌ಓ– 40 ಸಾವಿರ ಸರ್ಕಾರಿ ಶಾಲೆಗಳನ್ನು ಮುಚ್ಚಿದರೆ ಬಡ ಕೂಲಿಕಾರ್ಮಿಕರ ಲಕ್ಷಾಂತರ ಮಕ್ಕಳು ಶಿಕ್ಷಣದಿಂದ ವಂಚಿತರಾಗುತ್ತಾರೆ

# ಎಸ್ಸೆಸ್ಸೆಲ್ಸಿ ಪರೀಕ್ಷೆ: ಕಲ್ಯಾಣ ಕರ್ನಾಟಕದ 1.96 ಲಕ್ಷ ವಿದ್ಯಾರ್ಥಿಗಳು ನೋಂದಣಿ

**ಕಲಬುರಗಿ, ಮಾ. 16:** ಪ್ರಸಕ್ತ ಸಾಲಿನ ಎಸ್ಸೆಸ್ಸೆಲ್ಸಿ ಪರೀಕ್ಷೆ–1 ಮಾರ್ಚ್ 18ರಿಂದ ಆರಂಭವಾಗಲಿದ್ದು, ಕಲ್ಯಾಣ ಕರ್ನಾಟಕ ವ್ಯಾಪ್ತಿಯ ಏಳು ಜಿಲ್ಲೆಗಳ ಒಟ್ಟು 1,96,636 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದಾರೆ. ಇದರಲ್ಲಿ 1,74,133 ರೆಗ್ಯುಲರ್ ವಿದ್ಯಾರ್ಥಿಗಳು, 21,331 ಪುನರಾವರ್ತಿತ ಹಾಗೂ 1,172 ಖಾಸಗಿ ಪುನರಾವರ್ತಿತ ಅಭ್ಯರ್ಥಿಗಳು ಸೇರಿದ್ದಾರೆ. ಇದರಲ್ಲಿ ಖಾಸಗಿ ರೆಗ್ಯುಲರ್ ವಿದ್ಯಾರ್ಥಿಗಳ ಸಂಖ್ಯೆ ಸೇರಿಲ್ಲ.

ಕಲಬುರಗಿ ಜಿಲ್ಲೆಯಲ್ಲಿ ರೆಗ್ಯುಲರ್, ಪುನರಾವರ್ತಿತ ಹಾಗೂ ಖಾಸಗಿ ಪುನರಾವರ್ತಿತ ಸೇರಿದಂತೆ ಒಟ್ಟು 49,821 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದಾರೆ. ಇದು ಏಳು ಜಿಲ್ಲೆಗಳ ಪೈಕಿ ಗರಿಷ್ಠ ನೋಂದಣಿಯಾಗಿದೆ. ಯಾದಗಿರಿ ಜಿಲ್ಲೆಯಲ್ಲಿ 17,505 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದು, ಇದು ಕಲ್ಯಾಣ ಕರ್ನಾಟಕ ಭಾಗದಲ್ಲೆ ಕನಿಷ್ಠ ನೋಂದಣಿಯಾಗಿದೆ. ಇನ್ನುಳಿದಂತೆ ರಾಯಚೂರು ಜಿಲ್ಲೆಯಲ್ಲಿ 32,180, ಬೀದರ್ ಜಿಲ್ಲೆಯಲ್ಲಿ 29,186, ಕೊಪ್ಪಳ ಜಿಲ್ಲೆಯಲ್ಲಿ 24,634, ಬಳ್ಳಾರಿ ಜಿಲ್ಲೆಯಲ್ಲಿ 21,197 ಹಾಗೂ ವಿಜಯನಗರ ಜಿಲ್ಲೆಯಲ್ಲಿ 21,353 ವಿದ್ಯಾರ್ಥಿಗಳು ಪರೀಕ್ಷೆ–1ಕ್ಕೆ ಹೆಸರು ನೋಂದಾಯಿಸಿಕೊಂಡಿದ್ದಾರೆ.

ಫಲಿತಾಂಶ ಸುಧಾರಣೆಗೆ ಕಸರತ್ತು: ಕಲ್ಯಾಣ ಕರ್ನಾಟಕ ಭಾಗದ ಎಸ್ಸೆಸ್ಸೆಲ್ಸಿ ಪರೀಕ್ಷಾ ಫಲಿತಾಂಶ ಸುಧಾರಣೆಗಾಗಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಹೆಚ್ಚುವರಿ ಆಯುಕ್ತರ ಕಚೇರಿಯು ಜೂನ್‌ನಿಂದಲೇ ಹಲವು ಕ್ರಮಗಳನ್ನು ಕೈಗೊಂಡಿದೆ.

ಫಲಿತಾಂಶ ಸುಧಾರಣೆಗಾಗಿ ಹೆಚ್ಚುವರಿ ಆಯುಕ್ತ ರಾಹುಲ್ ಪಾಂಡ್ವೆ ಮುತುವರ್ಜಿ ವಹಿಸಿ 'ಮಿಷನ್ 40+' ಯೋಜನೆ ರೂಪಿಸಿ ಕಾರ್ಯಗತಗೊಳಿಸಿದ್ದಾರೆ. ಇದರಿಂದ ಕಲಿಕೆಯಲ್ಲಿ ಹಿಂದುಳಿದ ಮಕ್ಕಳೂ ಪ್ರತಿ ವಿಷಯದಲ್ಲಿ ಕನಿಷ್ಠ ಶೇ40ರಷ್ಟು ಅಂಕ ಪಡೆಯುವ ನಿರೀಕ್ಷೆಗಳಿವೆ. ಇದಲ್ಲದೇ ಪ್ರತಿ 15 ದಿನಗಳಿಗೊಮ್ಮೆ ಡಿಡಿಪಿಐಗಳ ಸಭೆ ನಡೆಸಿ, ನಿರಂತರವಾಗಿ ಪ್ರಗತಿಯ ಮೌಲ್ಯಮಾಪನ ನಡೆಸಿದ್ದಾರೆ. ಬಿಇಒಗಳು, ಮುಖ್ಯಶಿಕ್ಷಕರೂ ಸಾಕಷ್ಟು ಶ್ರಮ ಹಾಕಿದ್ದಾರೆ.

ಇದಲ್ಲದೇ ಶಿಕ್ಷಕರು ಮನೆ–ಮನೆಗೆ ಭೇಟಿ ನೀಡಿ ಜಾಗೃತಿ ಮೂಡಿಸಿದ್ದಾರೆ. ವಿದ್ಯಾರ್ಥಿಗಳನ್ನು ನಸುಕಿನಲ್ಲಿ ಅಭ್ಯಾಸಕ್ಕೆ ಎಬ್ಬಿಸುವ ಪ್ರಯತ್ನಗಳು ನಡೆದಿವೆ. ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ಶಾಲೆಯಲ್ಲೇ ಹೆಚ್ಚಿನ ಒತ್ತು ಕೊಟ್ಟು ಪಾಸಿಂಗ್‌ಗೆ ಬೇಕಾದ ಅಧ್ಯಯನ ಮಾಡಿಸಲಾಗಿದೆ. ಜಾಣ ವಿದ್ಯಾರ್ಥಿಗಳಿಗೂ ಆದ್ಯತೆ ಕೊಟ್ಟು ಒಂದಂಕವೂ ಕೈ ತಪ್ಪದಂತೆ ಶ್ರಮವಹಿಸಲಾಗುತ್ತಿದೆ. ವಿದ್ಯಾರ್ಥಿಗಳ ಪಾಲಕರಿಗೂ ಶಿಕ್ಷಣದ ಮಹತ್ವ ತಿಳಿಸಲಾಗಿದೆ. ಕಲಬುರಗಿ ಸೇರಿದಂತೆ ಹಲವೆಡೆ ಟಿ.ವಿಗಳನ್ನು ವೀಕ್ಷಣೆಯಿಂದ ದೂರ ಉಳಿಯುವಂತೆ ಮನವೊಲಿಸುವಂಥ ಕಾರ್ಯಕ್ರಮಗಳನ್ನು ಶಿಕ್ಷಣ ಇಲಾಖೆ ಹಮ್ಮಿಕೊಂಡಿದೆ. ಮೂರು ಹಂತದ ಪೂರ್ವ ಸಿದ್ಧತಾ ಪರೀಕ್ಷೆಗಳನ್ನು ನಡೆಸಿ ಅಂತಿಮ ಪರೀಕ್ಷೆಗೆ ಸನ್ನದ್ಧವಾಗಿದೆ.

# ಕೊಂಕಣಿ ಸಾಹಿತಿ ಪೆರ್ನಾಲ್‌ಗೆ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ

### ಕೊಂಕಣಿ ಕಾವ್ಯೆಂ: ರುಪಾಂ ಆನಿ ರೂಪಕಾಂ ಕೃತಿಗೆ ಗೌರವ

**ಮಂಗಳೂರು, ಮಾ.16:** ಕೊಂಕಣಿ ಸಾಹಿತಿ/ಪತ್ರಕರ್ತ ಎಚ್.ಎಂ. ಪೆರ್ನಾಲ್ (ಹೆನ್ರಿ ಮೆಂಡೋನ್ಸಾ) ಅವರಿಗೆ 2025ನೇ ಸಾಲಿನ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಲಭಿಸಿದೆ. ಇದು ಅವರ ಪ್ರಶಂಸಿತ ಸಾಹಿತ್ಯ ವಿಮರ್ಶೆ ಕೃತಿಯಾದ ಕೊಂಕಣಿ ಕಾವ್ಯೆಂ: ರುಪಾಂ ಆನಿ ರೂಪಕಾಂ (2021)ಗೆ ನೀಡಲಾಗಿದೆ. ಸಾಹಿತ್ಯ ಅಕಾಡೆಮಿ ಪ್ರಶಸ್ತಿಯು ಭಾರತ ಸರ್ಕಾರ ಸಾಹಿತ್ಯಕ್ಕಾಗಿ ನೀಡುವ ದೇಶದ ಅತ್ಯುನ್ನತ ಪ್ರಶಸ್ತಿಯಾಗಿದ್ದು, ಪ್ರತೀ ವರ್ಷ 22 ಅನುಸೂಚಿತ ಭಾಷೆಗಳ ಜೊತೆಗೆ ಇಂಗ್ಲಿಷ್ ಮತ್ತು ರಾಜಸ್ಥಾನಿ ಸೇರಿ ಒಟ್ಟು 24 ಭಾಷೆಗಳ ಉತ್ಕೃಷ್ಟ ಕೃತಿಗಳನ್ನು ಆಯ್ದು ಈ ಪುರಸ್ಕಾರ ನೀಡಲಾಗುತ್ತದೆ.

ಕೊಂಕಣಿ ಭಾಷೆಯು 1992ರಿಂದ ಅನುಸೂಚಿತ ಭಾಷೆಯಾಗಿದ್ದು, ಗೋವಾ, ಕರ್ನಾಟಕ, ಕೇರಳ, ಮಹಾರಾಷ್ಟ್ರ ಮತ್ತು ಗುಜರಾತ್ ಸೇರಿದಂತೆ ಐದು ರಾಜ್ಯಗಳಲ್ಲಿ ಪ್ರಚಲಿತದಲ್ಲಿದೆ. ಕೊಂಕಣಿ ಭಾಷೆಗೆ 1975ರಲ್ಲಿ ಸಾಹಿತ್ಯ ಅಕಾಡೆಮಿಯಿಂದ ಮಾನ್ಯತೆ ದೊರಕಿತ್ತು. 1977ರಿಂದ ಸಾಹಿತ್ಯ ಅಕಾಡೆಮಿ ಕೊಂಕಣಿ ಭಾಷೆಯ ಕೃತಿಗಳಿಗೂ ಪ್ರಶಸ್ತಿ ನೀಡುತ್ತಾ ಬಂದಿದ್ದು, ಈ ಹಿಂದೆ ಮಂಗಳೂರಿನ ಚಾ. ಫ್ರಾ. ದೆಕೊಸ್ತಾ (1992) ಮತ್ತು ಮೆಲ್ವಿನ್ ರೊಡ್ರಿಗಸ್ (2011) ಕವನ ಸಂಕಲನಗಳಿಗೆ ಸಾಹಿತ್ಯ ಅಕಾಡೆಮಿ ಪ್ರಶಸ್ತಿಯನ್ನು ಪಡೆದಿದ್ದರು. 2016ರಲ್ಲಿ ಎಡ್ವಿನ್ ಜೆ.ಎಫ್.ಡಿ. ಸೋಜಾ ಅವರು ಕಾದಂಬರಿಗಾಗಿ ಸಾಹಿತ್ಯ ಅಕಾಡೆಮಿ ಪ್ರಶಸ್ತಿಗೆ ಭಾಜನರಾಗಿದ್ದರು.

ಎಚ್.ಎಂ. ಪೆರ್ನಾಲ್ ಅವರು ಈ ಪರಂಪರೆಯನ್ನು ಮುಂದುವರೆಸುತ್ತಿರುವ ಕರ್ನಾಟಕದ ನಾಲ್ಕನೇ ಕೊಂಕಣಿ ಸಾಹಿತಿಯಾಗಿದ್ದಾರೆ. ಪೆರ್ನಾಲ್ ಅವರ ಕೊಂಕಣಿ ಕಾವ್ಯೆಂ: ರುಪಾಂ ಆನಿ ರೂಪಕಾಂ ಕೃತಿಯು ಸಾಹಿತ್ಯ ವಿಮರ್ಶೆ ವಿಭಾಗದಲ್ಲಿ ಪ್ರಶಸ್ತಿ ಪಡೆದ ಮೊದಲ ಕೊಂಕಣಿ ಕೃತಿ ಎಂಬ ಐತಿಹಾಸಿಕ ಮೈಲುಗಲ್ಲನ್ನು ನಿರ್ಮಿಸಿದೆ. ಈ ಕೃತಿಗೆ ಮೊದಲು 2021ರಲ್ಲಿ ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿಯಿಂದ ಉತ್ತಮ ಪುಸ್ತಕ ಪ್ರಶಸ್ತಿ ಹಾಗೂ 2023ರಲ್ಲಿ ಗೋವಾ ಕೊಂಕಣಿ ಅಕಾಡೆಮಿಯಿಂದ ಉತ್ತಮ ಪುಸ್ತಕ ಪ್ರಶಸ್ತಿ ಲಭಿಸಿತ್ತು. ಈ ಪುಸ್ತಕಕ್ಕೆ ಜ್ಞಾನಪೀಠ ಪ್ರಶಸ್ತಿ ವಿಜೇತ ಕೊಂಕಣಿ ಸಾಹಿತಿ ದಾಮೋದರ್ ಮೌಜೋ ಅವರು ವಿಸ್ತೃತ ಮುನ್ನುಡಿ ಬರೆದಿದ್ದು, ಮಂಗಳೂರಿನ ಕವಿತಾ ಪಬ್ಲಿಕೇಷನ್ಸ್ ಈ ಪುಸ್ತಕವನ್ನು ಪ್ರಕಟಿಸಿದೆ.ಉಡುಪಿ ಜಿಲ್ಲೆಯ ಪೆರ್ನಾಲ್‌ನಲ್ಲಿ ಹುಟ್ಟಿ, ಶಿರ್ವದ ಹಿಂದೂ ಜೂನಿಯರ್ ಕಾಲೇಜು ಹಾಗೂ ಎಂ.ಎಸ್. ಆರ್.ಎಸ್. ಕಾಲೇಜಿನಲ್ಲಿ ಪದವಿ ಶಿಕ್ಷಣ ಪಡೆದು, ಮುಂಬೈಯಲ್ಲಿ ಸ್ನಾತಕೋತ್ತರ ಶಿಕ್ಷಣ ಪಡೆದಿರುವ ಹೆನ್ರಿ ಮೆಂಡೋನ್ಸಾ ವೃತ್ತಿಯಲ್ಲಿ ಕಮರ್ಷಿಯಲ್ ಅಕೌಂಟೆಂಟ್ ಆಗಿದ್ದಾರೆ. ಕನ್ನಡದಲ್ಲಿ ತರಂಗ, ಸಂಕ್ರಮಣ, ಶೂದ್ರ ಮುಂತಾದ ಪತ್ರಿಕೆಗಳ ಮೂಲಕ ಬರವಣಿಗೆ ಆರಂಭಿಸಿದ ಅವರು 1980ರ ದಶಕದ ಆರಂಭದಲ್ಲಿ ಯುವಕ್ ಮಾಸಪತ್ರಿಕೆಯಲ್ಲಿ ವ್ಯಂಗ್ಯಚಿತ್ರಕಾರರಾಗಿ ಕೊಂಕಣಿ ಸಾಹಿತ್ಯ ಕ್ಷೇತ್ರಕ್ಕೆ ಪಾದಾರ್ಪಣೆ ಮಾಡಿದರು. ಪ್ರಸ್ತುತ ಕಥೆಗಾರ, ಕವಿ, ವಿಮರ್ಶಕ, ಸಂಪಾದಕ ಹಾಗೂ ಪ್ರಕಾಶಕರಾಗಿ ತಮ್ಮದೇ ಛಾಪು ಮೂಡಿಸಿದ್ದಾರೆ.2011ರಲ್ಲಿ ಅವರು ಸ್ಥಾಪಿಸಿದ ಕಿಟಾಳ್ ಸಾಹಿತ್ಯಿಕ ಅಂತರ್ಜಾಲ ಪತ್ರಿಕೆ ಹಿರಿ–ಕಿರಿಯ ಲೇಖಕರನ್ನು ಒಳಗೊಂಡು ಸತತ ಹದಿನಾಲ್ಕನೇ ವರ್ಷದಲ್ಲಿ ನಿರಂತರವಾಗಿ ಪ್ರಕಟವಾಗುತ್ತಿದ್ದು, ಡಿಜಿಟಲ್ ಕೊಂಕಣಿ ಸಾಹಿತ್ಯ ನಿರ್ಮಿತಿಯಲ್ಲಿ ಮುಂಚೂಣಿಯಲ್ಲಿದೆ. 2013ರಲ್ಲಿ ಪಾಕ್ಷಿಕವಾಗಿ ಆರಂಭಿಸಿದ ಆರ್ಸೊ ಸಾಹಿತ್ಯ ಪತ್ರಿಕೆ ಪ್ರಸ್ತುತ ಕವಿ ವಿಲ್ಸನ್ ಕಟೀಲ್ ಸಂಪಾದಕತ್ವದಲ್ಲಿ ಮಾಸಪತ್ರಿಕೆಯಾಗಿ ಹನ್ನೆರಡನೇ ವರ್ಷದಲ್ಲಿ ಪ್ರಕಟವಾಗುತ್ತಿದ್ದು, ಆರ್ಸೊ ವಾರ್ಷಿಕ ವಿಶೇಷಾಂಕಗಳಿಗೆ ಸಾಹಿತ್ಯ ಲೋಕದಲ್ಲಿ ವಿಶೇಷ ಮಾನ್ಯತೆಯಿದೆ. ತಮ್ಮದೇ ಕಿಟಾಳ್ ಪ್ರಕಾಶನದ ಮೂಲಕ ಈವರೆಗೆ 15ಕ್ಕೂ ಹೆಚ್ಚು ಮೌಲಿಕ ಸಾಹಿತ್ಯ ಕೃತಿಗಳನ್ನು ಪೆರ್ನಾಲ್ ಪ್ರಕಟಿಸಿದ್ದಾರೆ.ಈವರೆಗೆ ಪೆರ್ನಾಲ್ ಅವರ ನಾಲ್ಕು ಕವನ ಸಂಕಲನಗಳು – ಚಲ್ಯಾಂಕ್ ಚತ್ರಾಯ್ (1999), ಕಯ್ದ್ಯಾಚ್ಯೊ ಕವಿತಾ (2004), ಭಾಮುಣಾಂಚೆಂ ಚೆಡುಂ (2006) ಮತ್ತು ಜನೆಲ್ (2025), ಎರಡು ಕಥಾ ಸಂಕಲನಗಳು – ದೆವಾಕ್ ಸೊಡುಲ್ಲೊ ಪಾಡೊ (2002) ಮತ್ತು ಬೀಗ್ ಆನಿ ಬಿಗಾತ್ (2016), ಹಾಗೂ ಪ್ರಶಸ್ತಿ ವಿಜೇತ ಸಾಹಿತ್ಯ ವಿಮರ್ಶೆಯ ಕೃತಿ ಕೊಂಕಣಿ ಕಾವ್ಯೆಂ: ರುಪಾಂ ಆನಿ ರೂಪಕಾಂ (2021) ಪ್ರಕಟವಾಗಿವೆ.

ಅವರ ಬೀಗ್ ಆನಿ ಬಿಗಾತ್ ಕಥಾ ಸಂಕಲನಕ್ಕೆ ವಿಶ್ವ ಕೊಂಕಣಿ ಕೇಂದ್ರದ ಖ್ಯಾತ ಉದ್ಯಮಿ ಟಿ.ವಿ. ಮೋಹನದಾಸ ಪೈ ಅವರ ತಾಯಿಯ ಹೆಸರಿನಲ್ಲಿ ಕೊಡಮಾಡುವ ಶ್ರೀಮತಿ ವಿಮಲಾ ವಿ. ಪೈ ಅತ್ಯುತ್ತಮ ಸಾಹಿತ್ಯ ಕೃತಿ ಪ್ರಶಸ್ತಿ (2017), ಕೊಂಕಣಿ ಕಾವ್ಯಕ್ಕೆ ನೀಡಿರುವ ಕೊಡುಗೆಗೆ ಕವಿತಾ ಟ್ರಸ್ಟ್ ನೀಡುವ ಮಥಾಯಸ್ ಕುಟುಂಬ ದತ್ತಿ ಕಾವ್ಯ ಪ್ರಶಸ್ತಿ (2018), ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿಯಿಂದ ಕೊಂಕಣಿ ಕಾವ್ಯೆಂ: ರುಪಾಂ ಆನಿ ರೂಪಕಾಂ ಪುಸ್ತಕಕ್ಕೆ ಅತ್ಯುತ್ತಮ ಪುಸ್ತಕ ಪ್ರಶಸ್ತಿ (2021), ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿಯಿಂದ ಕೊಂಕಣಿ ಸಾಹಿತ್ಯ ಗೌರವ ಪ್ರಶಸ್ತಿ (2022), ಕೊಂಕಣಿ ಸಾಹಿತ್ಯ ಮತ್ತು ಪತ್ರಿಕೋದ್ಯಮ ಕ್ಷೇತ್ರದಲ್ಲಿ ದಕ್ಷಿಣ ಕನ್ನಡ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ (2023) ಹಾಗೂ ಕೊಂಕಣಿ ಕಾವ್ಯೆಂ: ರುಪಾಂ ಆನಿ ರೂಪಕಾಂ ಪುಸ್ತಕಕ್ಕೆ ಗೋವಾ ಕೊಂಕಣಿ ಅಕಾಡೆಮಿಯಿಂದ ಉತ್ತಮ ಪುಸ್ತಕ ಪ್ರಶಸ್ತಿ (2023) ಲಭಿಸಿವೆ.

850ಕ್ಕೂ ಹೆಚ್ಚು ಕವಿತೆಗಳು, 100ಕ್ಕೂ ಹೆಚ್ಚು ಕಥೆಗಳು ಹಾಗೂ 2,000ಕ್ಕೂ ಹೆಚ್ಚು ಲೇಖನಗಳನ್ನು ಬರೆದಿರುವ ಪೆರ್ನಾಲ್ ಅವರು ಮುದ್ರಣ ಮತ್ತು ವಿದ್ಯುನ್ಮಾನ ಮಾಧ್ಯಮಗಳ ಮೂಲಕ ಕೊಂಕಣಿ ಸಾಹಿತ್ಯವನ್ನು ಪೋಷಿಸುತ್ತಾ ಬಂದಿದ್ದಾರೆ. 2012ರಿಂದ ಉದಯೋನ್ಮುಖ ಬರಹಗಾರರನ್ನು ಗುರುತಿಸಿ ಪ್ರತಿವರ್ಷ ಅಬುಧಾಬಿಯ ಉದ್ಯಮಿ ಹಾಗೂ ದಾನಿ ಲಿಯೋ ರೋಡ್ರಿಗಸ್ ಕುಟುಂಬದ ದತ್ತಿಯಾಗಿ ಕಿಟಾಳ್ ಯುವ ಪುರಸ್ಕಾರವನ್ನು ನೀಡುತ್ತಿದ್ದಾರೆ.

ಈ ಪ್ರಶಸ್ತಿಯು ಸನ್ಮಾನಪತ್ರ ಹಾಗೂ ರೂ.25,000 ನಗದು ಬಹುಮಾನವನ್ನು ಒಳಗೊಂಡಿದೆ.ಪ್ರಸ್ತುತ ಮೈಕಲ್ ಡಿಸೋಜಾ ವಿಷನ್ ಕೊಂಕಣಿ ಪುಸ್ತಕ ಅನುದಾನ ಯೋಜನೆಯ ಪ್ರಧಾನ ಸಂಪಾದಕರಾಗಿದ್ದು, ಕೊಂಕಣಿ ಲೇಖಕ/ಲೇಖಕಿಯರಿಗೆ ತಮ್ಮ ಕೃತಿಯ ಮುದ್ರಣಕ್ಕಾಗಿ ಒಂದು ಪುಸ್ತಕಕ್ಕೆ ರೂ.40,000ವರೆಗೆ ಅನುದಾನ ನೀಡಲಾಗುತ್ತಿದೆ. ರೂ.40 ಲಕ್ಷ ವೆಚ್ಚದ ಈ ಯೋಜನೆಯ ಸಂಪೂರ್ಣ ಖರ್ಚನ್ನು ಅನಿವಾಸಿ ಉದ್ಯಮಿ ಮತ್ತು ಕೊಂಕಣಿ ಭಾಷಾಭಿಮಾನಿ ಮಹಾದಾನಿ ಶ್ರೀ ಮೈಕಲ್ ಡಿಸೋಜಾ ಪ್ರಾಯೋಜಿಸಿದ್ದು, ವಿಶ್ವ ಕೊಂಕಣಿ ಕೇಂದ್ರದ ಉಸ್ತುವಾರಿಯಲ್ಲಿ ಐದು ವರ್ಷಗಳ ಅವಧಿಗೆ 100 ಪುಸ್ತಕಗಳ ಪ್ರಕಟಣೆಯ ಗುರಿಯನ್ನು ಹೊಂದಿದೆ.ಕೊಂಕಣಿ ಸಾಹಿತ್ಯ ಸಮುದಾಯದಲ್ಲಿ ಸಮರ್ಪಿತ ನಾಯಕರಾಗಿರುವ ಪೆರ್ನಾಲ್ ಅವರು 2023ರಲ್ಲಿ ಮಂಗಳೂರಿನಲ್ಲಿ ನಡೆದ ಅಖಿಲ ಭಾರತ ರಜತ ಕೊಂಕಣಿ ಸಾಹಿತ್ಯ ಸಮ್ಮೇಳನದ ಕಾರ್ಯಾಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು. ಪ್ರಸ್ತುತ ಅಖಿಲ ಭಾರತ ಕೊಂಕಣಿ ಪರಿಷತ್‌ನಲ್ಲಿ ಕೋಶಾಧಿಕಾರಿಯಾಗಿದ್ದಾರೆ. ಅವರು ಕೊಂಕಣಿ ಲೇಖಕರ ಒಕ್ಕೂಟದ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದು, ಪ್ರಸ್ತುತ ಸಾಹಿತ್ಯ ಅಕಾಡೆಮಿಯ ಕೊಂಕಣಿ ಭಾಷಾ ಸಲಹಾ ಮಂಡಳಿಯ ಸದಸ್ಯರಾಗಿದ್ದಾರೆ.

# ಮೈಸೂರು ಮೃಗಾಲಯದಲ್ಲಿ ಪ್ರಾಣಿಗಳಿಗೆ ಏರ್‌ಕೂಲರ್

## ಎಳನೀರು, ಓಆರ್‌ಎಸ್, ಹಣ್ಣಿನ ರಸ ಪೂರೈಕೆ: ಹೆಚ್ಚುತ್ತಿರುವ ತಾಪಮಾನ ಹಿನ್ನೆಲೆಯಲ್ಲಿ ಕ್ರಮ



**ಮೈಸೂರು, ಮಾ.16:** ಬೇಸಿಗೆ ತಾಪಮಾನ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಹೀಗಾಗಿ, ಮೈಸೂರು ಮೃಗಾಲಯದಲ್ಲಿರುವ ಪ್ರಾಣಿ–ಪಕ್ಷಿಗಳ ದೇಹ ತಂಪಾಗಿಸುವ ನಿಟ್ಟಿನಲ್ಲಿ ನೀರು ಸಿಂಪಡಣೆ ಹಾಗೂ ಏರ್ ಕೂಲರ್ ಫ್ಯಾನ್ ಅಳವಡಿಸಲಾಗಿದೆ. ಶತಮಾನ ಕಂಡ ಮೈಸೂರಿನ ಹೃದಯ ಭಾಗದಲ್ಲಿರುವ ಶ್ರೀ ಚಾಮರಾಜೇಂದ್ರ ಮೃಗಾಲಯವು ದೇಶದ ಪ್ರಮುಖ ಮೃಗಾಲಯವಾಗಿದೆ. ಪ್ರತಿ ವರ್ಷ ಇಲ್ಲಿಗೆ ಸುಮಾರು 30 ರಿಂದ 35 ಲಕ್ಷ ಪ್ರವಾಸಿಗರು ಭೇಟಿ ನೀಡುತ್ತಾರೆ. ಇಲ್ಲಿ 1500ಕ್ಕೂ ಅಧಿಕ ಪ್ರಾಣಿ–ಪಕ್ಷಿಗಳು ಇವೆ. ಸುಮಾರು 140ಕ್ಕೂ ವಿವಿಧ ಜಾತಿಯ ಪ್ರಭೇದಗಳಿವೆ. ಹೀಗಾಗಿ, ಮೈಸೂರಿಗೆ ಬಂದ ಪ್ರವಾಸಿಗರು ಮೃಗಾಲಯಕ್ಕೆ ಭೇಟಿ ನೀಡುವುದು ಸರ್ವೇ ಸಾಮಾನ್ಯ.

ಮೃಗಾಲಯದಲ್ಲಿರುವ ಮಾಂಸಾಹಾರಿ ಹಾಗೂ ಸಸ್ಯಾಹಾರಿ ಪ್ರಾಣಿಗಳ ಜೊತೆಗೆ ಪಕ್ಷಿಗಳಿಗೂ ಬೇಸಿಗೆಗೆ ತಕ್ಕಂತೆ ಆಹಾರವನ್ನು ಕೊಡಲಾಗುತ್ತಿದೆ. ಅದರಲ್ಲಿ ಗೊರಿಲ್ಲಾ, ಚಿಂಪಾಂಜಿ ಸೇರಿದಂತೆ ಕೋತಿ ಜಾತಿಯ ಪ್ರಾಣಿಗಳಿಗೆ ಆಹಾರದಲ್ಲಿ ಎಳನೀರು, ಗ್ಲೂಕೋಸ್, ಒಆರ್‌ಎಸ್, ಕರಬೂಜ, ಕಲ್ಲಂಗಡಿ ಹಣ್ಣು ಹಾಗೂ ಪರಂಗಿ ಹಣ್ಣನ್ನು ನೀಡಲಾಗುತ್ತಿದೆ. ಕರಡಿಗೆ ಐಸ್ ಕ್ಯೂಬ್ ನೀರಿನಂಶವಿರುವ ಹಣ್ಣನ್ನು ಹೆಚ್ಚಾಗಿ ನೀಡಲಾಗುತ್ತಿದೆ. ಇದರ ಜೊತೆಗೆ ಸಸ್ಯಾಹಾರಿ ಪ್ರಾಣಿಗಳಿಗೆ ಹಸಿ ಹುಲ್ಲು ಹಾಗೂ ಹಸಿ ಸೊಪ್ಪಿನ ಜೊತೆಗೆ ಹಸಿ ತರಕಾರಿಯನ್ನೂ ನೀಡಲಾಗುತ್ತಿದೆ.

ಮಾಂಸಹಾರಿ ಪ್ರಾಣಿಗಳಾದ ಹುಲಿ, ಸಿಂಹ, ಚಿರತೆಗಳು ವಾಸಿಸುವ ಸ್ಥಳಗಳಲ್ಲಿ ಕೃತಕ ಜಲಪಾತಗಳನ್ನು ನಿರ್ಮಿಸಲಾಗಿದೆ. ಅಲ್ಲದೇ, ನೀರಿನ ಗುಂಡಿಗಳನ್ನು ನಿರ್ಮಿಸಿ ಅದರಲ್ಲಿ ನೀರು ತುಂಬಲಾಗುತ್ತಿದೆ. ಇದರಲ್ಲಿ ಕುಳಿತು ಪ್ರಾಣಿಗಳು ಧಗೆಯನ್ನು ಕಡಿಮೆ ಮಾಡಿಕೊಳ್ಳುತ್ತವೆ.ಪಕ್ಷಿಗಳ ಮನೆ ಬಳಿ ಏರ್ ಕೂಲರ್ ಹಾಗೂ ಫ್ಯಾನ್ ಅಳವಡಿಸಿ ಅವುಗಳು ತಂಪಾಗಿ ಇರುವಂತೆ ವ್ಯವಸ್ಥೆ ಮಾಡಲಾಗಿದೆ. ಇದರ ಜೊತೆಗೆ ಸಸ್ಯಾಹಾರಿ ಪ್ರಾಣಿಗಳಾದ ಜಿಂಕೆ, ಸಂಬಾರ್ ಹಾಗೂ ಆನೆ ಸೇರಿದಂತೆ ಇನ್ನಿತರ ಪ್ರಾಣಿಗಳಿರುವ ಸ್ಥಳದಲ್ಲಿ ಕೆಸರಿನ ಗುಂಡಿಯನ್ನು ನಿರ್ಮಾಣ ಮಾಡಲಾಗಿದೆ. ಈ ಪ್ರಾಣಿಗಳು ಅದರಲ್ಲಿ ಇಳಿದು ದೇಹವನ್ನು ತಂಪಾಗಿಸಿಕೊಳ್ಳುತ್ತವೆ. ಮೃಗಾಲಯದ ಸಹಾಯಕ ನಿರ್ದೇಶಕ ಡಾ. ಶಶಿಧರ್ ಅವರು ಮಾತನಾಡಿ, 'ಬೇಸಿಗೆಯ ಸಂದರ್ಭದಲ್ಲಿ ಬಿಸಿಲಿನ ತಾಪಕ್ಕೆ ಪ್ರಾಣಿಗಳು ಡಲ್ ಆಗಿರುತ್ತವೆ ಹಾಗೂ ಆಹಾರ ಕಡಿಮೆ ತಿನ್ನುತ್ತವೆ. ಆದ್ದರಿಂದ, ಇಂತಹ ಸಂದರ್ಭದಲ್ಲಿ ಮೃಗಾಲಯದಲ್ಲಿನ ವಾತಾವರಣ ತಣ್ಣಗಿಡಲು ನೀರಿನ ಸಿಂಪಡಣೆ ವ್ಯವಸ್ಥೆ ಹಾಗೂ ಏರ್ ಕೂಲರ್ ವ್ಯವಸ್ಥೆಯನ್ನು ಮಾಡಲಾಗಿದೆ. ಇದರ ಜೊತೆಗೆ ಆಹಾರದಲ್ಲೂ ಕೆಲವು ಬದಲಾವಣೆ ಮಾಡಲಾಗಿದೆ. ಆಹಾರ ನೀಡುವ ಸಮಯವನ್ನು ಸಹ ಬದಲಾವಣೆ ಮಾಡಲಾಗಿದೆ' ಎಂದು ಮಾಹಿತಿ ನೀಡಿದ್ದಾರೆ.

# ಕಲಬುರಗಿ ಜಿಲ್ಲೆಯ 263 ಗ್ರಾಮಗಳಲ್ಲಿ ಸಂಭಾವ್ಯ ಬೇಸಿಗೆ ಜಲಸಂಕಟ

**ಕಲಬುರಗಿ, ಮಾ. 16:** 'ಸೂರ್ಯ ನಗರಿ' ಎಂದೇ ಹೆಸರಾಗಿರುವ ಜಿಲ್ಲೆಯಲ್ಲಿ ದಿನೇ ದಿನೇ ಬಿಸಿಲಿನ ತೀವ್ರತೆ ಹೆಚ್ಚುತ್ತಿದೆ. ಜಿಲ್ಲೆಯ ಪ್ರಮುಖ ಜೀವಜಲ ನದಿಗಳಾದ ಭೀಮಾ, ಕಾಗಿಣಾ, ಅಮರಜಾ, ಬೆಣ್ಣೆತೊರಾ ಕೃಷ್ಣ ನದಿಗಳು ಹರಿದರೂ ಬೇಸಿಗೆಯ ಹೊತ್ತಿಗೆ ನದಿಗಳ ಜಲಮೂಲಗಳು ಬತ್ತಿ ಜಿಲ್ಲೆಯಲ್ಲಿ ಪ್ರತಿವರ್ಷ ಜೀವಜಲಕ್ಕೆ ತತ್ವಾರ ತಪ್ಪಿದ್ದಲ್ಲ. ಈಗಾಗಲೇ ಜಿಲ್ಲೆಯ ಚಿತ್ತಾಪುರ ತಾಲ್ಲೂಕಿನ ರಾಜೋಳ ಹಾಗೂ ಡೋಣಗಾಂವದಲ್ಲಿ ಸದ್ಯ ಕುಡಿಯುವ ನೀರಿನ ಸಮಸ್ಯೆ ಗಂಭೀರವಾಗಿ ಕಾಣಿಸಿಕೊಂಡಿದ್ದು, ಜನರು ಖಾಲಿಕೊಡಗಳೊಂದಿಗೆ ಬೀದಿಗಳಿದು ಹೋರಾಟ ನಡೆಸುತ್ತಿದ್ದಾರೆ. ರಾಜೋಳ ಗ್ರಾಮದಲ್ಲಿ ಖಾಸಗಿ ಕೊಳವೆಬಾವಿ ಬಾಡಿಗೆಗೆ ಪಡೆಯಲಾಗಿದೆ. ಡೋಣಗಾಂವ ಗ್ರಾಮದಲ್ಲಿ ಸರ್ಕಾರಿ ಕೊಳವೆಬಾವಿಯಿಂದ ನೀರು ಪೂರೈಸಲಾಗುತ್ತಿದೆ.

ಬೇಸಿಗೆಯ ಮುಂದಿನ ಮೂರು ತಿಂಗಳಲ್ಲಿ ಜಿಲ್ಲೆಯ 263 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಲಿದೆ. 263 ಜನವಸತಿ ಪ್ರದೇಶದಲ್ಲಿ 3.71 ಲಕ್ಷ ಜನಸಂಖ್ಯೆಯಿದೆ ಎಂದು ಜಿಲ್ಲಾ ಪಂಚಾಯಿತಿ ಅಡಿಯ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ ಅಂದಾಜಿಸಿದೆ. ಮಾರ್ಚ್ ತಿಂಗಳ ಅಂತ್ಯಕ್ಕೆ 102 ಗ್ರಾಮಗಳು, ಏಪ್ರಿಲ್ ಅಂತ್ಯಕ್ಕೆ 94 ಹಾಗೂ ಮೇ ತಿಂಗಳಾಂತ್ಯದ ಹೊತ್ತಿಗೆ 90 ಗ್ರಾಮಗಳಲ್ಲಿ ಸಂಭವನೀಯ ಜಲಸಂಕಟ ಎದುರಾಗಬಹುದು ಎಂದೂ ಲೆಕ್ಕಾಚಾರ ಮಾಡಿದೆ.

ಆದರೆ, ಕಳೆದ ವರ್ಷಕ್ಕೆ ಹೋಲಿಸಿದರೆ ನೀರಿನ ಸಮಸ್ಯೆ ಎದುರಾಗಬಹುದಾಗ ಗ್ರಾಮಗಳ ಸಂಖ್ಯೆ ಈ ವರ್ಷ ಕುಸಿದಿದೆ. 2025–26ನೇ ಸಾಲಿನಲ್ಲಿ 295 ಗ್ರಾಮಗಳಲ್ಲಿ ನೀರಿನ ಸಮಸ್ಯೆ ಜಲದಾಹ ಎದುರಾಗಲಿದೆ ಎಂದು ಅಂದಾಜಿಸಲಾಗಿತ್ತು.

**ಆಳಂದದಲ್ಲೇ ಹೆಚ್ಚು:** ಜಿಲ್ಲೆಯ 11 ತಾಲ್ಲೂಕುಗಳ ಪೈಕಿ ಆಳಂದದಲ್ಲಿ ಅತಿಹೆಚ್ಚು ಅಂದರೆ 72 ಗ್ರಾಮಗಳಲ್ಲಿ ಈ ಬೇಸಿಗೆಯಲ್ಲಿ ಜೀವಜಲದ ತತ್ವಾರ ಎದುರಿಸಲಿವೆ. ಕಲಬುರಗಿ ತಾಲ್ಲೂಕಿನ 53 ಹಾಗೂ ಅಫಜಲಪುರ ತಾಲ್ಲೂಕಿನ 37 ಜನವಸತಿ ಪ್ರದೇಶಗಳಲ್ಲಿ ನೀರಿಗೆ ಹಾಹಾಕಾರ ಕಂಡು ಬರುವ ಸಾಧ್ಯತೆಗಳಿವೆ. ಶಹಾಬಾದ್ ತಾಲ್ಲೂಕಿನ ಬರೀ ನಾಲ್ಕು ಗ್ರಾಮಗಳು ಕುಡಿಯುವ ನೀರಿನ ಸಮಸ್ಯೆ ಎದುರಿಸಲಿವೆ ಎಂದು ಜಿಲ್ಲಾ ಪಂಚಾಯಿತಿ ಅಂದಾಜಿಸಿದೆ.

**ಜಿಲ್ಲಾ ಪಂಚಾಯಿತಿ ಸಜ್ಜು:** ಪ್ರತಿ ವರ್ಷವೂ ಎದುರಾಗುವ ನೀರಿನ ಸಮಸ್ಯೆ ಪರಿಹರಿಸಲು ಜಿಲ್ಲಾ ಪಂಚಾಯಿತಿ ಈಗಾಗಲೇ ಸಕಲ ಸಿದ್ಧತೆ ಮಾಡಿಕೊಂಡಿದೆ. ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದಲ್ಲಿ ಐದು ಟ್ಯಾಂಕರ್‌ಗಳನ್ನು ಸನ್ನದ್ಧ ಸ್ಥಿತಿಯಲ್ಲಿ ಇರಿಸಿಕೊಂಡಿದೆ. ಜೊತೆಗೆ ನೀರಿನ ಬಿಕ್ಕಟ್ಟು ಎದುರಿಸುವ ಗ್ರಾಮಗಳಲ್ಲಿ ಹಲವು ಕೊಳವೆಬಾವಿಗಳನ್ನು ಗುರುತಿಸಿದೆ. ಅಗತ್ಯಬಿದ್ದರೆ ಆ ಕೊಳವೆ ಬಾವಿಗಳನ್ನು ಬಾಡಿಗೆಗೆ ಪಡೆಯಲು ಕ್ರಮವಹಿಸಿದೆ.

**ಕೊಳವೆ ಬಾವಿಗಳೇ ಬಲ:** ಜಿಲ್ಲೆಯಲ್ಲಿ ಬೇಸಿಗೆಯಲ್ಲಿ ನದಿಗಳು ಬಹುತೇಕ ಬತ್ತಿ ಹೋಗುವುದರಿಂದ ಜೀವಜಲ ಪೂರೈಕೆಗೆ ಜಿಲ್ಲಾ ಪಂಚಾಯಿತಿ ಬಹುತೇಕ ಕೊಳವೆ ಬಾವಿಗಳನ್ನೇ ನೆಚ್ಚಿಕೊಂಡಿದೆ.

ಜಿಲ್ಲೆಯಲ್ಲಿ ಒಟ್ಟು 1,227 ಕೊಳವೆ ಬಾವಿಗಳಿವೆ. ಅದರಲ್ಲಿ 754 ಕೊಳವೆ ಬಾವಿಗಳು ಸುಸ್ಥಿತಿಯಲ್ಲಿವೆ. ಇನ್ನುಳಿದವು ದುರಸ್ತಿಗೆ ಕಾಯುತ್ತಿವೆ. ಈ ನಡುವೆ, ಸರ್ಕಾರಿ ಜಲಮೂಲಗಳಿಲ್ಲದ ಗ್ರಾಮಗಳಲ್ಲಿ ನೀರಿನ ಸಮಸ್ಯೆ ನಿರ್ವಹಿಸಲು ಈಗಾಗಲೇ 308 ಕೊಳವೆಬಾವಿಗಳನ್ನು ಗುರುತಿಸಲಾಗಿದೆ.



**2025–26ರಲ್ಲಿ ಖಾಸಗಿಯಾಗಿ 345 ಕೊಳವೆಬಾವಿ ಗುರುತಿಸಿ ಇಟ್ಟುಕೊಳ್ಳಲಾಗಿತ್ತು. ಅದರಲ್ಲಿ 46 ಕೊಳವೆಬಾವಿಗಳನ್ನು ಬಳಸಲಾಗಿತ್ತು. ಇದಲ್ಲದೇ 15 ಟ್ಯಾಂಕರ್‌ಗಳಿಂದ ಜನರಿಗೆ ಕುಡಿಯುವ ನೀರು ಪೂರೈಸಿ ದಾಹ ತೀರಿಸಲಾಗಿತ್ತು. ಜಿಲ್ಲೆಯ ಗ್ರಾಮೀಣ ಭಾಗದಲ್ಲಿ 263 ಜನವಸತಿ ಪ್ರದೇಶಗಳು ನೀರಿನ ಸಮಸ್ಯೆ ಎದುರಿಸುವ ಅಂದಾಜಿದೆ. ವಾಂತಿಭೇದಿಯಂಥ ಪ್ರಕರಣಗಳ ತಡೆಯಲು ಮುಂಜಾಗ್ರತಾ ಕ್ರಮವಾಗಿ ಗುಣಮಟ್ಟದ ನೀರು ಪೂರೈಕೆಗೆ ಸಕಲ ವ್ಯವಸ್ಥೆ ಮಾಡಿಕೊಳ್ಳಲಾಗಿದೆ.**

**ಕುಡಿಯುವ ನೀರಿನ ಪೂರೈಕೆಗೆ ಸಂಬಂಧಿಸಿದಂತೆ ಸರ್ಕಾರಕ್ಕೆ 6 ಕೋಟಿ ಮೊತ್ತದ ಪ್ರಸ್ತಾವ ಸಲ್ಲಿಸಿದ್ದೇವೆ. ಇದಲ್ಲದೇ ಜಿಲ್ಲೆಯಲ್ಲಿ ಕುಡಿಯುವ ನೀರಿನ ಶಾಶ್ವತ ಯೋಜನೆ ರೂಪಿಸಲು ಕೆಕೆಆರ್‌ಡಿಬಿಯ ಮ್ಯಾಕ್ರೊ ಯೋಜನೆಯಡಿ 17.74 ಕೋಟಿ ಮೊತ್ತದ ಕ್ರಿಯಾ ಯೋಜನೆ ರೂಪಿಸಿ ಸಲ್ಲಿಸಲಾಗಿದೆ. ಜೆಜೆಎಂ ಕಾಮಗಾರಿ ಮುಗಿದರೂ ಜಲಮೂಲ ಇಲ್ಲದ ಕಡೆ ಜನರ ದಾಹ ತೀರಿಸಲು ಇದರಿಂದ ನೆರವಾಗಲಿದೆ. ಎನ್‌ಜಿಬಿ ಜೊತೆಗೂಡಿ ಮೊದಲ ಹಂತದಲ್ಲಿ ಚಿತ್ತಾಪುರದ 10 ಗ್ರಾಮಗಳಲ್ಲಿ ಸುಸ್ಥಿರ ನೀರಿನ ಯೋಜನೆ ಅನುಷ್ಠಾನ ನಡೆಯುತ್ತಿದೆ. ಎರಡನೇ ಹಂತದಲ್ಲಿ ಜಿಲ್ಲೆಯ 100 ಗ್ರಾಮಗಳಿಗೆ ಈ ಯೋಜನೆ ವಿಸ್ತರಣೆಯಾಗಲಿದೆ.**

**– ಭಂವರ್ ಸಿಂಗ್ ಮೀನಾ,**
**ಜಿಲ್ಲಾ ಪಂಚಾಯತ್ ಸಿಇಓ, ಕಲಬುರಗಿ.**

# ಬಳ್ಳಾರಿಯಲ್ಲಿ ನಾಳೆ ನಶಾಮುಕ್ತ ಭಾರತ ಯುವಶುದ್ಧ ಅಭಿಯಾನ ವಾಕಥಾನ್




**ಬಳ್ಳಾರಿ, ಮಾ.16:** ನಶಾ ಮುಕ್ತ ಭಾರತ ಅಭಿಯಾನದ ಅಂಗವಾಗಿ ಯುವ ಶುದ್ಧ ಅಭಿಯಾನ ವಾಕಥಾನ್ ಕಾರ್ಯಕ್ರಮವನ್ನು ಮಾ.18ರಂದು ಬಳ್ಳಾರಿಯಲ್ಲಿ ಆಯೋಜಿಸಲಾಗುತ್ತಿದೆ ಎಂದು ರಾಜಶೇಖರ್ ಗಾಣಿಗೇರಿ ತಿಳಿಸಿದ್ದಾರೆ.

ನಗರದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿರುವ ಪತ್ರಿಕಾ ಭವನದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಥಾವರ್‌ಚಂದ್ ಗೆಹ್ಲೋತ್ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದು, ಯುವಜನರಲ್ಲಿ ಮಾದಕ ದ್ರವ್ಯ ವಿರೋಧಿ ಜಾಗೃತಿ ಮೂಡಿಸುವ ಉದ್ದೇಶದಿಂದ ವಿದ್ಯಾರ್ಥಿಗಳ ಮಹಾ ವಾಕಥಾನ್ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯ ಸಂಯೋಜಿತ ಕಾಲೇಜುಗಳು, ದಿಶಾಬೋಧ ಸುಸ್ಥಿರ ಸಮುದಾಯ ಅಭಿವೃದ್ಧಿ ಪ್ರತಿಷ್ಠಾನ ಹಾಗೂ ಭಾರತ ಸರ್ಕಾರದ ಮಾದಕ ದ್ರವ್ಯ ನಿಯಂತ್ರಣ ಬ್ಯೂರೋ ಸಹಯೋಗದಲ್ಲಿ ಕಾರ್ಯಕ್ರಮ ನಡೆಯಲಿದೆ. RGUHS ಉಪಕುಲಪತಿ ಡಾ. ಭಗವಾನ್ ಬಿ.ಸಿ ಅವರ ಮಾರ್ಗದರ್ಶನದಲ್ಲಿ ಹಾಗೂ ಎನ್‌ಸಿಬಿ ವಲಯ ನಿರ್ದೇಶಕ ಸಚಿನ್ ಗೋರ್ಪಡೆ, ಐಪಿಎಸ್ ಅವರ ಬೆಂಬಲದಲ್ಲಿ ಅಭಿಯಾನ ಜಾರಿಯಲ್ಲಿದೆ ಎಂದು ತಿಳಿಸಿದರು.

ರಾಜ್ಯಾದ್ಯಂತ ಈಗಾಗಲೇ 13 ಜಿಲ್ಲೆಗಳಲ್ಲಿ 15 ಕಾರ್ಯಕ್ರಮಗಳನ್ನು ನಡೆಸಲಾಗಿದ್ದು, ಸುಮಾರು 77 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಭಾಗವಹಿಸಿದ್ದಾರೆ. ಅಂಗಾಂಗ ದಾನ ಜಾಗೃತಿ ಅಭಿಯಾನವೂ ಇದರ ಭಾಗವಾಗಿದ್ದು, 10 ಸಾವಿರಕ್ಕೂ ಹೆಚ್ಚು ಮಂದಿ ಅಂಗದಾನಕ್ಕೆ ಪ್ರತಿಜ್ಞೆ ಮಾಡಿದ್ದಾರೆ ಎಂದು ಹೇಳಿದರು.

ಮಾದಕದ್ರವ್ಯರಹಿತ, ಒತ್ತಡರಹಿತ ಹಾಗೂ ಆತ್ಮಹತ್ಯೆ ರಹಿತ ಕ್ಯಾಂಪಸ್ ನಿರ್ಮಾಣ, ವಿದ್ಯಾರ್ಥಿನಿಯರ ಸುರಕ್ಷತೆ ಮತ್ತು ಯುವಜನರಲ್ಲಿ ಸಾಮಾಜಿಕ ಜವಾಬ್ದಾರಿ ಬೆಳೆಸುವುದು ಅಭಿಯಾನದ ಪ್ರಮುಖ ಉದ್ದೇಶಗಳಾಗಿವೆ.

**ಸುದ್ದಿಗೋಷ್ಠಿಯಲ್ಲಿ ಯೋಗಾನಂದ ರೆಡ್ಡಿ, ಷಡ್ರಕ್ ಮಂಜುನಾಥ್, ಭಾರತೀ, ಅನ್ನಪೂರ್ಣ ಹಾಗೂ ಸೋಮಶೇಖರ್ ಚವೆಲತಿ ಉಪಸ್ಥಿತರಿದ್ದರು.**

**ಕಾರ್ಯಕ್ರಮದ ವಿವರಗಳು:**

**ಮಾರ್ಚ್ 18ರಂದು ಬೆಳಿಗ್ಗೆ 7.30ಕ್ಕೆ ವಿಜಯನಗರ ಮೆಡಿಕಲ್ ಕಾಲೇಜು (ವಿಮ್ಸ್) ಕ್ರೀಡಾಂಗಣದಲ್ಲಿ ವಾಕಥಾನ್ ಆರಂಭವಾಗಲಿದೆ.**

**ಈ ಜಾಗೃತಿ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು, ಶಿಕ್ಷಣ ಸಂಸ್ಥೆಗಳು, ಯುವ ಸಂಘಟನೆಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಸಂಘಟಕರು ಕರೆ ನೀಡಿದ್ದಾರೆ.**

# ವಿದ್ಯಾರ್ಥಿನಿ ಮೇಲೆ ಅತ್ಯಾಚಾರವೆಸಗಿದ ಪೊಲೀಸ್

**ಕಲಬುರಗಿ, ಮಾ. 16:** ಸಾಮಾಜಿಕ ಜಾಲತಾಣ ಇನ್‌ಸ್ಟಾಗ್ರಾಮ್‌ನಲ್ಲಿ ಪರಿಚಯವಾದ ಕೆಎಸ್‌ಆರ್‌ಪಿ ಪೊಲೀಸ್ ಸಿಬ್ಬಂದಿಯೊಬ್ಬ ವಿದ್ಯಾರ್ಥಿನಿಯನ್ನು ಪ್ರೇಮದ ಬಲೆಗೆ ಬೀಳಿಸಿ, ಮದುವೆಯ ಭರವಸೆ ನೀಡಿ ದೈಹಿಕ ಸಂಪರ್ಕ ಬೆಳೆಸಿ ನಂತರ ಮದುವೆಯಾಗದೆ ವಂಚಿಸಿದ ಘಟನೆ ಬೆಳಕಿಗೆ ಬಂದಿದೆ.

ನಗರದ ಮಹಾಲಕ್ಷ್ಮೀ ಲೇಔಟ್‌ನ ವಿದ್ಯಾರ್ಥಿನಿಗೆ ಬೆಳಗಾವಿ ಜಿಲ್ಲೆಯ ಅಥಣಿ ತಾಲೂಕಿನ ಕೋಕಟನೂರ ಗ್ರಾಮದ ಕೆಎಸ್‌ಆರ್‌ಪಿ ಪೊಲೀಸ್ ಸಿಬ್ಬಂದಿ ಶಿವಾನಂದ ಅವಲಕ್ಕಿ ಎಂಬಾತ ಈ ಕೃತ್ಯ ಎಸಗಿದ್ದಾನೆ ಎಂದು ತಿಳಿದುಬಂದಿದೆ.

2024ರಲ್ಲಿ ಇನ್‌ಸ್ಟಾಗ್ರಾಮ್ ಮೂಲಕ ಇಬ್ಬರಿಗೆ ಪರಿಚಯವಾಗಿದ್ದು, 2025ರ ವರೆಗೆ ನಿರಂತರವಾಗಿ ಫೋನ್ ಮೂಲಕ ಮಾತನಾಡಿ ಪ್ರೀತಿಯ ಸಂಬಂಧ ಬೆಳೆಸಿಕೊಂಡಿದ್ದಾನೆ. ಬಳಿಕ ಮದುವೆಯಾಗುವುದಾಗಿ ನಂಬಿಸಿ ಕಲಬುರಗಿ, ವಿಜಯಪುರ, ಹಾಸನ ಸೇರಿದಂತೆ ವಿವಿಧ ಸ್ಥಳಗಳ ಲಾಡ್ಜ್‌ಗಳಲ್ಲಿ ನಾಲ್ಕು–ಐದು ದಿನಗಳ ವರೆಗೆ ತಂಗಿ ಹಲವಾರು ಬಾರಿ ದೈಹಿಕ ಸಂಪರ್ಕ ನಡೆಸಿದ್ದಾನೆ ಎನ್ನಲಾಗಿದೆ.

ಆದರೆ 2025ರ ನ.19ರಂದು ವಿದ್ಯಾರ್ಥಿನಿ ಕರೆ ಮಾಡಿದಾಗ ಮದುವೆಯಾಗುವುದಿಲ್ಲ, ಇನ್ನು ಮುಂದೆ ಕರೆ ಮಾಡಬೇಡ ಎಂದು ಹೇಳಿದ್ದಾನೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಈ ಘಟನೆದಿಂದ ದಿಗ್ಭ್ರಮೆಗೊಂಡ ಸಂತ್ರಸ್ತೆ, ಬಳಿಕ ಆರೋಪಿಯ ಮನೆಗೆ ತೆರಳಿದ್ದಾಳೆ. ಅಲ್ಲಿ ಆರೋಪಿಯ ಕುಟುಂಬಸ್ಥರು ಅವಳನ್ನು ನಿಂದಿಸಿ ಕಳುಹಿಸಿದ್ದಾರೆಯೆಂದು ತಿಳಿದುಬಂದಿದೆ.

ಇದಲ್ಲದೆ ನಾನು ಪೊಲೀಸ್, ಸುಮ್ಮನಿರದಿದ್ದರೆ ನಿನ್ನ ಖಾಸಗಿ ಫೋಟೋಗಳನ್ನು ವೈರಲ್ ಮಾಡುತ್ತೇನೆ ಎಂದು ಬೆದರಿಕೆ ಹಾಕಿದ್ದಾನೆ ಎನ್ನಲಾಗಿದೆ. ಈ ಕುರಿತು ಸಂತ್ರಸ್ತೆಯ ದೂರಿನ ಮೇರೆಗೆ ಕಲಬುರಗಿ ಮಹಿಳಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

# ಮಹಿಳೆಯರಿಂದ ಸಮಾಜಕ್ಕೆ ಭದ್ರ ಬುನಾದಿ

## ಮಹಿಳಾ ಆಯೋಗದ ಮಾಜಿ ಅಧ್ಯಕ್ಷೆ ಮಂಜುಳಾ



**ಬೀದರ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತ ಬೆಂಗಳೂರು, ಬೀದರ್ ಜಿಲ್ಲಾ ಸೌಹಾರ್ದ ಸಹಕಾರಿ ಒಕ್ಕೂಟ ನಿಯಮಿತ ಸಂಯುಕ್ತ ಆಶ್ರಯದಲ್ಲಿ ನಗರದಲ್ಲಿ ಏರ್ಪಡಿಸಿದ್ದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ರಾಜ್ಯ ಮಹಿಳಾ ಆಯೋಗದ ಮಾಜಿ ಅಧ್ಯಕ್ಷೆ ಮಂಜುಳಾ ಅವರು ಉದ್ಘಾಟಿಸಿದರು.**

**ಬೀದರ್, ಮಾ. 16:** ಮಹಿಳೆಯರಿಂದ ಸಮಾಜಕ್ಕೆ ಭದ್ರ ಬುನಾದಿ ಬೀಳುತ್ತಿದೆ. ಹಿಂದೆ ಅಡುಗೆ ಮನೆಗಷ್ಟೇ ಸೀಮಿತರಾಗಿದ್ದ ಮಹಿಳೆಯರು ಇಂದು ಎಲ್ಲ ಕ್ಷೇತ್ರಗಳಲ್ಲಿ ಸಾಧನೆ ಮಾಡುತ್ತಿದ್ದಾರೆ ಎಂದು ರಾಜ್ಯ ಮಹಿಳಾ ಆಯೋಗದ ಮಾಜಿ ಅಧ್ಯಕ್ಷೆ ಮಂಜುಳಾ ಹೇಳಿದರು.

ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತ ಬೆಂಗಳೂರು, ಬೀದರ್ ಜಿಲ್ಲಾ ಸೌಹಾರ್ದ ಸಹಕಾರಿ ಒಕ್ಕೂಟ ನಿಯಮಿತ ಸಂಯುಕ್ತ ಆಶ್ರಯದಲ್ಲಿ ನಗರದಲ್ಲಿ ಏರ್ಪಡಿಸಿದ್ದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿ, ಮಹಿಳೆಯರು ವೀರ ವನಿತೆಯರಾಗಿ ಸಮಾಜಕ್ಕೆ ಸೇವೆ ಸಲ್ಲಿಸುವಂಥ ವೀರಪುತ್ರರನ್ನು ರೂಪಿಸುವಲ್ಲಿ ತಾಯಂದಿರ ಪ್ರಾಮಾಣಿಕ ಪ್ರಯತ್ನ ಅಗತ್ಯವಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಯುಕ್ತ ಸಹಕಾರಿ ನಿರ್ದೇಶಕ ಗುರುನಾಥ ಜ್ಯಾಂತಿಕರ್ ಮಾತನಾಡಿ, ಇಂದು ಮಹಿಳೆಯರು ಎಲ್ಲ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡುತ್ತಿದ್ದಾರೆ. ವೈಜ್ಞಾನಿಕ, ಶೈಕ್ಷಣಿಕ ಹಾಗೂ ಸಾಮಾಜಿಕ ಕ್ಷೇತ್ರಗಳಲ್ಲಿ ತಮ್ಮ ಸಾಮರ್ಥ್ಯವನ್ನು ತೋರಿಸಿದ್ದಾರೆ. ಭಾರತೀಯ ಸಂಸ್ಕೃತಿಯನ್ನು ಉಳಿಸಿ ಬೆಳೆಸುವಲ್ಲಿ ನಾರಿಯರ ಪಾತ್ರ ಮಹತ್ವದ್ದಾಗಿದೆ ಎಂದು ಹೇಳಿದರು.

ವಿದ್ಯಾವತಿ, ಶಿವಾನಿ, ಮಂಗಳಾ, ಮಂಜು ಹೂಗಾರ ಅವರನ್ನು ಸನ್ಮಾನಿಸಲಾಯಿತು. ಕರ್ನಾಟಕ ರಾಜ್ಯ ಮಹಿಳಾ ಸಹಕಾರ ಮಹಾಮಂಡಳದ ಅಧ್ಯಕ್ಷೆ ಶಕುಂತಲಾ ಕೆ. ಬೆಲ್ದಾಳೆ, ಸೌಹಾರ್ದ ಸಂಯುಕ್ತ ಸಹಕಾರಿ ನಿರ್ದೇಶಕಿ ಶೈಲಜಾ ತಪಲಿ, ಬೀದರ್ ಜಿಲ್ಲಾ ಸಹಕಾರಿಗಳ ಉಪನಿಬಂಧಕಿ ಮಂಜುಳಾ ಎಸ್., ಜಿಲ್ಲಾ ಒಕ್ಕೂಟದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅಮೃತ್ ಹೊಸಮನಿ, ನಿರ್ದೇಶಕರಾದ ನಾಗಶೆಟ್ಟಿ ಪಾಟೀಲ್, ಶ್ರೀಕಾಂತ್ ಸ್ವಾಮಿ, ಸಂಜೀವ್ ಕುಮಾರ್ ಸಜ್ಜನ್, ಶಿವಶಂಕರ್ ಬೆಳಮಗಿ, ಮಾರುತಿ ವಾಡೇಕರ್, ಮಹಾದೇವ ಅಷ್ಟೂರೆ ಉಪಸ್ಥಿತರಿದ್ದರು.

ಬೀದರ್ ಜಿಲ್ಲಾ ಸೌಹಾರ್ದ ಸಹಕಾರಿಗಳ ಒಕ್ಕೂಟದ ನಿರ್ದೇಶಕಿ ಮಾಯಾದೇವಿ ಸಿಂಧನಕೇರಾ ಸ್ವಾಗತಿಸಿದರು. ಬೀದರ್ ಜಿಲ್ಲಾ ಸೌಹಾರ್ದ ಅಭಿವೃದ್ಧಿ ಅಧಿಕಾರಿ ರಾಜೇಶ್ ಕೆ.ಎಂ. ಪ್ರಾಸ್ತಾವಿಕವಾಗಿ ಮಾತನಾಡಿದರು. ಭವಾನಿ ಹೊಸಮನಿ ನಿರೂಪಿಸಿದರೆ, ಪದ್ಮಜಾ ಪೋದ್ದಾರ್ ವಂದಿಸಿದರು.

# ರಾಮನವಮಿ ಉತ್ಸವ ಸ್ಟಿಕರ್ ಬಿಡುಗಡೆ

## ಮಾ.28ರಂದು ಅದ್ದೂರಿ ರಾಮನವಮಿ ಉತ್ಸವ ಆಚರಣೆಗೆ ನಿರ್ಧಾರ



**ಬೀದರ, ಮಾ. 16:** ಜಿಕಲ್ಲೆಯ ಭಾಲ್ಕಿ ಪಟ್ಟಣದಲ್ಲಿ ಇದೇ ಮಾ.28 ರಂದು ವಿಶ್ವ ಹಿಂದೂ ಪರಿಷತ್ ಮತ್ತು ಬಜರಂಗದಳದ ವತಿಯಿಂದ ಶ್ರೀರಾಮ ನವಮಿ ಉತ್ಸವ – ಭಾಲ್ಕಿ ಅದ್ದೂ ರಿಯಾಗಿ ಆಚರಿಸಲು ನಿರ್ಧರಿಸಲಾಯಿತು.

ಪಟ್ಟಣದ ರಾಮ ಮಂದಿರದಲ್ಲಿ ಶ್ರೀರಾಮನವಮಿ ಉತ್ಸವ ಸಮಿತಿಯ ವತಿಯಿಂದ ಆಯೋಜಿಸಿದ್ದ ಶ್ರೀರಾಮನವಮಿ ಕರಪತ್ರ ಮತ್ತು ಸ್ಟಿಕರ್ ಬಿಡುಗಡೆ ಸಮಾರಂಭ ಉದ್ಘಾಟಿಸಿ ಮಾತನಾಡಿದ ಸ್ವಾಗತ ಸಮಿತಿ ಅಧ್ಯಕ್ಷ ಶಿವಕುಮಾರ ಲೋಖಂಡೆ, ವಿಶ್ವಹಿ ಂದೂ ಪರಿಷತ್ ಮತ್ತು ಬಜರಂಗದಳದ ವತಿಯಿಂದ ಇದೇ ಮಾ.28 ರಂದು ನಡೆಯಲಿರುವ ಶ್ರೀರಾಮ ನವಮಿ ಉತ್ಸವ ಕಾರ್ಯಕ್ರಮದ ಪೂರ್ವ ಭಾವಿ ಯಾಗಿ ಮಾ.23 ರಂದು ಪತ್ರಿಕಾಗೋಷ್ಠಿ ಕರೆಯಲಾಗುವುದು. ಅಲ್ಲದೇ ಮಾ.26 ರಂದು ಕಾರ್ ಮತ್ತು ಬೈಕ್ ರ್‍ಯಾಲಿ ನಡೆಸಲಾಗುವುದು ಎಂದು ಹೇಳಿದರು.

ವಿಶ್ವಹಿಂದೂ ಪರಿಷತ್ ಮುಖಂಡ ಸಚಿನ ಜಾಧವ ಮಾತನಾಡಿ, ಶ್ರೀರಾಮನವಮಿ ಉತ್ಸವ ನಿಮಿತ್ಯ ಮಾ.26 ರಂದು ನಡೆಯಲಿರುವ ಕಾರ್, ಮತ್ತು ಬೈಕ್ ರ್‍ಯಾಲಿಯು ಹಳೆ ಪಟ್ಟಣದ ಗಡಿ(ಕೋಟೆ) ಯಿಂದ ಪ್ರಾರಂಭವಾಗಿ ಚಾವಡಿ, ಹಿರೇಮಠ ಸಂಸ್ಥಾನ ಮೂಲಕ ಸಾಗಿ ಬೊಮ್ಮಗೊಂಡೇಶ್ವರ ವೃತ್ತದ ಮೂಲಕ ಬಸ್‌ನಿಲ್ದಾಣ, ಮಹಾತ್ಮಾಜ್ಯೋತಿಬಾ ಫುಲೆ ವೃತ್ತ, ಗಾಂಧಿ ವೃತ್ತ, ಡಾ। ಬಿ.ಆರ್.ಅಂಬೇಡ್ಕರ್ ವೃತ್ತ, ಚನ್ನಬಸವಾಶ್ರಮ, ಬಸವೇಶ್ವರ ವೃತ್ತದ ಮೂಲಕ ಸಾಗಿ ರಾಮ ಮಂದಿರದಲ್ಲಿ ಸಮಾವೇಶ ಗೊಳ್ಳುವುದು ಎಂದು ತಿಳಿಸಿದರು.

ಉತ್ಸವ ಸ್ವಾಗತ ಸಮಿತಿಯ ಉಪಾಧ್ಯಕ್ಷ ಸೋಮನಾಥಪ್ಪ ಅಸ್ಟೂರೆ ಮಾತನಾಡಿ, ಮಾ.28 ರಂದು ನಡೆಯುವ ಶ್ರೀರಾಮ ನವಮಿ ಉತ್ಸವ ನಿಮಿತ್ಯ ಬೃಹತ್ ಶೋಭಾ ಯಾತ್ರೆ ಹಮ್ಮಿಕೊಳ್ಳಲಾಗಿದ್ದು, ಶೋಭಾ ಯಾತ್ರೆಯು ಅಂದು ಮದ್ಯಾನ್ಹ 2 ಗಂಟೆಗೆ ವಿಠಲ ಮಂದಿರ ಚೌಡಿ ಯಿಂದ ಪ್ರಾರಂಭವಾಗಿ ಗಂಜ್ ಏರಿಯಾದ ಗಾಂಧಿ ವೃತ್ತದಲ್ಲಿ ಸಮಾವೇಶ ಗೊಳ್ಳುವುದು. ಗಾಂಧಿ ವೃತ್ತದಲ್ಲಿ ಸಂಜೆ 7 ಗಂಟೆಗೆ ನಡೆಯಲಿರುವ ಸಾರ್ವಜನಿಕ ಸಮಾರಂಭದಲ್ಲಿ ಸಾಮಾಜಿಕ ಕಾರ್ಯಕರ್ತೆ ಕಾಜಲ ಹಿಂದೂಸ್ಥಾನಿ ವಿಶೇಷ ವಕ್ತಾರರಾಗಿ ಮಾತನಾಡುವುರು. ಜೊತೆಗೆ ಮೆಹಕರ ಶ್ರೀ ರಾಜೇಶ್ವರ ಶಿವಾಚಾರ್ಯರು, ಹಿರೇಮಠದ ಶ್ರೀ ಗುರುಬಸವ ಪಟ್ಟದ್ದೇವರು, ಹಲಬರ್ಗಾಶ್ರೀ ಹಾವಗಿಲಿಂಗೇಶ್ವರ ಶಿವಾಚಾರ್ಯರು, ಬಂಜಾರಾ ಶಕ್ತಿ ಪೀಠದ ಶ್ರೀ ರಾಮ ಚೈತನ್ಯ ಮಹಾರಾಜರು ದಿವ್ಯ ಸಾನಿಧ್ಯವಹಿಸಿ ಮಾತನಾಡುವರು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಾತೃಶಕ್ತಿ ಸ್ವಾಗತ ಸಮಿತಿಯ ಅಧ್ಯಕ್ಷೆ ಸುನಿತಾ ಶಿವಶರಣಪ್ಪ ಕುಡತೆ, ಡಾ। ನಮ್ರತಾ ಗುಂಡೇರಾವ ಶೇಡೋಳೆ, ಸ್ನಹೇಲ ಅಮೀತ ಅಸ್ಟೂರೆ, ಡಾ। ವೈಶಾಲಿ ಯುವರಾಜ ಜಾಧವ, ಡಾ। ಕವಿತಾ ನಿತೀನ ಪಾಟೀಲ, ಗೀತಾ ಅನೀಲಕುಮಾರ ಭೂರೆ, ಅನಿತಾ ವಸಂತ ಪವಾರ, ಲಕ್ಷ್ಮೀ ರಾಜಕುಮಾರ ಸಿಂಧೆ, ಪ್ರಭಾವತಿ ದಿಲೀಪರಾವ ಸಿಂದೆ, ಸ್ವಾಗತ ಸಮಿತಿಯ ಮುಖಂಡರಾದ ಜಗದೀಶ ಖಂಡ್ರೆ, ಕೆ.ಡಿ.ಗಣೇಶ, ಜಯರಾಜ ದಾಬಶೆಟ್ಟಿ, ಡಾ। ಅಮೀತ ಅಷ್ಟೂರೆ, ಡಾ। ಗುಂಡೇರಾವ ಶೇಡೋಳೆ, ಶೈಲೇಶ ಚಳಕಾಪೂರೆ, ಜಯಕೀಶನ ಬಿಯಾಣಿ, ಅಶೋಕ ರಾಜೋಳೆ, ಶೈಲೇಶ ಮಾಲಮಾಣಿ, ಡಾ।.ಜಗದೀಶ ಭೂರೆ, ಜೈರಾಜ ಕೊಳ್ಳಾ, ಕೈಲಾಸ ಪಾಟೀಲ, ಶರದ ದುರ್ಗಾಳೆ, ಧರ್ಮು ವಂಕೆ, ಕೇಶವ ಸೂರ್ಯವಂಶಿ, ಸಂತೋಷ ಶೇಡೋಳೆ, ರವಿ ಕುಂಬಾರ, ಮಲ್ಲಿಕಾರ್ಜುನ ಭಂಗೂರೆ, ಅಮರ, ದತ್ತು ಜಾಧವ, ರಾಜು ಶಿಂಧೆ, ರಾಹುಲ ಮೇತ್ರೆ, ಕಾಶಿನಾಥ ಕೋಡಗೆ ಉಪಸ್ಥಿತರಿದ್ದರು.

ಗುಂಡಯ್ಯಾ ಸ್ವಾಮಿ ಸ್ವಾಗತಿಸಿದರು. ರವಿ ಕುಂಬಾರ ನಿರೂಪಿಸಿದರು. ಸಂಗಮೇಶ ಟೆಂಕಾಳೆ ವಂದಿಸಿದರು.

# ಆರ್‌ವೈಎಂಸಿಯಲ್ಲಿ ಎಲೆಕ್ಟ್ರಾನಿಕ್ ಪರಿವರ್ತಕಗಳು ಕುರಿತು ಕಾರ್ಯಕ್ರಮ

**ಬಳ್ಳಾರಿ, ಮಾ.16:** ನಗರದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾದ ರಾವ್ ಬಹದ್ದೂರ್ ವೈ ಮಹಾಬಲೇಶ್ವರಪ್ಪ ತಾಂತ್ರಿಕ ಮಹಾವಿದ್ಯಾಲಯದಲ್ಲಿ "ಮ್ಯಾಟ್ಲ್ಯಾಬ್ ಮತ್ತು ಸಿಮ್ಯುಲಿಂಕ್ ಮೂಲಕ ವಿದ್ಯುತ್ ವಾಹನ ವ್ಯವಸ್ಥೆಗಳಿಗೆ ವಿದ್ಯುತ್ ಎಲೆಕ್ಟ್ರಾನಿಕ್ ಪರಿವರ್ತಕಗಳು" ಕುರಿತು ಮೂರು ದಿನಗಳ ವಿದ್ಯಾರ್ಥಿ ಅಭಿವೃದ್ಧಿ ಕಾರ್ಯಕ್ರಮ ಆಯೋಜಿಸಲಾಗಿದೆ.

ಇ.ಇ.ಇ ವಿಭಾಗದ ಮುಖ್ಯಸ್ಥ ಡಾ. ಎಸ್. ಕೊಟ್ರೇಶ್, ವಿದ್ಯುತ್ ವಾಹನಗಳು (ಇ.ವಿ.) ಭಾರತಕ್ಕೆ ನಿರ್ಣಾಯಕವಾಗಿವೆ ಏಕೆಂದರೆ ಅವು ಆಮದು ಮಾಡಿಕೊಳ್ಳಬೇಕಾದ ಪಳೆಯುಳಿಕೆ ಇಂಧನಗಳನ್ನು ಭಾರೀ ಪ್ರಮಾಣದಲ್ಲಿ ಕಡಿಮೆ ಮಾಡುತ್ತವೆ, ತೀವ್ರ ವಾಯು ಮಾಲಿನ್ಯವನ್ನು ಕಡಿಮೆ ಮಾಡುತ್ತವೆ ಮತ್ತು ಮುಂಬರುವ ದಶಕಗಳಲ್ಲಿ , 2070 ರ ವೇಳೆಗೆ ಶೂನ್ಯ ಹೊರಸೂಸುವಿಕೆ ಗುರಿಗಳನ್ನು ಸಾಧಿಸುತ್ತವೆ. ಇ.ವಿ. ಕಡಿಮೆ ಚಾಲನಾ ವೆಚ್ಚಗಳು, ಕನಿಷ್ಠ ನಿರ್ವಹಣೆಯನ್ನು ಒದಗಿಸುತ್ತವೆ ಮತ್ತು ತ್ವರಿತ ಸಾರ್ವಜನಿಕ ಚಾರ್ಜಿಂಗ್ ನೆಟ್ವರ್ಕ್ ಬೆಳವಣಿಗೆಯಂತಹ ಸ್ಥಳೀಯ ತಂತ್ರಜ್ಞಾನ ಅಭಿವೃದ್ಧಿ ಮತ್ತು ಮೂಲಸೌಕರ್ಯ ವಿಸ್ತರಣೆಯ ಮೂಲಕ ಸುಸ್ಥಿರ, ಹಸಿರು ಆರ್ಥಿಕತೆಯನ್ನು ಬೆಂಬಲಿಸುತ್ತವೆ.

ಸಂಪನ್ಮೂಲ ವ್ಯಕ್ತಿಯಿಂದ ಈ ಕ್ಷೇತ್ರದಲ್ಲಿನ ಬೆಳವಣಿಗೆಗಳನ್ನು ತಿಳಿದುಕೊಳ್ಳಲು, ಇ.ವಿ. ತಂತ್ರಜ್ಞಾನಗಳಲ್ಲಿ ಹೊಸ ಅಭಿವೃದ್ಧಿಶೀಲ ಕೌಶಲ್ಯಗಳನ್ನು ನವೀಕರಿಸಲು ಇದು ಉತ್ತಮ ಸಂದರ್ಭವಾಗಿದೆ. ಎಂದು ಮಾತನಾಡಿದರು, ಸಂಪನ್ಮೂಲ ವ್ಯಕ್ತಿ, ಶಿವರಾಜ್ ವಿ ಎಸ್, ಅಬೆಯಾಂಟ್ರಿಕ್ಸ್ ಎಜುಸಾಫ್ಟ್ ನಿಂದ ಮಾತನಾಡುತ್ತಾ " "ವಿದ್ಯುತ್ ವಾಹನ (ಇ.ವಿ) ವ್ಯವಸ್ಥೆಗಳಿಗೆ ವಿದ್ಯುತ್ ಎಲೆಕ್ಟ್ರಾನಿಕ್ ಪರಿವರ್ತಕಗಳು ನಿರ್ಣಾಯಕವಾಗಿವೆ, ಬ್ಯಾಟರಿ, ಮೋಟಾರ್ ಮತ್ತು ಸಹಾಯಕ ಘಟಕಗಳ ನಡುವೆ ಪರಿಣಾಮಕಾರಿ ಶಕ್ತಿ ನಿರ್ವಹಣೆ ಮತ್ತು ಪರಿವರ್ತನೆಯನ್ನು ಸಕ್ರಿಯಗೊಳಿಸುತ್ತವೆ. ಪ್ರಮುಖ ಕಾರ್ಯಗಳಲ್ಲಿ ಮೋಟಾರ್ ಡ್ರೈವ್‌ಗಾಗಿ ಡಿಸಿ–ಎಸಿ ಪವರ್ ಇನ್ವರ್ಶನ್, ಸ್ಥಿರತೆಗಾಗಿ ವೋಲ್ಟೇಜ್ ನಿಯಂತ್ರಣ ಮತ್ತು ಚಾರ್ಜಿಂಗ್‌ಗಾಗಿ ಎಸಿ–ಡಿಸಿ ಪರಿವರ್ತನೆ ಸೇರಿವೆ. ಅವು ವಾಹನ ದಕ್ಷತೆ, ಚಾಲನೆಯ ವ್ಯಾಪ್ತಿ, ಟಾರ್ಕ್ ನಿಯಂತ್ರಣವನ್ನು ಹೆಚ್ಚಿಸುತ್ತವೆ ಮತ್ತು ಪುನರುತ್ಪಾದಕ ಬ್ರೇಕಿಂಗ್ ಅನ್ನು ನಿರ್ವಹಿಸುತ್ತವೆ" ಎಂದು ಮಾತನಾಡಿದರು



# ಹಾರ್ಮುಜ್ ಜಲಸಂಧಿ ಮಿತ್ರರಿಗೆ ಮಾತ್ರ ಮುಕ್ತ ಶತ್ರುಗಳಿಗಲ್ಲ: ಇರಾನ್ ವಿದೇಶಾಂಗ ಸಚಿವ



**ಟೆಹ್ರಾನ್, ಮಾ. 16:** ಇರಾನ್‌ನ ದೃಷ್ಟಿಕೋನದಿಂದ ಹಾರ್ಮುಜ್ ಜಲಸಂಧಿಯು ತೆರೆದಿದೆ ಎಂದು ಇರಾನ್‌ನ ವಿದೇಶಾಂಗ ಸಚಿವ ಅಬ್ಬಾಸ್ ಅರಘ್ಚಿ ಸೋಮವಾರ ಹೇಳಿದ್ದಾರೆ, ಆದರೂ ಅದು ಶತ್ರುಗಳು ಮತ್ತು ಅವರ ಮಿತ್ರರಾಷ್ಟ್ರಗಳಿಗೆ ಮಾತ್ರ ಮುಚ್ಚಲ್ಪಟ್ಟಿದೆ.

ಹಾರ್ಮುಜ್ ಜಲಸಂಧಿಯು ಮುಕ್ತವಾಗಿದೆ, ಆದರೆ ನಮ್ಮ ಶತ್ರುಗಳಿಗೆ, ನಮ್ಮ ವಿರುದ್ಧ ಮತ್ತು ಅವರ ಮಿತ್ರರಾಷ್ಟ್ರಗಳ ವಿರುದ್ಧ ಈ ಹೇಡಿತನದ ಆಕ್ರಮಣವನ್ನು ನಡೆಸಿದವರಿಗೆ ಮುಚ್ಚಲಾಗಿದೆ" ಎಂದು ಅವರು ಇಲ್ಲಿ ನಡೆದ ವಿದೇಶಾಂಗ ಸಚಿವಾಲಯದ ವಕ್ತಾರರ ಸಾಪ್ತಾಹಿಕ ಪತ್ರಿಕಾಗೋಷ್ಠಿಯ ಹೊರತಾಗಿ ಹೇಳಿದರು ಎಂದು ಇರಾನ್ ಸುದ್ದಿ ಸಂಸ್ಥೆಯೊಂದು ತಿಳಿಸಿದೆ. ಇರಾನ್ ತನ್ನನ್ನು ತಾನು ರಕ್ಷಿಸಿಕೊಳ್ಳುವಲ್ಲಿ ಯಾವುದೇ ಹಿಂಜರಿಕೆಯನ್ನು ಹೊಂದಿಲ್ಲ ಮತ್ತು ಅಗತ್ಯವಿರುವವರೆಗೂ ಯುದ್ಧವನ್ನು ಮುಂದುವರಿಸುತ್ತದೆ ಎಂದು ಅವರು ಒತ್ತಿ ಹೇಳಿದರು. ಯುಎಸ್–ಇಸ್ರೇಲಿ ಮಿಲಿಟರಿ ಕಾರ್ಯಾಚರಣೆಯ ನಂತರ ಇರಾನ್ ಯಾವುದೇ ಸಂದೇಶವನ್ನು ಕಳುಹಿಸಿಲ್ಲ ಅಥವಾ ಕದನ ವಿರಾಮಕ್ಕಾಗಿ ಯಾವುದೇ ವಿನಂತಿಯನ್ನು ಮಾಡಿಲ್ಲ ಎಂದು ಅರಘ್ಚಿ ಘೋಷಿಸಿದರು. "ಆದಾಗ್ಯೂ, ಈ ಯುದ್ಧವು ಇನ್ನು ಮುಂದೆ ಮುಂದುವರಿಯದ ರೀತಿಯಲ್ಲಿ ಕೊನೆಗೊಳ್ಳಬೇಕು ಮತ್ತು ಶತ್ರುಗಳು ಮತ್ತೆ ಆಕ್ರಮಣದ ಬಗ್ಗೆ ಯೋಚಿಸುವುದಿಲ್ಲ.

ಅವರು ಇಲ್ಲಿಯವರೆಗೆ ಉತ್ತಮ ಪಾಠವನ್ನು ಕಲಿತಿದ್ದಾರೆ ಎಂದು ವಿದೇಶಾಂಗ ಸಚಿವರು ಗಮನಿಸಿದರು. ಆಕ್ರಮಣಶೀಲತೆಯ ವಿರುದ್ಧ ಇರಾನ್ ತನ್ನ ಗೌರವಾನ್ವಿತ ಪ್ರತಿರೋಧವನ್ನು ಅಚಲ ರೀತಿಯಲ್ಲಿ ಮುಂದುವರಿಸುತ್ತದೆ ಎಂದು ಅವರು ಒತ್ತಿ ಹೇಳಿದರು. ಏತನ್ಮಧ್ಯೆ, ಅಮೆರಿಕ ಮತ್ತು ಇಸ್ರೇಲಿ ಪಡೆಗಳು ಇರಾನ್ ಮೇಲೆ ಬಾಂಬ್ ದಾಳಿ ನಡೆಸುವುದನ್ನು ಮುಂದುವರೆಸಿವೆ, ಟೆಹ್ರಾನ್, ಹಮದಾನ್ ಮತ್ತು ಇಸ್ಫಹಾನ್ ಸೇರಿದಂತೆ ನಗರಗಳ ಮೇಲೆ ದಾಳಿ ನಡೆಸಿವೆ, ಇರಾನಿನ ಪ್ರತಿದಾಳಿಗಳು ಮುಂದುವರೆದಿದ್ದು, ಹಲವಾರು ಇಸ್ರೇಲಿ ನಗರಗಳಲ್ಲಿ ಹಾನಿ ವರದಿಯಾಗಿದೆ.

# ಇರಾನ್ ಜೊತೆ ಇನ್ನೂ ಮೂರು ವಾರ ಯುದ್ಧಕ್ಕೆ ಸಿದ್ಧ: ಇಸ್ರೇಲ್ ಘೋಷಣೆ

**ಟೆಲ್ ಅವಿವ್, ಮಾ.16:** ಅಮೆರಿಕ–ಇಸ್ರೇಲ್ ಮತ್ತು ಇರಾನ್ ಯುದ್ಧ ನಿಧಾನವಾಗುವ ಯಾವುದೇ ಲಕ್ಷಣಗಳನ್ನು ತೋರಿಸುತ್ತಿಲ್ಲ. ಸೋಮವಾರ, ಇಸ್ರೇಲ್ ಇನ್ನೂ ಮೂರು ವಾರಗಳ ಯುದ್ಧಕ್ಕೆ ವಿವರವಾದ ಯೋಜನೆಗಳನ್ನು ಹೊಂದಿದೆ ಎಂದು ಸ್ಪಷ್ಟಪಡಿಸಿದೆ. ತನ್ನ ಸೇನೆಯು ರಾತ್ರಿಯಿಡೀ ಇರಾನ್‌ನಾದ್ಯಂತದ ಸ್ಥಳಗಳ ಮೇಲೆ ದಾಳಿ ಮಾಡುವುದನ್ನು ಮುಂದುವರೆಸಿದೆ. ಇಸ್ರೇಲಿ ಮಿಲಿಟರಿ ವಕ್ತಾರ ಲೆಫ್ಟಿನೆಂಟ್ ಕರ್ನಲ್ ನಾದವ್ ಶೋಶಾನಿ ಮಾಧ್ಯಮ ಗೋಷ್ಠಿಯಲ್ಲಿ ಇರಾನ್‌ನೊಂದಿಗಿನ ಯುದ್ಧಕ್ಕೆ ಮುಂದಿನ ಮೂರು ವಾರಗಳವರೆಗೆ ವಿವರವಾದ ಕಾರ್ಯಾಚರಣೆಯ ಯೋಜನೆಗಳಿವೆ ಎಂದು ಬಹಿರಂಗಪಡಿಸಿದ್ದಾರೆ. ಯುದ್ಧವನ್ನು ಮತ್ತಷ್ಟು ವಿಸ್ತರಿಸಲು ಹೆಚ್ಚುವರಿ ಯೋಜನೆಗಳಿವೆ ಎಂದು ಅವರು ಹೇಳಿದರು. ಏತನ್ಮಧ್ಯೆ, ಇರಾನಿನ ಡ್ರೋನ್ ದಾಳಿಗಳು ದುಬೈ ವಿಮಾನ ನಿಲ್ದಾಣವನ್ನು ತಾತ್ಕಾಲಿಕವಾಗಿ ಮುಚ್ಚಿದವು ಮತ್ತು ಯುನೈಟೆಡ್ ಅರಬ್ ಎಮಿರೇಟ್ಸ್ (ಯುಎಇ) ನಲ್ಲಿರುವ ಪ್ರಮುಖ ತೈಲ ಸೌಲಭ್ಯವನ್ನು ಹೊಡೆದವು. ಯುದ್ಧವು ಈಗ ಮೂರನೇ ವಾರವನ್ನು ಪ್ರವೇಶಿಸುತ್ತಿದೆ. ಸ್ಪಷ್ಟ ಅಂತ್ಯ ಕಾಣುತ್ತಿಲ್ಲ. ಇಸ್ರೇಲ್ ಮತ್ತು ಅಮೆರಿಕ ಫೆ.28 ರಂದು, ಇರಾನ್‌ನಾದ್ಯಂತ ಅನೇಕ ಸ್ಥಳಗಳು ಮತ್ತು ನಗರಗಳ ಮೇಲೆ ಅನಿರೀಕ್ಷಿತ ವೈಮಾನಿಕ ದಾಳಿಗಳನ್ನು ಪ್ರಾರಂಭಿಸಿದವು. ಇರಾನ್ ತನ್ನ ಸರ್ವೋಚ್ಚ ನಾಯಕ ಅಲಿ ಖಮೇನಿ ಮತ್ತು ಹಲವಾರು ಇತರ ಇರಾನಿನ ಅಧಿಕಾರಿಗಳನ್ನು ಕಳೆದುಕೊಂಡಿತು. ಇರಾನ್ ಇಸ್ರೇಲ್, ಅಮೆರಿಕ ನೆಲೆಗಳು ಮತ್ತು ಈ ಪ್ರದೇಶದ ಅಮೆರಿಕ –ಮಿತ್ರ ರಾಷ್ಟ್ರಗಳ ವಿರುದ್ಧ ಕ್ಷಿಪಣಿ ಮತ್ತು ಡ್ರೋನ್ ದಾಳಿಗಳೊಂದಿಗೆ ಪ್ರತಿಕ್ರಿಯಿಸಿತು.

ಈ ಯುದ್ಧದ ಪರಿಣಾಮವಾಗಿ, ತೈಲ ಮತ್ತು ಅನಿಲ ಬೆಲೆಗಳಲ್ಲಿ ತಕ್ಷಣದ ಏರಿಕೆ ಮಾತ್ರವಲ್ಲದೆ, ವಾಯುಯಾನ ಮತ್ತು ಪ್ರವಾಸೋದ್ಯಮದಲ್ಲಿ ವ್ಯಾಪಕ ಅಡಚಣೆಗಳು ಮತ್ತು ಹಣಕಾಸು ಮಾರುಕಟ್ಟೆಗಳಲ್ಲಿ ಹೆಚ್ಚಿದ ಏರಿಳಿತಗಳಿವೆ. ಇರಾನ್ ಪ್ರಮುಖ ಹಡಗು ಮಾರ್ಗವಾದ ಹಾರ್ಮುಜ್ ಜಲಸಂಧಿಯನ್ನು ಮುಚ್ಚಿ ಇಂಧನ ಸೌಲಭ್ಯಗಳ ಮೇಲೆ ದಾಳಿ ಮಾಡಿ ಜಾಗತಿಕ ತೈಲ ಮತ್ತು ಅನಿಲ ಸಾಗಣೆಯನ್ನು ಅಡ್ಡಿಪಡಿಸಿತು.

# ಹಾರ್ಮುಜ್ ಜಲಸಂಧಿ ತೆರೆಯುವ ಯೋಜನೆ ಮಿತ್ರರಾಷ್ಟ್ರಗಳ ಸಹಕಾರ ಕೋರಿದ ಯುಕೆ ಪ್ರಧಾನಿ




**ಲಂಡನ್, ಮಾರ್ಚ್ 16 :** ಹಾರ್ಮುಜ್ ಜಲಸಂಧಿಯನ್ನು ಮತ್ತೆ ತೆರೆಯುವ ಯೋಜನೆಯಲ್ಲಿ ಬ್ರಿಟನ್ ಮಿತ್ರರಾಷ್ಟ್ರಗಳೊಂದಿಗೆ ಕೆಲಸ ಮಾಡುತ್ತಿದೆ ಆದರೆ ವ್ಯಾಪಕ ಯುದ್ಧಕ್ಕೆ ಎಳೆಯಲ್ಪಡುವುದಿಲ್ಲ ಎಂದು ಯುಕೆ ಪ್ರಧಾನಿ ಕೀರ್ ಸ್ಟಾರ್ಮರ್ ಸೋಮವಾರ ಹೇಳಿದ್ದಾರೆ. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಪ್ರಧಾನಿ ಸ್ಟಾರ್ಮರ್, ಬ್ರಿಟನ್ ಅಮೆರಿಕ ಮತ್ತು ಯುರೋಪ್ ಮತ್ತು ಕೊಲ್ಲಿಯಲ್ಲಿರುವ ಮಿತ್ರರಾಷ್ಟ್ರಗಳೊಂದಿಗೆ ಯುಕೆ ಹೊಂದಿರುವ ಗಣಿ–ಬೇಟೆ ಡ್ರೋನ್‌ಗಳನ್ನು ಬಳಸುವ ಸಾಧ್ಯತೆಯ ಬಗ್ಗೆ ಚರ್ಚಿಸುತ್ತಿದೆ ಎಂದು ಹೇಳಿದರು. ಆದರೆ, ಯುಕೆ ಯುದ್ಧನೌಕೆಯನ್ನು ಕಳುಹಿಸುವ ಸಾಧ್ಯತೆಯಿಲ್ಲ ಎಂದು ಅವರು ಸೂಚಿಸಿದರು. ಪ್ರಮುಖ ತೈಲ ಸಾಗಣೆ ಮಾರ್ಗವನ್ನು ತೆರೆಯಲು ಯುಎಸ್ ಮಿತ್ರರಾಷ್ಟ್ರಗಳು ಯುದ್ಧನೌಕೆಗಳನ್ನು ಕಳುಹಿಸಬೇಕೆಂದು ಯುಎಸ್ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಒತ್ತಾಯಿಸಿದ್ದಾರೆ ಎಂದು ಹೇಳಿದ ನಂತರ ಅವರು ಮಾತನಾಡಿದರು. ಹಾರ್ಮುಜ್ ಜಲಸಂಧಿಯನ್ನು ಸುರಕ್ಷಿತಗೊಳಿಸಲು ಸಹಾಯ ಮಾಡುವ ಕುರಿತು ಅಮೆರಿಕ ಏಳು ರಾಷ್ಟ್ರಗಳೊಂದಿಗೆ ಮಾತನಾಡುತ್ತಿದೆ ಎಂದು ಅಧ್ಯಕ್ಷ ಟ್ರಂಪ್ ಭಾನುವಾರ ಹೇಳಿದರು,

ಕಿರಿದಾದ ಆದರೆ ಕಾರ್ಯತಂತ್ರದ ಸಮುದ್ರ ಕಾರಿಡಾರ್‌ನಲ್ಲಿ ಸಾಗಣೆಯನ್ನು ರಕ್ಷಿಸಲು ಸಹಾಯ ಮಾಡುವಂತೆ ಗಲ್ಫ್ ತೈಲವನ್ನು ಅವಲಂಬಿಸಿರುವ ದೇಶಗಳನ್ನು ಒತ್ತಾಯಿಸಿದರು. ವಿದೇಶಾಂಗ ಕಾರ್ಯದರ್ಶಿ ಯೆವೆಟ್ ಕೂಪರ್ ಇತ್ತೀಚಿನ ದಿನಗಳಲ್ಲಿ ಈ ಪ್ರದೇಶದಲ್ಲಿದ್ದಾರೆ ಎಂದು ಸ್ಟಾರ್ಮರ್ ಹೇಳಿದರು.

ಇಂದು ಬೆಳಿಗ್ಗೆ ಕೆನಡಾ ಪ್ರಧಾನಿ ಮಾರ್ಕ್ ಕಾರ್ನಿ ಅವರನ್ನು ಭೇಟಿ ಮಾಡಿರುವುದಾಗಿ ಮತ್ತು ಶೀಘ್ರದಲ್ಲೇ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರನ್ನು ಭೇಟಿ ಮಾಡುವುದಾಗಿ ಯುಕೆ ಪ್ರಧಾನಿ ಹೇಳಿದರು.

"ಉಕ್ರೇನ್ ಅನ್ನು ಬೆಂಬಲಿಸುವತ್ತ ನಾವು ಗಮನಹರಿಸುವುದು ಅತ್ಯಗತ್ಯ" ಎಂದು ಅವರು ಹೇಳುತ್ತಾರೆ, ಮಧ್ಯಪ್ರಾಚ್ಯದಲ್ಲಿನ ಯುದ್ಧವು "ಪುಟಿನ್‌ಗೆ ಆಕಸ್ಮಿಕ ಲಾಭ" ವಾಗಲು ಬಿಡಬಾರದು ಎಂದು ಹೇಳಿದರು. ಜಲಸಂಧಿಯನ್ನು ಮತ್ತೆ ತೆರೆಯಲು ಬ್ರಿಟನ್ ಕಾರ್ಯಸಾಧ್ಯವಾದ ಸಾಮೂಹಿಕ ಯೋಜನೆಯನ್ನು ಹುಡುಕುತ್ತಿದೆ ಎಂದು ಅವರು ಹೇಳಿದರು, ಅದು ಸುಲಭವಲ್ಲ ಎಂದು ಸ್ಟಾರ್ಮರ್‌ಹೇಳಿದರು.

# ಇರಾನ್‌ನಿಂದ 550 ಭಾರತೀಯರನ್ನು ಸ್ಥಳಾಂತರಿಸಲು ಅರ್ಮೇನಿಯಾ ನೆರವು: ಜೈಶಂಕರ್



**ನವದೆಹಲಿ, ಮಾರ್ಚ್ 16:** ಇರಾನ್‌ನಲ್ಲಿ ಸಿಲುಕಿಕೊಂಡಿದ್ದ 550 ಕ್ಕೂ ಹೆಚ್ಚು ಭಾರತೀಯ ಪ್ರಜೆಗಳನ್ನು ಸುರಕ್ಷಿತವಾಗಿ ಸ್ಥಳಾಂತರಿಸಲು ಅರ್ಮೇನಿಯಾ ಭಾರತಕ್ಕೆ ಸಹಾಯ ಮಾಡಿದೆ. ಇರಾನ್‌ನಿಂದ ಇಲ್ಲಿಯವರೆಗೆ 550 ಕ್ಕೂ ಹೆಚ್ಚು ಭಾರತೀಯ ಪ್ರಜೆಗಳನ್ನು ಸುರಕ್ಷಿತವಾಗಿ ಸ್ಥಳಾಂತರಿಸಲು ಅನುಕೂಲ ಮಾಡಿಕೊಟ್ಟಿದ್ದಕ್ಕಾಗಿ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಸೋಮವಾರ ಅರ್ಮೇನಿಯಾ ಸರ್ಕಾರ ಮತ್ತು ಜನರಿಗೆ ಕೃತಜ್ಞತೆ ಸಲ್ಲಿಸಿದ್ದಾರೆ. 'ಇರಾನ್‌ನಿಂದ ಇಲ್ಲಿಯವರೆಗೆ 550 ಕ್ಕೂ ಹೆಚ್ಚು ಭಾರತೀಯ ಪ್ರಜೆಗಳನ್ನು ಸುರಕ್ಷಿತವಾಗಿ ಸ್ಥಳಾಂತರಿಸಲು ಅನುಕೂಲ ಮಾಡಿಕೊಟ್ಟಿದ್ದಕ್ಕಾಗಿ ಸರ್ಕಾರ ಮತ್ತು ಅರ್ಮೇನಿಯಾ ಜನರಿಗೆ ಧನ್ಯವಾದಗಳು. ಮುಖ್ಯವಾಗಿ ಜಮ್ಮು ಮತ್ತು ಕಾಶ್ಮೀರದಿಂದ ಬಂದ 70 ವಿದ್ಯಾರ್ಥಿಗಳ ಬ್ಯಾಚ್ ಮಾರ್ಚ್ 15 ರಂದು ಈ ಮಾರ್ಗದ ಮೂಲಕ ದೆಹಲಿಗೆ ಆಗಮಿಸಿತು, ಕಾರ್ಯಾಚರಣೆ ಮುಂದುವರೆದಿದೆ.

## ಚಿನ್ನಸ್ವಾಮಿ ಮೈದಾನದಲ್ಲಿ ಪಂದ್ಯಕ್ಕೆ ಸರ್ಕಾರ ಅನುಮತಿ

# ಅಭಿಮಾನಿಗಳ ಆತಂಕ ದೂರ, ಮಾ.28ರಂದು ಆರ್‌ಸಿಬಿ–ಎಸ್‌ಆರ್‌ಎಚ್ ನಡುವೆ ಮೊದಲ ಪಂದ್ಯ




**ಬೆಂಗಳೂರು, ಮಾ.16:** ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್) ಆರಂಭಕ್ಕೆ ದಿನಗಣನೆ ಆರಂಭವಾಗಿದೆ. ಈ ಲೀಗ್‌ನಲ್ಲಿ ಭಾಗವಹಿಸಲು ಎಲ್ಲ ತಂಡಗಳು ತಯಾರಿ ನಡೆಸಿವೆ. ಈ ಮಧ್ಯೆ ಬೆಂಗಳೂರು ತಂಡದ ಅಭಿಮಾನಿಗಳಲ್ಲಿ ಇದ್ದ ಆತಂಕ ಒಂದನ್ನು ಕರ್ನಾಟಕ ಸರ್ಕಾರ ದೂರ ಮಾಡಿದೆ. ಬೆಂಗಳೂರಿನ ಎಂ. ಚಿನ್ನಸ್ವಾಮಿ ಮೈದಾನದಲ್ಲಿ ಪಂದ್ಯವನ್ನು ಆಯೋಜಿಸಲು ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ (ಕೆಎಸ್‌ಸಿಎ) ಹಾಗೂ ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ತಂಡಗಳಿಗೆ ಸರ್ಕಾರ ಅನುಮತಿ ನೀಡಿದೆ. 19ನೇ ಆವೃತ್ತಿಯ ಐಪಿಎಲ್‌ನ ಮೊದಲ ಪಂದ್ಯ ಎಂ ಚಿನ್ನಸ್ವಾಮಿ ಮೈದಾನದಲ್ಲಿ ನಡೆಯಲಿದೆ. ಮೊದಲ ಪಂದ್ಯ ಮಾರ್ಚ್ 28 ರಿಂದ ನಡೆಯಲಿದ್ದು, ಆರ್‌ಸಿಬಿ ಹಾಗೂ ಸನ್‌ರೈಸರ್ಸ್ ಹೈದರಾಬಾದ್ ತಂಡಗಳು ಕಾದಾಟ ನಡೆಸಲಿವೆ. ಆರ್‌ಸಿಬಿ ಕಳೆದ ಆವೃತ್ತಿಯಲ್ಲಿ ಚಾಂಪಿಯನ್ ಪಟ್ಟವನ್ನು ಅಲಂಕರಿಸಿತ್ತು. ಈ ವೇಳೆ ಅಭಿಮಾನಿಗಳು ತುಂಬಾನೇ ಖುಷಿ ಪಟ್ಟಿದ್ದರು. ಈ ಸಂಭ್ರಮಾಚರಣೆಯನ್ನು ಆರ್‌ಸಿಬಿ ಅಭಿಮಾನಿಗಳೊಂದಿಗೆ ಆಚರಿಸಲು ಪ್ಲ್ಯಾನ್ ಮಾಡಿಕೊಂಡಿತ್ತು. ಈ ವೇಳೆ ಕಾಲ್ತುಳಿತ ಸಂಭವಿಸಿ 11 ಜನರು ಸಾವನ್ನಪ್ಪಿದರು. ಇದರಿಂದ ಕ್ರೀಡಾಂಗಣದ ಭದ್ರತಾ ವ್ಯವಸ್ಥೆಗಳು ಮತ್ತು ಮೂಲಸೌಕರ್ಯಗಳ ಬಗ್ಗೆ ಹಲವಾರು ಪ್ರಶ್ನೆಗಳು ಎದ್ದವು. ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿದ ನ್ಯಾಯಮೂರ್ತಿ ಡಿ.ಕುನ್ಹಾ ಸಮಿತಿಯು ಹಲವಾರು ಮಾರ್ಪಾಡುಗಳಿಗೆ ಸೂಚನೆ ನೀಡಿತು.ಕೆಎಸ್‌ಸಿಎ ಸಹ ಪಂದ್ಯ ನಡೆಸಲು ಬೇಕಾಗಿರುವ ಎಲ್ಲ ಮಾರ್ಪಾಡುಗಳನ್ನು ಪೂರ್ಣಗೊಳಿಸಲು ಮಾರ್ಚ್ 15 ರಂದು ಸಮಯ ನೀಡಲಾಗಿತ್ತು. ಇನ್ನು ಸಮಿತಿ ಕಾರ್ಯಗಳನ್ನು ಪರಿಶೀಲಿಸಿ ಪಂದ್ಯಗಳನ್ನು ನಡೆಸಲು ಸಮ್ಮತಿ ನೀಡಿದೆ. ಬಿಸಿಸಿಐ ಬಿಡುಗಡೆ ಮಾಡಿದ ಮೊದಲ ಹಂತದ ವೇಳಾಪಟ್ಟಿಯ ಅನುಸಾರ ಚಿನ್ನಸ್ವಾಮಿ ಮೈದಾನ, ಆರಂಭಿಕ ಪಂದ್ಯವನ್ನು ಹಾಗೂ ಏಪ್ರಿಲ್ 5ರಂದು ಚೆನ್ನೈ ಸೂಪರ್ ಕಿಂಗ್ಸ್ ಪಂದ್ಯವನ್ನು ಆಡಲಿದೆ. ಈ ಮೈದಾನದಲ್ಲಿ ಒಟ್ಟು ಆರ್‌ಸಿಬಿ ಐದು ಪಂದ್ಯಗಳನ್ನು ಆಡಲಿದೆ. ಎರಡು ತವರು ಪಂದ್ಯಗಳು ರಾಯ್‌ಪುರದ ಶಹೀದ್ ವೀರ್ ನಾರಾಯಣ್ ಸಿಂಗ್ ಕ್ರೀಡಾಂಗಣದಲ್ಲಿ ಆಡಲಿದೆ. ಐಪಿಎಲ್‌ನ ಉಳಿದ ಪಂದ್ಯಗಳ ವೇಳಾಪಟ್ಟಿಯನ್ನು ಇನ್ನೇನು ಕೆಲವೇ ದಿನಗಳಲ್ಲಿ ಬಿಡುಗಡೆ ಮಾಡಲಾಗುತ್ತದೆ. 18ನೇ ಆವೃತ್ತಿಯ ಐಪಿಎಲ್‌ನಲ್ಲಿ ಆರ್‌ಸಿಬಿ, ಪಂಜಾಬ್ ಕಿಂಗ್ಸ್ ತಂಡವನ್ನು ಸೋಲಿಸುವ ಮೂಲಕ ಐಪಿಎಲ್ 2025ರ ಪ್ರಶಸ್ತಿ ಎತ್ತಿ ಸಂಭ್ರಮಿಸಿತ್ತು. ಆಗ ತಂಡವನ್ನು ಮುನ್ನಡೆಸಿದ್ದ ರಜತ್ ಪಾಟಿದಾರ್ ಅವರೇ ಈ ಆವೃತ್ತಿಯಲ್ಲೂ ತಂಡವನ್ನು ಮುನ್ನಡೆಸಲಿದ್ದಾರೆ. ಆರ್‌ಸಿಬಿ ಈ ಬಾರಿ ತನ್ನ ಪ್ರಶಸ್ತಿಯನ್ನು ಉಳಿಸಿಕೊಳ್ಳಲು ಪ್ಲ್ಯಾನ್ ಮಾಡಿಕೊಂಡಿದೆ. ಈ ನಿಟ್ಟಿನಲ್ಲಿ ಆರ್‌ಸಿಬಿ ಶತಾತ ಗತಾಯ ಶ್ರಮಿಸುತ್ತಿದೆ. ತಂಡದ ಸ್ಟಾರ್ ಆಟಗಾರರ ಮೇಲೆ ಈ ಬಾರಿಯೂ ಅಭಿಮಾನಿಗಳ ನಿರೀಕ್ಷೆ ಹೆಚ್ಚಿರಲಿದೆ.




# ನೀತಾ ಅಂಬಾನಿಗೆ ಕಿಸ್ ಹ್ಯುಮ್ಯಾನಿಟೇರಿಯನ್ ಅವಾರ್ಡ್




**ಭುವನೇಶ್ವರ, ಮಾ.16 :** ಇಲ್ಲಿನ ಕಳಿಂಗ ಇನ್‌ಸ್ಟಿಟ್ಯೂಟ್ ಆಫ್ ಸೋಶಿಯಲ್ ಸೈನ್ಸ್ (KISS) ನ ದ್ಯುತಿಚಂದ್ ಅಥ್ಲೆಟಿಕ್ಸ್ ಸ್ಟೇಡಿಯಂನಲ್ಲಿ ಹಮ್ಮಿಕೊಂಡಿದ್ದ ಸಮಾರಂಭದಲ್ಲಿ ರಿಲಯನ್ಸ್ ಫೌಂಡೇಶನ್‌ನ ಸ್ಥಾಪಕರು ಹಾಗೂ ಅಧ್ಯಕ್ಷೆ ನೀತಾ ಅಂಬಾನಿ ಅವರಿಗೆ ಪ್ರತಿಷ್ಠಿತ ಕಿಸ್ ಹ್ಯುಮ್ಯಾನಿಟೇರಿಯನ್ ಅವಾರ್ಡ್ 2025 ಅನ್ನು ಪ್ರದಾನ ಮಾಡಿ ಗೌರವಿಸಲಾಯಿತು.

ಶಿಕ್ಷಣ, ಆರೋಗ್ಯ ರಕ್ಷಣೆ, ಗ್ರಾಮೀಣ ಜನರಿಗೆ ನೆರವು, ಮಹಿಳಾ ಸಬಲೀಕರಣ ಹಾಗೂ ಸಾಮಾಜಿಕ ಅಭಿವೃದ್ಧಿಗೆ ರಿಲಯನ್ಸ್ ಫೌಂಡೇಶನ್ ನೀಡಿದ ಮಹತ್ವದ ಕೊಡುಗೆಗಳನ್ನು ಗುರುತಿಸಿ ಈ ಪ್ರಶಸ್ತಿಯನ್ನು ನೀಡಲಾಯಿತು.

ಪ್ರಶಸ್ತಿ ಪ್ರದಾನ ಮಾಡಿದ ನೊಬೆಲ್ ಶಾಂತಿ ಪ್ರಶಸ್ತಿ ಪುರಸ್ಕೃತರು, ಶ್ರೀಲಂಕಾ ಸರ್ಕಾರದ ಗೌರವ ಹಿರಿಯ ಸಲಹೆಗಾರರು ಹಾಗೂ ವಿಶ್ವಸಂಸ್ಥೆಯಲ್ಲಿನ ಹವಾಮಾನ ಬದಲಾವಣೆಯ ಅಂತರರಾಷ್ಟ್ರೀಯ ಪ್ಯಾನೆಲ್‌ನ ಉಪಾಧ್ಯಕ್ಷರಾದ ಪ್ರೊ. ಮೋಹನ್ ಮುನಸಿಂಘೆ ಅವರು ಮಾತನಾಡಿ, ಕಿಸ್ ಹ್ಯುಮ್ಯಾನಿಟೇರಿಯನ್ ಅವಾರ್ಡ್ ವಿಶ್ವದಲ್ಲೇ ಶ್ರೇಷ್ಠ ಪ್ರಶಸ್ತಿಯಾಗಿದೆ. ವಿಶ್ವದಾದ್ಯಂತ ಮಾನವೀಯ ಸೇವೆ ಸಲ್ಲಿಸುತ್ತಿರುವ ಸಾಧಕರನ್ನು ಗುರುತಿಸಿ ಪ್ರಶಸ್ತಿ ನೀಡಲಾಗುತ್ತಿದೆ. ದೇಶ ನಿರ್ಮಾಣ ಮತ್ತು ಸಾಮಾಜಿಕ ಅಭಿವೃದ್ಧಿಗೆ ನೀತಾ ಅವರು ಸಾಕಷ್ಟು ಕೊಡುಗೆ ನೀಡುತ್ತಿದ್ದಾರೆ ಎಂದರು.

ಪ್ರಶಸ್ತಿ ಸ್ವೀಕರಿಸಿದ ನೀತಾ ಅಂಬಾನಿ ಅವರು ಮಾತನಾಡಿ, ಪ್ರಶಸ್ತಿ ನೀಡಿರುವುದು ಅತೀವ ಖುಷಿ ನೀಡಿದೆ. ಇದು ಸಮಗ್ರ ರಿಲಯನ್ಸ್ ಸಮುದಾಯಕ್ಕೆ ಸಿಕ್ಕ ಪ್ರಶಸ್ತಿ ಇದು. ಸಮುದಾಯ ಬಲಪಡಿಸಿ, ದೇಶವನ್ನು ಬಲಿಷ್ಠಗೊಳಿಸುವ ನಮ್ಮ ಪ್ರಯತ್ನಕ್ಕೆ ಈ ಪ್ರಶಸ್ತಿಯಿಂದ ಇನ್ನಷ್ಟು ಶಕ್ತಿ ಬಂದಿದೆ ಎಂದರು.

ಮಕ್ಕಳ ಬದುಕು ಬದಲಾಯಿಸಲು ಕೆಐಎಸ್‌ಎಸ್ ಮತ್ತು ಕೆಐಐಟಿ ನೀಡುತ್ತಿರುವ ಮಾನವೀಯ ಸೇವೆ ಕೊಡುಗೆ ಅಪಾರ ಎಂದು ಹೇಳಿದರು.

ಕಳಿಂಗ ಇನ್‌ಸ್ಟಿಟ್ಯೂಟ್ ಆಫ್ ಇಂಡಸ್ಟ್ರೀಯಲ್ ಟೆಕ್ನಾಲಜಿ (ಕೆಐಐಟಿ) ಮತ್ತು ಕೆಐಎಸ್‌ಎಸ್ ನ ಸಂಸ್ಥಾಪಕರು ಹಾಗೂ ಮಾಜಿ ಸಂಸದರಾದ ಡಾ. ಅಚ್ಯುತ ಸಮಂತ ಅವರು ಪ್ರಸ್ತಾವಿಕವಾಗಿ ಮಾತನಾಡಿ, ಸ್ವಾಗತಿಸಿದರು.

ನೀತಾ ಅಂಬಾನಿಯವರಿಗೆ ಈ ಪ್ರತಿಷ್ಠಿತ ಪ್ರಶಸ್ತಿ ನೀಡಿ ಗೌರವಿಸಿರುವುದು ಸಂಸ್ಥೆಗೆ ಮತ್ತು ವೈಯಕ್ತಿಕವಾಗಿ ಹೆಮ್ಮೆ ತಂದಿದೆ. ಪ್ರಶಸ್ತಿಯ ಗೌರವ ಹೆಚ್ಚಿದೆ ಎಂದರು.

ದೇಶದಾದ್ಯಂತ, ವಿಶ್ವದಾದ್ಯಂತ ನೀತಾ ಅಂಬಾನಿಯವರು ಚಿರಪರಿಚಿತರು. ದೇವರು ಹಾಗೂ ಕೋಟ್ಯಂತರ ಜನರ ಆಶೀರ್ವಾದ ಅವರ ಮೇಲಿದೆ. ಕೇವಲ ಉದ್ಯಮಿಯಾಗಿ ಅಲ್ಲದೆ ನೂರಾರು ಸಮಾಜಸೇವೆಗಳ ಮೂಲಕ ಜನರಿಗೆ ನೆರವಾಗುತ್ತಿದ್ದಾರೆ. ಅಂಬಾನಿ ಪರಿವಾರವು ಸಮಾಜಕ್ಕೆ ನೀಡಿದ ಕೊಡುಗೆ ಮರೆಯುವಂತಿಲ್ಲ. ನೀತಾ ಅವರು ತಮ್ಮ ಸೇವೆಗಳ ಮೂಲಕ ಮಾದರಿಯಾಗಿದ್ದಾರೆ ಎಂದರು. ಸಮಾರಂಭದಲ್ಲಿ ಕೆಐಐಟಿ ಅಧ್ಯಕ್ಷೆ ಶ್ರೀಮತಿ ಸರಸ್ವತಿ ಬಾಲ್, ಕೆಐಐಟಿ ಹಾಗೂ ಕೆಐಎಸ್‌ಎಸ್‌ನ ಅಧಿಕಾರಿಗಳು, ಬೋಧಕ ಸಿಬ್ಬಂದಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಕ್ಯಾಂಪಸ್ ವಾತಾವರಣಕ್ಕೆ ಮನಸೋತ ನೀತಾ ಅಂಬಾನಿ

ನೀತಾ ಅಂಬಾನಿಯವರಿಗೆ ವಿಶ್ವವಿದ್ಯಾಲಯಕ್ಕೆ ಆಗಮಿಸಿದಾಗ ಅಭೂತಪೂರ್ವ ಸ್ವಾಗತ ಕೋರಲಾಯಿತು. ಬುಡಕಟ್ಟು ಸಂಪ್ರದಾಯದ ನೃತ್ಯದೊಂದಿಗೆ ಅವರನ್ನು ಸ್ವಾಗತಿಸಲಾಯಿತು. ಕ್ಯಾಂಪಸ್‌ನ ಎಲ್ಲೆಡೆ ಸಂಚರಿಸಿದ ಅವರು, ಸಂತಸ ವ್ಯಕ್ತಪಡಿಸಿದರು. ಕಿಸ್‌ನ ಮಕ್ಕಳೊಂದಿಗೆ ನೃತ್ಯ ಮಾಡಿದರು. ಮಕ್ಕಳೊಂದಿಗೆ ಬೆರೆತು ಮಾತುಕತೆ ನಡೆಸಿದರು. ನೀತಾ ಅವರನ್ನು ಕಂಡ ಮಕ್ಕಳೂ ಅತೀವ ಖುಷಿಪಟ್ಟರು. ಎರಡೂ ಸಂಸ್ಥೆಗಳಲ್ಲಿ ಭಾರೀ ಸಂಖ್ಯೆಯಲ್ಲಿ ಹೆಣ್ಣು ಮಕ್ಕಳು ಇರುವುದನ್ನು ಅವರು ತಮ್ಮ ಭಾಷಣದಲ್ಲಿ ಉಲ್ಲೇಖಿಸಿದರು. ನೀತಾ ಅವರ ಸರಳತೆ ಎಲ್ಲರ ಗಮನ ಸೆಳೆಯಿತು.

# ದುಬೈ ವಿಮಾನ ನಿಲ್ದಾಣದ ಮೇಲೆ ಡ್ರೋನ್ ದಾಳಿ: ವಿಮಾನಗಳ ಸಂಚಾರ ಸ್ಥಗಿತ



**ದುಬೈ, ಮಾರ್ಚ್ 16:** ವಿಮಾನ ನಿಲ್ದಾಣದ ಬಳಿ ಡ್ರೋನ್ ದಾಳಿಯಿಂದ ಬೆಂಕಿ ಕಾಣಿಸಿಕೊಂಡ ನಂತರ, ಮುನ್ನೆಚ್ಚರಿಕೆ ಸುರಕ್ಷತಾ ಕ್ರಮವಾಗಿ ಅಧಿಕಾರಿಗಳು ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಿದ್ದಾರೆ. ಪ್ರಯಾಣಿಕರು ಮತ್ತು ವಿಮಾನ ನಿಲ್ದಾಣದ ಸಿಬ್ಬಂದಿಯ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಈ ಕ್ರಮ ತೆಗೆದುಕೊಳ್ಳಲಾಗಿದೆ ಎಂದು ಹೇಳುವ ಮೂಲಕ ದುಬೈ ನಾಗರಿಕ ವಿಮಾನಯಾನ ಪ್ರಾಧಿಕಾರವು ಸ್ಥಗಿತಗೊಳಿಸುವಿಕೆಯನ್ನು ಘೋಷಿಸಿದೆ. "ಪ್ರಯಾಣಿಕರು ತಮ್ಮ ವಿಮಾನಗಳ ಕುರಿತು ಇತ್ತೀಚಿನ ನವೀಕರಣಗಳಿಗಾಗಿ ಆಯಾ ವಿಮಾನಯಾನ ಸಂಸ್ಥೆಗಳನ್ನು ಸಂಪರ್ಕಿಸಲು ಸೂಚಿಸಲಾಗಿದೆ" ಎಂದು ಪ್ರಾಧಿಕಾರವು ಹೇಳಿಕೆಯಲ್ಲಿ ತಿಳಿಸಿದೆ, ಪರಿಸ್ಥಿತಿಯನ್ನು ಪರಿಶೀಲಿಸಿದ ನಂತರ ಅಧಿಕೃತ ಮಾರ್ಗಗಳ ಮೂಲಕ ಹೆಚ್ಚಿನ ಮಾಹಿತಿಯನ್ನು ನೀಡಲಾಗುವುದು ಎಂದು ಹೇಳಿದೆ. ಅಧಿಕಾರಿಗಳ ಪ್ರಕಾರ, ಡ್ರೋನ್ ದಾಳಿಯು ವಿಮಾನ ನಿಲ್ದಾಣದ ಪರಿಧಿಯ ಬಳಿ ಬೆಂಕಿಯನ್ನು ಉಂಟುಮಾಡಿತು, ತುರ್ತು ಸೇವೆಗಳು ಅದನ್ನು ತ್ವರಿತವಾಗಿ ನಿಯಂತ್ರಿಸಿದವು. ವಿಮಾನ ಕಾರ್ಯಾಚರಣೆಗಳನ್ನು ತಾತ್ಕಾಲಿಕವಾಗಿ ನಿಲ್ಲಿಸಲು ಆದೇಶಿಸುವ ಮೊದಲು ವಾಯು ರಕ್ಷಣಾ ವ್ಯವಸ್ಥೆಗಳು ಘಟನೆಗೆ ಪ್ರತಿಕ್ರಿಯಿಸಿದವು ಎಂದು ದುಬೈ ಮಾಧ್ಯಮ ಕಚೇರಿ ತಿಳಿಸಿದೆ. ಫೆಬ್ರವರಿ ಅಂತ್ಯದಿಂದ ಮಧ್ಯಪ್ರಾಚ್ಯದಲ್ಲಿ ಹೆಚ್ಚಿದ ಉದ್ವಿಗ್ನತೆಯ ನಡುವೆ,

ಅಮೆರಿಕ, ಇಸ್ರೇಲ್ ಮತ್ತು ಇರಾನ್ ಒಳಗೊಂಡ ದಾಳಿಗಳು ಪ್ರತೀಕಾರದ ಡ್ರೋನ್ ಮತ್ತು ಕ್ಷಿಪಣಿ ದಾಳಿಗಳು ಮತ್ತು ಹಲವಾರು ಗಲ್ಫ್ ರಾಜ್ಯಗಳಲ್ಲಿ ಮಧ್ಯಂತರ ವಾಯುಪ್ರದೇಶ ನಿರ್ಬಂಧಗಳಿಗೆ ಕಾರಣವಾದ ನಂತರ ಈ ಅಡ್ಡಿ ಉಂಟಾಗಿದೆ. ಪ್ರಾದೇಶಿಕ ವಿಮಾನಯಾನವು ಈಗಾಗಲೇ ಗಮನಾರ್ಹ ಅಡಚಣೆಯನ್ನು ಎದುರಿಸಿದೆ, ಹಿಂದಿನ ವಿಮಾನ ಹಾರಾಟ ಸ್ಥಗಿತಗೊಳಿಸುವಿಕೆಯು ದುಬೈ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಮತ್ತು ಅಲ್ ಮಕ್ತೌಮ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಮೇಲೆ ಪರಿಣಾಮ ಬೀರಿದ್ದು, ಇದರ ಪರಿಣಾಮವಾಗಿ ಪ್ರದೇಶದಾದ್ಯಂತ 1,800 ಕ್ಕೂ ಹೆಚ್ಚು ವಿಮಾನಗಳು ರದ್ದಾಗಿವೆ. ದುಬೈ ಮೂಲಕ ಪ್ರಯಾಣಿಸುವ ಭಾರತ ಸೇರಿದಂತೆ ಅನೇಕ ಪ್ರಯಾಣಿಕರು ನವೀಕರಿಸಿದ ವಿಮಾನ ವೇಳಾಪಟ್ಟಿಗಳಿಗಾಗಿ ವಿಮಾನಯಾನ ವೆಬ್‌ಸೈಟ್‌ಗಳು ಅಥವಾ ಮೊಬೈಲ್ ಅಪ್ಲಿಕೇಶನ್‌ಗಳನ್ನು ಪರಿಶೀಲಿಸಲು ಸೂಚಿಸಲಾಗಿದೆ, ಏಕೆಂದರೆ ನಡೆಯುತ್ತಿರುವ ಅಡೆತಡೆಗಳ ಹೊರತಾಗಿಯೂ ಬುಕಿಂಗ್‌ಗಳು ಇನ್ನೂ ಸಕ್ರಿಯವಾಗಿ ಕಾಣಿಸಬಹುದು.